23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 323 | ನವದೆಹಲಿ | ಬೆಲೆ ₹10 | ಮೇ 29 2026, ಶುಕ್ರವಾರ

## ಒಳಪುಟಗಳಲ್ಲಿ

ಮುಂಗಾರು ಋತುವಿನ ಮೇಲೆ ಎಲ್‌ನಿನೊ ಪರಿಣಾಮ ಎದುರಿಸಲು ಕೇಂದ್ರದಿಂದ ತುರ್ತು ಯೋಜನೆ: ಚೌಹಾಣ್ - ಪು.4

ವಿಶ್ವೇಶ್ವರಯ ಮ್ಯೂಸಿಯಂ ಆವರಣದಲ್ಲಿ ಹೈಕೋರ್ಟ್ ಆದೇಶ ಉಲ್ಲಂಘಿಸಿ ಕಟ್ಟಡ ನಿರ್ಮಾಣ: ಕಬ್ಬನ್‌ಪಾರ್ಕ್ ವಾಕರ್ಸ್ ಅಸೋಸಿಯೇಷನ್ ಖಂಡನೆ - ಪು.5

ಎಮ್ಮೆ, ಕರುಗಳ ರಕ್ಷಣೆ, ಪಿಕಪ್ ವಾಹನದಲ್ಲಿ ಅಕ್ರಮ ಸಾಗಣೆ -ಪು.6

ಲಿಂಗಸುಗೂರು ಪಟ್ಟಣದ ಸೌಂದರ್ಯೀಕರಣಕ್ಕೆ ಯೋಜನೆ ಬಿರುಸುಗೊಂಡ ಅಕ್ರಮ ಕಟ್ಟಡಗಳ ತೆರವು ಕಾರ್ಯಾಚರಣೆ - ಪು.7

# ಸಿದ್ದರಾಮಯ್ಯ ನಿರ್ಗಮನ, ಡಿಕೆಶಿ ಪದಗ್ರಹಣಕ್ಕೆ ನಾಂದಿ

**ಬೆಂಗಳೂರು, ಮೇ 28:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಸ್ಥಾನಕ್ಕೆ ಅಧಿಕೃತವಾಗಿ ರಾಜೀನಾಮೆ ನೀಡಿದ್ದಾರೆ. ಗುರುವಾರ ರಾಜಭವನಕ್ಕೆ ತೆರಳಿ ರಾಜೀನಾಮೆ ಪತ್ರ ಸಲ್ಲಿಸಿದರು.

ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಮುಖ್ಯಮಂತ್ರಿ ಸ್ಥಾನಕ್ಕೆ ಲೋಕಭವನಕ್ಕೆ ತೆರಳಿ ರಾಜೀನಾಮೆ ಸಲ್ಲಿಸಿದ್ದೇನೆ ಎಂದು ಅಧಿಕೃತವಾಗಿ ಘೋಷಿಸಿದರು. ರಾಜ್ಯಪಾಲರು ಬೆಂಗಳೂರಿನಲ್ಲಿ ಇಲ್ಲ. ಗುರುವಾರ ರಾತ್ರಿ ವಾಪಸ್ ಆಗಲಿದ್ದಾರೆ ಎಂದು ರಾಜಭವನದ ಕಚೇರಿ ಸಿಬ್ಬಂದಿ ತಿಳಿಸಿದ್ದಾರೆ. ಹಾಗಾಗಿ ರಾಜೀನಾಮೆ ಪತ್ರವನ್ನು ರಾಜ್ಯಪಾಲರ ಕಾರ್ಯದರ್ಶಿಯವರಿಗೆ ಹಸ್ತಾಂತರಿಸಿ ಬಂದಿದ್ದೇನೆ. ರಾಜ್ಯಪಾಲರು ಬಂದ ಬಳಿಕ ರಾಜೀನಾಮೆ ಅಂಗೀಕಾರ ಮಾಡ್ತಾರೆ ಎಂದು ವಿಶ್ವಾಸ ಇದೆ. ಸಂವಿಧಾನದ ಪ್ರಕಾರ ಮಾಡಲೇ ಬೇಕಾಗಿದೆ. ಅವರು ಯಾವ ಪ್ರಕ್ರಿಯೆ ಪಾಲನೆ ಮಾಡುತ್ತಾರೆ ಎಂಬುದು ಅವರಿಗೆ ಬಿಟ್ಟಿದ್ದು. ಒಂದು ಬಾರಿ ಸಿಎಂ ರಾಜೀನಾಮೆ ಕೊಟ್ಟ ಬಳಿಕ ಅಂಗೀಕಾರ ಮಾಡುವುದು ಅವರ ಜವಾಬ್ದಾರಿಯಾಗಿದೆ ಎಂದರು.



### ಡಿಕೆಶಿ ಮುಂದಿನ ಮುಖ್ಯಮಂತ್ರಿ: ಎಚ್‌ಕೆಪಿ

ಮುಖ್ಯಮಂತ್ರಿಗಳ ಉಪಹಾರ ಸಭೆಯ ನಂತರ ಸುದ್ಧಿಗಾರರೊಂದಿಗೆ ಮಾತನಾಡಿದ ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ. ಪಾಟೀಲ್, ಉಪಮುಖ್ಯಮಂತ್ರಿಯಾಗಿರುವ ಡಿ. ಕೆ. ಶಿವಕುಮಾರ್ ಮುಂದಿನ ಮುಖ್ಯಮಂತ್ರಿ ಆಗಲಿದ್ದಾರೆ ಎಂದು ಹೇಳಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಧ್ಯಾಹ್ನ ರಾಜ್ಯಪಾಲರಿಗೆ ರಾಜೀನಾಮೆ ನೀಡಲಿದ್ದಾರೆ ಎಂದೂ ಹೇಳಿದರು.

### ರಾಷ್ಟ್ರ ರಾಜಕಾರಣಕ್ಕೆ ಆಹ್ವಾನ ನಿರಾಕರಿಸಿದ ಸಿದ್ದರಾಮಯ್ಯ

ಪಕ್ಷದ ಹೈಕಮಾಂಡ್ ತಮಗೆ ರಾಷ್ಟ್ರ ರಾಜಕಾರಣಕ್ಕೆ ಬರುವಂತೆ ಆಹ್ವಾನ ನೀಡಿತ್ತು. ಆದರೆ ವಿನಮ್ರವಾಗಿ ನಿರಾಕರಿಸಿದ್ದಾಗಿ ಸಿದ್ದರಾಮಯ್ಯ ಹೇಳಿದರು. ದೆಹಲಿ ಭೇಟಿ ವೇಳೆ ರಾಜ್ಯಸಭಾ ಸದಸ್ಯರಾಗಿ ರಾಷ್ಟ್ರ ರಾಜಕಾರಣಕ್ಕೆ ಬರುವಂತೆ ವರಿಷ್ಠರು ಸಲಹೆ ಮಾಡಿದರು. ಆದರೆ ರಾಷ್ಟ್ರ ರಾಜಕಾರಣದಲ್ಲಿ ಆಸಕ್ತಿ ಇಲ್ಲ. ರಾಜ್ಯ ರಾಜಕಾರಣದಲ್ಲೇ ಇರುತ್ತೇನೆ ಎಂದು ತಿಳಿಸಿದ್ದೇನೆ. ಪ್ರಸ್ತುತ ತಾವು ಶಾಸಕರಾಗಿದ್ದು, ಇನ್ನೂ ಎರಡು ವರ್ಷಗಳ ಅವಧಿಯಿದೆ. ಅಲ್ಲಿಯವರೆಗೆ ಕರ್ನಾಟಕದ ಜನರ ಪರವಾಗಿ, ಜನರಿಗಾಗಿ ಮತ್ತು ಕ್ಷೇತ್ರದ ಜನರ ಪರವಾಗಿ ಕೆಲಸ ಮಾಡುತ್ತೇನೆ ಎಂದರು.

## ದೆಹಲಿಗೆ ಪ್ರತ್ಯೇಕವಾಗಿ ತೆರಳಿದ ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್

**ಬೆಂಗಳೂರು, ಮೇ 28:** ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ ಕೆಲವೇ ಗಂಟೆಗಳ ನಂತರ, ಸಿದ್ದರಾಮಯ್ಯ ಮತ್ತು ಅವರ ಸಂಭಾವ್ಯ ಉತ್ತರಾಧಿಕಾರಿ ಎನ್ನಲಾಗಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಗುರುವಾರ ನವದೆಹಲಿಗೆ ಪ್ರತ್ಯೇಕವಾಗಿ ತೆರಳಿದರು.

ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದೆಹಲಿಗೆ ತೆರಳಿದ್ದು, ಮುಂದಿನ ಮುಖ್ಯಮಂತ್ರಿ ಆಯ್ಕೆ, ಸಚಿವ ಸಂಪುಟ ರಚನೆ ಎಲ್ಲದರ ಬಗ್ಗೆಯೂ ಕಾಂಗ್ರೆಸ್ ವರಿಷ್ಠರೊಂದಿಗೆ ಚರ್ಚೆ ನಡೆಸಲಿದ್ದಾರೆ ಎನ್ನಲಾಗಿದೆ. ಕಾಂಗ್ರೆಸ್‌ನ ಅಧಿನಾಯಕಿ ಸೋನಿಯಾಗಾಂಧಿ, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸಂಸದೆ ಪ್ರಿಯಾಂಕ ವಾದ್ರಾ ಅವರನ್ನು ಭೇಟಿ ಮಾಡಿ ಧನ್ಯವಾದ ತಿಳಿಸಲಿದ್ದಾರೆ ಎನ್ನಲಾಗಿದೆ. ಹಾಗೂ ಮುಂದಿನ ಸಂಪುಟ ರಚನೆ ಸಂದರ್ಭದಲ್ಲಿ ತಮ್ಮ ಆಪ್ತರಿಗೆ ಅವಕಾಶ ಮಾಡಿಕೊಡುವ ನಿಟ್ಟಿನಲ್ಲೂ ಮುಖ್ಯಮಂತ್ರಿ ಸಿದ್ದರಾಮಯ್ಯ ವರಿಷ್ಠರೊಂದಿಗೆ ಚರ್ಚೆ ನಡೆಸುವರು ಎಂದು ಹೇಳಲಾಗಿದೆ.

ರಾಷ್ಟ್ರ ರಾಜಧಾನಿಯಲ್ಲಿ, ರಾಜ್ಯದ ಹೊಸ ಸಚಿವ ಸಂಪುಟ ರಚನೆ ವಿಧಾನಗಳ ಕುರಿತು ಚರ್ಚಿಸಲು ಇಬ್ಬರು ನಾಯಕರು ಕಾಂಗ್ರೆಸ್ ಹೈಕಮಾಂಡ್ ಭೇಟಿಮಾಡುವ ನಿರೀಕ್ಷೆಯಿದೆ. ಪಕ್ಷದ ಮೂಲಗಳ ಪ್ರಕಾರ, ಹೊಸ ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕನ ಆಯ್ಕೆ, ಸಚಿವಾಲಯದ ಸಂಯೋಜನೆ ಮತ್ತು ಕೆಪಿಸಿಸಿ ಅಧ್ಯಕ್ಷ ಸ್ಥಾನ ಸೇರಿದಂತೆ ಇತರ ಸಾಂಸ್ಥಿಕ ವಿಷಯಗಳಿಗೆ ಸಂಬಂಧಿಸಿದ ಚರ್ಚೆಗಳು ದೆಹಲಿ ಭೇಟಿಯ ಸಮಯದಲ್ಲಿ ನಡೆಯುವ ಸಾಧ್ಯತೆಯಿದೆ ಎನ್ನಲಾಗಿದೆ.

# ಉಪಾಹಾರ ಸಭೆಯಲ್ಲಿ ರಾಜೀನಾಮೆಗೆ ಕಾರಣ, ವರಿಷ್ಠರ ನಿರ್ಧಾರ ತಿಳಿಸಿದ ಸಿದ್ದರಾಮಯ್ಯ



**ಬೆಂಗಳೂರು, ಮೇ 28:** ಅಧಿಕೃತ ನಿವಾಸ ಕಾವೇರಿಯಲ್ಲಿ ಗುರುವಾರ ಬೆಳಗ್ಗೆ ಸಚಿವ ಸಂಪುಟದ ಎಲ್ಲ ಸಚಿವರಿಗೆ ಉಪಹಾರ ಕೂಟ ಆಯೋಜಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡುತ್ತಿರುವುದಾಗಿ ಅಧಿಕೃವಾಗಿ ಘೋಷಿಸಿದರು. ಹಾಗೂ ತಮ್ಮ ರಾಜೀನಾಮೆಗೆ ಕಾರಣ ಹಾಗೂ ಹೈಕಮಾಂಡ್ ನಿರ್ಧಾರದ ಬಗ್ಗೆ ಸಭೆಯಲ್ಲಿದ್ದವರಿಗೆ ಮನವರಿಕೆ ಮಾಡಿಕೊಟ್ಟರು.

ದೆಹಲಿಯಿಂದ ವಾಪಸಾದ ನಂತರ ಮೌನಕ್ಕೆ ಶರಣಾಗಿದ್ದ ಸಿದ್ದರಾಮಯ್ಯ ಅವರು ಗುರುವಾರದ ಸಭೆಯಲ್ಲಿ ಮನ ಬಿಚ್ಚಿ ಮಾತನಾಡಿದರು. ಹೈಕಮಾಂಡ್ ಭೇಟಿ, ಅಲ್ಲಿನ ಚರ್ಚೆ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನಿರ್ದೇಶನ ಎಲ್ಲವನ್ನು ವಿವರವಾಗಿ ಸಭೆಯಲ್ಲಿ ತೆರೆದಿಟ್ಟರು. ಹೈಕಮಾಂಡ್ ಸೂಚನೆಯಂತೆ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡುತ್ತಿರುವುದನ್ನು ತಿಳಿಸಿ, ಮೂರು ವರ್ಷಗಳ ಕಾಲ ತಮ್ಮ ಜತೆ ರಾಜ್ಯದ ಪ್ರಗತಿಗೆ ಕೆಲಸ ಮಾಡಿದ ಎಲ್ಲ ಸಂಪುಟ ಸಹೋದ್ಯೋಗಿಗಳಿಗೆ ಧನ್ಯವಾದ ಹೇಳಿದರು.

ಮುಂದಿನ ಎರಡು ವರ್ಷ ಶಾಸಕನಾಗಿ ನಿಮ್ಮ ಜೊತೆಗೇ ಇರುತ್ತೇನೆ. ಹೈಕಮಾಂಡ್ ಡಿ.ಕೆ.ಶಿವಕುಮಾರ್ ಮುಂದಿನ ಸಿಎಂ ಅಂತ ಹೇಳಿದೆ. ಅದನ್ನು ನಿಮ್ಮ ಮುಂದೆ ಹೇಳುತ್ತಿದ್ದೇನೆ. ರಾಜಕೀಯದಲ್ಲಿ ಸಕ್ರಿಯವಾಗಿಯೇ ಇರುತ್ತೇನೆ. 2028ರಲ್ಲೂ ಪಕ್ಷವನ್ನು ಅಧಿಕಾರಕ್ಕೆ ತರೋಣ. ನಾವೆಲ್ಲರೂ ಸೇರಿ ಕೆಲಸ ಮಾಡೋಣ ಎಂದು ಸಿದ್ದರಾಮಯ್ಯ ಮನವಿ ಮಾಡಿದರು.: ನಾನು ರಾಜಕಾರಣದಲ್ಲಿ ಇರೋದಿಲ್ಲ ಅಂತಾ





ಭಾವಿಸಬೇಡಿ. ನಾನು ನಿಮ್ಮೊಂದಿಗೆ ಇರುತ್ತೇನೆ. ಒಟ್ಟಾಗಿ ಹೋಗೋಣ. ಮೂರು ವರ್ಷದ ಸರ್ಕಾರದ ಉತ್ತಮ ಕೆಲಸಗಳನ್ನು ಮುಂದುವರಿಸಿಕೊಂಡು ಹೋಗಿ. ಹಾಗಾಗಿ ಎಲ್ಲರೂ ಡಿಕೆಶಿಗೆ ಸಹಕಾರ ನೀಡಿ ಎಂದು ಮನವಿ ಮಾಡಿದರು.

ಡಿ.ಕೆ. ಶಿವಕುಮಾರ್ ಸೇರಿದಂತೆ ಎಲ್ಲ ಸಚಿವರು

ಇಂದಿನ ಉಪಹಾರ ಸಭೆಯಲ್ಲಿ ಪಾಲ್ಗೊಂಡಿದ್ದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬಲಭಾಗದಲ್ಲಿ ಡಿ.ಕೆ. ಶಿವಕುಮಾರ್, ಎಡ ಭಾಗದಲ್ಲಿ ಡಾ.ಜಿ. ಪರಮೇಶ್ವರ್ ಕುಳಿತಿದ್ದು ವಿಶೇಷವಾಗಿತ್ತು.

ಸಭೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ಸಚಿವರುಗಳಾದ ಡಾ.ಜಿ. ಪರಮೇಶ್ವರ್, ಶಿವಾನಂದ ಪಾಟೀಲ್, ಕೆ.ಜೆ. ಜಾರ್ಜ್, ಎಂ.ಬಿ. ಪಾಟೀಲ್, ರಾಮಲಿಂಗಾರೆಡ್ಡಿ, ಬೈರತಿ ಸುರೇಶ್, ಸಂತೋಷ್ ಲಾಡ್, ಡಾ. ಎಂ.ಸಿ. ಸುಧಾಕರ್, ಪ್ರಿಯಾಂಕ ಖರ್ಗೆ, ಎಸ್. ಎಸ್. ಮಲ್ಲಿಕಾರ್ಜುನ್, ಕೆ. ವೆಂಕಟೇಶ್, ಶಿವರಾಜ ತಂಗಡಗಿ, ಚಲುವರಾಯಸ್ವಾಮಿ, ಲಕ್ಷ್ಮಿ ಹೆಬ್ಬಾಳ್ಕರ್, ಮಧು ಬಂಗಾರಪ್ಪ, ಸತೀಶ್ ಜಾರಕೀಹೊಳಿ, ಡಾ.ಎಸ್.ಸಿ. ಮಹದೇವಪ್ಪ, ಮಾಂಕಾಳ ವೈದ್ಯ, ಆರ್.ಬಿ. ತಿಮ್ಮಾಪುರ, ಶರಣಪ್ರಕಾಶ್ ಪಾಟೀಲ್, ಕೆ.ಎಚ್. ಮುನಿಯಪ್ಪ ಹೆಚ್. ಕೆ. ಪಾಟೀಲ್, ಈಶ್ವರ ಖಂಡ್ರೆ, ಬೋಸರಾಜು, ದಿನೇಶ್ ಗುಂಡೂರಾವ್, ಜಮೀರ್ ಅಹಮದ್ ಖಾನ್ ಭಾಗವಹಿಸಿದ್ದರು. ಮುಖ್ಯಮಂತ್ರಿಗಳ ಆಪ್ತ ವಲಯದಲ್ಲಿ ಗುರುತಿಸಿಕೊಂಡಿರುವ ಶಾಸಕರಾದ ಎ.ಎಸ್. ಪೊನ್ನಣ್ಣ, ಬಸವರಾಜ ರಾಯರೆಡ್ಡಿ, ಅಶೋಕ ಪಟ್ಟಣ ಸೇರಿದಂತೆ ಹಲವು ಶಾಸಕರು ಸಹ ಉಪಹಾರ ಕೂಟದಲ್ಲಿ ಭಾಗಿಯಾಗಿದ್ದರು.

### ಸಿಎಂ ಆಶೀರ್ವಾದ ಪಡೆದ ಡಿಕೆಶಿ

ರಾಜ್ಯದ ಮುಂದಿನ ಮುಖ್ಯಮಂತ್ರಿಯಾಗಲಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ತಬ್ಬಿಕೊಂಡು ಅವರ ಕಾಲಿಗೆ ಬಿದ್ದು ಆಶೀರ್ವಾದ ಪಡೆದಿದ್ದು ವಿಶೇಷ ಎನಿಸಿತು. ಸಿದ್ದರಾಮಯ್ಯ ಅವರು ಡಿ.ಕೆ. ಶಿವಕುಮಾರ್ ಅವರನ್ನು ತಮ್ಮ ಪಕ್ಕದಲ್ಲೇ ಕುಳ್ಳರಿಸಿಕೊಂಡು ಜತೆಯಲ್ಲೇ ಉಪಾಹಾರ ಸೇವಿಸಿದರು.

## ದೇಶೀಯ ಬಳಕೆ ಪೆಟ್ರೋಲ್–ಡೀಸೆಲ್ ಕೊರತೆ ಇಲ್ಲ

**ನವದೆಹಲಿ, ಮೇ 28:** ದೇಶದ ಹಲವೆಡೆ ಇಂಧನ ಲಭ್ಯತೆಯ ಬಗ್ಗೆ ಕಳವಳ ವ್ಯಕ್ತವಾಗುತ್ತಿರುವ ನಡುವೆ ಸ್ಪಷ್ಟನೆ ನೀಡಿರುವ ಕೇಂದ್ರ ಸರ್ಕಾರ, ದೇಶೀಯ ಬಳಕೆಯ ಪೆಟ್ರೋಲ್ ಮತ್ತು ಡೀಸೆಲ್ ದಾಸ್ತಾನು ಹೆಚ್ಚಿನ ಮಟ್ಟದಲ್ಲಿದೆ. ಚಿಲ್ಲರೆ ಬೆಲೆಗಳ ಲಾಭ ಪಡೆಯಲು ಅಕ್ರಮ ದಾಸ್ತಾನು, ಅನಧಿಕೃತ ಇಂಧನ ಪೂರೈಕೆ ಮಾಡುವುದರಿಂದ ಸ್ಥಳೀಯವಾಗಿ ಕೊರತೆ ಉಂಟಾಗುತ್ತಿದೆ ಎಂದು ತಿಳಿಸಿದೆ. ಪಶ್ಚಿಮ ಏಷ್ಯಾ ಬಿಕ್ಕಟ್ಟಿನಿಂದಾಗಿ ಗ್ರಾಹಕರನ್ನು ರಕ್ಷಿಸಲು ಸಾರ್ವಜನಿಕ ಒಡೆತನದ ತೈಲ ಮಾರುಕಟ್ಟೆ ಕಂಪನಿಗಳು ದಿನಕ್ಕೆ 550 ಕೋಟಿ ರೂ. ನಷ್ಟ ಭರಿಸುತ್ತಿವೆ. ಕೃತಕ ಅಭಾವಕ್ಕೆ ಕಾರಣವಾಗುತ್ತಿರುವ ಚಿಲ್ಲರೆ ಇಂಧನ ಪೂರೈಕೆಯ ಕಾಳಸಂತೆ, ಸಂಗ್ರಹಣೆ ಮತ್ತು ಬೇರೆಡೆಗೆ ತಿರುಗಿಸುವಿಕೆ, ಅಕ್ರಮ ದಾಸ್ತಾನು ತಡೆಯುವಂತೆ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ಕೇಂದ್ರ ಹೇಳಿದೆ.ಭಾರತ ನಾಲ್ಕನೇ ಅತಿದೊಡ್ಡ ತೈಲ ಸಂಸ್ಕರಣಾ ಕೇಂದ್ರವಾಗಿದ್ದು, ವಾರ್ಷಿಕ 258.1 ದಶಲಕ್ಷ ಟನ್ ಸಾಮರ್ಥ್ಯ ಹೊಂದಿದೆ. 2026ರ ಆರ್ಥಿಕ ವರ್ಷದಲ್ಲಿ ದೇಶೀಯ ಬಳಕೆಗೆ 243.2 ದಶಲಕ್ಷ ಇಂಧನವನ್ನು ಉತ್ಪಾದಿಸಲಾಗಿತ್ತು. 61.5 ದಶಲಕ್ಷ ಟನ್ ಪೆಟ್ರೋಲಿಯಂ ಉತ್ಪನ್ನಗಳನ್ನು ರಫ್ತು ಮಾಡಲಾಗಿದೆ ಎಂದು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ತಿಳಿಸಿದೆ. ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರದೀಪ್ ಸಿಂಗ್ ಪುರಿ ಅವರು ನಿರಂತರವಾಗಿ ಸಾರ್ವಜನಿಕ ವಲಯದ ತೈಲ ಮಾರುಕಟ್ಟೆ ಕಂಪನಿಗಳೊಂದಿಗೆ ಸಮನ್ವಯ ನಡೆಸುತ್ತಿದ್ದು, ರಾಜ್ಯ ಸರ್ಕಾರಗಳು ಮತ್ತು ಕೈಗಾರಿಕಾ ಸಂಸ್ಥೆಗಳಿಗೆ ಅಡೆತಡೆಯಿಲ್ಲದ ಪೂರೈಕೆ ಸಾಗುತ್ತಿದೆ ಎಂದು ಕೇಂದ್ರ ಹೇಳಿದೆ.

- ಚಿಲ್ಲರೆ ಬೆಲೆ ಲಾಭ ಪಡೆಯಲು ಅಕ್ರಮ ದಾಸ್ತಾನು
- ಕೇಂದ್ರ ಸರ್ಕಾರದ ಸ್ಪಷ್ಟನೆ

# ಏಕೈಕ ಓಬಿಸಿ ಸಿಎಂ ಕೆಳಗಿಳಿಸಿ ಅವಮಾನ

**ಮಂಗಳೂರು, ಮೇ 28:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ರಾಜೀನಾಮೆ ಪಡೆದಿದ್ದು ಹಿಂದುಳಿದ ವರ್ಗಕ್ಕೆ ರಾಹುಲ್ ಗಾಂಧಿ ಕೊಟ್ಟ ಬಳುವಳಿ ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ.

ಸಿಎಂ ಸಿದ್ದರಾಮಯ್ಯ ಅವರ ರಾಜೀನಾಮೆ ಬಗ್ಗೆ ಗುರುವಾರ ಪ್ರತಿಕ್ರಿಯಿಸಿದ ಅವರು, ದಿನ ಬೆಳಗಾದರೆ ಓಬಿಸಿ ಎಂದು ಬೊಬ್ಬೆ ಹೊಡೆಯುತ್ತಿದ್ದವರು, ಇಂದು ಅದೇ ವರ್ಗದ ಮುಖ್ಯಮಂತ್ರಿಯನ್ನು ಕೆಳಗಿಳಿಸಿ ಅಪಮಾನಿಸಿದ್ದಾರೆ ಎಂದು ಆರೋಪಿಸಿದ್ದಾರೆ.

ಅಪ್ಪ ರಾಜೀವ್ ಗಾಂಧಿ ಅವರು ಹಿಂದೆ ವೀರೇಂದ್ರ ಪಾಟೀಲರನ್ನು ನಡೆಸಿಕೊಂಡಂತೆ ಪುತ್ರ ರಾಹುಲ್ ಗಾಂಧಿ ಇಂದು ಸಿದ್ದರಾಮಯ್ಯ ಅವರನ್ನು ನಡೆಸಿಕೊಂಡಿದ್ದಾರೆ. ರಾಜೀವ್ ಗಾಂಧಿ ವೀರೇಂದ್ರ ಪಾಟೀಲರನ್ನು ಸಿಎಂ ಸ್ಥಾನದಿಂದ ಕೆಳಗಿಳಿಸಿ ಅಪಮಾನಿಸಿದರು. ಅಂತೆಯೇ ಮಗ ರಾಹುಲ್ ಗಾಂಧಿ ಸಹ ಸಿದ್ದರಾಮಯ್ಯರನ್ನು ಸಿಎಂ ಕುರ್ಚಿಯಿಂದ ಕೆಳಗಿಳಿಸಿ ಅವಮಾನಿಸಿದ್ದಾರೆ ಎಂದರು.

**ಇದ್ದೊಬ್ಬ ಒಬಿಸಿ ಸಿಎಂ ಕೆಳಗಿಸಿದ ಕೈ:** ದೇಶದಲ್ಲಿ ಕಾಂಗ್ರೆಸ್ ಆಡಳಿತವಿರುವ 4 ರಾಜ್ಯಗಳ ಪೈಕಿ ಮೂರು ರಾಜ್ಯಗಳಲ್ಲಿ ಮೇಲ್ವರ್ಗದವರು ಸಿಎಂ ಇದ್ದಾರೆ. ಕರ್ನಾಟಕದಲ್ಲಿ ಮಾತ್ರ ಒಬಿಸಿ ಸಿಎಂ ಇದ್ದರು. ಈಗ ಇದ್ದೊಬ್ಬ ಒಬಿಸಿ ಸಿಎಂ ಅನ್ನು ಕಾಂಗ್ರೆಸ್ ಅಸ್ಥಿರಗೊಳಿಸಿದೆ. ಕಾಂಗ್ರೆಸ್ ಪಕ್ಷ ನೆಪಕ್ಕಷ್ಟೇ ಓಬಿಸಿ ಜಪ ಮಾಡುತ್ತದೆ. ಆದರೆ, ನಡೆದುಕೊಳ್ಳುವ ರೀತಿಯೇ ಬೇರೆ ಎಂದು ದೂರಿದರು.


**ಅರಾಜಕತೆಯೇ ಕಾಂಗ್ರೆಸ್ ಗ್ಯಾರಂಟಿ:** ಅರಾಜಕತೆ, ಅಸ್ಥಿರತೆ, ಅವಿಶ್ವಾಸ, ಗೊಂದಲದ ವಾತಾವರಣವೇ ಕಾಂಗ್ರೆಸ್ ಪಕ್ಷದ ಗ್ಯಾರಂಟಿ. ಕರ್ನಾಟಕದಲ್ಲಿ ಕಳೆದ ಮೂರು ವರ್ಷಗಳಿಂದ ಆಂತರಿಕ ಗೊಂದಲ, ಅರಾಜಕತೆ, ಅಸ್ಥಿರತೆ ಪರಾಕಾಷ್ಠೆ ತಲೆದೋರಿದೆ. ಕಾಂಗ್ರೆಸ್ ಒಂದು ಅರಾಜಕತೆಯ ಪಕ್ಷ ಎಂದು ಆರೋಪಿಸಿದರು. ಸಿದ್ದರಾಮಯ್ಯ ಅವರು ವಿದಾಯ ಭಾಷಣದಲ್ಲಿ ರಾಜ್ಯದ ಸಂಪತ್ತು ಬರಿದಾಗಿದ್ದನ್ನು ಪ್ರಸ್ತಾಪಿಸುತ್ತ ಕೇಂದ್ರ ಸರ್ಕಾರದ ಮೇಲೆ ಗೂಬೆ ಕೂರಿಸಿದ್ದು ಸರಿಯಲ್ಲ. ಅವೈಜ್ಞಾನಿಕ ಗ್ಯಾರಂಟಿ ಯೋಜನೆಗಳು ಮತ್ತು ಹೈಕಮಾಂಡ್ ಅನ್ನು ತೃಪ್ತಿಪಡಿಸಲು ಹೋಗಿ ರಾಜ್ಯದ ಆರ್ಥಿಕತೆಯನ್ನು ಹದಗೆಡಿಸಿದರು ಎಂದು ಜೋಶಿ ತಿರುಗೇಟು ನೀಡಿದರು.

ವಿಬಿ ಜಿ ರಾಮ್ ಜಿ, ಜಲಜೀವನ ಮಿಷನ್, ಹದಿನೈದನೇ ಹಣಕಾಸು ಆರ್ಥಿಕ ನೆರವು, ಜಿಎಸ್‌ಟಿ ಸೇರಿದಂತೆ ಕೇಂದ್ರ ಸರ್ಕಾರದ ಆರ್ಥಿಕ ನೆರವುಗಳ ಬಗ್ಗೆ ಕೂಲಕುಂಶ ಮಾಹಿತಿ ನೀಡಿದ್ದಲ್ಲದೆ, ಹಣ ಬಿಡುಗಡೆ ಆಗಿರುವ ಬಗ್ಗೆ ಹಲವು ಬಾರಿ ಕೇಂದ್ರ ಸ್ಪಷ್ಟಪಡಿಸಿದೆ. ಹಾಗಿದ್ದರೂ ಕೇಂದ್ರದ ಮೇಲೆ ಗೂಬೆ ಕೂರಿಸುವುದು ಸರಿಯಲ್ಲ ಎಂದು ಸಚಿವ ಪ್ರಲ್ಹಾದ ಜೋಶಿ ಕಿಡಿ ಕಾರಿದರು.

**ಸಿದ್ದರಾಮಯ್ಯ ರಾಜೀನಾಮೆ ಹಿಂದುಳಿದ ವರ್ಗಕ್ಕೆ ರಾಹುಲ್‌ಗಾಂಧಿ ಕೊಟ್ಟ ಬಳುವಳಿ**

**..................**

**ಹಿಂದುಳಿದ ವರ್ಗದ ರಕ್ಷಕರು ಎಂದು ಬೊಬ್ಬೆ ಹೊಡೆಯುತ್ತಿದ್ದವರ ಉತ್ತರವೇನು?**




# ಚಂದ್ರನಲ್ಲಿ ಮಂಜುಗಡ್ಡೆ ಪತ್ತೆಹಚ್ಚಿದ ಇಸ್ರೋ ವಿಜ್ಞಾನಿಗಳು

**ನವದೆಹಲಿ, ಮೇ 28:** ಚಂದ್ರಯಾನ–2 ಉಪಗ್ರಹದ ರೇಡಾರ್ ಡೇಟಾವನ್ನು ಬಳಸಿಕೊಂಡು, ಅಹಮದಾಬಾದ್‌ನಲ್ಲಿರುವ ಫಿಸಿಕಲ್ ರಿಸರ್ಚ್ ಲ್ಯಾಬೊರೇಟರಿ ವಿಜ್ಞಾನಿಗಳು ಚಂದ್ರನ ದಕ್ಷಿಣ ಧ್ರುವದ ನಾಲ್ಕು ದ್ವಿಛಾಯಾ ಕುಳಿಗಳ ತಳಭಾಗದಲ್ಲಿ ಅಂತರ್ಜಲ ಹಿಮ ಇರುವ ಸಾಧ್ಯತೆಯನ್ನು ಪತ್ತೆಹಚ್ಚಿದ್ದಾರೆ. ಇದು ಭಾರತದ ಬಾಹ್ಯಾಕಾಶ ಸಂಶೋಧನೆಯಲ್ಲಿ ಮತ್ತೊಂದು ಮಹತ್ವದ ಹೆಜ್ಜೆಯಾಗಿದೆ.

ಇಸ್ರೋದ ಚಂದ್ರಯಾನ–2 ಕಕ್ಷೆಯಲ್ಲಿ ಅಳವಡಿಸಲಾಗಿರುವ ಡ್ಯುಯಲ್ ಫ್ರೀಕ್ವೆನ್ಸಿ ಸಿಂಥೆಟಿಕ್ ಅಪರ್ಚರ್ ರಾಡಾರ್ ಉಪಕರಣದ ಮೂಲಕ ಈ ನಿರ್ದಿಷ್ಟ ಅಂಶಗಳನ್ನು ಗುರುತಿಸಲಾಗಿದೆ. ಡಿಎಫ್‌ಎಸ್‌ಎಆರ್ ಎಂದರೆ ಎಲ್ ಮತ್ತು ಎಸ್ ಬ್ಯಾಂಡ್ ಫ್ರೀಕ್ವೆನ್ಸಿಗಳಲ್ಲಿ ಕೆಲಸ ಮಾಡುವ ಮೈಕ್ರೋವೇವ್ ಇಮೇಜಿಂಗ್ ಉಪಕರಣ ಹಾಗೂ ಚಂದ್ರನನ್ನು ಅಧ್ಯಯನ ಮಾಡಲು ಬಳಸಿರುವ ಮೊದಲ ಸಂಪೂರ್ಣ–ಪೋಲಾರಿಮೆಟ್ರಿಕ್ ರಾಡಾರ್ ಆಗಿದೆ. ಈ ದ್ವಿ–ಛಾಯಾ ಕುಳಿಗಳು ಚಂದ್ರನ ಖಾಯಂ ಛಾಯಾ ಪ್ರದೇಶಗಳಲ್ಲಿ ಕಂಡುಬರುತ್ತವೆ. ಈ ಪ್ರದೇಶಗಳಿಗೆ ಸೂರ್ಯನ ಬೆಳಕು ಮತ್ತು ಉಷ್ಣತೆ ಬೀಳದಿರುವುದರಿಂದ, ಇಲ್ಲಿ ಅತ್ಯಂತ ಶೀತ ವಾತಾವರಣ (ಸುಮಾರು 25 ಕೆಲ್ವಿನ್) ಇರುತ್ತದೆ. ಇದು ದೀರ್ಘಕಾಲದವರೆಗೆ ನೀರಿನ ಹಿಮವನ್ನು ಸುರಕ್ಷಿತವಾಗಿ ಕಾಪಾಡಲು ಹೇಳಿಮಾಡಿದ ಸ್ಥಳವಾಗಿದೆ.


ನೇಚರ್ ಪೋರ್ಟ್‌ಫೋಲಿಯೋ ಜರ್ನಲ್ njp ಸ್ಪೇಸ್ ಎಕ್ಸ್‌ಪ್ಲೋರೇಷನ್‌ನಲ್ಲಿ ಈ ಅಧ್ಯಯನ ವರದಿಯಾಗಿದೆ. ಈ ಅಧ್ಯಯನವು ಅಂತರ್ಜಲ ಹಿಮವನ್ನು ಕರಾರುವಕ್ಕಾಗಿ ಗುರುತಿಸಲು ರಾಡಾರ್–ಆಧಾರಿತ ಹೊಸ ಮಾಪನಗಳನ್ನು ಅಭಿವೃದ್ಧಿಪಡಿಸಿದೆ. ಇದು ಸರ್ಕ್ಯುಲರ್ ಪೋಲರೈಸೇಶನ್ ರೇಶಿಯೋ (CPR) ಮತ್ತು ಡಿಗ್ರಿ ಆಫ್ ಪೋಲರೈಸೇಶನ್ (DOP) ಅಂಶಗಳನ್ನು ಜೊತೆಗೂಡಿಸಿ ವಿಶ್ಲೇಷಣೆ ನಡೆಸಿದ್ದು, ಕಲ್ಲುಬಂಡೆಗಳಿಂದ ಕೂಡಿದ ಪ್ರದೇಶ ಹಾಗೂ ನಿಜವಾದ ಹಿಮದ ಸಿಗ್ನಲ್‌ಗಳನ್ನು ನಿಖರವಾಗಿ ಪ್ರತ್ಯೇಕಿಸುತ್ತದೆ. ಸಿಪಿಆರ್ ಮೌಲ್ಯ 1ಕ್ಕಿಂತ ಹೆಚ್ಚು ($CPR > 1$) ಮತ್ತು ಡಿಒಪಿ ಮೌಲ್ಯ 0.13 ಕ್ಕಿಂತ ಕಡಿಮೆ ($DOP < 0.13$) ಇದ್ದಲ್ಲಿ ಅದು ವಾಲ್ಯೂಮೆಟ್ರಿಕ್ ಸ್ಕ್ಯಾಟರಿಂಗ್ ಅನ್ನು ಸೂಚಿಸುತ್ತದೆ, ಇದು ಅಂತರ್ಜಲ ಹಿಮ ಇರುವುದರ ಪ್ರಬಲ ಸಾಕ್ಷಿಯಾಗಿದೆ ಎಂದು ವಿಜ್ಞಾನಿಗಳು ವಿವರಿಸಿದ್ದಾರೆ.



ಅಧ್ಯಯನಕ್ಕೊಳಪಟ್ಟ ಕುಳಿಗಳಲ್ಲಿ, ಫೌಸ್ಟಿನಿ ಕುಳಿಯ ಒಳಗೆ ಇರುವ 1.1 ಕಿಲೋಮೀಟರ್ ಅಗಲದ ಕುಳಿಯು ಅಂತರ್ಜಲ ಹಿಮದ ಅತ್ಯಂತ ಪ್ರಬಲ ಸೂಚನೆಗಳನ್ನು ತೋರಿಸಿದೆ ಎಂದು ಪಿಆರ್‌ಎಲ್ ಸಂಶೋಧಕರು ತಿಳಿಸಿದ್ದಾರೆ. ರಾಡಾರ್ ಡೇಟಾ ಮತ್ತು ಕುಳಿಯ ವಿಶೇಷ ಲೋಬೇಟ್–ರಿಮ್ ಮಾರ್ಫಾಲಜಿ ಪ್ರವಾಹದ ರೀತಿಯಲ್ಲಿರುವ ಭೌಗೋಳಿಕ ಆಕಾರ ರೂಪವು ಈ ನಿರ್ಧಾರವನ್ನು ಪುಷ್ಟಿಗೊಳಿಸಿದೆ. ಉಲ್ಕಾಶಿಲೆಗಳು ಅಪ್ಪಳಿಸಿದ ಪರಿಣಾಮವಾಗಿ ಅಂತರ್ಜಲ ಹಿಮವನ್ನು ತಲುಪಿ ಈ ವಿಶೇಷ ಆಕಾರ ಸೃಷ್ಟಿಯಾಗಿರಬಹುದು ಎಂದು ವಿಜ್ಞಾನಿಗಳು ತರ್ಕಿಸಿದ್ದಾರೆ.

ಈ ಮಹತ್ವದ ಶೋಧಗಳು ಚಂದ್ರನ ಧ್ರುವ ಪ್ರದೇಶಗಳಲ್ಲಿ ಆವಿಯಾಗುವ ಅಂಶಗಳ ವಿತರಣೆಯ ಬಗ್ಗೆ ಹೊಸ ಮಾಹಿತಿಯನ್ನು ನೀಡುತ್ತವೆ. ಮುಂದಿನ ದಿನಗಳಲ್ಲಿ ಚಂದ್ರನ ಮೇಲಿನ ಅನ್ವೇಷಣೆ, ಹಿಮ ಇರುವ ಪ್ರದೇಶಗಳಲ್ಲಿ ರೋವರ್ ಲ್ಯಾಂಡಿಂಗ್ ಮಾಡುವುದು ಮತ್ತು ಭವಿಷ್ಯದಲ್ಲಿ ಚಂದ್ರನ ಮೇಲೆಯೇ ಸಂಪನ್ಮೂಲಗಳ ಬಳಕೆ ಮಾಡುವ ಮಹತ್ವಾಕಾಂಕ್ಷಿ ಚಟುವಟಿಕೆಗಳಿಗೆ ಇದು ಅತ್ಯಂತ ಸಹಕಾರಿಯಾಗಲಿದೆ ಎಂದು ಇಸ್ರೋ ಮೂಲಗಳು ತಿಳಿಸಿವೆ.

## ನಿತ್ಯ ಪಂಚಾಂಗ 29.05.2026 ಶುಕ್ರವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ/ಗ್ರೀಷ್ಮ ಋತು, ಚಾಂದ್ರಮಾನ, ವೈಶಾಖ ಅಧಿಕ ಜ್ಯೇಷ್ಠ ಮಾಸ

ಅಧಿಕ ಜ್ಯೇಷ್ಠ ಶುದ್ಧ, ತ್ರಯೋದಶಿ, ಸ್ವಾತಿ ನಕ್ಷತ್ರ,

| ದಿನ | ರಾಹುಕಾಲ | ಯಮಗಂಡ | ಗುಳಕಕಾಲ |
|---|---|---|---|
| ವಾರ | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | ಸ.5.04–6.33 | 12.00–1.30 | 3.00–4.00 |
| ಸೋಮ | ಬೆ.7.20–9.04 | 10.30–12.00 | 1.30–12.00 |
| ಮಂಗಳ | ಮ.3.25–4.59 | 9.00–10.30 | 12.00–1.30 |
| ಬುಧ | ಮ.12.16–1.50 | 7.30–9.00 | 10.30–12.00 |
| ಗುರು | ಮ.1.50–3.29 | 6.00–7.30 | 9.00–10.30 |
| ಶುಕ್ರ | ಬೆ.10.42–12.16 | 3.00–4.30 | 7.30–9.00 |
| ಶನಿ | ಬೆ.9.07–10.41 | 1.30–3.00 | 6.00–7.30 |

# ಕುರ್ಚಿಗೆ ಕಂಟಕ ಎದುರಾದಾಗಲೆಲ್ಲ ಸಿದ್ದರಾಮಯ್ಯರಿಂದ ಜಾತಿ, ಜನಗಣತಿ ಅಸ್ತ್ರ ಬಳಕೆ: ಅಶೋಕ್ ವಾಗ್ದಾಳಿ

**ತುಷ್ಟೀಕರಣ ರಾಜಕಾರಣ ಮತ್ತು ಢೋಂಗಿ ಸಮಾಜವಾದದ ಬಗ್ಗೆ ಆತ್ಮಾವಲೋಕನ ಮಾಡಿಕೊಳ್ಳುವಂತೆ ಸಲಹೆ**



**ಬೆಂಗಳೂರು, ಮೇ 28:** ಸಂಕಟ ಬಂದಾಗ ವೆಂಕಟರಮಣ ಎನ್ನುವಂತೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ತಮ್ಮ ಕುರ್ಚಿಗೆ ಕಂಟಕ ಬಂದಾಗಲೆಲ್ಲಾ ಜಾತಿ, ಜನಗಣತಿ ವರದಿ ಎಂಬ ಮಂಕುಬೂದಿ ಎರಚಿ ಜನರ ಅನುಕಂಪ ಗಳಿಸುವ ಕುತಂತ್ರ ಈಗ ಗುಟ್ಟಾಗಿ ಉಳಿದಿಲ್ಲ ಎಂದು ವಿಧಾನಸಭೆ ಪ್ರತಿಪಕ್ಷದ ನಾಯಕ ಆರ್.ಅಶೋಕ್ ವಾಗ್ದಾಳಿ ನಡೆಸಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ನಿರ್ಗಮಿತ ಸಿ.ಎಂ.ಸಿದ್ದರಾಮಯ್ಯ ವಿರುದ್ಧ ಪೋಸ್ಟ್ ಮಾಡಿರುವ ಅವರು, ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕಾದ ಪರಿಸ್ಥಿತಿ ಎದುರಾದ ಕ್ಷಣದಲ್ಲಿ, ಅಧಿಕಾರದ ಕೊನೆಯ ದಿನಗಳಲ್ಲಿ ತರಾತುರಿಯಲ್ಲಿ ಜಾತಿ ಜನಗಣತಿ ವರದಿ ಸ್ವೀಕರಿಸುವುದು, ಅದರ ಮಾಹಿತಿಯನ್ನು ಮಾಧ್ಯಮಗಳಿಗೆ ಸೋರಿಕೆ ಮಾಡುವುದು, ಇದನ್ನು ಆಷಾಢಭೂತಿತನ, ರಾಜಕೀಯ ಬೂಟಾಟಿಕೆ ಅನ್ನದೇ ಇನ್ನೇನು ಹೇಳಲು ಸಾಧ್ಯ ಕುಟುಕಿದ್ದಾರೆ.

ನಿಮ್ಮ ಆಡಳಿತ ವಿಫಲವಾಗಿದೆ. ಕರ್ನಾಟಕದಲ್ಲಿ ಕಾಂಗ್ರೆಸ್ ಪರವಾದ ವಾತಾವರಣ ಇಲ್ಲ. ಸರ್ಕಾರದ ವಿರುದ್ಧ ಸ್ಪಷ್ಟ ಆಡಳಿತ ವಿರೋಧಿ ಅಲೆ ಇದೆ. ಹೈಕಮಾಂಡ್ ಬಳಿ ಛೀಮಾರಿ ಹಾಕಿಸಿಕೊಂಡು ಒಲ್ಲದ ಮನಸ್ಸಿನಿಂದ ರಾಜೀನಾಮೆ ನೀಡಬೇಕಾದ ಸ್ಥಿತಿಗೆ ಸಾಗುತ್ತಿರುವ ಸಿದ್ದರಾಮಯ್ಯನವರು, ಈಗಲಾದರೂ ತುಷ್ಟೀಕರಣ ರಾಜಕಾರಣ ಮತ್ತು ಢೋಂಗಿ ಸಮಾಜವಾದದ ಬಗ್ಗೆ ಆತ್ಮಾವಲೋಕನ ಮಾಡಿಕೊಳ್ಳುತ್ತಾರೆ, ಪಶ್ಚಾತಾಪ ಪಡುತ್ತಾರೆ ಎಂದು ಭಾವಿಸಿದ್ದೆ. ಆದರೆ ಕುರ್ಚಿ ಬಿಡುವ ಕೊನೆಯ ಕ್ಷಣದಲ್ಲೂ ಕೂಡ ಓಲೈಕೆ ರಾಜಕಾರಣ ಮುಂದುವರಿಸಿ ಭಂಡತನ ಪ್ರದರ್ಶಿಸಿದ್ದಾರೆ ಎಂದು ಕಿಡಿಕಾರಿದ್ದಾರೆ.

ಮೊದಲನೆಯದಾಗಿ, ಇಷ್ಟು ದೊಡ್ಡ ಪ್ರಮಾಣದ ದತ್ತಾಂಶವನ್ನು ಕೇವಲ ಕೆಲ ಗಂಟೆಗಳಲ್ಲಿ ಸಂಸ್ಕರಿಸಿ ಅಂತಿಮ ವರದಿ ರೂಪಿಸುವುದು ಅಸಾಧ್ಯ. ಇದಕ್ಕಾಗಿಯೇ ದೆಹಲಿ ಭೇಟಿಯಲ್ಲಿ ಹೈಕಮಾಂಡ್ ಮುಂದೆ ಸ್ವತಃ ಮುಖ್ಯಮಂತ್ರಿಗಳೇ 15 ದಿನಗಳ ಕಾಲಾವಕಾಶ ಕೇಳಿದ್ದಾರೆ ಎಂಬ ಸುದ್ದಿಗಳಿದ್ದವು. ಹಾಗಿದ್ದಾಗ ಕೇವಲ 24 ಗಂಟೆಗಳಲ್ಲಿ ವರದಿ ಸ್ವೀಕಾರ ಸಾಧ್ಯವೇ ಎಂದು ಆಶ್ಚರ್ಯ ವ್ಯಕ್ತಪಡಿಸಿದ್ದಾರೆ.

ಎರಡನೆಯದಾಗಿ, ಕೇಂದ್ರ ಸರ್ಕಾರ ಈಗಾಗಲೇ ದಶವಾರ್ಷಿಕ ಜನಗಣತಿಯಲ್ಲಿ ದೇಶವ್ಯಾಪಿ ಜಾತಿ ಜನಗಣತಿ ನಡೆಸುವುದಾಗಿ ಘೋಷಿಸಿದ್ದು, ಅದರ ಪ್ರಕ್ರಿಯೆಯೂ ಆರಂಭವಾಗಿದೆ. ಆದರೂ ಸ್ವಾರ್ಥ ರಾಜಕಾರಣಕ್ಕಾಗಿ ತರಾತುರಿಯಲ್ಲಿ ವರದಿ ಸ್ವೀಕರಿಸಿ ಅದನ್ನು ಸೋರಿಕೆ ಮಾಡುವ ಮೂಲಕ ಸಮಾಜದಲ್ಲಿ ಜಾತಿಗಳ ನಡುವೆ ಬೆಂಕಿಹಚ್ಚುವ ಅಪಾಯಕಾರಿ ರಾಜಕಾರಣಕ್ಕೆ ಕೈಹಾಕಿದ್ದಾರೆ ಎಂದು ವಾಗ್ದಾಳಿ ನಡೆಸಿದ್ದಾರೆ.

ರಾಜೀನಾಮೆ ಕೊಡುವ ಹೊಸ್ತಿಲಲ್ಲೂ ಒಣ ಪ್ರತಿಷ್ಠೆ ಮತ್ತು ಸ್ವಹಿತಾಸಕ್ತಿ ಬಿಡದ ಸಿದ್ದರಾಮಯ್ಯ, ಸಣ್ಣತನ ಹಾಗೂ ಕೀಳುಮಟ್ಟದ ರಾಜಕಾರಣ ಕರ್ನಾಟಕದ ರಾಜಕೀಯ ಇತಿಹಾಸದಲ್ಲಿ ಕಪ್ಪು ಚುಕ್ಕೆಯಾಗಿ ಉಳಿಯುವುದರಲ್ಲಿ ಯಾವುದೇ ಸಂದೇಹವಿಲ್ಲ ಎಂದು ಅಶೋಕ್ ಹೇಳಿದ್ದಾರೆ.

# ಡಿಕೆಶಿ ಮೌನದ ಹಿಂದಿನ ರಹಸ್ಯ?



**ಬೆಂಗಳೂರು, ಮೇ 28:** ಕರ್ನಾಟಕ ರಾಜಕಾರಣದಲ್ಲಿ ಸಿಎಂ ಸಿದ್ದರಾಮಯ್ಯನವರ ರಾಜೀನಾಮೆ ಬೆನ್ನಲ್ಲೇ ಹೊಸ ಇತಿಹಾಸ ಸೃಷ್ಟಿಯಾಗುತ್ತಿದೆ. ನೂತನ ಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ್ ಅವರು ಅಧಿಕಾರ ವಹಿಸಿಕೊಳ್ಳುವುದು ನೂರಕ್ಕೆ ನೂರರಷ್ಟು ಖಚಿತವಾಗಿದೆ. ಆದರೆ, ಈ ಬಿಗ್ ಕ್ಲೈಮ್ಯಾಕ್ಸ್ ನಡುವೆ ಡಿಕೆಶಿ ಹಠಾತ್ ಮೌನದ ಹಿಂದಿನ ಅಸಲಿ ರಹಸ್ಯವೇನು ಗೊತ್ತಾ? ಮಾತು ಆಡಿದರೆ ಮುತ್ತು ಒಡೆದು ಹೋಗಲಿದೆ ಎನ್ನುವ ನೊಣವಿನಕೆರೆ ಅಜ್ಜಯ್ಯನ ಸೂಚನೆಯ ಬೆನ್ನಲ್ಲೇ ಡಿಕೆಶಿ ಸದ್ಯ ಸಂಪೂರ್ಣಮೌನಸ್ಥಿತಿಗೆ ಜಾರಿದ್ದಾರೆ. ಮುಖ್ಯಮಂತ್ರಿಯಾಗಿ ಅಧಿಕೃತವಾಗಿ ಪ್ರಮಾಣ ವಚನ ಸ್ವೀಕರಿಸುವವರೆಗೂ ಅವಶ್ಯಕತೆಗಿಂತ ಜಾಸ್ತಿ ಯಾರ ಬಳಿಯೂ ಮಾತನಾಡಬೇಡಿ. ಮಾತಾಡಿದರೆ ಮುತ್ತು ಒಡೆದು ಹೋಗಲಿದೆ, ಅರ್ಥಾತ್ ಕೆಲಸ ಕೆಡಲಿದೆ ಎಂದು ಎಚ್ಚರಿಸಿದ್ದಾರೆ.

ಸ್ವಾಮೀಜಿಗಳ ಈ ಎಚ್ಚರಿಕೆಯ ಹಿನ್ನೆಲೆಯಲ್ಲೇ, ಗುರುವಾರ ಬೆಳಗ್ಗೆ ಸಿಎಂ ನಿವಾಸದಲ್ಲಿ ನಡೆದ ಉಪಹಾರಕೂಟದ ಸಭೆ ಮುಗಿಸಿ ಹೊರಬಂದ ಡಿಸಿಎಂ ಡಿ.ಕೆ.ಶಿವಕುಮಾರ್ ಮಾಧ್ಯಮಗಳಿಗೆ ಯಾವುದೇ ಪ್ರತಿಕ್ರಿಯೆ ನೀಡದೇ ನೇರವಾಗಿ ತೆರಳಿದ್ದಾರೆ. ಕೇವಲ ಡಿಕೆಶಿ ಅಷ್ಟೇ ಅಲ್ಲ, ಅವರ ಸೋದರ ಡಿ.ಕೆ.ಸುರೇಶ್ ಹಾಗೂ ಅವರ ಎಲ್ಲ ಬೆಂಬಲಿಗರಿಗೂ ಯಾವುದೇ ಕಾರಣಕ್ಕೂ ಮಾಧ್ಯಮಗಳ ಮುಂದೆ ಹೇಳಿಕೆ ನೀಡದಂತೆ ಕಟ್ಟುನಿಟ್ಟಿನ ಸೂಚನೆ ರವಾನಿಸಲಾಗಿದೆ ಎನ್ನಲಾಗಿದೆ.

# ಕಾಂಗ್ರೆಸ್‌ನಿಂದ ಹಿಂದುಳಿದವರಿಗೆ ವಿಶ್ವಾಸದ್ರೋಹ: ಬೊಮ್ಮಾಯಿ

**ಸಿದ್ದರಾಮಯ್ಯ ರಾಜೀನಾಮೆಯಿಂದ ಕಾಂಗ್ರೆಸ್ ಪಕ್ಷ ಹಾಗೂ ಚುನಾವಣಾ ರಾಜಕಾರಣದ ಮೇಲೂ ಪರಿಣಾಮ**



**ಬೆಂಗಳೂರು, ಮೇ 28:** ಸಿದ್ದರಾಮಯ್ಯ ಅವರು ಸಿಎಂ ಸ್ಥಾನಕ್ಕೆ ರಾಜೀನಾಮೆ ಕೊಟ್ಟಿರುವುದು ಕಾಂಗ್ರೆಸ್ ಹಾಗೂ ಕರ್ನಾಟಕದ ಚುನಾವಣಾ ರಾಜಕಾರಣದ ಮೇಲೆ ಪರಿಣಾಮ ಬೀರಲಿದೆ. ಕಾಂಗ್ರೆಸ್‌ನಿಂದ ಹಿಂದುಳಿದವರಿಗೆ ನಂಬಿಕೆ ದ್ರೋಹವಾಗಿದ್ದು, ಹಿಂದುಳಿದ ವರ್ಗ ಕಾಂಗ್ರೆಸ್ ವಿರುದ್ಧ ತಿರುಗಿ ಬೀಳಲಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅಭಿಪ್ರಾಯ ಪಟ್ಟಿದ್ದಾರೆ.

ಈ ಕುರಿತು ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷದಿಂದ ಹಿಂದುಳಿದವರಿಗೆ ನಂಬಿಕೆ ದ್ರೋಹ ಮಾಡಿದಂತಾಗಿದೆ. ವಿಶೇಷವಾಗಿ ಲೋಕಸಭೆಯ ವಿಪಕ್ಷ ನಾಯಕ ರಾಹುಲ್ ಗಾಂಧಿ ಓಬಿಸಿ ಪರವಾಗಿ ಪ್ರಚಾರ ಮಾಡುತ್ತಾರೆ. ಆದರೆ, ಓಬಿಸಿ ಮುಖ್ಯಮಂತ್ರಿಯನ್ನು ಕಿತ್ತು ಹಾಕಿದ್ದಾರೆ. ಹಿಂದುಳಿದ ವರ್ಗಗಳ ಬಗ್ಗೆ ಅವರು ಮೊಸಳೆ ಕಣ್ಣೀರು ಸುರಿಸುವುದು ಈಗ ಬಹಿರಂಗವಾಗಿದೆ. ಇದರಿಂದ ಹಿಂದುಳಿದ ವರ್ಗದವರು ಬೇಸರಗೊಂಡಿದ್ದು, ಅವರು 2028 ರ ಚುನಾವಣೆಯಲ್ಲಿ ಕಾಂಗ್ರೆಸ್ ಗೆ ತಕ್ಕ ಪಾಠ ಕಲಿಸುವುದಾಗಿ ತೀಕ್ಷ್ಣವಾಗಿ ಪ್ರತಿಕ್ರಿಯಿಸುತ್ತಿದ್ದಾರೆ ಎಂದು ಹೇಳಿದ್ದಾರೆ.

ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಆಡಳಿತ ಪಕ್ಷವನ್ನು ಅಶಕ್ತಗೊಳಿಸಿದ್ದು, ಬಿಜೆಪಿ ಇನ್ನಷ್ಟು ಬಲಿಷ್ಠವಾಗಿ ನಮ್ಮದೇ ಆದ ಶಕ್ತಿಯೊಂದಿಗೆ 2028ಕ್ಕೆ ರಾಜ್ಯದಲ್ಲಿ ಅಧಿಕಾರಕ್ಕೆ ಬರುತ್ತೇವೆ ಎಂದು ಹೇಳಿದರು.

# ಯಾರೇ ಸಿಎಂ ಆದರೂ ರಾಜ್ಯದ ಸ್ಥಿತಿ ಸುಧಾರಿಸುವ ವಿಶ್ವಾಸವಿಲ್ಲ: ಬಿ.ವೈ.ವಿಜಯೇಂದ್ರ



ಬೆಂಗಳೂರು, ಮೇ 28: ರಾಜ್ಯದ ಜನರ ಪಾಲಿಕೆ ಕಾಂಗ್ರೆಸ್ ಸರ್ಕಾರ ಶಾಪವಾಗಿ ಪರಿಣಮಿಸಿದೆ. ಸಿದ್ದರಾಮಯ್ಯ ಅವರ ನಂತರ ಯಾರೇ ಮುಖ್ಯಮಂತ್ರಿಗಳಾದರೂ ರಾಜ್ಯದ ಸ್ಥಿತಿ ಸುಧಾರಣೆಯಾಗುವ ವಿಶ್ವಾಸ ಇಲ್ಲ ಎಂದು ಶಾಸಕ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದ್ದಾರೆ.

ಹೊಸಪೇಟೆಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮುಂದಿನ ಮುಖ್ಯಮಂತ್ರಿ ಯಾರು ಎನ್ನುವುದು ಯಕ್ಷಪ್ರಶ್ನೆಯಾಗಿದೆ. ಕಾಂಗ್ರೆಸ್‌ನ ಮೂರು ವರ್ಷದ ಆಡಳಿತದಲ್ಲಿ ರಾಜ್ಯ ಆರ್ಥಿಕತೆ ಸಂಕಷ್ಟಕ್ಕೆ ಸಿಲುಕಿದೆ. ಈ ಸರ್ಕಾರ ಜನರಿಗೆ ಉತ್ತಮ ಆಡಳಿತ ನೀಡುವ ಪ್ರಯತ್ನ ಮಾಡಲೇ ಇಲ್ಲ ಎಂದು ದೂರಿದರು.

ರಾಜ್ಯದಲ್ಲಿ ಆಡಳಿತ ಸಂಪೂರ್ಣ ಕುಸಿದಿದೆ. ಅಲ್ಪಸಂಖ್ಯಾತರ ಓಲೈಕೆಯಲ್ಲೇ ತೊಡಗಿತ್ತೇ ಹೊರತು ರೈತರ, ಬಡವರ, ಯುವಕರ ಸಮಸ್ಯೆಗಳನ್ನು ಆಲಿಸಲಿಲ್ಲ. ಮುಖ್ಯಮಂತ್ರಿ ಕುರ್ಚಿಯ ಕಚ್ಚಾಟವೇ ದೊಡ್ಡದಾಗಿದೆ. ಅಧಿಕಾರಕ್ಕಾಗಿ ನಡೆಯುತ್ತಿರುವ ಆಂತರಿಕ ಕಚ್ಚಾಟ ಆಡಳಿತದ ಮೇಲೆ ಪರಿಣಾಮ ಬೀರಿದೆ. ಈ ಸರ್ಕಾರದ ಮೇಲೆ ಯುವಕರು ಅಸಮಾಧಾನಗೊಂಡಿದ್ದಾರೆ. ರಾಜ್ಯ ಡ್ರಗ್ಸ್ ರಾಜಧಾನಿಯಾಗುವತ್ತ ಸಾಗಿದೆ ಎಂದು ಆಕ್ಷೇಪಿಸಿದರು.

ಸಿದ್ದರಾಮಯ್ಯರ ರಾಜೀನಾಮೆ ನೀಡಿದ ನಂತರ ಡಾ. ಜಿ.ಪರಮೇಶ್ವರ್ ಸಿಎಂ ಆಗಬೇಕು, ಡಿ.ಕೆ.ಶಿವಕುಮಾರ್ ಆಗಬೇಕು, ಮಲ್ಲಿಕಾರ್ಜುನ ಖರ್ಗೆ ಆಗಬೇಕು ಎಂಬ ಕಚ್ಚಾಟ ಆರಂಭವಾಗಿದೆ. ಯಾರೇ ಸಿಎಂ ಆದರೂ ರಾಜ್ಯಕ್ಕೆ ಲಾಭ ಇಲ್ಲ. ಇಲ್ಲಿನ ಆರ್ಥಿಕ ಸ್ಥಿತಿ ಸುಧಾರಿಸಲು ಸಾಧ್ಯವಾಗದಷ್ಟು ದಿವಾಳಿಯಾಗಿದೆ ಎಂದು ನುಡಿದರು.

ಸಿಎಂ ಸ್ಥಾನದ ಗುದ್ದಾಟಕ್ಕೆ ಅಷ್ಟು ಬೇಗ ಉತ್ತರ ಕಂಡುಕೊಳ್ಳುವ ಶಕ್ತಿ ಕಾಂಗ್ರೆಸ್ ಹೈಕಮಾಂಡ್‌ಗೆ ಇಲ್ಲ. ರಾಜ್ಯದಲ್ಲಿ ಒಂದು ರೀತಿ ಅರಾಜಕತೆ ಸೃಷ್ಟಿಯಾಗುತ್ತಿದೆ. ಭ್ರಷ್ಟಾಚಾರದಿಂದ ಸಾಮಾನ್ಯ ಜನ ಬೇಸತ್ತಿದ್ದಾರೆ. ರಸಗೊಬ್ಬರ ಕೃತಕ ಅಭಾವ ಸೃಷ್ಟಿಸುವ ಷಡ್ಯಂತ್ರ ನಡೆದಿದೆ. ಉಸ್ತುವಾರಿ ಸಚಿವರು ಹಾಗೂ ಶಾಸಕರು ರೈತರ ಸಮಸ್ಯೆ ಕೇಳುತ್ತಿಲ್ಲ. ಅವರೆಲ್ಲ ಅಧಿಕಾರಕ್ಕಾಗಿ ದೆಹಲಿಯಲ್ಲಿ ಬೀಡು ಬಿಡುತ್ತಿದ್ದಾರೆ ಎಂದು ದೂರಿದರು.

ಕಾಂಗ್ರೆಸ್ ಸರ್ಕಾರಕ್ಕೆ ಪೂರ್ಣ ಬಹುಮತ ಇದೆ. ನಾವು ಇದರಲ್ಲಿ ರಾಜಕಾರಣ ಮಾಡಲು ಸಾಧ್ಯವಿಲ್ಲ. ವಿರೋಧ ಪಕ್ಷವಾಗಿ ಕೆಲಸವನ್ನು ಸಮರ್ಥವಾಗಿ ಮಾಡಿದ್ದೇವೆ. ಸರ್ಕಾರದಲ್ಲಿ ಬಿಜೆಪಿ ಹಸ್ತಕ್ಷೇಪ ಮಾಡುವುದಿಲ್ಲ. ಮೂಗು ತೂರಿಸುವುದಿಲ್ಲ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

# ಅಜ್ಜಯ್ಯನ ಮಠದಲ್ಲಿ ಡಿಕೆಶಿ ವಿಶೇಷ ಪೂಜೆ



**ಬೆಂಗಳೂರು, ಮೇ 28:** ಮುಂದಿನ ಮುಖ್ಯಮಂತ್ರಿಯಾಗಲಿರುವ ಡಿ.ಕೆ. ಶಿವಕುಮಾರ್ ಅವರು, ಗುರುವಾರ ಬೆಳಗ್ಗೆ ಸಿದ್ದರಾಮಯ್ಯ ಅವರ ಉಪಾಹಾರ ಸಭೆಯ ನಂತರ ತಾವು ನಂಬುವ ಹಾಗೂ ನಡೆದುಕೊಳ್ಳುವ ತಿಪಟೂರಿನ ನೊಣವಿನಕೆರೆಯ ಶ್ರೀ ಕಾಡಸಿದ್ದೇಶ್ವರ ಮಠದ ಅಜ್ಜಯ್ಯಸ್ವಾಮಿಯ ಗದ್ದುಗೆಗೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದರು. ಅಜ್ಜಯ್ಯನ ಆಶೀರ್ವಾದ ಪಡೆದುಕೊಂಡರು. ಈ ವೇಳೆ ಸಿಎಂ ಆಗಿ ಪ್ರಮಾಣವಚನ ಸ್ವೀಕರಿಸಲು ಶುಭ ಮೂಹೂರ್ತದ ಬಗ್ಗೆಯೂ ಅಜ್ಜಯ್ಯ ಮಠದ ಶ್ರೀ ಕರಿವೃಷಭ ದೇಶಿಕೇಂದ್ರ ಸ್ವಾಮೀಜಿ ಅವರ ಜತೆ ಚರ್ಚಿಸಿದರು.

ಶುಕ್ರವಾರ ಇಲ್ಲವೇ ಶನಿವಾರ ಶಾಸಕಾಂಗ ಪಕ್ಷದ ಸಭೆ ನಡೆಯಲಿದ್ದು, ಡಿಕೆಶಿ ಅವರನ್ನು ಸಿಎಲ್‌ಪಿ ನಾಯಕನನ್ನಾಗಿ ಆಯ್ಕೆ ಮಾಡಲಾಗುವುದು. ಸೋಮವಾರದ ವೇಳೆಗೆ ಡಿ.ಕೆ. ಶಿವಕುಮಾರ್ ನೇತೃತ್ವದ ಸಚಿವ ಸಂಪುಟದ ಪ್ರಮಾಣವಚನ ಕಾರ್ಯಕ್ರಮ ನಡೆಯುವ ಸಾಧ್ಯತೆ ಇದೆ.

# ಸಿ.ಶ್ರುತಿಗೆ ಪಿಎಚ್.ಡಿ. ಪದವಿ ಪ್ರದಾನ



**ಬೆಂಗಳೂರು, ಮೇ 28:** ಬಾಗೇಪಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಾಣಿಜ್ಯಶಾಸ್ತ್ರ ವಿಭಾಗದಲ್ಲಿ ಸಹಾಯಕ ಪ್ರಾಧ್ಯಾಪಕಿ ಹಾಗೂ ಮೈಸೂರು ವಿಶ್ವವಿದ್ಯಾಲಯದ ಸಂಶೋಧನಾ ವಿದ್ಯಾರ್ಥಿನಿ ಸಿ.ಶ್ರುತಿ ಸಂಘಟನಾತ್ಮಕ ಸಂಸ್ಕೃತಿ, ನೌಕರರ ಬದ್ಧತೆ ಮತ್ತು ಕಾರ್ಯಕ್ಷಮತೆ – ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳ ಸಾರ್ವಜನಿಕ ವಲಯದ ಬ್ಯಾಂಕುಗಳು ಮತ್ತು ಖಾಸಗಿ ವಲಯದ ಬ್ಯಾಂಕುಗಳ ತುಲನಾತ್ಮಕ ಅಧ್ಯಯನ? ಕುರಿತ ಮಹಾಪ್ರಬಂಧಕ್ಕೆ ಮೈಸೂರು ವಿಶ್ವವಿದ್ಯಾಲಯ ಡಾಕ್ಟರೇಟ್ (ಪಿಎಚ್.ಡಿ.) ಪದವಿ ಪ್ರದಾನ ಮಾಡಿದೆ. ಡಾ. ಎ. ಬಿ. ವಿಜಯಕುಮಾರ್ ಅವರ ಯಶಸ್ವಿ ಮಾರ್ಗದರ್ಶನದಲ್ಲಿ ಪಿಎಚ್.ಡಿ. ದೊರೆತಿದೆ. ಶ್ರುತಿ ಸಿ. ಅವರು ಶಿಕ್ಷಣ ಕ್ಷೇತ್ರದಲ್ಲಿ ನಿರಂತರ ಪರಿಶ್ರಮ, ಶಿಸ್ತು ಹಾಗೂ ಸಂಶೋಧನಾ ಮನೋಭಾವದ ಮೂಲಕ ಗಮನಾರ್ಹ ಸಾಧನೆ ಮಾಡಿದ್ದಾರೆ ಎಂದು ಪೋಷಕರಾದ ಚಂದ್ರಶೇಖರ್ ಹಾಗೂ ಸುಭದ್ರಾ ದಂಪತಿ ಹರ್ಷ ವ್ಯಕ್ತಪಡಿಸಿದ್ದಾರೆ.

# ನವಜಾತ ನೀರಾನೆ ಮರಿಗೆ ಡಾ. ಸಮೀಕ್ಷಾ ರೆಡ್ಡಿ ಹೆಸರು: ಸಚಿವ ಈಶ್ವರ ಖಂಡ್ರೆ ಸೂಚನೆ

**ಬೆಂಗಳೂರು, ಮೇ 28:** ಬನ್ನೇರುಘಟ್ಟ ಮೃಗಾಲಯದಲ್ಲಿ ನಿನ್ನೆ ರಾತ್ರಿ ಜನಿಸಿರುವ ನೀರಾನೆ ಮರಿಯ ಆರೋಗ್ಯದ ಬಗ್ಗೆ ತೀವ್ರ ಗಮನ ಹರಿಸಿ, ಈ ನವಜಾತ ನೀರಾನೆ ಮರಿ ಹೆಣ್ಣಾಗಿದ್ದಲ್ಲಿ ತ್ಯಾವರೆಕೊಪ್ಪ ಮೃಗಾಲಯದಲ್ಲಿ ವೈದ್ಯರಾಗಿದ್ದ ದಿವಂಗತ ಡಾ. ಸಮೀಕ್ಷಾ ರೆಡ್ಡಿ ಗೌರವಾರ್ಥ ಸಮೀಕ್ಷಾ ಎಂದು ಹೆಸರಿಡಲು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸೂಚಿಸಿದ್ದಾರೆ.

ಬನ್ನೇರುಘಟ್ಟದಲ್ಲಿ 17 ವರ್ಷದ ದಶ್ಯ ನೀರಾನೆಯು ಮರಿಗೆ ಜನ್ಮ ನೀಡಿರುವ ಬಗ್ಗೆ ಸಂತಸ ವ್ಯಕ್ತಪಡಿಸಿರುವ ಅವರು, ಕಳೆದ ಬಾರಿ ಇದೇ ನೀರಾನೆ ಜನ್ಮ ನೀಡಿದ್ದ ಮರಿ ಸೋಂಕಿನಿಂದ ಮೃತಪಟ್ಟಿತ್ತು.

ಈ ನಿಟ್ಟಿನಲ್ಲಿ ಮರಿಯ ಆರೋಗ್ಯದ ಬಗ್ಗೆ ಸತತ ನಿಗಾ ಇಟ್ಟು, ಯಾವುದೇ ಸೋಂಕು ತಗುಲದಂತೆ ಕಟ್ಟು ನಿಟ್ಟಾಗಿ ಪ್ರಮಾಣಿತ ಕಾರ್ಯಾಚರಣೆ ಮಾನದಂಡಗಳನ್ನು ಅನುಸರಿಸಲು ಸಚಿವರು ನಿರ್ದೇಶಿಸಿದ್ದಾರೆ.

ಈ ನವಜಾತ ಮರಿಯ ಆರೋಗ್ಯದ ಖಾತ್ರಿ ಪಡಿಸಿಕೊಂಡು ಜೂನ್ 4ರಂದು ದಕ್ಷಿಣ ಆಫ್ರಿಕಾದಿಂದ ತರಲಾಗಿರುವ ಚೀತಾಗಳನ್ನು ಸಾರ್ವಜನಿಕ ವೀಕ್ಷಣಾ ಆವರಣಕ್ಕೆ ಬಿಡುವ ಸಂದರ್ಭದಲ್ಲಿ ಈ ಮರಿಗೆ ಸಮೀಕ್ಷಾ ಎಂದು ನಾಮಕರಣ ಮಾಡಲೂ ಸೂಚಿಸಿದ್ದಾರೆ.

ಶಿವಮೊಗ್ಗ ಬಳಿಯ ತ್ಯಾವರೆಕೊಪ್ಪ ಸಿಂಹಧಾಮದಲ್ಲಿ ಗರ್ಭಿಣಿಯಾಗಿದ್ದ ಹಂಸಿಣಿ ನೀರಾನೆ ಚಿಕಿತ್ಸೆಗೆ ತೆರಳಿದ್ದ ಯುವ ವೈದ್ಯೆ ಡಾ. ಸಮೀಕ್ಷಾ ರೆಡ್ಡಿ ಅವರ ಮೇಲೆ ನೀರಾನೆ ದಾಳಿ ಮಾಡಿತ್ತು. ಚಿಕಿತ್ಸೆ ಫಲ ಕಾಣದೆ ಅವರು ಮೃತಪಟ್ಟಿದ್ದರು. ಆ ಸಂದರ್ಭದಲ್ಲಿ ಮೃತ ವೈದ್ಯೆಯ ಕುಟುಂಬದವರಿಗೆ ಸಾಂತ್ವನ ಹೇಳಲು ತೆರಳಿದ್ದ ಈಶ್ವರ ಖಂಡ್ರೆ ಅವರು ಒಂದು ನವಜಾತ ವನ್ಯಜೀವಿಗೆ ಸಮೀಕ್ಷಾ ಹೆಸರಿಡುವ ಪ್ರಸ್ತಾಪ ಮಾಡಿದ್ದರು. ಅದರಂತೆ ಇಂದು ಮುಖ್ಯ ವನ್ಯಜೀವಿ ಪರಿಪಾಲಕರಿಗೆ ಲಿಖಿತ ಆದೇಶ ನೀಡಿದ್ದಾರೆ.

# ಹವಾಮಾನ ವೈಪರೀತ್ಯ: ಸಿದ್ದರಾಮಯ್ಯ ಪ್ರಯಾಣಿಸುತ್ತಿದ್ದ ವಿಮಾನ ಜೈಪುರದಲ್ಲಿ ಭೂಸ್ಪರ್ಶ



**ನವದೆಹಲಿ, ಮೇ 28:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದೆಹಲಿಗೆ ಪ್ರಯಾಣಿಸುತ್ತಿದ್ದ ವಿಶೇಷ ವಿಮಾನದ ಮಾರ್ಗ ಬದಲಾವಣೆಯಾಗಿದ್ದು, ಜೈಪುರದಲ್ಲಿ ತುರ್ತಾಗಿ ಇಳಿದಿದೆ. ರಾಷ್ಟ್ರೀಯ ರಾಜಧಾನಿ ದೆಹಲಿ ಸುತ್ತಮುತ್ತ ಉಂಟಾದ ಕೆಟ್ಟ ಹವಾಮಾನ ಮತ್ತು ಭಾರೀ ವಿಮಾನ ಸಂಚಾರ ದಟ್ಟಣೆಯಿಂದಾಗಿ ವಿಮಾನವನ್ನು ರಾಜಸ್ತಾನದ ಜೈಪುರಕ್ಕೆ ತಿರುಗಿಸಲು ವಿಮಾನಯಾನ ಅಧಿಕಾರಿಗಳು ಸೂಚಿಸಿದ್ದಾರೆ ಎನ್ನಲಾಗಿದೆ. ಆದ್ದರಿಂದಾಗಿ ವಿಮಾನವನ್ನು ಜೈಪುರದಲ್ಲಿ ಇಳಿಸಲಾಯಿತು ಎನ್ನಲಾಗಿದೆ.

ಸಿಎಂ ಸಿದ್ದರಾಮಯ್ಯ ಹಾಗೂ ರಾಜ್ಯದ ಹಲವು ಹಿರಿಯ ನಾಯಕರನ್ನು ದೆಹಲಿಗೆ ಕರೆದೊಯ್ಯುತ್ತಿದ್ದ ಚಾರ್ಟರ್ಡ್ ವಿಮಾನವು ಗುರುವಾರ ಅಚ್ಚರಿಯ ರೀತಿಯಲ್ಲಿ ಮಾರ್ಗ ಬದಲಿಸಿ ಜೈಪುರದಲ್ಲಿ ಇಳಿದಿದ್ದು, ರಾಜಕೀಯ ವಲಯದಲ್ಲಿ ಕೆಲಕಾಲ ಆತಂಕ ಸೃಷ್ಟಿಸಿತ್ತು. ಮೂಲಗಳ ಪ್ರಕಾರ, ಬೆಂಗಳೂರಿನಿಂದ ಹೊರಟಿದ್ದ ಈ ವಿಮಾನದಲ್ಲಿ ರಾಜ್ಯ ಕಾಂಗ್ರೆಸ್ ನಾಯಕರು ದೆಹಲಿಯಲ್ಲಿ ಕಾಂಗ್ರೆಸ್ ಹೈಕಮಾಂಡ್ ಜೊತೆ ಮಹತ್ವದ ಸಭೆಗಳಲ್ಲಿ ಭಾಗವಹಿಸಲು ತೆರಳಿದ್ದರು.

ವಿಮಾನ ನಿಲ್ದಾಣ ಹಾಗೂ ವಿಮಾನಯಾನ ಮೂಲಗಳ ಪ್ರಕಾರ, ದೆಹಲಿಯಲ್ಲಿ ಮಧ್ಯಾಹ್ನದ ವೇಳೆ ಕಡಿಮೆ ಗೋಚರತೆ, ಮಧ್ಯಂತರ ಗುಡುಗು ಸಹಿತ ಮಳೆ ಮತ್ತು ಭಾರೀ ವಿಮಾನ ಸಂಚಾರ ದಟ್ಟಣೆ ಉಂಟಾಗಿತ್ತು. ಇದರಿಂದ ಮುನ್ನೆಚ್ಚರಿಕಾ ಕ್ರಮವಾಗಿ ಸಿದ್ದರಾಮಯ್ಯ ಮತ್ತು ಅವರ ನಿಯೋಗವನ್ನು ಹೊತ್ತೊಯ್ಯುತ್ತಿದ್ದ ಚಾರ್ಟರ್ಡ್ ವಿಮಾನವನ್ನು ಜೈಪುರ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ತಿರುಗಿಸಲಾಗಿದೆ ಎಂದು ಹೇಳಲಾಗಿದೆ.

# ಉಪರಾಷ್ಟ್ರಪತಿ ರಾಧಾಕೃಷ್ಣನ್ ಇಂದಿನಿಂದ 31 ರವರೆಗೆ ಕರ್ನಾಟಕ, ಗೋವಾ, ಕೇರಳ ಪ್ರವಾಸ



**ನವದೆಹಲಿ, ಮೇ 28:** ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅವರು 2026ರ ಮೇ 29 ರಿಂದ 31 ರವರೆಗೆ ಮೂರು ದಿನ ಕರ್ನಾಟಕ, ಗೋವಾ ಮತ್ತು ಕೇರಳ ರಾಜ್ಯಗಳಿಗೆ ಭೇಟಿ ನೀಡಲಿದ್ದಾರೆ.

ಕರ್ನಾಟಕದ ಬೆಂಗಳೂರಿನಲ್ಲಿರುವ ಆರ್ಟ್ ಆಫ್ ಲಿವಿಂಗ್ ಫೌಂಡೇಶನ್‌ನ 45 ವರ್ಷಗಳನ್ನು ಗುರುತಿಸುವ ಜಾಗತಿಕ ಆಚರಣೆಯಲ್ಲಿ ಮೇ 29 ರಂದು ಉಪರಾಷ್ಟ್ರಪತಿಗಳು ಪಾಲ್ಗೊಳ್ಳಲಿದ್ದಾರೆ. ಬಳಿಕ ಅವರು, ಕರ್ನಾಟಕದ ದಾವಣಗೆರೆಯಲ್ಲಿರುವ ವಿಶ್ವವಿದ್ಯಾಲಯ ಬಿಡಿಟಿ ಎಂಜಿನಿಯರಿಂಗ್ ಕಾಲೇಜಿನ 75 ವರ್ಷಗಳ ಪ್ಲಾಟಿನಂ ಜುಬಿಲಿ ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ.

ಉಪರಾಷ್ಟ್ರಪತಿಗಳು ಮೇ 30 ರಂದು ಪಣಜಿಯಲ್ಲಿ ನಡೆಯಲಿರುವ ಗೋವಾ ರಾಜ್ಯ ಸಂಸ್ಥಾಪನಾ ದಿನ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ನಂತರ ಅವರು ಗೋವಾದ ಸಿಎಸ್‌ಐಆರ್ – ರಾಷ್ಟ್ರೀಯ ಸಮುದ್ರಶಾಸ್ತ್ರ ಸಂಸ್ಥೆಗೆ ಭೇಟಿ ನೀಡಲಿದ್ದಾರೆ.

ಉಪರಾಷ್ಟ್ರಪತಿಗಳು ಕರ್ನಾಟಕದ ಶ್ರೀ ಕ್ಷೇತ್ರ ಧರ್ಮಸ್ಥಳ ಮಂಜುನಾಥ ಸ್ವಾಮಿ ದೇವಾಲಯಕ್ಕೆ ಮೇ 31 ರಂದು ಭೇಟಿ ನೀಡಲಿದ್ದಾರೆ. ಬಳಿಕ, ಬೆಳ್ತಂಗಡಿಯಲ್ಲಿ ಸಿರಿ ಕೈಗಾರಿಕಾ ಉದ್ಯಾನವನವನ್ನು ಉದ್ಘಾಟಿಸಲಿದ್ದಾರೆ.

ಅದೇ ದಿನ ನಂತರ, ಉಪರಾಷ್ಟ್ರಪತಿಯವರು ಕೊಟ್ಟಾಯಂನಲ್ಲಿ ದೀಪಿಕಾ ಮಲಯಾಳಂ ದಿನಪತ್ರಿಕೆಯ 140ನೇ ಸಂಸ್ಥಾಪನಾ ದಿನ ಕಾರ್ಯಕ್ರಮ ಉದ್ಘಾಟನೆಗೆ ಕೇರಳಕ್ಕೆ ತೆರಳಲಿದ್ದಾರೆ. ಸಂಸತ್ ಸದಸ್ಯ (ರಾಜ್ಯಸಭೆ) ಸಿ. ಸದಾನಂದನ್ ಮಾಸ್ಟರ್ ಅವರು ಆಯೋಜಿಸಿರುವ ಖಾಸಗಿ ಸಮಾರಂಭದಲ್ಲಿ ಭಾಗಿಯಾಗಲು ಅವರು ಕಣ್ಣೂರಿಗೆ ಸಹ ಭೇಟಿ ನೀಡಲಿದ್ದಾರೆ.

# ಕೃತಕ ಬುದ್ಧಿಮತ್ತೆ ಪಠ್ಯಕ್ರಮದ ನವೀಕರಣ ಕುರಿತು ಉದ್ಯಮಿಗಳೊಂದಿಗೆ ಅಶ್ವಿನಿ ವೈಷ್ಣವ್ ಉನ್ನತಮಟ್ಟದ ಸಭೆ



**ನವದೆಹಲಿ, ಮೇ 28:** ಉದಯೋನ್ಮುಖ ತಾಂತ್ರಿಕ ಪ್ರವೃತ್ತಿಗಳಿಗೆ ಕಲಿಯುವವರನ್ನು ಉತ್ತಮವಾಗಿ ಸಜ್ಜುಗೊಳಿಸಲು, ಕೃತಕ ಬುದ್ಧಿಮತ್ತೆ (ಎಐ) ಪಠ್ಯಕ್ರಮದ ಸಮಗ್ರ ಪರಿಷ್ಕರಣೆಗಾಗಿ ಭಾರತ ಸರ್ಕಾರವು ಉದ್ಯಮದವರೊಂದಿಗೆ ಕೈಜೋಡಿಸುತ್ತಿದೆ.

ಈ ನಿಟ್ಟಿನಲ್ಲಿ ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವರಾದ ಶ್ರೀ ಅಶ್ವಿನಿ ವೈಷ್ಣವ್ ಅವರು ನವದೆಹಲಿಯಲ್ಲಿ ಎಐ ಪಠ್ಯಕ್ರಮ ಕಾರ್ಯಪಡೆಯೊಂದಿಗೆ ಉನ್ನತ ಮಟ್ಟದ ಸಭೆ ನಡೆಸಿದರು.

ಭಾರತದ ಶಿಕ್ಷಣ ಸಂಸ್ಥೆಗಳಲ್ಲಿ ಪ್ರಸ್ತುತ ಇರುವ ಬ್ಯಾಚುಲರ್ ಆಫ್ ಟೆಕ್ನಾಲಜಿ (ಬಿ.ಟೆಕ್) ಕಂಪ್ಯೂಟರ್ ಸೈನ್ಸ್ ಮತ್ತು ಸಂಬಂಧಿತ ಪಠ್ಯಕ್ರಮಗಳ ಮೂಲ ಅಧ್ಯಯನವನ್ನು ಈ ಕಾರ್ಯಪಡೆಯು ನಡೆಸಿತು. ಈ ಕಾರ್ಯವನ್ನು ಉದ್ಯಮದ ತಜ್ಞರು ಮತ್ತು ರಾಷ್ಟ್ರೀಯ ಸಾಫ್ಟ್‌ವೇರ್ ಮತ್ತು ಸೇವಾ ಕಂಪನಿಗಳ ಸಂಘ (ನಾಸ್ಕಾಂ) ಸಹಭಾಗಿತ್ವದಲ್ಲಿ ಕೈಗೊಳ್ಳಲಾಯಿತು.

ಭಾರತೀಯ ಪಠ್ಯಕ್ರಮದಲ್ಲಿ ಎಐ ವ್ಯಾಪ್ತಿಯು ವಿಸ್ತಾರಗೊಂಡಿದೆ ಎಂದು ಈ ಅಧ್ಯಯನವು ತಿಳಿಸಿದರೂ, ಅದರಲ್ಲಿ ಕೆಲವು ಗಮನಾರ್ಹ ನ್ಯೂನತೆಗಳನ್ನು ಗುರುತಿಸಿದೆ. ಇವು ಮುಖ್ಯವಾಗಿ ಬೋಧನಾ ಶಾಸ್ತ್ರ, ಮೂಲಸೌಕರ್ಯ ಮತ್ತು ಜನರೇಟಿವ್ ಎಐ, ಮಷಿನ್ ಲರ್ನಿಂಗ್ ಆಪರೇಷನ್ಸ್ ಹಾಗೂ ಫೌಂಡೇಶನಲ್ ಮಾಡೆಲ್ ಡೆವಲಪ್ ಮೆಂಟ್ ನಂತಹ ಕ್ಷೇತ್ರಗಳಲ್ಲಿನ ಪ್ರಾಯೋಗಿಕ ಅನುಭವದ ಕೊರತೆಗೆ ಸಂಬಂಧಿಸಿದ್ದಾಗಿವೆ.

**ಕಾರ್ಯಪಡೆಯ ಪ್ರಮುಖ ಗಮನ ಹರಿಸುವ ಕ್ಷೇತ್ರಗಳು:**

**ಅನ್ವಯಿಕ–ಆಧಾರಿತ ಬೋಧನಾ ಶಾಸ್ತ್ರ:** ಉಪನ್ಯಾಸ ಆಧಾರಿತ ಬೋಧನೆಯಿಂದ ಮೊದಲ ಸೆಮಿಸ್ಟರ್‌ನಿಂದಲೇ ನೈಜ ಉದ್ಯಮದ ಬಳಕೆಯ ಪ್ರಕರಣಗಳ ಆಧಾರದ ಮೇಲಿನ ಕಲಿಕೆಗೆ ಬದಲಾವಣೆ ತರುವುದು.

**ಕ್ರೆಡಿಟ್–ಸಂಯೋಜಿತ ಪಠ್ಯಕ್ರಮದ ಸಂಯೋಜನೆ:**

ರಚನಾತ್ಮಕವಾಗಿ ಸೆಮಿಸ್ಟರ್ ಪ್ರಕಾರ ಜಾರಿಗೆ ತರುವಂತೆ, ಔಪಚಾರಿಕ ಶೈಕ್ಷಣಿಕ ಕ್ರೆಡಿಟ್ ವ್ಯವಸ್ಥೆಯೊಳಗೆ ಎಐ ಕೋರ್ಸ್‌ಗಳನ್ನು ಅಳವಡಿಸುವುದು.

ಹೆಚ್ಚಿದ ಪ್ರಾಯೋಗಿಕ ಅನುಭವ: ಪದವಿಯ ಸ್ವರೂಪ ಮತ್ತು ಆಯ್ಕೆ ಮಾಡಿದ ವಿಶೇಷತೆಯನ್ನು ಅವಲಂಬಿಸಿ, ಪ್ರಸ್ತುತ ಇರುವ ಶೇಕಡಾ 25–30 ರಷ್ಟು ಪ್ರಾಯೋಗಿಕ ಅನುಭವವನ್ನು ಶೇಕಡಾ 40–75 ಕ್ಕೆ ಹೆಚ್ಚಿಸುವುದು.

**ಉದ್ಯಮ–ಸಂಯೋಜಿತ ಬೋಧನಾ ಶಾಸ್ತ್ರ:**

ಕ್ಯಾಪ್ಸ್ಟೋನ್ ಯೋಜನೆಗಳು ಸಂಪೂರ್ಣ ಎಐ ಪರಿಹಾರ ಎಂಜಿನಿಯರಿಂಗ್, ಮತ್ತು ಲೋ–ಕೋಡ್ ಹಾಗೂ ನೋ–ಕೋಡ್ ಪರಿಕರಗಳ ಬಳಕೆಯ ಮೂಲಕ ಇಡೀ ಕಾರ್ಯಕ್ರಮದಾದ್ಯಂತ ಉದ್ಯಮದ ಅನುಭವವನ್ನು ಹಂಚುವುದು.

**ನಿರಂತರ ಸರಣಿಯಾಗಿ ಜವಾಬ್ದಾರಿಯುತ ಎಐ:**

ಜವಾಬ್ದಾರಿಯುತ ಎಐ ಮತ್ತು ಎಐ ಆಡಳಿತವನ್ನು ಪ್ರತ್ಯೇಕ ಮಾಡ್ಯೂಲ್ ಗಳಾಗಿ ಇಡುವ ಬದಲಿಗೆ ಎಲ್ಲಾ ಸೆಮಿಸ್ಟರ್‌ಗಳಲ್ಲಿ ಸಂಯೋಜಿಸುವುದು.

**ಬಹುಪ್ರವೇಶ–ನಿರ್ಗಮನ ಆಯ್ಕೆಗಳು:** 1ನೇ ವರ್ಷದ ನಂತರ ಪ್ರಮಾಣಪತ್ರ, 2ನೇ ವರ್ಷದ ನಂತರ ಡಿಪ್ಲೊಮಾ, ಮತ್ತು 3ನೇ ವರ್ಷದ ನಂತರ ಉನ್ನತ ಡಿಪ್ಲೊಮಾ ನೀಡುವ ಸುಲಭ ಶೈಕ್ಷಣಿಕ ಮಾರ್ಗವನ್ನು ಒದಗಿಸುವುದು.

**ಅಧ್ಯಾಪಕರ ಅಭಿವೃದ್ಧಿಗೆ ಒತ್ತು**

ಪಠ್ಯಕ್ರಮದ ಸುಧಾರಣೆಗೆ ತಕ್ಕಂತೆ ಅಧ್ಯಾಪಕರು ಸಹ ಸಿದ್ಧರಾಗಿರಬೇಕು ಎಂಬುದನ್ನು ಗುರುತಿಸಿ, ಈ ಸಮಾಲೋಚನೆಯು ಬೋಧಕರ ಸಾಮರ್ಥ್ಯ ವೃದ್ಧಿಯನ್ನು ಪ್ರಸ್ತಾವಿತ ಮಾರ್ಗಸೂಚಿಯ ಕೇಂದ್ರಬಿಂದು ವಾಗಿರಿಸಿದೆ. ಶಿಫಾರಸುಗಳು ಈ ಕೆಳಗಿನಂತಿವೆ:

ತರಬೇತುದಾರರಿಗೆ ರಚನಾತ್ಮಕ ತರಬೇತಿ ಕಾರ್ಯಕ್ರಮಗಳು

**ಆಯ್ಕೆ ಮಾಡಲ್ಪಟ್ಟ ಕೋರ್ಸ್ ವಿಷಯಗಳು,**

ಪ್ರಮಾಣೀಕೃತ ಮೌಲ್ಯಮಾಪನ ಚೌಕಟ್ಟುಗಳು, ಮತ್ತು ಪ್ರಸ್ತುತ ಉದ್ಯಮದ ಪರಿಕರಗಳು ಮತ್ತು ವೇದಿಕೆಗಳಿಗೆ ಅನುಗುಣವಾಗಿ ಆಧುನೀಕರಿಸಿದ ಪ್ರಯೋಗಾಲಯಗಳು.

ತರಗತಿಯಲ್ಲಿ ಆಳವಾದ ವೃತ್ತಿಪರ ಪ್ರಾಯೋಗಿಕ ಪರಿಣತಿಯನ್ನು ತರಲು, ಪ್ರಮುಖ ಬಿಸಿನೆಸ್ ಶಾಲೆಗಳ ಯಶಸ್ವಿ ಮಾದರಿಯನ್ನು ಆಧರಿಸಿ, ಅನುಭವಸ್ಥ ಉದ್ಯಮ ವೃತ್ತಿಪರರನ್ನು ಅರೆಕಾಲಿಕ ಅಧ್ಯಾಪಕರನ್ನಾಗಿ ತೊಡಗಿಸಿಕೊಳ್ಳಲು ವಿಶೇಷ ಮಧ್ಯಸ್ಥಿಕೆಯನ್ನು ಶಿಫಾರಸು ಮಾಡಲಾಗಿದೆ.

**ಮೂಲದಲ್ಲಿ ಹಂಚಿಕೆಯ ಮೂಲಸೌಕರ್ಯ**

ಭಾಗವಹಿಸಿದವರು ರಾಷ್ಟ್ರ ಮಟ್ಟದ ಹಂಚಿಕೆಯ ಎಐ ಮೂಲಸೌಕರ್ಯದ ರಚನೆಯನ್ನು ಮತ್ತಷ್ಟು ಪ್ರಸ್ತಾಪಿಸಿದರು. ಟ್ರಿಪಲ್ ಹೆಲಿಕ್ಸ್ ಮಾದರಿಯನ್ನು ಉದ್ಯಮ, ಸರ್ಕಾರ ಮತ್ತು ಶೈಕ್ಷಣಿಕ ಸಂಸ್ಥೆಗಳು ಜಂಟಿಯಾಗಿ ಬೆಂಬಲಿಸುತ್ತವೆ. ಇದು ಎಲ್ಲಾ ಕಾಲೇಜುಗಳು ಮತ್ತು ವಿಶ್ವವಿದ್ಯಾಲಯಗಳಲ್ಲಿ ಗ್ರಾಫಿಕ್ಸ್ ಪ್ರೊಸೆಸಿಂಗ್ ಯೂನಿಟ್ ಕಂಪ್ಯೂಟ್, ಎಡ್ಜ್ ಸಾಧನಗಳು, ಸಾಫ್ಟ್‌ವೇರ್ ಸ್ಟಾಕ್‌ಗಳು ಮತ್ತು ಚಂದಾದಾರಿಕೆ ಆಧಾರಿತ ವೇದಿಕೆಗಳಿಗೆ ಸಮಾನ ಪ್ರವೇಶವನ್ನು ಖಚಿತಪಡಿಸುತ್ತದೆ.

**ಭವಿಷ್ಯದ ಮಾರ್ಗಸೂಚಿ**

ಸಮಾಲೋಚನೆಯು ತಕ್ಷಣದ ಮುಂದಿನ ನಾಲ್ಕು ಕ್ರಮಗಳ ಕುರಿತು ಒಮ್ಮತದೊಂದಿಗೆ ಮುಕ್ತಾಯವಾಯಿತು:

ರಾಷ್ಟ್ರಮಟ್ಟದಲ್ಲಿ ಕಂಪ್ಯೂಟ್, ಮೂಲಸೌಕರ್ಯ, ಅಧ್ಯಾಪಕರು ಮತ್ತು ಕಲಿಯುವವರ ಪ್ರಮಾಣಕ್ಕೆ ಸಂಬಂಧಿಸಿದ ಅಗತ್ಯಗಳ ಅಂದಾಜು ಮಾಡುವುದು.

ಪ್ರಸ್ತುತ ಬ್ಯಾಚ್‌ಗಳ ಐದರಿಂದ ಎಂಟನೇ ಸೆಮಿಸ್ಟರ್‌ಗಳಲ್ಲಿ ನವೀಕರಿಸಿದ ಪಠ್ಯಕ್ರಮವನ್ನು ಔಪಚಾರಿಕವಾಗಿ ಅಳವಡಿಸಿಕೊಳ್ಳಲು ಮತ್ತು ಹೊಸ ಬ್ಯಾಚ್‌ಗಳಿಗೆ ಸಂಪೂರ್ಣವಾಗಿ ಸಂಯೋಜಿಸಲು ಅಖಿಲ ಭಾರತ ತಾಂತ್ರಿಕ ಶಿಕ್ಷಣ ಮಂಡಳಿಯೊಂದಿಗೆ ತೊಡಗಿಸಿಕೊಳ್ಳುವುದು.

ಉದ್ಯಮದವರ ನೇತೃತ್ವದಲ್ಲಿ ತರಬೇತಿ, ಅನುಭವ ಹಂಚಿಕೆ ಮತ್ತು ಕಾರ್ಪೊರೇಟ್ ವೃತ್ತಿಪರರು ಶಿಕ್ಷಕರಾಗಿ ಸೇವೆ ಸಲ್ಲಿಸಲು ರಚನಾತ್ಮಕ ಮಾರ್ಗ ಒಳಗೊಂಡಂತೆ ಅಧ್ಯಾಪಕರ ಅಭಿವೃದ್ಧಿ ಮಾರ್ಗಸೂಚಿ ಸಿದ್ಧಪಡಿಸುವುದು ನಾನ್–ಸ್ಟೆಮ್ ವಿಭಾಗಗಳಿಗೆ ಸಮಾನಾಂತರ ಮಾರ್ಗವನ್ನು ರಚಿಸುವುದು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಎಲ್‌ಎಸಿ ಕುರಿತು ಭಾರತ ಚೀನಾ ಮಾತುಕತೆ




ಸಹಾಯಕ ವಿದೇಶಾಂಗ ಸಚಿವ ಹಾಂಗ್ ಲೀ ಅವರು ಬೀಜಿಂಗ್‌ನಲ್ಲಿ ಭಾರತೀಯ ವಿದೇಶಾಂಗ ಸಚಿವಾಲಯದ ಪೂರ್ವ ಏಷ್ಯಾ ವಿಭಾಗದ ಜಂಟಿ ಕಾರ್ಯದರ್ಶಿ ಸುಜಿತ್ ಘೋಷ್ ಅವರನ್ನು ಭೇಟಿಯಾಗಿದ್ದರು.

**ನವದೆಹಲಿ, ಮೇ 28:** ಭಾರತ ಮತ್ತು ಚೀನಾ ನಡುವಿನ ಗಡಿ ವಿವಾದಕ್ಕೆ ಸಂಬಂಧಿಸಿದಂತೆ ಮೇ 27ರಂದು ಚೀನಾದ ರಾಜಧಾನಿ ಬೀಜಿಂಗ್‌ನಲ್ಲಿ 35ನೇ ಉನ್ನತ ಮಟ್ಟದ ಸಭೆ ನಡೆದಿದೆ. ಉಭಯ ದೇಶಗಳು ಈ ಮಾತುಕತೆಯನ್ನು ರಚನಾತ್ಮಕ ಮತ್ತು ಭವಿಷ್ಯದ ದೃಷ್ಟಿಕೋನ ಹೊಂದಿರುವ ಚರ್ಚೆ ಎಂದು ಬಣ್ಣಿಸಿವೆ. ಪೂರ್ವ ಲಡಾಖ್‌ನ ವಾಸ್ತವ ನಿಯಂತ್ರಣ ರೇಖೆ ಉದ್ದಕ್ಕೂ ಶಾಂತಿ ಮತ್ತು ಸುವ್ಯವಸ್ಥೆಯನ್ನು ಕಾಯ್ದುಕೊಳ್ಳುವುದು ದ್ವಿಪಕ್ಷೀಯ ಸಂಬಂಧಗಳ ಸುಧಾರಣೆಗೆ ಅತ್ಯಂತ ಪ್ರಮುಖವಾಗಿದೆ ಎಂಬುದನ್ನು ಈ ಸಭೆಯಲ್ಲಿ ಪುನರುಚ್ಚರಿಸಲಾಗಿದೆ. ವಿದೇಶಾಂಗ ಸಚಿವಾಲಯದ ಜಂಟಿ ಕಾರ್ಯದರ್ಶಿ (ಪೂರ್ವ ಏಷ್ಯಾ) ಸುಜಿತ್ ಘೋಷ್ ಅವರು ಭಾರತದ ಪರವಾಗಿ ನೇತೃತ್ವ ವಹಿಸಿ ಭಾಗವಹಿಸಿದ್ದರು.

ಚೀನಾದ ವಿದೇಶಾಂಗ ಸಚಿವಾಲಯದ ಗಡಿ ಮತ್ತು ಸಾಗರ ವ್ಯವಹಾರಗಳ ವಿಭಾಗದ ಮಹಾನಿರ್ದೇಶಕಿ ಹೌ ಯಾನ್ಕಿ ಚೀನಾದ ಪರವಾಗಿ ಭಾಗವಹಿಸಿದ್ದರು. ಉಭಯ ದೇಶಗಳು ಚೀನಾದಲ್ಲಿ ಶೀಘ್ರವೇ ನಡೆಯಲಿರುವ ಮುಂದಿನ ಹಂತದ ವಿಶೇಷ ಪ್ರತಿನಿಧಿಗಳ ಸಭೆಗಾಗಿ ಸಿದ್ಧತೆಗಳನ್ನು ಮಾಡಲು ಒಪ್ಪಿಕೊಂಡಿವೆ. ಹಾಗೆಯೇ ಗಡಿಯಲ್ಲಿ ಪರಿಣಾಮಕಾರಿ ನಿಯಂತ್ರಣ ಮತ್ತು ಶಾಂತಿಯನ್ನು ಕಾಪಾಡಲು ಘಂಅಅ ಅಡಿಯಲ್ಲಿ ಹೊಸ ಕಾರ್ಯಕಾರಿ ಗುಂಪನ್ನು ರಚಿಸಲು ನಿರ್ಧರಿಸಲಾಗಿದೆ. ಪಶ್ಚಿಮ ವಲಯದ ಜೊತೆಗೆ ಈಗ ಗಡಿಯ ಪೂರ್ವ ಮತ್ತು ಮಧ್ಯ ವಲಯಗಳಿಗೂ ಮಾತುಕತೆ ಕಾರ್ಯವಿಧಾನವನ್ನು ವಿಸ್ತರಿಸಲು ಉಭಯ ದೇಶಗಳು ಸಮ್ಮತಿಸಿವೆ. ಇದರೊಂದಿಗೆ ಗಡಿಯಾಚೆಗಿನ ನದಿಗಳಿಗೆ ಸಂಬಂಧಿಸಿದ ತಾಂತ್ರಿಕ ಸಮಾಲೋಚನೆಗಾಗಿ ತಜ್ಞರ ಸಭೆಯನ್ನು ಶೀಘ್ರದಲ್ಲೇ ನಡೆಸುವ ಬಗ್ಗೆ ಭಾರತ ಪ್ರಸ್ತಾಪಿಸಿದೆ. ಚೀನಾವು ಮಾನವೀಯತೆಯ ಆಧಾರದ ಮೇಲೆ ತುರ್ತು ಜಲವಿಜ್ಞಾನದ ಮಾಹಿತಿಯನ್ನು ಹಂಚಿಕೊಳ್ಳಲು ಒಪ್ಪಿಕೊಂಡಿದೆ. ಉಭಯ ದೇಶಗಳ ನಡುವೆ ನೇರ ವಿಮಾನಯಾನ ಸೇವೆಗಳನ್ನು ಶೀಘ್ರವಾಗಿ ಪುನರಾರಂಭಿಸಲೂ ಮಾತುಕತೆ ನಡೆಸಲಾಗಿದೆ. ಮೂರು ಸಾಂಪ್ರದಾಯಿಕ ಗಡಿ ವ್ಯಾಪಾರ ಮಾರುಕಟ್ಟೆಗಳನ್ನು ಮರುಪ್ರಾರಂಭಿಸಲು ಸಹ ಚರ್ಚಿಸಲಾಗಿದೆ. 2020ರ ಗಾಲ್ವಾನ್ ಕಣಿವೆಯ ಘರ್ಷಣೆಯ ನಂತರ ಉಭಯ ದೇಶಗಳ ನಡುವೆ ಗಡಿ ಉದ್ವಿಗ್ನತೆ ಹೆಚ್ಚಾಗಿತ್ತು. ಇದೀಗ ಈ ಉದ್ವಿಗ್ನತೆಯನ್ನು ತಿಳಿಗೊಳಿಸಲು ಮತ್ತು ದ್ವಿಪಕ್ಷೀಯ ಬಾಂಧವ್ಯವನ್ನು ಹಂತಹಂತವಾಗಿ ಸುಧಾರಿಸಲು ಉಭಯ ದೇಶಗಳು ಮಾತುಕತೆ ನಡೆಸುತ್ತಿದೆ.

# ಸಂವಿಧಾನವೇ ಧರ್ಮ, ಮತದಾರರೇ ಅಭಿಮಾನಿ ದೇವರುಗಳು

## ಬುದ್ಧ, ಬಸವ, ಅಂಬೇಡ್ಕರ್, ಗಾಂಧಿ ತತ್ವದಲ್ಲಿ ನಂಬಿಕೆ ರಾಜೀನಾಮೆ ನೀಡಿದ ನಂತರ ಸಿದ್ದರಾಮಯ್ಯ ಭಾವುಕ ಮಾತುಗಳು



**ಅಧಿಕಾರ, ಹಣದ ಹಿಂದೆ ಹೋಗಿಲ್ಲ. ಆಸ್ತಿಪಾಸ್ತಿ ಮಾಡುವ ಯೋಚನೆ ಮಾಡಿಲ್ಲ. 50 ವರ್ಷಗಳ ಸುದೀರ್ಘ ರಾಜಕೀಯ ಜೀವನ ತೆರೆದ ಪುಸ್ತಕವಾಗಿದೆ. ರಾಜಕೀಯದಲ್ಲಿ ಜನಶಕ್ತಿ ಮಾತ್ರ ಉಳಿಸುತ್ತದೆ. ಹಾಗಾಗಿ ನಾನೆಂದೂ ನಂಬಿದ ಮೌಲ್ಯ, ಸಿದ್ಧಾಂತದಲ್ಲಿ ರಾಜಿ ಮಾಡಿಕೊಂಡಿಲ್ಲ. ನೆಲ, ಜಲ, ಭಾಷೆ ವಿಚಾರವಾಗಿ ರಾಜಿ ಮಾಡಿಲ್ಲ. ಕೊನೆ ಉಸಿರು ಇರುವವರೆಗೂ ಕೋಮುವಾದಿ ಶಕ್ತಿಗಳ ವಿರುದ್ಧ ಹೋರಾಡುತ್ತೇನೆ.**
**-ಸಿದ್ದರಾಮಯ್ಯ, ನಿರ್ಗಮಿತ ಮುಖ್ಯಮಂತ್ರಿ**

**ಬೆಂಗಳೂರು, ಮೇ 28:** ಮೇರುನಟ ರಾಜಕುಮಾರ್ ಅವರು ಅಭಿಮಾನಿಗಳನ್ನು ದೇವರು ಎಂದು ಕರೆಯುತ್ತಿದ್ದರು. ನಾನು ರಾಜಕಾರಣಿ, ನನಗೆ ಸಂವಿಧಾನವೇ ಧರ್ಮ, ಮತದಾರರೇ ಅಭಿಮಾನಿ ದೇವರು. ಕನ್ನಡ ನಾಡಿನ ಏಳು ಕೋಟಿ ಜನರಿಗೆ ಸೇವೆ ಮಾಡುವ ಅವಕಾಶ ಸಿಕ್ಕಿತ್ತು ಎಂದು ರಾಜಿನಾಮೆ ಸಲ್ಲಿಸಿದ ಬಳಿಕ ಸಿಎಂ ಸಿದ್ದರಾಮಯ್ಯ ಮನದಾಳದ ಮಾತುಗಳನ್ನು ತೆರೆದಿಟ್ಟರು.

ಸಿಎಂ ಸ್ಥಾನಕ್ಕೆ ರಾಜೀನಾಮೆ ಕೊಟ್ಟ ಬಳಿಕ ಗೃಹ ಕಚೇರಿ ಕೃಷ್ಣಾದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಿದ್ದರಾಮಯ್ಯ, ನಾನು ಹಳ್ಳಿಯಿಂದ ಬಂದವನು. ಮುಂದೊಂದು ದಿನ ಶಾಸಕ, ಸಚಿವ, ಸಿಎಂ ಆಗುತ್ತೇನೆಂದು ನಿರೀಕ್ಷಿಸಿರಲಿಲ್ಲ. ರಾಜಕಾರಣಕ್ಕೆ ಬಂದಿದ್ದು ಆಕಸ್ಮಿಕವಾಗಿತ್ತು. ರಾಜಕಾರಣ ಪ್ರವೇಶಿಸಿದ ನಂತರ ಬುದ್ಧ, ಬಸವ, ಅಂಬೇಡ್ಕರ್, ಗಾಂಧಿ ತತ್ವದಲ್ಲಿ ನಂಬಿಕೆ ಇಟ್ಟುಕೊಂಡಿದ್ದೆ. ಸಂವಿಧಾನದಲ್ಲಿ ಅಪಾರ ಗೌರವ ಇಟ್ಟುಕೊಂಡವನು ಎಂದು ತಮ್ಮ ಬದ್ಧತೆ ಏನೆಂಬುದನ್ನು ತಿಳಿಸಿದರು.

ಹೈಕಮಾಂಡ್ ತೀರ್ಮಾನಕ್ಕೆ ಬದ್ಧ ಎಂದಿದ್ದೆ. ಮೊನ್ನೆ ರಾಜೀನಾಮೆ ಕೊಡಿ ಎಂದರು. ಗುರುವಾರ ರಾಜೀನಾಮೆ ಕೊಡುತ್ತೇನೆ ಎಂದಿದ್ದೆ. ಅದರಂತೆ ಇಂದು ರಾಜೀನಾಮೆ ಸಲ್ಲಿಸಿದ್ದೇನೆ. ನಮ್ಮ ಪಕ್ಷ 135+1 ಸ್ಥಾನ ಪಡೆದಿದ್ದೇವೆ. ಜೊತೆಗೆ ಇಬ್ಬರು ಪಕ್ಷೇತರರ ಬೆಂಬಲ ಇದೆ. ಹಾಗಾಗಿ ನಾವು ಸಂಪೂರ್ಣ ಬಹುಮತ ಹೊಂದಿದ್ದೇವೆ. ಹಾಗಾಗಿ ಮುಂದಿನ ಸಿಎಂಗೆ ಅವಕಾಶ ಮಾಡಿ ಕೊಡಬೇಕಾಗಿದ್ದು, ಸಂವಿಧಾನ ಬದ್ಧವಾಗಿದೆ ಎಂದರು.

**ವರಿಷ್ಠರು, ಸಹೋದ್ಯೋಗಿಗಳು, ಕಾರ್ಯಕರ್ತರಿಗೆ ಧನ್ಯವಾದ**

ಕಾಂಗ್ರೆಸ್ ಸೇರಿದ್ದು 2006 ರಲ್ಲಿ. ಅಲ್ಲಿಂದ ಕಾಂಗ್ರೆಸ್ ಕಾಂಗ್ರೆಸ್ ಕಾರ್ಯಕರ್ತರು, ಮುಖಂಡರು, ಶಾಸಕರು, ಲೋಕಸಭೆ, ರಾಜ್ಯಸಭೆ ಸದಸ್ಯರು ಪ್ರೀತಿ ನೀಡಿದ್ದಾರೆ ಹಾಗೂ ಅವಕಾಶವನ್ನು ನೀಡಿದ್ದಾರೆ. ಎಂಟು ವರ್ಷ ಸಿಎಂ, ಎರಡು ಬಾರಿ ವಿಪಕ್ಷ ನಾಯಕನಾಗಿ ಸೇವೆ ಸಲ್ಲಿಸಿದ್ದೇನೆ. ಇದಕ್ಕೆ ಕಾಂಗ್ರೆಸ್ ಪಕ್ಷ ಅವಕಾಶ ನೀಡಿದೆ. ಈ ಅವಕಾಶ ಒದಗಿಸಿಕೊಟ್ಟ ಸೋನಿಯಾ ಗಾಂಧಿ ಹಾಗೂ ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಗೆ ಈ ಸಂದರ್ಭದಲ್ಲಿ ಧನ್ಯವಾದ ಸಲ್ಲಿಸುತ್ತೇನೆ ಎಂದರು. ಎರಡು ಬಾರಿ ಸಿಎಂ ಆಗಿದ್ದ ಸಂದರ್ಭದಲ್ಲಿ ನನ್ನ ಜೊತೆಗೆ ಕೆಲಸ ಮಾಡಿದ ಸಹೋದ್ಯೋಗಿಗಳು ಎಲ್ಲಾ ರೀತಿಯಲ್ಲಿ ಸಹಕಾರ, ಪ್ರೀತಿ ನೀಡಿದ್ದಾರೆ. ಅದಕ್ಕೆ ನಾನು ಋಣಿಯಾಗಿದ್ದೇನೆ ಎಂದರು.

**ಸಮಾನತೆಯಲ್ಲಿ ನಂಬಿಕೆ ಇಟ್ಟವನು**

ಇಡೀ ಸಮಾಜ ಸಮಾನತೆ, ಸರ್ವ ಜನಾಂಗದ ಶಾಂತಿಯ ತೋಟವಾಗಬೇಕು ಎಂದು ಅಂದುಕೊಂಡವನು ನಾನು. ಸಮಾಜದಲ್ಲಿ ಅಸಮಾನತೆ ತೊಲಗಬೇಕಾದರೆ ಎಲ್ಲರಿಗೂ ಸಮಾನ ಅವಕಾಶ ಸಿಗಬೇಕು. ಅದಕ್ಕಾಗಿ ಕಾಂಗ್ರೆಸ್ ಸರ್ಕಾರ ಎಲ್ಲರಿಗೂ ಸಮಾನ ಅವಕಾಶ ಕೊಡಿಸುವ ಪ್ರಯತ್ನ ನಡೆಸಿದೆ. ಪ್ರಣಾಳಿಕೆಯಲ್ಲಿ ಕೊಟ್ಟ ಭರವಸೆಯನ್ನು ಈಡೇರಿಸಲು ಪ್ರಾಮಾಣಿಕ ಪ್ರಯತ್ನ ಮಾಡಿದ್ದೇನೆ. 2023ರಲ್ಲಿ ಪ್ರಣಾಳಿಕೆಯಲ್ಲಿ 550 ಭರವಸೆ ಕೊಡ ಲಾಗಿತ್ತು. ಈ ಪೈಕಿ 300 ಭರವಸೆ ಈಡೇರಿಸ ಲಾಗಿದೆ. ಐದು ಗ್ಯಾರಂಟಿ ಯೋಜನೆ ಘೋಷಣೆ ಮಾಡಿದ್ದೆವು. ಐದು ಯೋಜನೆಯನ್ನು ಈಡೇರಿಸಿದ್ದೇವೆ. 1,40,000 ಕೋಟಿ ಹಣ ಖರ್ಚು ಮಾಡಲಾಗಿದೆ. ಜನತೆಗೆ ಕೊಟ್ಟ ಭರವಸೆ, ವಚನ ಈಡೇರಿಸುವ ಪ್ರಯತ್ನ ಮಾಡಿದ್ದೇವೆ. ಇದು ನನಗೆ ಮತ್ತು ನನ್ನ ಪಕ್ಷಕ್ಕೆ ಸಂತೃಪ್ತಿ ಕೊಟ್ಟ ವಿಚಾರವಾಗಿದೆ. ಆದರೆ ನಮ್ಮ ಮೇಲೆ ಅಪಪ್ರಚಾರ ಮಾಡಲಾಯಿತು. ಪ್ರಧಾನಿ ಮೋದಿ ಕೂಡಾ ಗ್ಯಾರಂಟಿ ಬಗ್ಗೆ ಅಪಪ್ರಚಾರ ನಡೆಸಿದ್ದರು. ಆದರೆ ಇದೀಗ ಗ್ಯಾರಂಟಿ ಜಾರಿಯಾದ ಬಳಿಕ ಕರ್ನಾಟಕ ದೇಶದಲ್ಲಿ ತಲಾ ಆದಾಯದಲ್ಲಿ ನಂಬರ್ ಒನ್ ಸ್ಥಾನದಲ್ಲಿ ಇದ್ದೇವೆ. ಸಿದ್ದರಾಮಯ್ಯ ರಾಜ್ಯದ ಮೇಲೆ ಸಾಲ ಮಾಡಿದ್ದಾರೆ ಎಂಬ ಆರೋಪ ಸುಳ್ಳು. ಇದು ರಾಜಕೀಯ ಆರೋಪ. ಆರ್ಥಿಕ ಶಿಸ್ತನ್ನು ನಾವು ಪಾಲನೆ ಮಾಡಿದ್ದೇವೆ. ಆರ್ಥಿಕ ಹೊಣೆಗಾರಿಕೆ ಕಾಯ್ದೆಯ ಅಡಿಯಲ್ಲಿ ಸಾಲ ಮಾಡಿದ್ದೇವೆ. ಶೇ.3ರ ಮಾನದಂಡ ಮೀರಿಲ್ಲ ಎಂದರು. ಸುದ್ದಿಗೋಷ್ಠಿಯಲ್ಲಿ ಡಿಸಿಎಂ ಡಿಕೆ ಶಿವಕುಮಾರ್, ಪ್ರಿಯಾಂಕ್ ಖರ್ಗೆ, ಬೈರತಿ ಸುರೇಶ್, ಕೆ ಜೆ ಜಾರ್ಜ್, ಚಲುವರಾಯಸ್ವಾಮಿ, ಡಾ ಜಿ ಪರಮೇಶ್ವರ್ ಉಪಸ್ಥಿತರಿದ್ದರು.



ಲೋಕಸಭೆಯ ಸ್ಪೀಕರ್ ಓಂ ಬಿರ್ಲಾ ಅವರು ಗುರುವಾರ ದೆಹಲಿಯ ವಿಧಾನಸಭೆಯ ಐತಿಹಾಸಿಕ ಆವರಣದಲ್ಲಿ ಕೇಂದ್ರ ವಿಧಾನಸಭೆಯ (1924–1930) 89 ಸಂಪುಟಗಳ ಕಾರ್ಯಕಲಾಪಗಳ ಬಿಡುಗಡೆ ಸಮಾರಂಭ ಮತ್ತು ತ್ರೈಮಾಸಿಕ ನಿಯತಕಾಲಿಕ 'ವಿಧಾನ–ಚೇತನ'ದ ಉದ್ಘಾಟನಾ ಸಂಚಿಕೆಯನ್ನು ಉದ್ದೇಶಿಸಿ ಮಾತನಾಡಿದರು.

# ಸಿಬಿಎಸ್‌ಇ ಆನ್–ಸ್ಕ್ರೀನ್ ಮಾರ್ಕಿಂಗ್ ವಿವಾದ

## ಜವಾಬ್ದಾರಿ ಹೊತ್ತ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್



**ನವದೆಹಲಿ, ಮೇ 28:** ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿ ಸಂಸ್ಥೆಯ ಆನ್–ಸ್ಕ್ರೀನ್ ಮಾರ್ಕಿಂಗ್ ವ್ಯವಸ್ಥೆಯ ವಿವಾದದ ನಡುವೆ, ವಿದ್ಯಾರ್ಥಿಗಳಿಗೆ ಉಂಟಾಗಿರುವ ಯಾವುದೇ ಅನಾನುಕೂಲತೆಗೆ ಸರ್ಕಾರದ ಪರವಾಗಿ ತಾವು ಜವಾಬ್ದಾರಿ ಹೊರುವುದಾಗಿ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಗುರುವಾರ ತಿಳಿಸಿದ್ದಾರೆ.

ಇದೇ ಸಮಯದಲ್ಲಿ, ತನ್ನ ಡಿಜಿಟಲ್ ಮೌಲ್ಯಮಾಪನ ವೇದಿಕೆಯು ಸುರಕ್ಷಿತ ಮತ್ತು ದೃಢವಾಗಿದೆ. ಇದರಲ್ಲಿ ಯಾವುದೇ ಲೋಪದೋಷಗಳು ಕಂಡುಬಂದಿಲ್ಲ ಎಂದು ಸಿಬಿಎಸ್‌ಇ ಮಂಡಳಿ ಸ್ಪಷ್ಟಪಡಿಸಿದೆ.

12ನೇ ತರಗತಿ ಬೋರ್ಡ್ ಪರೀಕ್ಷೆಯ ಮೌಲ್ಯಮಾಪನದಲ್ಲಿ ಕಂಡುಬಂದಿದೆ ಎನ್ನಲಾದ ವ್ಯತ್ಯಾಸಗಳ ಕುರಿತು ವಿದ್ಯಾರ್ಥಿಗಳು ಮತ್ತು ವಿರೋಧ ಪಕ್ಷದ ನಾಯಕರು ವ್ಯಕ್ತಪಡಿಸಿದ ಕಳವಳಗಳನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನ್, ಈ ವಿಷಯವನ್ನು ರಾಜಕೀಯಗೊಳಿಸದಂತೆ ಮನವಿ ಮಾಡಿದರು.

ವಿದ್ಯಾರ್ಥಿಗಳು ಹೆಚ್ಚುವರಿ ಮಾನಸಿಕ ಒತ್ತಡವನ್ನು ಎದುರಿಸದಂತೆ ನೋಡಿಕೊಳ್ಳುವುದೇ ನಮ್ಮ ಆದ್ಯತೆಯಾಗಬೇಕು ಎಂದು ಅವರು ಹೇಳಿದರು.

ಸಿಬಿಎಸ್‌ಇ ಮೌಲ್ಯಮಾಪನ ಪ್ರಕ್ರಿಯೆಯ ಕುರಿತು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಮಾಡಿರುವ ಆರೋಪಗಳಿಗೆ ಪ್ರತಿಕ್ರಿಯಿಸಿದ ಪ್ರಧಾನ್, ಯಾವುದೇ ಅನಾನುಕೂಲತೆಗೆ ಸರ್ಕಾರದ ಪರವಾಗಿ ನಾನೇ ಜವಾಬ್ದಾರಿ ಹೊರುತ್ತೇನೆ. ಇದು ರಾಜಕೀಯ ಮಾಡುವ ಸಮಯವಲ್ಲ ಎಂದು ನಾನು ಎಲ್ಲರಲ್ಲೂ ವಿನಂತಿಸುತ್ತೇನೆ ಎಂದು ಸ್ಪಷ್ಟಪಡಿಸಿದರು.

ಯಾವುದೇ ಅಕ್ರಮ ಕಂಡುಬಂದಲ್ಲಿ ಕಠಿಣ ಕ್ರಮ ಕೈಗೊಳ್ಳಲಾಗುವುದು. ವಿದ್ಯಾರ್ಥಿಗಳು ಮತ್ತು ಪರೀಕ್ಷಾರ್ಥಿಗಳ ಮಾನಸಿಕ ಒತ್ತಡವು ಮತ್ತಷ್ಟು ಹೆಚ್ಚಾಗದಂತೆ ನೋಡಿಕೊಳ್ಳುವುದು ಅತ್ಯಂತ ಪ್ರಮುಖವಾಗಿದೆ. ಯಾರ ಮಾತು ಅಥವಾ ನಡವಳಿಕೆಯೂ ಅವರ ಒತ್ತಡವನ್ನು ಹೆಚ್ಚಿಸಬಾರದು ಎಂದು ನಾವು ಎಲ್ಲರಲ್ಲೂ ಮನವಿ ಮಾಡುತ್ತೇವೆ" ಎಂದು ಅವರು ಹೇಳಿದರು.

ವ್ಯವಸ್ಥೆಯು ದೃಢ, ಸುರಕ್ಷಿತ: ಮತ್ತೊಂದೆಡೆ, ಕೇಳಿಬಂದ ವಿವಾದಕ್ಕೆ ಸ್ಪಷ್ಟನೆ ನೀಡಿರುವ ಸಿಬಿಎಸ್‌ಇ ತನ್ನ ಎಕ್ಸ್ ಖಾತೆಯಲ್ಲಿ ಸ್ಪಷ್ಟನೆ ನೀಡಿದೆ. ಉತ್ತರ ಪತ್ರಿಕೆಗಳ ಸುರಕ್ಷಿತ ಸ್ಕ್ಯಾನಿಂಗ್ ಮತ್ತು ಪ್ರಕ್ರಿಯೆಗಾಗಿ ಬಹು ಗುಣಮಟ್ಟದ ತಪಾಸಣೆಗಳು ಮತ್ತು ಸುರಕ್ಷಾ ಕ್ರಮಗಳು ಸುರಕ್ಷಿತವಾಗಿವೆ ಎಂದು ತಿಳಿಸಿದೆ.

ಉತ್ತರ ಪತ್ರಿಕೆಗಳು ಸುರಕ್ಷಿತವಾಗಿದ್ದು, ಹಲವು ಗುಣಮಟ್ಟ ನಿಯಂತ್ರಣ ಕಾರ್ಯವಿಧಾನಗಳ ಮೂಲಕ ಪ್ರಕ್ರಿಯೆಗೊಳಿಸಲಾಗಿದೆ. 2026ರ 12ನೇ ತರಗತಿ ಬೋರ್ಡ್ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಡಿಜಿಟಲ್ ಮೌಲ್ಯಮಾಪನಕ್ಕೆ ಸಂಬಂಧಿಸಿದ ಒಪ್ಪಂದವನ್ನು ಖಾಸಗಿ ಸಂಸ್ಥೆಯೊಂದಕ್ಕೆ ನೀಡಿರುವ ಕುರಿತಾದ ವಿವಾದ ಮತ್ತು ಅದರ ಓಎಸ್‌ಎಂ ವ್ಯವಸ್ಥೆಯು ದುರ್ಬಲಗೊಂಡಿದೆ ಎಂದು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ವದಂತಿಗಳ ಬೆನ್ನಲ್ಲೇ ಈ ಸ್ಪಷ್ಟನೆ ಹೊರಬಿದ್ದಿದೆ.

**ಹಗರಣದ ಆರೋಪ ಮಾಡಿದ ರಾಹುಲ್ ಗಾಂಧಿ:**

ಕೋಯೆಂಪ್ಟ್ ಎಜುಟೆಕ್ ಸಂಸ್ಥೆಗೆ ನೀಡಿರುವ ಗುತ್ತಿಗೆ ಕುರಿತಾದ ಆರೋಪಗಳನ್ನು ತಿರಸ್ಕರಿಸಿದ್ದ ಮಂಡಳಿ, ಈ ದೂರುಗಳು ದಾರಿ ತಪ್ಪಿಸುವ ಮತ್ತು ಸತ್ಯಕ್ಕೆ ದೂರವಾದವುಗಳಾಗಿವೆ ಎಂದು ಹೇಳಿತ್ತು. ಸಾಮಾನ್ಯ ಹಣಕಾಸು ನಿಯಮಗಳ ಅಡಿಯಲ್ಲಿ ಸೂಕ್ತ ಪ್ರಕ್ರಿಯೆಯನ್ನು ಅನುಸರಿಸಿದ ನಂತರವೇ ಒಪ್ಪಂದವನ್ನು ನೀಡಲಾಗಿದೆ ಎಂದು ಅದು ತಿಳಿಸಿತ್ತು.

ಇನ್ನೂ, ಉತ್ತರ ಪತ್ರಿಕೆ ದೋಷಗಳ ಕುರಿತು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಆಕ್ಷೇಪ ವ್ಯಕ್ತಪಡಿಸಿ, ಸಿಬಿಎಸ್‌ಇ ಪರೀಕ್ಷೆಯಲ್ಲಿ ಹಗರಣ ನಡೆದಿದೆ. ಇದರ ಹಿಂದಿನ ರಹಸ್ಯ ಹೊರಬರಲು ಸ್ವತಂತ್ರ ನ್ಯಾಯಾಂಗ ತನಿಖೆ ಹಾಗೂ ವಿಶೇಷ ತನಿಖಾ ತಂಡವನ್ನು ರಚಿಸುವಂತೆ ಒತ್ತಾಯಿಸಿದ್ದರು.

# ಸಂಪುಟ ಪುನಾರಚನೆಗೂ ವರಿಷ್ಠರಿಂದ ವೇದಿಕೆ ಸಿದ್ಧ

## ಅಧಿಕಾರದ ಸಮತೋಲನ ಕಾಯ್ದುಕೊಳ್ಳಲು 3-4 ಡಿಸಿಎಂ ಹುದ್ದೆ ಸೃಷ್ಟಿ ಸಾಧ್ಯತೆ

ಬೆಂಗಳೂರು, ಮೇ 28: ನಾಯಕತ್ವ ಬದಲಾವಣೆಯ ಜೊತೆಯಲ್ಲೇ, ಕಳೆದ ಏಳೆಂಟು ತಿಂಗಳುಗಳಿಂದಲೂ ತೀವ್ರ ಚರ್ಚೆಯಲ್ಲಿದ್ದ ಸಚಿವ ಸಂಪುಟದ ಸಂಪೂರ್ಣ ಪುನಾರಚನೆಗೂ ಹೈಕಮಾಂಡ್ ವೇದಿಕೆ ಸಿದ್ಧಪಡಿಸಿದೆ.

ಸಂಪುಟ ಬದಲಾವಣೆಯ ಮುನ್ಸೂಚನೆಗಳು ಈ ಹಿಂದೆಯೇ ಲಭ್ಯವಾಗಿದ್ದವು. ಅಚ್ಚರಿ ಎಂಬಂತೆ ಇಡೀ ಸಚಿವ ಸಂಪುಟವನ್ನು ದೆಹಲಿಗೆ ಕರೆಸಿಕೊಂಡು ಹೈಕಮಾಂಡ್ ಸಭೆ ನಡೆಸಿತ್ತು; ಜೊತೆಗೆ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಅವರ ಉಪಸ್ಥಿತಿಯಲ್ಲಿ ಬೆಂಗಳೂರಿನಲ್ಲೂ ಸಭೆ ನಡೆದಿತ್ತು. ಎರಡೂವರೆ ವರ್ಷಗಳ ಅವಧಿಯಲ್ಲಿ ಸಮರ್ಪಕವಾಗಿ ಕೆಲಸ ಮಾಡದ ಸಚಿವರಿಗೆ ಆ ಸಭೆಗಳಲ್ಲೇ ಕಟ್ಟುನಿಟ್ಟಿನ ಎಚ್ಚರಿಕೆ ರವಾನಿಸುವ ಮೂಲಕ, ಹಾಲಿ ಬದಲಾವಣೆಗೆ ಮುನ್ನುಡಿ ಬರೆಯಲಾಗಿತ್ತು. ಈಗ ನೂತನ ಸಿಎಂ ಆಗಿ ಡಿ.ಕೆ. ಶಿವಕುಮಾರ್ ಅಧಿಕಾರ ವಹಿಸಿಕೊಳ್ಳುತ್ತಿರುವುದರಿಂದ, ಹೈಕಮಾಂಡ್ ಮಹತ್ವದ ತೀರ್ಮಾನವೊಂದನ್ನು ಕೈಗೊಂಡಿದ್ದು, ಮೂರರಿಂದ ನಾಲ್ಕು ಉಪಮುಖ್ಯಮಂತ್ರಿ (ಡಿಸಿಎಂ) ಹುದ್ದೆಗಳನ್ನು ಸೃಷ್ಟಿಸಲು ಮುಂದಾಗಿದೆ. ಡಿ.ಕೆ. ಶಿವಕುಮಾರ್ ಅವರ ಮೇಲಿರುವ ಭ್ರಷ್ಟಾಚಾರದ ಆರೋಪಗಳ ಹಿನ್ನೆಲೆಯಲ್ಲಿ, ಅಧಿಕಾರದ ಸಮತೋಲನ (ಬ್ಯಾಲೆನ್ಸ್) ಕಾಯ್ದುಕೊಳ್ಳಲು ಈ ಮೂರ್ನಾಲ್ಕು ಡಿಸಿಎಂ ಹುದ್ದೆಗಳ ಸೃಷ್ಟಿ ಅನಿವಾರ್ಯವಾಗಿದೆ ಎಂದು ಉನ್ನತ ಮೂಲಗಳು ತಿಳಿಸಿವೆ.

ಹೊಸ ಸಂಪುಟ ರಚನೆಯಲ್ಲಿ ಡಿ.ಕೆ. ಶಿವಕುಮಾರ್ ಅವರು ಏಕಪಕ್ಷೀಯವಾಗಿ ನಿರ್ಧಾರ ತೆಗೆದುಕೊಳ್ಳುವ ಪರಿಸ್ಥಿತಿ ಇರುವುದಿಲ್ಲ. ಯಾರು ಮಂತ್ರಿಯಾಗಬೇಕು ಹಾಗೂ ಯಾರು ಡಿಸಿಎಂ ಆಗಬೇಕು ಎನ್ನುವ ಪ್ರತಿಯೊಂದು ನಿರ್ಧಾರದಲ್ಲೂ ನಿರ್ಗಮಿತ ಸಿಎಂ ಸಿದ್ದರಾಮಯ್ಯ ಅವರ ಅಭಿಪ್ರಾಯಕ್ಕೂ ಅಷ್ಟೇ ಮನ್ನಣೆ ಇರಲಿದೆ. ತಮ್ಮ ಆಪ್ತ ಬೆಂಬಲಿಗರಾದ ಡಾ. ಎಚ್ ಸಿ ಮಹದೇವಪ್ಪ ಮತ್ತು ಬೈರತಿ ಸುರೇಶ್ ಪರವಾಗಿ ಸ್ವತಃ ಸಿದ್ದರಾಮಯ್ಯನವರೇ ವಕಾಲತ್ತು ವಹಿಸುತ್ತಾರಾ ಇಲ್ಲವಾ ಎನ್ನುವ ಕುತೂಹಲವೂ ರಾಜಕೀಯ ವಲಯದಲ್ಲಿದೆ.

**ಹಲವು ಸಚಿವರ ಕಾರ್ಯವೈಖರಿ ಬಗ್ಗೆ ಅಸಮಾಧಾನ :**

ಹಾಲಿ ಸಂಪುಟದಲ್ಲಿ ಹಲವರ ಕಾರ್ಯವೈಖರಿ ಬಗ್ಗೆ ಈ ಹಿಂದಿನಿಂದಲೂ ತೀವ್ರ ಅಸಮಾಧಾನಗಳಿದ್ದವು. ಪ್ರಮುಖವಾಗಿ ಎಚ್ ಸಿ ಮಹದೇವಪ್ಪ, ಬೈರತಿ ಸುರೇಶ್, ಮಂಕಾಳ ವೈದ್ಯ ಹಾಗೂ ರಹೀಂ ಖಾನ್ ಅವರ ಕಾರ್ಯವೈಖರಿಯ ಬಗ್ಗೆ ಅಪಸ್ವರಗಳಿದ್ದವು. ಇನ್ನೊಂದೆಡೆ, ಖಾಯಂ ಸ್ಪೀಕರ್ ಅಲ್ಲ, ಮುಂದೆ ಮಂತ್ರಿ ಮಾಡುತ್ತೇವೆ ಎಂಬ ಭರವಸೆ ಪಡೆದಿದ್ದ ಯು ಟಿ ಖಾದರ್ ಅವರು ಸಚಿವ ಆಕಾಂಕ್ಷಿಯಾಗಿದ್ದಾರೆ. ಖಾತೆಗಳ ಹಂಚಿಕೆಯೂ ಈ ಬಾರಿ ತೀವ್ರ ಚರ್ಚೆಗೆ ಗ್ರಾಸವಾಗಿದೆ. ಡಿ.ಕೆ. ಶಿವಕುಮಾರ್ ಅವರು ಈವರೆಗೆ ?ಬೆಂಗಳೂರು ನಗರಾಭಿವೃದ್ಧಿ ಹಾಗೂ ಬೃಹತ್ ನೀರಾವರಿಯಂತಹ ಎರಡು ಬೃಹತ್ ಖಾತೆಗಳನ್ನು. ಮುಖ್ಯಮಂತ್ರಿಯಾದ ಬಳಿಕವೂ ಅವರು ಇವುಗಳನ್ನು ತಮ್ಮಲ್ಲೇ ಉಳಿಸಿಕೊಳ್ಳುತ್ತಾರೆಯೇ ಅಥವಾ ಬೇರೆಯವರಿಗೆ ಬಿಟ್ಟುಕೊಡುತ್ತಾರೆಯೇ ಎನ್ನುವ ಪ್ರಶ್ನೆ ಎದ್ದಿದೆ. ಇದರ ಜೊತೆಗೆ ಎಸ್ಟಿ ಕೋಟಾದಡಿ ಸಚಿವರಾಗಿರುವ ಕೆ.ಎನ್. ರಾಜಣ್ಣ, ನಾಗೇಂದ್ರ ಹಾಗೂ ಯತೀಂದ್ರ ಅವರಿಗೂ ಮಂತ್ರಿಗಿರಿ ಒಲಿಯುವ ಕುರಿತು ಚರ್ಚೆಗಳು ಬಿರುಸುಗೊಂಡಿವೆ. ಸಿದ್ದರಾಮಯ್ಯನವರು ರಾಜ್ಯಸಭಾ ಸ್ಥಾನ ನಿರಾಕರಿಸಿರುವ ಕಾರಣ ಪುತ್ರ ಯತೀಂದ್ರ ಅವರು ಕೂಡ ನೂತನ ಸಂಪುಟದ ಸಚಿವ ಸ್ಥಾನದ ಆಕಾಂಕ್ಷಿಯಾಗಿದ್ದಾರೆ.

ಹೊಸ ಡಿಸಿಎಂ ಹುದ್ದೆಗಳ ಸೃಷ್ಟಿಯಿಂದಾಗಿ ಜಾತಿ ಸಮೀಕರಣದ ಲೆಕ್ಕಾಚಾರಗಳು ಗರಿಗೆದರಿವೆ. ಒಕ್ಕಲಿಗ ಸಮುದಾಯದ ಡಿ ಕೆ ಶಿವಕುಮಾರ್ ಮುಖ್ಯಮಂತ್ರಿಯಾಗಿರುವುದರಿಂದ, ದಲಿತ ಕೋಟಾದಡಿ ಡಿಸಿಎಂ ಸ್ಥಾನಕ್ಕೆ ಸಿಎಂ ಆಕಾಂಕ್ಷಿಯಾಗಿದ್ದ ಡಾ. ಜಿ ಪರಮೇಶ್ವರ್ ಹಾಗೂ ಪ್ರಿಯಾಂಕ್ ಖರ್ಗೆ ಪ್ರಬಲ ಪೈಪೋ?ಟಿಯಲ್ಲಿದ್ದಾರೆ. ಎಸ್ಟಿ ಕೋಟಾದಡಿ ಸತೀಶ್ ಜಾರಕಿಹೊಳಿ ಅವರು, ಮಂತ್ರಿ ಸ್ಥಾನದ ಜೊತೆಗೇ ಕೆಪಿಸಿಸಿ ಅಧ್ಯಕ್ಷ ಸ್ಥಾನವೂ ಬೇಕು ಎಂದು ಪಟ್ಟು ಹಿಡಿದರೆ, ಡಿಸಿಎಂ ರೇಸ್ನಿಂದ ಹೊರಗುಳಿಯಬಹುದು.

ಲಿಂಗಾಯತ ಸಮುದಾಯವನ್ನು ಸಂಪೂರ್ಣವಾಗಿ ಕಡೆಗಣಿಸುವಂತಿಲ್ಲ; ಹೀಗಾಗಿ ಎಂ.ಬಿ ಪಾಟೀಲ್ ಹಾಗೂ ಈಶ್ವರ್ ಖಂಡ್ರೆ ಅವರ ಹೆಸರುಗಳು ಮುಂಚೂಣಿಯಲ್ಲಿವೆ, ಇದೇ ವೇಳೆ, ಅಲ್ಪಸಂಖ್ಯಾತರಿಗೂ ಡಿಸಿಎಂ ಸ್ಥಾನ ನೀಡಲೇಬೇಕು ಎನ್ನುವ ಕೂಗು ಪ್ರಬಲವಾಗಿದೆ. ದಾವಣಗೆರೆ ಉಪಚುನಾವಣೆಯ ಘಟನೆಯ ಆರೋಪಗಳ ನಡುವೆಯೂ ಜನಪ್ರಿಯ ನಾಯಕ ಜಮೀರ್ ಅಹ್ಮದ್ ಖಾನ್ ಡಿಸಿಎಂ ರೇಸ್ನಲ್ಲಿದ್ದಾರೆ; ಒಂದು ವೇಳೆ ಅವರಿಗೆ ಡಿಸಿಎಂ ಕೈತಪ್ಪಿದರೆ, ರಿಜ್ವಾನ್ ಅರ್ಷದ್, ತನ್ವೀರ್ ಸೇಟ್, ಯು.ಟಿ ಖಾದರ್ ಹಾಗೂ ಎನ್ ಎ ಹ್ಯಾರಿಸ್ ಅವರಿಗೆ ಮಂತ್ರಿ ಸ್ಥಾನದ ಮೂಲಕ ಪ್ರಾತಿನಿಧ್ಯ ನೀಡಬೇಕಾಗುತ್ತದೆ.

ಹೊಸ ಸಂಪುಟದಲ್ಲಿ ಹಳಬರ ಪೈಕಿ ಶೇ.90ರಷ್ಟು ಮಂದಿ ಉಳಿಯುತ್ತಾರೋ ಇಲ್ಲವೋ ಗೊತ್ತಿಲ್ಲ, ಆದರೆ ಕನಿಷ್ಠ ಅರ್ಧಕ್ಕಿಂತ ಹೆಚ್ಚು ಸಚಿವರು ತಮ್ಮ ಸ್ಥಾನ ಉಳಿಸಿಕೊಳ್ಳಲಿದ್ದಾರೆ ಎನ್ನಲಾಗುತ್ತಿದೆ. ನಾಲ್ಕೈದು ಬಾರಿ ಶಾಸಕರಾದ ಹಲವು ಪ್ರಬಲ ಆಕಾಂಕ್ಷಿಗಳು ಪಕ್ಷದಲ್ಲಿದ್ದಾರೆ. ಮುಂದಿನ ಚುನಾವಣೆಗೆ ಕೇವಲ ಎರಡು ವರ್ಷ ಬಾಕಿ ಇರುವುದರಿಂದ, ಎಲ್ಲರಿಗೂ ಅಧಿಕಾರ ಹಂಚುವುದು ಅಸಾಧ್ಯ. ಪರಿಣಾಮವಾಗಿ, ಸಚಿವ ಸ್ಥಾನ ವಂಚಿತರಿಂದ ನಾಳೆಯಿಂದಲೇ ರಾಜ್ಯದಲ್ಲಿ ಅಧಿಕೃತ ಭಿನ್ನಮತೀಯರ ಗುಂಪೊಂದು ಸೃಷ್ಟಿಯಾಗುವುದು ನಿಶ್ಚಿತ.

ರಾಜ್ಯ ರಾಜಕಾರಣದ ಮುಂದಿನ ದಿನಗಳ ಚಿತ್ರಣದಲ್ಲಿ ಈ ಭಿನ್ನಮತೀಯರ ನಡೆ ಅತ್ಯಂತ ನಿರ್ಣಾಯಕವಾಗಲಿದೆ. ಅಚ್ಚರಿಯ ವಿಚಾರವೆಂದರೆ, ಅಧಿಕೃತವಾಗಿ ಸೃಷ್ಟಿಯಾಗಲಿರುವ ಈ ಅತೃಪ್ತ ಶಾಸಕರು ಮತ್ತು ನಾಯಕರ ಗುಂಪು ಸತತವಾಗಿ ನಿರ್ಗಮಿತ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಂಪರ್ಕಕ್ಕೆ ಬರುವುದು ಖಚಿತ. ಡಿ.ಕೆ. ಶಿವಕುಮಾರ್ ನೇತೃತ್ವದ ನೂತನ ಸರ್ಕಾರವು ಈ ಆಂತರಿಕ ಭಿನ್ನಮತವನ್ನು ಹೇಗೆ ನಿಭಾಯಿಸಲಿದೆ ಎಂಬುದನ್ನು ಇಡೀ ಕರ್ನಾಟಕವೇ ಕಾದು ನೋಡಬೇಕಿದೆ.



ಬೆಂಗಳೂರಿನ ಕಾವೇರಿಯಲ್ಲಿ ಸಿಎಂ ಸಿದ್ದರಾಮಯ್ಯ ಬೆಂಬಲಿಗರು ಗುರುವಾರ ಭಾರಿ ಸಂಖ್ಯೆಯಲ್ಲಿ ಜಮಾಯಿಸಿದ್ದರು. ಸಿಎಂ ಸಿದ್ದರಾಮಯ್ಯ ತಮ್ಮ ರಾಜೀನಾಮೆಯನ್ನು ರಾಜ್ಯಪಾಲರ ಕಾರ್ಯದರ್ಶಿಗೆ ಸಲ್ಲಿಸಿದ ಬೆನ್ನಲ್ಲೇ ಅಭಿಮಾನಿಗಳ ಆಕ್ರೋಶ ಹೆಚ್ಚಾಗಿದೆ.




ಕೇಂದ್ರ ಗೃಹ ಸಚಿವ ಮತ್ತು ಸಹಕಾರ ಸಚಿವ ಅಮಿತ್ ಶಾ ಗುರುವಾರ ಗುಜರಾತ್‌ನ ಗಾಂಧಿನಗರದ ವಿವಿಧ ಪ್ರದೇಶಗಳಲ್ಲಿ ಕೊಳಗಳ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿದರು.

# ಹಿಂದುಳಿದ ವರ್ಗಗಳ ನಾಯಕರ ಬೆಳೆಸಲು ಕಾಂಗ್ರೆಸ್ ವಿಫಲ

## ಸಿದ್ದರಾಮಯ್ಯ ರಾಜೀನಾಮೆ ಬೆನ್ನಲ್ಲೇ ರಾಹುಲ್‌ಗಾಂಧಿ ವಿರುದ್ಧ ಬಿಜೆಪಿ ವಾಗ್ದಾಳಿ

**ನವದೆಹಲಿ, ಮೇ 28:** ಕರ್ನಾಟಕದ ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ಅವರು ರಾಜೀನಾಮೆ ನೀಡಿ, ಡಿ.ಕೆ. ಶಿವಕುಮಾರ್ ಆಡಳಿತದ ಚುಕ್ಕಾಣಿ ಹಿಡಿಯುತ್ತಿದ್ದಂತೆ, ಇತ್ತ ದೆಹಲಿಯಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ವಿರುದ್ಧ ಬಿಜೆಪಿ ತೀವ್ರ ವಾಗ್ದಾಳಿ ನಡೆಸಿದೆ.

ರಾಹುಲ್ ಗಾಂಧಿ ಅವರು ಕೇವಲ ಜಾತಿ ಜನಗಣತಿ ಮತ್ತು ಒಬಿಸಿ ಹಕ್ಕುಗಳ ಬಗ್ಗೆ ಮಾತನಾಡುತ್ತಾರೆ, ಆದರೆ ತಮ್ಮದೇ ಪಕ್ಷದಲ್ಲಿ ಹಿಂದುಳಿದ ವರ್ಗಗಳ ನಾಯಕರನ್ನು ಬೆಳೆಸಲು ವಿಫಲರಾಗಿದ್ದಾರೆ ಎಂದು ಬಿಜೆಪಿ ಟೀಕಿಸಿದೆ. ಈ ಬಗ್ಗೆ ವಿಡಿಯೋ ಸಂದೇಶ ಬಿಡುಗಡೆ ಮಾಡಿರುವ ಬಿಜೆಪಿಯ ರಾಷ್ಟ್ರೀಯ ವಕ್ತಾರ ಶೆಹಜಾದ್ ಪೂನಾವಾಲಾ, "ರಾಹುಲ್ ಗಾಂಧಿ ಅವರ ತತ್ವಗಳು ಆನೆಯ ದಂತದಂತಿವೆ – ತೋರಿಸುವುದು ಒಂದು, ತಿನ್ನುವುದು ಮತ್ತೊಂದು. ಜನಸಂಖ್ಯೆಗೆ ಅನುಗುಣವಾಗಿ ಹಕ್ಕು ಸಿಗಬೇಕು ಎಂದು ಜಪಿಸುವ ರಾಹುಲ್ ಒಬ್ಬ ದ್ವಂದ್ವ ನಿಲುವಿನ ನಾಯಕ," ಎಂದಿದ್ದಾರೆ.

ಕಾಂಗ್ರೆಸ್ ಪಕ್ಷವು ಕೇವಲ ಸಮಾಜವನ್ನು ಒಡೆಯುವ ಕೆಲಸ ಮಾಡುತ್ತದೆ ವಿನಃ ಆಡಳಿತದಲ್ಲಿ ಒಬಿಸಿ ನಾಯಕರಿಗೆ ಅಧಿಕಾರ ನೀಡುವುದಿಲ್ಲ. ಈ ಹಿಂದೆ ಸೀತಾರಾಂ ಕೇಸರಿ ಹಾಗೂ ಬಾಬಾಸಾಹೇಬ್ ಅಂಬೇಡ್ಕರ್ ಅವರಿಗೂ ಕಾಂಗ್ರೆಸ್ ಅವಮಾನ ಮಾಡಿತ್ತು. ಮುಸ್ಲಿಂ ಮೀಸಲಾತಿ ಹಾಗೂ 370 ನೇ ವಿಧಿಯನ್ನು ಬೆಂಬಲಿಸುವ ಮೂಲಕ ಕಾಂಗ್ರೆಸ್ ನಿಜ ಅರ್ಥದಲ್ಲಿ ಹಿಂದುಳಿದ ವರ್ಗಗಳ ವಿರೋಧಿಯಾಗಿದೆ ಎಂದು ಬಿಜೆಪಿ ಆರೋಪಿಸಿದೆ.

### ಕಾಂಗ್ರೆಸ್ ಆಡಳಿತ ರಾಜ್ಯಗಳಲ್ಲಿ ಒಬ್ಬನೇ ಒಬ್ಬ ಓಬಿಸಿ ಸಿಎಂ ಇಲ್ಲ

ಕರ್ನಾಟಕದಲ್ಲಿ ಹಿಂದುಳಿದ ವರ್ಗಗಳ ಪ್ರಭಾವಿ ನಾಯಕ ಹಾಗೂ 'ಅಹಿಂದ' ಸಮುದಾಯಗಳ ಪರ ಧ್ವನಿಯಾಗಿದ್ದ ಸಿದ್ದರಾಮಯ್ಯ ಅವರನ್ನು ಸಿಎಂ ಸ್ಥಾನದಿಂದ ಕೆಳಗಿಳಿಸಿ ಡಿ.ಕೆ. ಶಿವಕುಮಾರ್ ಅವರನ್ನು ಕೂರಿಸುವ ಮೂಲಕ, ಕಾಂಗ್ರೆಸ್ ಆಡಳಿತವಿರುವ ರಾಜ್ಯಗಳಲ್ಲಿ ಈಗ ಒಬ್ಬನೇ ಒಬ್ಬ ಒಬಿಸಿ ಮುಖ್ಯಮಂತ್ರಿ ಇಲ್ಲದಂತಾಗಿದೆ ಎಂದು ಪಟ್ಟಿ ನೀಡಿದ್ದಾರೆ.

ಹಿಮಾಚಲ ಪ್ರದೇಶ: ಸುಖ್ವಿಂದರ್ ಸಿಂಗ್ ಸುಖು (ಒಬಿಸಿ ಅಲ್ಲ), ತೆಲಂಗಾಣ: ರೇವಂತ್ ರೆಡ್ಡಿ (ಒಬಿಸಿ ಅಲ್ಲ), ಕೇರಳ: ವಿ.ಡಿ. ಸತೀಶನ್ (ಒಬಿಸಿ ಅಲ್ಲ) ಕರ್ನಾಟಕ: ಸಿದ್ದರಾಮಯ್ಯ (ಒಬಿಸಿ ನಾಯಕರನ್ನು ಕೆಳಗಿಳಿಸಲಾಗಿದೆ) ಕಾಂಗ್ರೆಸ್ ಪಕ್ಷದ ಕಾರ್ಯಕಾರಿ ಸಮಿತಿ ಅಥವಾ ರಾಜೀವ್ ಗಾಂಧಿ ಫೌಂಡೇಶನ್ ಟ್ರಸ್ಟ್‌ನಲ್ಲಿ ಒಬಿಸಿ ನಾಯಕರಿಗೆ ಸೂಕ್ತ ಪ್ರಾತಿನಿಧ್ಯ ನೀಡಿಲ್ಲ, ಆದರೆ, ಇದಕ್ಕೆ ವ್ಯತಿರಿಕ್ತವಾಗಿ ಬಿಜೆಪಿ ಒಬ್ಬ ಹಿಂದುಳಿದ ವರ್ಗದ ನಾಯಕನನ್ನು (ನರೇಂದ್ರ ಮೋದಿ) ದೇಶದ ಪ್ರಧಾನಿಯನ್ನಾಗಿ ಮಾಡಿದೆ, ಅವರು ಈಗ ಮೂರನೇ ಬಾರಿಗೆ ದೇಶ ಮುನ್ನಡೆಸುತ್ತಿದ್ದಾರೆ. ಇದು ಕಾಂಗ್ರೆಸ್ ಮತ್ತು ಬಿಜೆಪಿ ನಡುವಿನ ವ್ಯತ್ಯಾಸ," ಎಂದು ಪೂನಾವಾಲಾ ಹೇಳಿದ್ದಾರೆ.



ದೆಹಲಿ ಬಿಜೆಪಿ ಅಧ್ಯಕ್ಷ ವೀರೇಂದ್ರ ಸಚ್‌ದೇವ, ಮುಖ್ಯಮಂತ್ರಿ ರೇಖಾ ಗುಪ್ತಾ ಅವರು ಗುರುವಾರ ನವದೆಹಲಿಯ ನೂತನ ದೆಹಲಿ ಬಿಜೆಪಿ ಅಧ್ಯಕ್ಷ ಹರ್ಷ ಮಲ್ಹೋತ್ರಾ ಅವರಿಗೆ ಅಧಿಕಾರ ಹಸ್ತಾಂತರಿಸಿದರು.


# ತ್ವಿಶಾ ಸಾವಿನ ಪ್ರಕರಣ: ಹೈಕೋರ್ಟ್ ಜಾಮೀನು ತಿರಸ್ಕೃತ: ಸಿಬಿಐನಿಂದ ಅತ್ತೆ ಗಿರಿಬಾಲಾ ಬಂಧನ

**ನವದೆಹಲಿ, ಮೇ 28:** ಭೋಪಾದಲ್ಲಿರುವ ದಿವಂಗತ ನಟಿ–ಮಾಡೆಲ್ ತ್ವಿಶಾ ಶರ್ಮಾ ಅವರ ನಿವಾಸದಲ್ಲಿ ಗಂಟೆಗಳ ಕಾಲ ವಿಚಾರಣೆ ನಡೆಸಿದ ನಂತರ ಕೇಂದ್ರ ತನಿಖಾ ದಳ (ಸಿಬಿಐ) ಗುರುವಾರ ಮಾಜಿ ನ್ಯಾಯಾಧೀಶೆ ಗಿರಿಬಾಲಾ ಸಿಂಗ್ ಅವರನ್ನು ಬಂಧಿಸಿದೆ. ಮಧ್ಯಪ್ರದೇಶ ಹೈಕೋರ್ಟ್ ಗಿರಿಬಾಲಾ ಸಿಂಗ್ ಅವರ ನಿರೀಕ್ಷಣಾ ಜಾಮೀನು ಅರ್ಜಿಯನ್ನು ತಿರಸ್ಕರಿಸಿದ ಒಂದು ದಿನದ ನಂತರ ಈ ಬಂಧನ ಸಂಭವಿಸಿದ್ದು, ಹೈಪ್ರೊಫೈಲ್ ಪ್ರಕರಣದಲ್ಲಿ ಕೇಂದ್ರ ಸಂಸ್ಥೆಯ ಕಸ್ಟಡಿ ಕ್ರಮಕ್ಕೆ ದಾರಿ ಮಾಡಿಕೊಟ್ಟಿದೆ.

ಮೂಲಗಳ ಪ್ರಕಾರ, ಸಿಬಿಐ ಅಧಿಕಾರಿಗಳು ಇಂದು ಅವರ ನಿವಾಸಕ್ಕೆ ತಲುಪಿ ಅವರನ್ನು ವಿಚಾರಣೆಗೆ ಒಳಪಡಿಸುವ ಮೊದಲು ಪ್ರಶ್ನಿಸಿದ್ದಾರೆ. ತ್ವಿಶಾ ಶರ್ಮಾ ಅವರ ಅನುಮಾನಾಸ್ಪದ ಸಾವಿಗೆ ಸಂಬಂಧಿಸಿದಂತೆ ವರದಕ್ಷಿಣೆ ಕಿರುಕುಳ, ಕ್ರೌರ್ಯ ಮತ್ತು ಕ್ರಿಮಿನಲ್ ಪಿತೂರಿಯ ಆರೋಪಗಳನ್ನು ಸಂಸ್ಥೆ ತನಿಖೆ ನಡೆಸುತ್ತಿದೆ.

ಈ ಬಂಧನವು ತನಿಖಾಧಿಕಾರಿಗಳಿಗೆ ತನಿಖೆಯ ಸಮಯದಲ್ಲಿ ಸಂಗ್ರಹಿಸಿದ ವಿವಿಧ ಹೇಳಿಕೆಗಳು ಮತ್ತು ಪುರಾವೆಗಳನ್ನು ಪರಿಶೀಲಿಸಲು ಸಹಾಯ ಮಾಡುತ್ತದೆ ಎಂದು ಮೂಲಗಳು ತಿಳಿಸಿವೆ. ಪ್ರಕರಣದಲ್ಲಿ ಈಗಾಗಲೇ ತನಿಖೆಯಲ್ಲಿರುವ ಅವರ ಮಗ ಸಮರ್ಥ್ ಸಿಂಗ್ ಜೊತೆಗೆ ಅವರ ಪಾತ್ರವನ್ನು ಸಹ ಸಂಸ್ಥೆ ಪರಿಶೀಲಿಸುವ ಸಾಧ್ಯತೆಯಿದೆ.

ಇತ್ತೀಚೆಗೆ ಸಿಬಿಐ ತನಿಖೆಯನ್ನು ವಹಿಸಿಕೊಂಡಿದ್ದು, ಸಮರ್ಥ್ ಸಿಂಗ್ ಮತ್ತು ಗಿರಿಬಾಲಾ ಸಿಂಗ್ ವಿರುದ್ಧ ಔಪಚಾರಿಕವಾಗಿ ಎಫ್‌ಐಆರ್ ದಾಖಲಿಸಿದೆ. ಮದುವೆಯ ನಂತರ ಹಣ ಮತ್ತು ವರದಕ್ಷಿಣೆಗಾಗಿ ಬೇಡಿಕೆಯ ಮೇರೆಗೆ ತ್ವಿಶಾ ಅವರನ್ನು ಮಾನಸಿಕ ಮತ್ತು ದೈಹಿಕ



ಕಿರುಕುಳ ನೀಡಲಾಗಿದೆ ಎಂದು ಎಫ್‌ಐಆರ್ ಆರೋಪಿಸಿದೆ.

ತ್ವಿಶಾ ಶರ್ಮಾ ಡಿಸೆಂಬರ್ 9, 2025 ರಂದು ಸಮರ್ಥ್ ಸಿಂಗ್ ಅವರನ್ನು ವಿವಾಹವಾದರು. ಅವರ ಕುಟುಂಬವು ಮಾಡಿದ ಆರೋಪಗಳ ಪ್ರಕಾರ, ಮದುವೆಯಾದ ಸ್ವಲ್ಪ ಸಮಯದ ನಂತರ ಪದೇ ಪದೇ ವರದಕ್ಷಿಣೆ ಬೇಡಿಕೆಯಿಂದಾಗಿ ಅವರು ತಮ್ಮ ಪತಿ ಮತ್ತು ಅತ್ತೆ ಮಾವಂದಿರಿಂದ ನಿರಂತರ ಕಿರುಕುಳವನ್ನು ಎದುರಿಸಿದರು. ಮೇ 12, 2026 ರಂದು ತ್ವಿಶಾ ಸಾವಿನ ಬಗ್ಗೆ ಮಾಹಿತಿ ಬಂದ ನಂತರ ಪ್ರಕರಣ ಬೆಳಕಿಗೆ ಬಂದಿತು. ಪ್ರಾಥಮಿಕ ಪೊಲೀಸ್ ಸಂಶೋಧನೆಗಳು ಮತ್ತು ಮರಣೋತ್ತರ ಪರೀಕ್ಷೆಯು ಅವರು ನೇಣು ಬಿಗಿದುಕೊಂಡು ಸಾವನ್ನಪ್ಪಿದ್ದಾರೆ ಎಂದು ಸೂಚಿಸಿದೆ. ವೈದ್ಯಕೀಯ ವರದಿಗಳು ಈ ಸಾವನ್ನು "ಆರಂಭಿಕ ನೇಣು ಬಿಗಿದುಕೊಂಡ ಪ್ರಕರಣ" ಎಂದು ವಿವರಿಸಿವೆ ಎಂದು ವರದಿಯಾಗಿದೆ, ಇದು ಅವರು ಜೀವಂತವಾಗಿದ್ದಾಗ ನೇಣು ಬಿಗಿದುಕೊಂಡಿದ್ದಾರೆ ಎಂದು ಸೂಚಿಸುತ್ತದೆ. ಆದಾಗ್ಯೂ, ತನಿಖಾಧಿಕಾರಿಗಳು ಅವರ ದೇಹದ ವಿವಿಧ ಭಾಗಗಳಲ್ಲಿ ಬಹು ಗಾಯದ ಗುರುತುಗಳನ್ನು ಸಹ ಗಮನಿಸಿದ್ದಾರೆ. ಎಫ್‌ಐಆರ್‌ನಲ್ಲಿ ಉಲ್ಲೇಖಿಸಲಾದ ವೈದ್ಯಕೀಯ ಸಂಶೋಧನೆಗಳ ಪ್ರಕಾರ, ಗಾಯಗಳು ದೈಹಿಕ ಹಲ್ಲೆ ಅಥವಾ ಭಾರವಾದ ವಸ್ತುವಿನ ಪ್ರಭಾವಕ್ಕೆ ಅನುಗುಣವಾಗಿ ಕಂಡುಬಂದಿವೆ, ಇದು ತನಿಖಾಧಿಕಾರಿಗಳು ಆಕೆಯ ಸಾವಿನ ಸುತ್ತಲಿನ ಸಂದರ್ಭಗಳನ್ನು ಮತ್ತಷ್ಟು ಪರಿಶೀಲಿಸಲು ಕಾರಣವಾಯಿತು. ತನಿಖೆಯ ಭಾಗವಾಗಿ, ಪ್ರಕರಣಕ್ಕೆ ಸಂಬಂಧಿಸಿದ ಮೊಬೈಲ್ ಸಂಖ್ಯೆಗಳಿಗೆ ಲಿಂಕ್ ಮಾಡಲಾದ ಕರೆ ವಿವರ ದಾಖಲೆಗಳು ಮತ್ತು ಟವರ್ ಸ್ಥಳ ಡೇಟಾವನ್ನು ಸಂರಕ್ಷಿಸುವಂತೆ ಅಃಖ ಕೋರಿದೆ. ಮೇ 12 ರಿಂದ ಮೇ 20 ರ ನಡುವಿನ ಅವಧಿಯನ್ನು ಒಳಗೊಂಡ ದಾಖಲೆಗಳನ್ನು ಸಂಸ್ಥೆ ಕೋರಿದೆ ಮತ್ತು ವರದಿಗಳಿಗಾಗಿ ಕಾಯುತ್ತಿದೆ. ಸಂಸ್ಥೆಯು ವಿಧಿವಿಜ್ಞಾನ ಮತ್ತು ವೈದ್ಯಕೀಯ ಸಾಕ್ಷ್ಯಗಳನ್ನು ಸಹ ಪರಿಶೀಲಿಸುತ್ತಿದೆ ಮತ್ತು ಭೌತಿಕ ಸಾಕ್ಷ್ಯಗಳು ಮತ್ತು ಸಾಕ್ಷಿಗಳ ಖಾತೆಗಳು ಆರೋಪಿಗಳು ಪ್ರಸ್ತುತಪಡಿಸಿದ ಘಟನೆಗಳ ಆವೃತ್ತಿಗೆ ಹೊಂದಿಕೆಯಾಗುತ್ತವೆಯೇ ಎಂದು ನಿರ್ಧರಿಸಲು ಅಪರಾಧದ ಸ್ಥಳವನ್ನು ಮರುಸೃಷ್ಟಿಸಬಹುದು. ದೆಹಲಿ ವಿಶೇಷ ಪೊಲೀಸ್ ಸ್ಥಾಪನೆ ಕಾಯ್ದೆಯ ಸೆಕ್ಷನ್ 6 ರ ಅಡಿಯಲ್ಲಿ ಮಧ್ಯಪ್ರದೇಶ ಸರ್ಕಾರ ಒಪ್ಪಿಗೆ ನೀಡಿದ ನಂತರ ತನಿಖೆಯನ್ನು ಅಃಖ ಗೆ ವರ್ಗಾಯಿಸಲಾಯಿತು.

ತರುವಾಯ, ಸಿಬ್ಬಂದಿ ಮತ್ತು ತರಬೇತಿ ಇಲಾಖೆ ಪ್ರಕರಣದ ಸಮಗ್ರ ತನಿಖೆ ನಡೆಸಲು ಸಂಸ್ಥೆಗೆ ಅಧಿಕಾರ ನೀಡಿತು. ತ್ವಿಶಾ ಶರ್ಮಾ ಅವರ ಸಾವಿಗೆ ಸಂಬಂಧಿಸಿದ ವರದಕ್ಷಿಣೆ ಸಾವು, ಕ್ರೌರ್ಯ, ಕ್ರಿಮಿನಲ್ ಪಿತೂರಿ ಮತ್ತು ಇತರ ಸಂಭಾವ್ಯ ಅಪರಾಧಗಳ ಆರೋಪಗಳನ್ನು ಅಃಖ ಪ್ರಸ್ತುತ ತನಿಖೆ ನಡೆಸುತ್ತಿದೆ. ಹೆಚ್ಚಿನ ತನಿಖೆ ನಡೆಯುತ್ತಿದೆ.

# ಮುಂಗಾರು ಋತುವಿನ ಮೇಲೆ ಎಲ್‌ನಿನೊ ಪರಿಣಾಮ ಎದುರಿಸಲು ಕೇಂದ್ರದಿಂದ ತುರ್ತು ಯೋಜನೆ: ಚೌಹಾಣ್

**ನವದೆಹಲಿ, ಮೇ 28:** ಎಲ್ ನಿನೊದ ಯಾವುದೇ ಪ್ರತಿಕೂಲ ಪರಿಣಾಮವನ್ನು ಎದುರಿಸಲು ಕೇಂದ್ರವು ಜಿಲ್ಲಾವಾರು ತುರ್ತು ಯೋಜನೆಗಳನ್ನು ರೂಪಿಸುತ್ತದೆ, ಆದರೆ ಇಲ್ಲಿಯವರೆಗೆ, ಭಾರತ ಹವಾಮಾನ ಇಲಾಖೆ 2026 ರ ಮುಂದಗಾರು ಋತುವಿಗೆ ತನ್ನ ಅಂತಿಮ ಮುನ್ಸೂಚನೆಯನ್ನು ನೀಡದ ಕಾರಣ ಚಿಂತಿಸಬೇಕಾಗಿಲ್ಲ ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದರು.

ಎರಡು ದಿನಗಳ ರಾಷ್ಟ್ರೀಯ ಖಾರಿಫ್ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಿದ ಚೌಹಾಣ್, ಭಾರತದ ವಿಶಾಲ ಭೌಗೋಳಿಕ ಮತ್ತು ಹವಾಮಾನ ವೈವಿಧ್ಯತೆಯನ್ನು ಗಮನದಲ್ಲಿಟ್ಟುಕೊಂಡು, ಸರ್ಕಾರವು ರಾಷ್ಟ್ರೀಯ ಕೃಷಿ ಸಮ್ಮೇಳನವನ್ನು ಮೀರಿ ಸಮಾಲೋಚನಾ ಪ್ರಕ್ರಿಯೆಯನ್ನು ವಿಸ್ತರಿಸಿದೆ ಮತ್ತು ಈಗ ಪ್ರಾದೇಶಿಕ ಸಮ್ಮೇಳನಗಳನ್ನು ಆಯೋಜಿಸಲು ಪ್ರಾರಂಭಿಸಿದೆ ಎಂದು ಹೇಳಿದರು. "ದ್ವಿದಳ



ಧಾನ್ಯಗಳು ಮತ್ತು ಎಣ್ಣೆಬೀಜಗಳಿಗೆ ಪ್ರತ್ಯೇಕ ಕಾರ್ಯಾಚರಣೆಗಳನ್ನು ರಚಿಸಲಾಗಿದೆ ಮತ್ತು ಬೀಜ ಗುಣಮಟ್ಟವನ್ನು ಸುಧಾರಿಸುವುದು, ಬೀಜ ಬದಲಿ ದರಗಳನ್ನು ಹೆಚ್ಚಿಸುವುದು, ಪ್ರದರ್ಶನಗಳು ಮತ್ತು ಸಂಸ್ಕರಣಾ ಮೂಲಸೌಕರ್ಯವನ್ನು ಬಲಪಡಿಸುವ ಕುರಿತು ರಾಜ್ಯಗಳೊಂದಿಗೆ ವ್ಯಾಪಕ ಚರ್ಚೆಗಳನ್ನು ನಡೆಸಲಾಗುವುದು" ಎಂದು ಅವರು ಹೇಳಿದರು. "ಜೈಪುರ, ಲಖನೌ ಮತ್ತು ಭುವನೇಶ್ವರದಲ್ಲಿ ಈಗಾಗಲೇ ಮೂರು ಪ್ರಾದೇಶಿಕ ಸಮ್ಮೇಳನಗಳನ್ನು ನಡೆಸಲಾಗಿದೆ. ಈಶಾನ್ಯ ಮತ್ತು ದಕ್ಷಿಣ ಭಾರತಕ್ಕಾಗಿ ಇನ್ನೂ ಎರಡು ಸಮ್ಮೇಳನಗಳನ್ನು ಪ್ರಸ್ತಾಪಿಸಲಾಗಿದೆ, ದಿನಾಂಕಗಳನ್ನು ಶೀಘ್ರದಲ್ಲೇ ಅಂತಿಮಗೊಳಿಸಲಾಗುವುದು" ಎಂದು ಅವರು ಹೇಳಿದರು.

"ರಾಜ್ಯಗಳೊಂದಿಗೆ ಸಣ್ಣ ಗುಂಪುಗಳಲ್ಲಿ ಚರ್ಚೆಗಳು ನಡೆದಾಗ, ಪ್ರತಿಯೊಂದು ರಾಜ್ಯದ ನಿರ್ದಿಷ್ಟ ಸಮಸ್ಯೆಗಳು ಮತ್ತು ಅವಶ್ಯಕತೆಗಳ ಕುರಿತು ವಿವರವಾಗಿ ಚರ್ಚಿಸಲು ಸಾಧ್ಯವಾಗುತ್ತದೆ" ಎಂದು ಅವರು ಹೇಳಿದರು. ಭವಿಷ್ಯದಲ್ಲಿ ಕೃಷಿ–ಹವಾಮಾನ ವಲಯಗಳ ಆಧಾರದ ಮೇಲೆ ಪ್ರಾದೇಶಿಕ ಸಮ್ಮೇಳನಗಳನ್ನು ಆಯೋಜಿಸುವ ಬಗ್ಗೆಯೂ ಸರ್ಕಾರ ಪರಿಗಣಿಸುತ್ತಿದೆ ಎಂದು ಸಚಿವರು ಹೇಳಿದರು. ಗಮನಾರ್ಹವಾಗಿ, ವಿಶ್ವ ಹವಾಮಾನ ಸಂಸ್ಥೆ ಮೇ–ಜುಲೈನಲ್ಲಿ ಎಲ್‌ನಿನೊ ಪರಿಸ್ಥಿತಿ ಮರುಕಳಿಸುವ ಸಾಧ್ಯತೆಯನ್ನು ಸೂಚಿಸಿದೆ.

ರೈತರ ಕಠಿಣ ಪರಿಶ್ರಮ, ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಕೇಂದ್ರ ಸರ್ಕಾರದ ನೀತಿ ಬೆಂಬಲ, ವೈಜ್ಞಾನಿಕ ಸಂಶೋಧನೆ ಮತ್ತು ರಾಜ್ಯಗಳ ಸಹಕಾರದಿಂದಾಗಿ, ಭಾರತವು ಈ ವರ್ಷ ಆಹಾರ ಧಾನ್ಯ ಉತ್ಪಾದನೆಯಲ್ಲಿ ಹಿಂದಿನ ಎಲ್ಲಾ ದಾಖಲೆಗಳನ್ನು ಮೀರಿಸಿದೆ ಎಂದು ಚೌಹಾಣ್ ಹೇಳಿದರು. ಕೃಷಿಸಾಲ ವಿತರಣೆಯು ರಾಜ್ಯಗಳಲ್ಲಿ ಅಸಮಾನವಾಗಿಯೇ ಉಳಿದಿದೆ, ಕೆಲವು ರಾಜ್ಯಗಳು ಇತರರಿಗಿಂತ ಗಮನಾರ್ಹವಾಗಿ ಕಡಿಮೆ ಕೃಷಿ ಸಾಲವನ್ನು ಪಡೆಯುತ್ತಿವೆ ಎಂದು ಸಚಿವರು ಗಮನಿಸಿದರು.

"ರೈತರು ಕಿಸಾನ್ ಕ್ರೆಡಿಟ್ ಕಾರ್ಡ್‌ಗಳಿಗೆ ಪ್ರವೇಶ ಮತ್ತು ಸಾಕಷ್ಟು ಹೂಡಿಕೆ ಬಂಡವಾಳವನ್ನು ಹೊಂದಿದ್ದರೆ, ಅವರು ಉತ್ತಮ ಕೃಷಿ ಪದ್ಧತಿಗಳನ್ನು ಕೈಗೊಳ್ಳಲು ಸಾಧ್ಯವಾಗುತ್ತದೆ" ಎಂದು ಅವರು ಹೇಳಿದರು.

# ಗಂಗಾನದಿಯಲ್ಲಿ ದೋಣಿ ಮುಳುಗಿ ಇಬ್ಬರು ಸಾವು, ಐವರು ನಾಪತ್ತೆ

**ಪಟನಾ, ಮೇ 28:** 14 ಮಂದಿಯನ್ನು ಹೊತ್ತೊಯ್ಯುತ್ತಿದ್ದ ದೋಣಿಯೊಂದು ಗಂಗಾನದಿಯಲ್ಲಿ ಮುಳುಗಿದ ಪರಿಣಾಮ ಇಬ್ಬರು ಸಾವನ್ನಪ್ಪಿದ್ದು, 5 ಮಂದಿ ನಾಪತ್ತೆಯಾಗಿರುವ ಘಟನೆ ಬಿಹಾರದ ಪಟನಾದಲ್ಲಿ ನಡೆದಿದೆ.

ಪ್ರವಾಹ ಪೀಡಿತ ಪಾಟ್ನಾದ ಉಮಾನಾಥ್ ಗಂಗಾ ಘಾಟ್ ಬಳಿ ಗಂಗಾ ನದಿಯಲ್ಲಿ ನೀರಿನ ಮಟ್ಟ ಏರಿಕೆ ಹಾಗೂ ಬಲವಾದ ಗಾಳಿಯಿಂದ ದೋಣಿ ಮುಳುಗಿದೆ.



ಕೂಡಲೇ ಸ್ಥಳೀಯರ ನೆರವಿನಿಂದ ದೋಣಿಯಲ್ಲಿದ್ದ 7 ಮಂದಿಯನ್ನು ಎಸ್‌ಡಿಆರ್‌ಎಫ್ ತಂಡ ಸುರಕ್ಷಿತವಾಗಿ ರಕ್ಷಿಸಿದ್ದು, ಇಬ್ಬರ ಮೃತದೇಹವನ್ನು ನೀರಿನಿಂದ ಹೊರತೆಗೆಯಲಾಗಿದೆ. ಸಾಮರ್ಥ್ಯಕ್ಕಿಂತ ಹೆಚ್ಚಿನ ಜನರನ್ನು ದೋಣಿಯಲ್ಲಿ ಕರೆದೊಯ್ದಿದ್ದು, ಯಾವುದೇ ರಕ್ಷಣಾ ಕವಚಗಳನ್ನು ಹೊಂದಿರದ ಕಾರಣ ದುರಂತ ಸಂಭವಿಸಿದೆ ಎಂದು ವರದಿಗಳು ತಿಳಿಸಿವೆ

ಮೃತರನ್ನು ನೀಲಂ ಕುಮಾರಿ (30) ಹಾಗೂ ಕಾಶಿ ಕುಮಾರ್ (15) ಎಂದು ಗುರುತಿಸಲಾಗಿದೆ. 14 ಮಂದಿ ಪೈಕಿ ಐವರು ನಾಪತ್ತೆಯಾಗಿದ್ದು, ಶೋಧಕಾರ್ಯ ಮುಂದುವರಿದಿದೆ. ಪ್ರತಿಕೂಲ ಹವಾಮಾನ ಮತ್ತು ನೀರಿನ ಪರಿಸ್ಥಿತಿಗಳ ಮಧ್ಯೆಯೂ ಮುಳುಗು ತಜ್ಞ ಮತ್ತು ರಕ್ಷಣಾ ಸಿಬ್ಬಂದಿ ನದಿಯ ವಿವಿಧ ಭಾಗಗಳಲ್ಲಿ ಶೋಧಕಾರ್ಯ ನಡೆಸುತ್ತಿದ್ದಾರೆ.

# ಸಿಯುಇಟಿ–ಯುಜಿ ಪರೀಕ್ಷೆ ಮುಂದೂಡಿಕೆ: ಪರಿಷ್ಕೃತ ವೇಳಾಪಟ್ಟಿ

**ನವದೆಹಲಿ, ಮೇ 28:** ಮೇ 28ರಿಂದ ನಡೆಯಲಿದ್ದ ಸಾಮಾನ್ಯ ವಿಶ್ವವಿದ್ಯಾಲಯ ಪ್ರವೇಶ ಪರೀಕ್ಷೆ (ಸಿಯುಇಟಿ) 2026 ಪರೀಕ್ಷೆಯನ್ನು ಬಕ್ರೀದ್ (ಈದ್ ಉಲ್ ಅಝಾ) ಕಾರಣ ಮುಂದೂಡಲಾಗಿದ್ದು, ಪರಿಷ್ಕೃತ ಪರೀಕ್ಷಾ ದಿನಾಂಕಗಳನ್ನು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (ಎನ್ ಟಿಎ) ಬಿಡುಗಡೆ ಮಾಡಿದೆ. ಪರೀಕ್ಷೆಯನ್ನು ಈಗ ಮೇ 31, ಜೂನ್ 6 ಮತ್ತು ಜೂನ್ 7ರಂದು ನಡೆಸಲಾಗುವುದು ಎಂದು ತಿಳಿಸಿದೆ.

ಸಿಯುಇಟಿ ಎಂದರೆ ಸಾಮಾನ್ಯ ವಿಶ್ವವಿದ್ಯಾನಿಲಯ ಪ್ರವೇಶ ಪರೀಕ್ಷೆ. ಇದು ದೇಶಾದ್ಯಂತ ಇರುವ ಕೇಂದ್ರ, ರಾಜ್ಯ ಮತ್ತು ಇತರ ಪ್ರತಿಷ್ಠಿತ ವಿಶ್ವವಿದ್ಯಾಲಯಗಳಲ್ಲಿಪದವಿ ಮತ್ತು ಸ್ನಾತಕೋತ್ತರ ಕೋರ್ಸ್‌ಗಳಿಗೆ ಪ್ರವೇಶ ಪಡೆಯಲು ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯು ಎನ್ ಟಿಎ ನಡೆಸುವ ರಾಷ್ಟ್ರೀಯ ಮಟ್ಟದ ಪ್ರವೇಶ ಪರೀಕ್ಷೆಯಾಗಿದೆ. ಈ ಪರೀಕ್ಷೆಗೆ ಒಟ್ಟು 15,68,866 ಅಭ್ಯರ್ಥಿಗಳು ನೋಂದಾಯಿಸಿಕೊಂಡಿದ್ದಾರೆ.

ಮೇ 31ರ ಪರೀಕ್ಷೆಯನ್ನು ತೆಗೆದುಕೊಳ್ಳುವ ಅಭ್ಯರ್ಥಿಗಳಿಗೆ ಪ್ರವೇಶ ಪತ್ರಗಳನ್ನು ಲಭ್ಯವಾಗುವಂತೆ ಮಾಡಲಾಗಿದೆ ಎಂದು ಎನ್‌ಟಿಎ ಅಧಿಕೃತ ಹೇಳಿಕೆಯಲ್ಲಿ ತಿಳಿಸಿದೆ. ಪ್ರವೇಶ ಪತ್ರವನ್ನು ಅಧಿಕೃತ ವೆಬ್‌ಸೈಟ್ cuet.nta.nic.in ನಿಂದ ಡೌನ್ಲೋಡ್ ಮಾಡಬಹುದು. ಜೂ.6 ಮತ್ತು 7ರಂದು ನಿಗದಿಯಾಗಿದ್ದ ಪರೀಕ್ಷೆ ಪ್ರವೇಶ ಪತ್ರ ಶೀಘ್ರದಲ್ಲೇ ಬಿಡುಗಡೆ ಮಾಡಲಾಗುವುದು ಎಂದು ಎನ್ಟಿಎ ತಿಳಿಸಿದೆ.

ಜವಾಹರಲಾಲ್ ನೆಹರು ವಿಶ್ವವಿದ್ಯಾಲಯ, ದೆಹಲಿ ವಿಶ್ವವಿದ್ಯಾಲಯ, ಬನಾರಸ್ ಹಿಂದೂ ವಿಶ್ವವಿದ್ಯಾಲಯ ಮತ್ತು ಅಲಿಗಢ ಮುಸ್ಲಿಂ ವಿಶ್ವವಿದ್ಯಾಲಯದಂತಹ 49 ಕೇಂದ್ರೀಯ ವಿಶ್ವವಿದ್ಯಾಲಯಗಳು ಸೇರಿದಂತೆ 250ಕ್ಕೂ ಹೆಚ್ಚು ವಿಶ್ವವಿದ್ಯಾಲಯಗಳು ಸಿಯುಇಟಿ ಅಂಕಗಳನ್ನು ಸ್ವೀಕರಿಸುತ್ತವೆ. ಪಟ್ಟಿಯಲ್ಲಿ 36 ರಾಜ್ಯ ವಿಶ್ವವಿದ್ಯಾಲಯಗಳು, 129 ಖಾಸಗಿ ವಿಶ್ವವಿದ್ಯಾಲಯಗಳು, ಸರ್ಕಾರಿ ಸಂಸ್ಥೆಗಳೂ ಸೇರಿವೆ.

# ಕಾಕ್ರೋಚ್ ಜನತಾ ಪಕ್ಷದ ಎಕ್ಸ್ ಹ್ಯಾಂಡಲ್ ತಡೆಹಿಡಿದ ಬೆನ್ನಲ್ಲೇ ಹೊಸ ಖಾತೆ ಪ್ರಾರಂಭ

**ನವದೆಹಲಿ,ಮೇ 28:** ಕಳೆದ ವಾರ ಹುಟ್ಟಿಕೊಂಡು ಸಾಮಾಜಿಕ ಮಾಧ್ಯಮದಲ್ಲಿ ಬಿರುಗಾಳಿ ಎಬ್ಬಿಸಿದ್ದ ವಿಡಂಬನಾತ್ಮಕ ಡಿಜಿಟಲ್ ಸಂಸ್ಥೆ ಕಾಕ್ರೋಚ್ ಜನತಾ ಪಕ್ಷದ ಎಕ್ಸ್ ಖಾತೆಯನ್ನು ಗುರುವಾರ ಭಾರತದಲ್ಲಿ ತಡೆಹಿಡಿಯಲಾಗಿದೆ. ಇದಾದ ಸ್ವಲ್ಪ ಸಮಯದ ನಂತರ, 'ಕಾಕ್ರೋಚ್ ಈಸ್ ಬ್ಯಾಕ್' ಎಂಬ ಮತ್ತೊಂದು ಹ್ಯಾಂಡಲ್ ಹುಟ್ಟಿಕೊಂಡಿತು.

ಖಾತೆಯನ್ನು ಹ್ಯಾಕ್ ಮಾಡಲು ಪ್ರಯತ್ನಗಳು ನಡೆದಿದ್ದರಿಂದ ಇದನ್ನು ನಿರೀಕ್ಷಿಸಲಾಗಿತ್ತು. ಆದರೆ ಇದು ಸರ್ಕಾರದ ಸ್ವಯಂ ಗುರಿಯಾಗಿದೆ ಎಂದು ಸಂಸ್ಥಾಪಕ ಅಭಿಜೀತ್ ದಿಪ್ಕೆ ತಿಳಿಸಿದ್ದಾರೆ. ನಾನು ಈಗ ಎಕ್ಸ್‌ನಲ್ಲಿ ಕಾಕ್ರೋಚ್ ಈಸ್ ಬ್ಯಾಕ್ ಎಂಬ ಹೊಸ ಖಾತೆಯನ್ನು ಪ್ರಾರಂಭಿಸಿದ್ದೇನೆ. ತಂಡವು ಈ ವಿಷಯವನ್ನು ಕಾನೂನುಬದ್ಧವಾಗಿ ಮುಂದುವರಿಸಲಿದೆ ಎಂದು ಅವರು ಹೇಳಿದ್ದಾರೆ.

ಮಧ್ಯಾಹ್ನ 3.40 ಕ್ಕೆ, ಅದು ಪ್ರಾರಂಭವಾದ ಒಂದು ಗಂಟೆಯ ನಂತರ, ಕಾಕ್ರೋಚ್ ಈಸ್ ಬ್ಯಾಕ್ ಎಕ್ಸ್ ಹ್ಯಾಂಡಲ್ 16,800 ಅನುಯಾಯಿಗಳನ್ನು ಹೊಂದಿತ್ತು. ಮೇ 15 ರಂದು ಸಿಜೆಐ ಅವರ 'ಜಿರಳೆಗಳು' ಹೇಳಿಕೆಗಳ ಒಂದು ದಿನದ ನಂತರ ಕಾಕ್ರೋಚ್ ಜನತಾ ಪಕ್ಷವು ಅಸ್ತಿತ್ವಕ್ಕೆ ಬಂದಿತು. ಇದು ತ್ವರಿತವಾಗಿ ವೈರಲ್ ಆಗಿ, ರಾಜಕಾರಣಿಗಳು, ಕಾರ್ಯಕರ್ತರು, ಕಲಾವಿದರು ಮತ್ತು ಹೆಚ್ಚಿನ ಸಂಖ್ಯೆಯ ಯುವ ಮತ್ತು ಯುವ ಸಾಮಾಜಿಕ ಮಾಧ್ಯಮ ಬಳಕೆದಾರರಿಂದ ಬೆಂಬಲವನ್ನು ಗಳಿಸಿತು. ಗುರುವಾರ ಭಾರತದಲ್ಲಿ ಎಕ್ಸ್ ಖಾತೆಯನ್ನು ಪ್ರವೇಶಿಸಲಾಗುವುದಿಲ್ಲವಾದರೂ, ವೇದಿಕೆಯ Instagram ಪುಟವು 14.3 ದಶಲಕ್ಷ ಅನುಯಾಯಿಗಳೊಂದಿಗೆ ಸಕ್ರಿಯವಾಗಿದೆ ಮತ್ತು ಇನ್ನೂ ಹೆಚ್ಚುತ್ತಿದೆ. Instagram ನಲ್ಲಿನ ಒಂದು ಪೋಸ್ಟ್ ಮೆಟಾ–ಮಾಲೀಕತ್ವದ ವೇದಿಕೆಯಲ್ಲಿ ಸುಮಾರು 8.8 ಮಿಲಿಯನ್ ಅನುಯಾಯಿಗಳನ್ನು ಹೊಂದಿರುವ ಅಧಿಕೃತ ಭಾರತೀಯ ಜನತಾ ಪಕ್ಷದ ಖಾತೆಯೊಂದಿಗೆ ಹೋಲಿಕೆಗಳನ್ನು ಮಾಡಿತು. ವಿಡಂಬನಾತ್ಮಕ ವೇದಿಕೆ ಎಂದು ತಾನು ವಿವರಿಸಿದ್ದರ ವಿರುದ್ಧದ ಕ್ರಮವನ್ನು ಪ್ರಶ್ನಿಸಿದ ದೀಪ್ಕೆ, ಖಾತೆ ಮತ್ತು ಚಳುವಳಿ ವೇಗವಾಗಿ ಬೆಳೆಯುತ್ತಿದೆ ಎಂದು ಹೇಳಿದರು.

ಪ್ರತಿದಿನ ಸಾವಿರಾರು ಅನುಯಾಯಿಗಳನ್ನು ಪಡೆಯುತ್ತಿದೆ ಬಹುಶಃ ಅದೇ ಸರ್ಕಾರವನ್ನು ಹೆದರಿಸಿತ್ತು ಎಂದು ದೀಪ್ಕೆ ಆರೋಪಿಸಿದರು.

ಆನ್‌ಲೈನ್ ವಿಡಂಬನಾತ್ಮಕ ಯೋಜನೆಯಾಗಿ ಪ್ರಾರಂಭವಾದದ್ದು ಶೀಘ್ರದಲ್ಲೇ ಸಮಕಾಲೀನ ಪ್ರತಿಭಟನೆ ಮತ್ತು ಅದರಲ್ಲಿ ಹಾಸ್ಯ ಮತ್ತು ಮೀಮ್ ಸಂಸ್ಕೃತಿಯ ಪಾತ್ರದ ಬಗ್ಗೆ ವ್ಯಾಪಕ ಸಂಭಾಷಣೆಯಾಗಿ ವಿಕಸನಗೊಂಡಿದೆ.

ಮೀಮ್‌ಗಳನ್ನು ಬಳಸಿಕೊಂಡು, ಕಾಕ್ರೋಚ್ ಜನತಾ ಪಕ್ಷದ ವೇದಿಕೆಯು ತೀಕ್ಷ್ಣವಾದ ರಾಜಕೀಯ ವಿಡಂಬನೆ ಮತ್ತು ವ್ಯಾಖ್ಯಾನದ ಮೂಲಕ ಆಕರ್ಷಣೆಯನ್ನು ಗಳಿಸಿತು.

ಇದರ ಹೆಚ್ಚಿನ ವಿಷಯವು ನಿರುದ್ಯೋಗ, ಪರೀಕ್ಷಾ ಪತ್ರಿಕೆ ಸೋರಿಕೆ ಮತ್ತು ಶಿಕ್ಷಣದಂತಹ ಯುವ ಕಾಳಜಿಗಳ ಮೇಲೆ ಕೇಂದ್ರೀಕೃತವಾಗಿದೆ, ಇವುಗಳನ್ನು ಗ್ರಾಫಿಕ್ಸ್, ಅನಿಮೇಷನ್, ಪ್ರಣಾಳಿಕೆಗಳು ಮತ್ತು ಚಾರ್ಟರ್–ಶೈಲಿಯ ಬೇಡಿಕೆಗಳ ಮೂಲಕ ಪ್ಯಾಕ್ ಮಾಡಲಾಗಿದೆ.

ಈ ತ್ವರಿತ ಏರಿಕೆಯು ಮೀಮ್ ರಚನೆಕಾರರು ಮತ್ತು ಯುವ ಬಳಕೆದಾರರಿಂದ ಮಾತ್ರವಲ್ಲದೆ, ಇದನ್ನು ಡಿಜಿಟಲ್ ಭಿನ್ನಾಭಿಪ್ರಾಯದ ಒಂದು ರೂಪವೆಂದು ನೋಡಿದ ಸಾರ್ವಜನಿಕ ವ್ಯಕ್ತಿಗಳಿಂದಲೂ ಗಮನ ಸೆಳೆಯಿತು.

# 2029ರ ಲೋಕಸಭಾ ಚುನಾವಣೆಯಲ್ಲಿ ಮಹಿಳೆಯರಿಗೆ ಶೇ.33 ಮೀಸಲಾತಿ: ಟಿಡಿಪಿ

**ಅಮರಾವತಿ, ಮೇ 28:** 2029ರ ಲೋಕಸಭೆ ಚುನಾವಣೆಗಳಿಗೆ ಪಕ್ಷದೊಳಗೆ ಮಹಿಳೆಯರಿಗೆ ಶೇ.33 ಮೀಸಲಾತಿ ಆಧಾರದಲ್ಲಿ ಟಿಕೆಟ್ ಹಂಚಿಕೆ ಮಾಡಲಾಗುತ್ತದೆ ಎಂದು ತೆಲುಗು ದೇಶಂ ಪಕ್ಷದ (ಟಿಡಿಪಿ) ವಾರ್ಷಿಕ ಮಹಾನಾಡು ಸಮಾವೇಶವಾದ ಮೊದಲ ದಿನದಂದು, ಪಕ್ಷದ ಕಾರ್ಯಕಾರಿ ಅಧ್ಯಕ್ಷ ಮತ್ತು ಆಂಧ್ರಪ್ರದೇಶ ಮಾನವ ಸಂಪನ್ಮೂಲ ಅಭಿವೃದ್ಧಿ ಮತ್ತು ಐಟಿ ಸಚಿವ ನಾರಾ ಲೋಕೇಶ್ ಘೋಷಿಸಿದ್ದಾರೆ.

ಈ ಬಾರಿಯ ಮಹಾನಾಡು ಸಮಾವೇಶವನ್ನು ಸ್ತ್ರೀ ಶಕ್ತಿ (ಮಹಿಳಾ ಸಬಲೀಕರಣ) ಎಂಬ ಪರಿಕಲ್ಪನೆಯಡಿ ಆಯೋಜಿಸಲಾಗಿದೆ. ಮಹಿಳೆಯರು ಕೇವಲ ಕಲ್ಯಾಣ ಯೋಜನೆಗಳ ಫಲಾನುಭವಿಗಳಾಗದೆ ರಾಜಕೀಯದಲ್ಲಿ ಪ್ರಮುಖ ನಿರ್ಧಾರ ಕೈಗೊಳ್ಳುವ ನಾಯಕರಾಗಬೇಕು ಎಂಬುದು ಇದರ ಉದ್ದೇಶವಾಗಿದೆ.

ಈ ಸಮಾವೇಶದಲ್ಲಿ ಮಾತನಾಡಿದ ಟಿಡಿಪಿ ನಾಯಕ, ಕೇಂದ್ರ ಸರ್ಕಾರದ ಮಹಿಳಾ ಮೀಸಲಾತಿ ಮಸೂದೆಯು ಸಂಸತ್ತಿನಲ್ಲಿ ಕಾನೂನಾಗಿ ಜಾರಿಗೆ ಬರುವವರೆಗೂ ಕಾಯುವುದಿಲ್ಲ. ನಮ್ಮ ಪಕ್ಷವು ಸ್ವಯಂಪ್ರೇರಿತವಾಗಿ ಈ ನಿರ್ಧಾರವನ್ನು ಜಾರಿಗೆ ತರಲಿದೆ. ದೇಶದ ರಾಜಕೀಯದ ಮುಂದಿನ ಯುಗವು ಮಹಿಳಾ ನಾಯಕತ್ವಕ್ಕೆ ಸೇರಿರಬೇಕು ಎಂದು ಹೇಳಿದ್ದಾರೆ.

ಇತ್ತೀಚೆಗೆ ಲೋಕಸಭೆಯಲ್ಲಿ ಕ್ಷೇತ್ರ ಮರುವಿಂಗಡಣೆಯೊಂದಿಗೆ ಜೋಡಿಸಲಾದ ಮಹಿಳಾ ಮೀಸಲಾತಿಯು ಅಂಗೀಕಾರ ಪಡೆಯುವಲ್ಲಿ ವಿಫಲವಾಗಿದೆ. ದಕ್ಷಿಣ ಭಾರತದ ರಾಜ್ಯಗಳು ವಿರೋಧಿಸುತ್ತಾ ಬಂದಿರುವ ಕ್ಷೇತ್ರ ಮರುವಿಂಗಡಣೆಯನ್ನು ಮಹಿಳಾ ಮೀಸಲಾತಿಗೆ ಜೋಡಿಸಿ ಪರೋಕ್ಷವಾಗಿ ಕ್ಷೇತ್ರ ಮರುವಿಂಗಡಣೆಯನ್ನು ಜಾರಿಗೆ ತರಲು ಕೇಂದ್ರ ಸರ್ಕಾರ ಮುಂದಾಗಿತ್ತು. ಈ ನಿಟ್ಟಿನಲ್ಲಿ ವಿಪಕ್ಷಗಳು ಈ ಸಂವಿಧಾನ ತಿದ್ದುಪಡಿ ಮಸೂದೆಯನ್ನು ಅಂಗೀಕರಿಸಿಲ್ಲ. ಆದರೆ ಸದ್ಯ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರವು ಪ್ರತಿಪಕ್ಷಗಳನ್ನು ಮಹಿಳಾ ವಿರೋಧಿ ಎಂದು ಬಿಂಬಿಸಲು ಯತ್ನಿಸುತ್ತಿದೆ.

# ರಾಜಕೀಯ ಪಕ್ಷ ಬದಲಾವಣೆ ಕುರಿತ ಟೀಕೆ ಮಾನಹಾನಿಯಲ್ಲ: ದೆಹಲಿ ಹೈಕೋರ್ಟ್!

**ನವದೆಹಲಿ, ಮೇ 28:** ರಾಜಕೀಯ ಪಕ್ಷ ಬದಲಾವಣೆಯನ್ನು ಟೀಕಿಸುವುದು ಮಾನಹಾನಿಕರವಲ್ಲ ಎಂದು ಎಎಪಿ ತೊರೆದು ಬಿಜೆಪಿ ಸೇರಿರುವ ರಾಜ್ಯಸಭೆ ಸದಸ್ಯ.ರಾಘವ್ ಛಡ್ಡಾಗೆ ದೆಹಲಿ ಹೈಕೋರ್ಟ್ ಹೇಳಿದೆ.

ಗುರುವಾರ ರಾಘವ್ ಛಡ್ಡಾ ಅವರ ಮಾನನಷ್ಟ ಮೊಕದ್ದಮೆ ಪ್ರಕರಣವನ್ನು ವಿಚಾರಣೆ ನಡೆಸಿದ ದೆಹಲಿ ಹೈಕೋರ್ಟ್, ರಾಜಕೀಯ ಟೀಕೆ ಮತ್ತು ಮಾನಹಾನಿ ನಡುವಿನ ಗಡಿ ತುಂಬಾ ಸೂಕ್ಷ್ಮವಾಗಿದೆ ಎಂದು ಅಭಿಪ್ರಾಯಪಟ್ಟಿತು.

ಅಂತೆಯೇ ಇತ್ತೀಚೆಗೆ ಆಪ್ ತೊರೆದು ಃಎಕ ಸೇರಿರುವ ರಾಘವ್ ಛಡ್ಡಾ, ತಮ್ಮ ರಾಜಕೀಯ ನಿರ್ಧಾರವನ್ನು ಟೀಕಿಸುವ ಸಾಮಾಜಿಕ ಜಾಲತಾಣದ ಹೇಳಿಕೆಗಳ ಬಗ್ಗೆ ಅತಿಸೂಕ್ಷ್ಮವಾಗಿರಬೇಕೇ ಎಂದು ನ್ಯಾಯಾಲಯ ಪ್ರಶ್ನಿಸಿತು.

ರಾಘವ್ ಚಡ್ಡಾ ಅವರು ತಮ್ಮ ವಿರುದ್ಧ ದುರುದ್ದೇಶಪೂರ್ವಕ ಮತ್ತು ಕೃತಕವಾಗಿ ಸೃಷ್ಟಿಸಲಾದ ಸಾಮಾಜಿಕ ಜಾಲತಾಣ ಪೋಸ್ಟ್‌ಗಳು ತಮ್ಮ ಖ್ಯಾತಿ ಹಾಗೂ ವ್ಯಕ್ತಿತ್ವ ಹಕ್ಕುಗಳಿಗೆ ಗಂಭೀರ ಹಾನಿ ಮಾಡುತ್ತಿವೆ ಎಂದು ಆರೋಪಿಸಿ ಹೈಕೋರ್ಟ್‌ನಲ್ಲಿ ಮೊಕದ್ದಮೆ ದಾಖಲಿಸಿದ್ದರು. ಛಡ್ಡಾ ಪರ ವಕೀಲರಾಗಿದ್ದ ಹಿರಿಯ ವಕೀಲ ರಾಜೀವ್ ನಾಯರ್, ಕೆಲವು ಪೋಸ್ಟ್‌ಗಳಲ್ಲಿ ಅಸಭ್ಯ ವಿಷಯವಿದ್ದು, ರಾಜಕಾರಣಿ ಹಣಕ್ಕಾಗಿ ತಮ್ಮನ್ನು ಮಾರಿಕೊಂಡಿದ್ದಾರೆ ಎಂಬ ರೀತಿಯಲ್ಲಿ ತೋರಿಸಲಾಗಿದೆ ಎಂದು ವಾದಿಸಿದರು

ಇಂತಹ ಆಕ್ಷೇಪಾರ್ಹ ವಿಷಯಗಳನ್ನು ತೆಗೆದುಹಾಕುವ ಮಧ್ಯಂತರ ಪರಿಹಾರದ ಕುರಿತು ತೀರ್ಪು ಕಾಯ್ದಿರಿಸಿದ ನ್ಯಾಯಮೂರ್ತಿ ಸುಬ್ರಮಣಿಯನ್ ಪ್ರಸಾದ್ ಅವರು, 'ವ್ಯಕ್ತಿಗೆ ಗೌರವಯುತವಾಗಿ ಬದುಕುವ ಹಕ್ಕು ಇದ್ದರೂ, ಸಂವಿಧಾನದ ಅಡಿಯಲ್ಲಿ ಇರುವ ಮಾತಿನ ಸ್ವಾತಂತ್ರ್ಯದ ಹಕ್ಕನ್ನು ಕಿತ್ತುಕೊಳ್ಳಲಾಗುವುದಿಲ್ಲ' ಎಂದು ಹೇಳಿದರು. ಇದು ಒಬ್ಬ ವ್ಯಕ್ತಿ ರಾಜಕೀಯ ನಿರ್ಧಾರವನ್ನು ಟೀಕಿಸಿರುವ ಹೇಳಿಕೆ ಮಾತ್ರ... ರಾಜಕೀಯ ನಾಯಕನಾಗಿ ನೀವು ಇಷ್ಟು ಸಂವೇದನಾಶೀಲರಾಗಬಹುದೇ ಎಂದು ನ್ಯಾಯಮೂರ್ತಿ ಪ್ರಸಾದ್ ವಿಚಾರಣೆ ವೇಳೆ ಪ್ರಶ್ನಿಸಿದರು.

ಸ್ವಾತಂತ್ರ್ಯ ಪಡೆದ ದಿನದಿಂದಲೇ ನಾವು ಆರ್ ಕೆ ಲಕ್ಷ್ಮಣ್ ಅವರ ಕಾರ್ಟೂನ್‌ಗಳನ್ನು ನೋಡುತ್ತಾ ಬೆಳೆದಿದ್ದೇವೆ. ರಾಜಕೀಯ ಹಾಗೂ ಆರ್ಥಿಕ ನಿರ್ಧಾರಗಳ ಬಗ್ಗೆ ಅನೇಕ ರೀತಿಯಲ್ಲಿ ಟೀಕೆ ಮಾಡಲಾಗಿದೆ. ಈಗ ಸಾಮಾಜಿಕ ಜಾಲತಾಣಗಳು ಅದನ್ನು ಇನ್ನಷ್ಟು ವಿಸ್ತರಿಸಿವೆ. ಆದರೂ ಕೊನೆಯಲ್ಲಿ ಅದು ಒಬ್ಬ ವ್ಯಕ್ತಿಯ ಅಭಿಪ್ರಾಯದ ವ್ಯಾಪ್ತಿಯಲ್ಲೇ ಇರುತ್ತದೆ ಎಂದು ನ್ಯಾಯಮೂರ್ತಿಗಳು ಹೇಳಿದರು.

ಈ ವೇಳೆ ಛಡ್ಡಾ ಪರ ಹಿರಿಯ ವಕೀಲರು, ಹಣಕ್ಕಾಗಿ ವ್ಯವಹರಿಸಿದ್ದಾರೆ ಎಂಬ ಅರ್ಥ ಬರುವ ಹೇಳಿಕೆಗಳನ್ನು ನ್ಯಾಯಸಮ್ಮತ ಟೀಕೆ ಎಂದು ಕರೆಯಲು ಸಾಧ್ಯವಿಲ್ಲ ಎಂದು ವಾದಿಸಿದರು. ಆ ಹೇಳಿಕೆ ಒಂದು ದಿನವೂ ಇರಬಾರದು ಎಂದು ವಾದಿಸಿದಾಗ, ನ್ಯಾಯಮೂರ್ತಿ ಪ್ರಸಾದ್ ಅವರು ಪ್ರಥಮ ದೃಷ್ಟಿಗೆ ಅವು ಟೀಕೆಯಷ್ಟೇ ಕಾಣುತ್ತಿವೆ ಎಂದು ಪ್ರತಿಕ್ರಿಯಿಸಿದರು.

ನನ್ನ ಪ್ರಕಾರ, ಪ್ರಾಥಮಿಕವಾಗಿ ನೋಡಿದರೆ ಇವೆಲ್ಲವೂ ರಾಜಕೀಯ ನಿರ್ಧಾರದ ವಿರುದ್ಧದ ಟೀಕೆಗಳಷ್ಟೇ. ಮಾನಹಾನಿ ಮತ್ತು ಟೀಕೆ ನಡುವಿನ ಗಡಿ ತುಂಬಾ ಸೂಕ್ಷ್ಮ, ಅಲ್ಲವೇ ಆ ಗಡಿ ದಾಟುವುದು ತುಂಬಾ ಸುಲಭ. ಅದು ವ್ಯಕ್ತಿಯ ಗೌರವಯುತ ಬದುಕಿನ ಹಕ್ಕಿಗೆ ಧಕ್ಕೆಯುಂಟುಮಾಡಬಹುದು. ಅದೇ ಸಮಯದಲ್ಲಿ ನಿಮ್ಮ ಸಂವಿಧಾನದ 19(1) ಅಡಿಯಲ್ಲಿ ಇರುವ ಮಾತಿನ ಸ್ವಾತಂತ್ರ್ಯದ ಹಕ್ಕನ್ನೂ ಕಸಿದುಕೊಳ್ಳಲಾಗುವುದಿಲ್ಲ ಎಂದು ನ್ಯಾಯಾಲಯ ತಿಳಿಸಿತು.

ಆಕ್ಷೇಪಾರ್ಹ ಹೇಳಿಕೆ ಅಪರಿಚಿತ ವ್ಯಕ್ತಿಗಳು ಮಾಡಿರುವುದರಿಂದ, ಈ ಪ್ರಕರಣದಲ್ಲಿ ನ್ಯಾಯಾಲಯಕ್ಕೆ ಸಹಾಯ ಮಾಡಲು ಅಮಿಕಸ್ ಕ್ಯುರಿಯನ್ನು ನೇಮಿಸುವುದನ್ನು ನ್ಯಾಯಮೂರ್ತಿ ಸೂಚಿಸಿದರು. ಮಾನನಷ್ಟ ವಾಣಿಜ್ಯೀಕರಣ ಮತ್ತು ರಾಜಕೀಯ ಟೀಕೆ ನಡುವಿನ ವ್ಯತ್ಯಾಸವಿದೆ ಎಂದು ನ್ಯಾಯಮೂರ್ತಿ ಹೇಳಿದರು.

# ತೆರಿಗೆ ವಂಚನೆ ಪ್ರಕರಣ: ಡಿ.ಕೆ.ಶಿವಕುಮಾರ್‌ಗೆ ಹೈಕೋರ್ಟ್‌ನಿಂದ ಬಿಗ್ ರಿಲೀಫ್



**ವಿದೇಶಿಗಳಿಗೆ ಅಧಿಕೃತ ಹಾಗೂ ವೈಯಕ್ತಿಕ ಉದ್ದೇಶದ ಪ್ರವಾಸಕ್ಕೆ ಷರತ್ತುಬದ್ಧ ಅನುಮತಿ**

**ಬೆಂಗಳೂರು, ಮೇ.28:** ತೆರಿಗೆ ವಂಚನೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾಮೀನು ಷರತ್ತುಗಳ ಅನ್ವಯ ನಿರ್ಬಂಧ ಎದುರಿಸುತ್ತಿದ್ದ ಉಪಮುಖ್ಯಮಂತ್ರಿ, ಸಚಿವ ಡಿ.ಕೆ. ಶಿವಕುಮಾರ್ ಅವರಿಗೆ ಬೆಂಗಳೂರಿನ ನ್ಯಾಯಾಲಯ ದೊಡ್ಡ ರಿಲೀಫ್ ನೀಡಿದೆ. ಮುಂದಿನ ಎರಡು ವರ್ಷಗಳ ಅವಧಿಗೆ ವಿವಿಧ ದೇಶಗಳಿಗೆ ಅಧಿಕೃತ ಹಾಗೂ ವೈಯಕ್ತಿಕ ಉದ್ಯಮದ ನಿಮಿತ್ತ ಪ್ರವಾಸ ಕೈಗೊಳ್ಳಲು ಕೋರ್ಟ್ ಷರತ್ತುಬದ್ಧ ಅನುಮತಿ ನೀಡಿದೆ.

ಬೆಂಗಳೂರಿನ ಹೆಚ್ಚುವರಿ ಮುಖ್ಯ ಜುಡಿಷಿಯಲ್ ಮ್ಯಾಜಿಸ್ಟ್ರೇಟ್ ನ್ಯಾಯಾಧೀಶ ಕೆ ಎನ್ ಶಿವಕುಮಾರ್, ಈ ಮಹತ್ವದ ಆದೇಶ ಹೊರಡಿಸಿದ್ದು, ಡಿ.ಕೆ.ಶಿವಕುಮಾರ್ ಸಲ್ಲಿಸಿದ್ದ ಅರ್ಜಿಯನ್ನು ಪುರಸ್ಕರಿಸಿದ್ದಾರೆ. ಈ ಆದೇಶದನ್ವಯ ಡಿಕೆ ಶಿವಕುಮಾರ್ ಅಮೆರಿಕ, ಯುರೋಪ್ ದೇಶಗಳು, ಯುಕೆ, ಆಸ್ಟ್ರೇಲಿಯಾ, ರಷ್ಯಾ ಮತ್ತು ಅರಬ್ ರಾಷ್ಟ್ರಗಳಿಗೆ ಮುಂದಿನ 2 ವರ್ಷಗಳ ಅವಧಿಯಲ್ಲಿ ಭೇಟಿ ನೀಡಬಹುದಾಗಿದೆ.

ಪ್ರತಿಯೊಂದು ವಿದೇಶಿ ಪ್ರವಾಸದ ವೇಳಾಪಟ್ಟಿ ಮತ್ತು ಸಂಪೂರ್ಣ ವಿವರಗಳನ್ನು ತನಿಖಾ ಸಂಸ್ಥೆಗೆ ಮುಂಚಿತವಾಗಿಯೇ ಡಿಕೆ ಶಿವಕುಮಾರ್ ಲಿಖಿತ ರೂಪದಲ್ಲಿ ನೀಡಬೇಕು. ನ್ಯಾಯಾಲಯವು ಸೂಚಿಸಿದಾಗಲೆಲ್ಲಾ ಅವರು ವಿಚಾರಣೆಗೆ ಖುದ್ದಾಗಿ ಹಾಜರಾಗಬೇಕು. ಒಂದು ವೇಳೆ ಈ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದರೆ, ಪ್ರವಾಸದ ಅನುಮತಿಯನ್ನು ರದ್ದುಗೊಳಿಸುವಂತೆ ಕೋರಿ ತನಿಖಾ ಸಂಸ್ಥೆ ಅಥವಾ ಪ್ರಾಸಿಕ್ಯೂಷನ್ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಲು ಸ್ವತಂತ್ರವಾಗಿದೆ ಎಂಬ ಷರತ್ತುಗಳನ್ನು ವಿಧಿಸಿ ಕೋರ್ಟ್ ಅನುಮತಿ ನೀಡಿದೆ.

ಡಿ.ಕೆ. ಶಿವಕುಮಾರ್ ಅವರ ಅರ್ಜಿ ಪ್ರಾಮಾಣಿಕ ಹಾಗೂ ನ್ಯಾಯಸಮ್ಮತವಾಗಿದೆ ಎಂದು ಅಭಿಪ್ರಾಯಪಟ್ಟ ನ್ಯಾಯಾಧೀಶರು, ಅರ್ಜಿದಾರರು ತಮ್ಮ ವೈಯಕ್ತಿಕ ಉದ್ಯಮದ ಅಭಿವೃದ್ಧಿಗಾಗಿ ಹಾಗೂ ತಮಗೆ ಹಂಚಿಕೆಯಾಗಿರುವ ಬೆಂಗಳೂರು ಅಭಿವೃದ್ಧಿ ಮತ್ತು ಸಣ್ಣ ನೀರಾವರಿ ಖಾತೆಗಳ ಯೋಜನೆಗಳ ಅಧ್ಯಯನಕ್ಕಾಗಿ ವಿದೇಶಗಳಿಗೆ ಭೇಟಿ ನೀಡುವ ಅಗತ್ಯವಿದೆ. ಈ ಹಿಂದೆಯೂ ಅವರು ದುಬೈ ಸೇರಿದಂತೆ ಹಲವು ದೇಶಗಳಿಗೆ ಕೋರ್ಟ್ ಅನುಮತಿ ಪಡೆದೇ ಭೇಟಿ ನೀಡಿದ್ದರು. 2024ರಲ್ಲೂ ಅವರಿಗೆ ಒಂದು ವರ್ಷದ ಅವಧಿಗೆ ವಿದೇಶ ಪ್ರವಾಸದ ಅನುಮತಿ ನೀಡಲಾಗಿತ್ತು. ಅಲ್ಲದೆ, ಇದೇ ಪ್ರಕರಣದ ಇತರ ಸಹ ಆರೋಪಿಗಳು ಸುಪ್ರೀಂ ಕೋರ್ಟ್‌ನಿಂದ ವಿಚಾರಣೆಗೆ ತಡೆಯಾಜ್ಞೆ ತಂದಿರುವುದರಿಂದ, ಸದ್ಯಕ್ಕೆ ವಿಚಾರಣೆಗೆ ಇವರ ದೈಹಿಕ ಹಾಜರಾತಿ ಅತ್ಯಗತ್ಯವೇನಲ್ಲ? ಎಂದು ಕೋರ್ಟ್ ತನ್ನ ಆದೇಶದಲ್ಲಿ ಉಲ್ಲೇಖಿಸಿದೆ.

2017ರ ಆ.2ರಂದು ಬೆಂಗಳೂರು–ಮೈಸೂರು ಹೆದ್ದಾರಿಯ ಈಗಲ್ಟನ್ ಗಾಲ್ಫ್ ರೆಸಾರ್ಟ್ ಸೇರಿದಂತೆ ಡಿಕೆ ಶಿವಕುಮಾರ್ ಒಡೆತನದ ನಿವಾಸಗಳ ಮೇಲೆ ಆದಾಯ ತೆರಿಗೆ (ಐಟಿ) ಇಲಾಖೆ ದಾಳಿ ನಡೆಸಿತ್ತು. ಈ ವೇಳೆ ಸುಮಾರು ರೂ.8.83 ಕೋಟಿ ನಗದು ವಶಪಡಿಸಿಕೊಳ್ಳಲಾಗಿತ್ತು ಮತ್ತು ಪ್ರಮುಖ ಸಾಕ್ಷ್ಯಗಳನ್ನು ನಾಶಪಡಿಸಲು ಯತ್ನಿಸಲಾಗಿದೆ ಎಂದು ಐಟಿ ಇಲಾಖೆ ಆರೋಪಿಸಿತ್ತು. ಈ ದಾಳಿಯ ಆಧಾರದ ಮೇಲೆ ಡಿ.ಕೆ. ಶಿವಕುಮಾರ್, ಸಚಿನ್ ನಾರಾಯಣ್, ಸುನಿಲ್ ಕುಮಾರ್ ಶರ್ಮಾ, ಆಂಜನೇಯ ಹನುಮಂತಯ್ಯ ಮತ್ತು ಎನ್. ರಾಜೇಂದ್ರ ಅವರ ವಿರುದ್ಧ ಐಟಿ ಕಾಯ್ದೆ ಹಾಗೂ ಐಪಿಸಿ ಸೆಕ್ಷನ್‌ಗಳ ಅಡಿಯಲ್ಲಿ ತೆರಿಗೆ ವಂಚನೆ ಪ್ರಕರಣ ದಾಖಲಾಗಿತ್ತು. ಈ ಪ್ರಕರಣದಲ್ಲಿ ಜಾಮೀನು ಪಡೆಯುವಾಗ, ಕೋರ್ಟ್ ಅನುಮತಿ ಇಲ್ಲದೆ ದೇಶ ಬಿಟ್ಟು ಹೋಗಬಾರದು ಎಂಬ ಷರತ್ತು ವಿಧಿಸಲಾಗಿತ್ತು.

# ಹೌಸ್‌ಪಾರ್ಟಿಯಲ್ಲಿ ಮದ್ಯ ಬಳಕೆ ಪರ್ಮಿಟ್ ಶುಲ್ಕ ದುಪ್ಪಟ್ಟು ಸರ್ಕಾರದಿಂದ ಅಧಿಕೃತ ಆದೇಶ, ಪ್ರತಿದಿನಕ್ಕೆ 20 ಸಾವಿರ ರೂ.ಗೆ ಏರಿಕೆ

**ಬೆಂಗಳೂರು,ಮೇ.28:** ರಾಜ್ಯದಲ್ಲಿ ಬರ್ತ್ ಡೇ, ಮದುವೆ ಹಾಗೂ ಗೃಹಪ್ರವೇಶದಂತಹ ಶುಭ ಕಾರ್ಯಕ್ರಮಗಳ ಸಂದರ್ಭದಲ್ಲಿ ಮನೆ ಅಥವಾ ಖಾಸಗಿ ಜಾಗಗಳಲ್ಲಿ ಹೌಸ್ ಪಾರ್ಟಿ ಆಯೋಜಿಸುವವರಿಗೆ ಕರ್ನಾಟಕ ಸರ್ಕಾರ ಭಾರಿ ಆಘಾತ ನೀಡಿದೆ.



ಮದ್ಯದ ಪರ್ಮಿಟ್ ಶುಲ್ಕವನ್ನು ದುಪ್ಪಟ್ಟು ಮಾಡಲಾಗಿದೆ. ಖಾಸಗಿ ಪಾರ್ಟಿಗಳಲ್ಲಿ ಅತಿಥಿಗಳಿಗೆ ಮದ್ಯ ಸರಬರಾಜು ಮಾಡಲು ಅಬಕಾರಿ ಇಲಾಖೆಯಿಂದ ಪಡೆಯಬೇಕಾದ ತಾತ್ಕಾಲಿಕ ಮದ್ಯದ ಪರ್ಮಿಟ್ (ಸಿಎಲ್ 5 ಲೈಸೆನ್?ಸ) ಶುಲ್ಕವನ್ನು ಸರ್ಕಾರ ಅಧಿಕೃತವಾಗಿ ದುಪ್ಪಟ್ಟುಗೊಳಿಸಿದೆ. ಇತ್ತೀಚಿನ ಆರ್ಥಿಕ ಇಲಾಖೆಯ ಹೊಸ ನಿಯಮಗಳ ಅನ್ವಯ ವಾಣಿಜ್ಯೇತರ ಮತ್ತು ವಾಣಿಜ್ಯ ಕಾರ್ಯಕ್ರಮಗಳೆರಡರ ಮದ್ಯದ ಪರವಾನಗಿ ದರಗಳನ್ನು ಗಣನೀಯವಾಗಿ ಹೆಚ್ಚಿಸಲಾಗಿದೆ. ಇಲ್ಲಿಯವರೆಗೆ ಹೌಸ್ ಪಾರ್ಟಿಗಳಿಗೆ ಪ್ರತಿದಿನಕ್ಕೆ 11,500 ರೂಪಾಯಿ ಇದ್ದ ಸಾಮಾನ್ಯ ಪರ್ಮಿಟ್ ಶುಲ್ಕವನ್ನು ಈಗ 20,000 ರೂಪಾಯಿಗೆ ಏರಿಕೆ ಮಾಡಲಾಗಿದೆ.

ಈ ನಿಗದಿತ ದರದಲ್ಲಿ ಅನುಮತಿ ಪಡೆಯಲು ಪಾರ್ಟಿ ನಡೆಯುವ ಕನಿಷ್ಠ 7 ದಿನಗಳ ಮುಂಚಿತವಾಗಿಯೇ ಅರ್ಜಿ ಸಲ್ಲಿಸಬೇಕಾಗುತ್ತದೆ. ಒಂದು ವೇಳೆ ಕಾರ್ಯಕ್ರಮಕ್ಕೆ ಕೇವಲ 24 ಗಂಟೆ ಮುಂಚಿತವಾಗಿ ತುರ್ತಾಗಿ ಅನುಮತಿ ಬೇಕಾದಲ್ಲಿ ಸಾರ್ವಜನಿಕರು ತತ್ಕಾಲ್ ಯೋಜನೆಯಡಿ ಪ್ರತಿದಿನಕ್ಕೆ ಬರೋಬ್ಬರಿ 40,000 ರೂಪಾಯಿ ಪಾವತಿಸಬೇಕಾಗುತ್ತದೆ ಎಂದು ಅಬಕಾರಿ ಇಲಾಖೆ ತಿಳಿಸಿದೆ.

ಕೇವಲ ಕೌಟುಂಬಿಕ ಕಾರ್ಯಕ್ರಮಗಳಷ್ಟೇ ಅಲ್ಲದೆ ಸಂಗೀತ ಕಚೇರಿಗಳು, ಸಾಂಸ್ಕೃತಿಕ ಕಾರ್ಯಕ್ರಮಗಳು, ಕಾರ್ಪೊರೇಟ್ ಈವೆಂಟ್‌ಗಳು ಮತ್ತು ಹೊಸ ವರ್ಷದ ಆಚರಣೆಗಳಂತಹ ವಾಣಿಜ್ಯ ಪಾರ್ಟಿಗಳಿಗೂ ಶುಲ್ಕವನ್ನು ಲಕ್ಷಗಳಲ್ಲಿ ನಿಗದಿಪಡಿಸಲಾಗಿದೆ ಇಂತಹ ಕಮರ್ಷಿಯಲ್ ಪಾರ್ಟಿಗಳಿಗೆ ಪ್ರತಿದಿನದ ಪರವಾನಗಿ ಶುಲ್ಕವನ್ನು 75,000 ರೂಪಾಯಿಗೆ ಹೆಚ್ಚಿಸಲಾಗಿದ್ದು, ತುರ್ತು ಅನುಮತಿಗಾಗಿ ತತ್ಕಾಲ್ ವ್ಯವಸ್ಥೆಯಡಿ ದಿನಕ್ಕೆ 1.5 ಲಕ್ಷ ರೂಪಾಯಿ ಶುಲ್ಕ ನಿಗದಿ ಮಾಡಲಾಗಿದೆ.

ಸಾರ್ವಜನಿಕ ಸ್ಥಳಗಳಲ್ಲಿ ನಡೆಯುವ ವಾಣಿಜ್ಯೇತರ ಕಾರ್ಯಕ್ರಮಗಳಿಗೂ ಇನ್ನು ಮುಂದೆ ಈ ನಿಯಮ ಅನ್ವಯವಾಗಲಿದೆ. ಆದರೆ ಮನೆಯಲ್ಲಿ ಸಣ್ಣ ಪ್ರಮಾಣದ ಪಾರ್ಟಿ ಹಮಿಕೊಳ್ಳುವ ಸಾಮಾನ್ಯ ಜನರಿಗೆ ಅಬಕಾರಿ ಇಲಾಖೆ ಒಂದು ಸಣ್ಣ ವಿನಾಯಿತಿ ನೀಡಿದೆ. ಖಾಸಗಿ ಪಾರ್ಟಿಗಳಲ್ಲಿ 9 ಲೀಟರ್‌ವರೆಗಿನ ಭಾರತೀಯ ತಯಾರಿಕೆಯ ವಿದೇಶಿ ಮದ್ಯ ಹಾಗೂ 18 ಲೀಟರ್‌ವರೆಗೆ ಬಿಯರ್ ಅಥವಾ ವೈನ್ ಬಳಸಲು ಯಾವುದೇ ರೀತಿಯ ಅಬಕಾರಿ ಪರವಾನಗಿ ಪಡೆಯುವ ಅಗತ್ಯವಿಲ್ಲ ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ.

ಆದರೆ ನಿಗದಿಪಡಿಸಿದ ಈ ಮಿತಿಗಿಂತ ಒಂದು ಲೀಟರ್ ಮದ್ಯ ಹೆಚ್ಚಾದರೂ ಕಡ್ಡಾಯವಾಗಿ ಸಿಎಲ್–5 ಲೈಸೆನ್?ಸ ಪಡೆಯಲೇಬೇಕಾಗುತ್ತದೆ. ರಾಜ್ಯ ಸರ್ಕಾರದ ಆದಾಯ ಸಂಗ್ರಹಣೆಯನ್ನು ಹೆಚ್ಚಿಸುವ ಉದ್ದೇಶದಿಂದ ಈ ದರ ಪರಿಷ್ಕರಣೆ ಮಾಡಲಾಗಿದ್ದು, ವೀಕೆಂಡ್ ಪಾರ್ಟಿ ಮೂಡ್‌ನಲ್ಲಿದ್ದ ರಾಜಧಾನಿ ಮಂದಿಗೆ ಸರ್ಕಾರದ ಈ ಹೊಸ ಆದೇಶ ಭಾರಿ ನಿರಾಸೆ ಮೂಡಿಸಿದೆ.

**ವಾಣಿಜ್ಯ ಕಾರ್ಯಕ್ರಮಗಳಿಗೆ ಲಕ್ಷಗಳಲ್ಲಿ ಶುಲ್ಕ :**

ಸಂಗೀತ ಕಚೇರಿಗಳು, ಸಾಂಸ್ಕೃತಿಕ ಕಾರ್ಯಕ್ರಮಗಳು, ಪ್ರದರ್ಶನಗಳು, ಕಾರ್ಪೊರೇಟ್ ಈವೆಂಟ್‌ಗಳು ಮತ್ತು ಹೊಸ ವರ್ಷದ ಆಚರಣೆಗಳಂತಹ ವಾಣಿಜ್ಯ ಪಾರ್ಟಿಗಳಿಗೆ ಶುಲ್ಕವನ್ನು ಭಾರಿ ಪ್ರಮಾಣದಲ್ಲಿ ಏರಿಸಲಾಗಿದ್ದು, ಪ್ರತಿದಿನಕ್ಕೆ 75,000 ರೂ. ನಿಗದಿಪಡಿಸಲಾಗಿದೆ. ತುರ್ತು ಅನುಮತಿಗಾಗಿ ಪ್ರತಿದಿನಕ್ಕೆ 1.5 ಲಕ್ಷ ರೂ. ದಂಡ ತೆರಬೇಕಾಗುತ್ತದೆ.

**9 ಲೀಟರ್‌ವರೆಗಿನ ಮದ್ಯಕ್ಕೆ ಲೈಸೆನ್ಸ್ ಬೇಡ:**

ಆದರೆ, ಈ ಮಿತಿ ದಾಟಿದರೆ ಕಡ್ಡಾಯವಾಗಿ ಎಐ–5 ಲೈಸೆನ್ಸ್ ಪಡೆಯಲೇಬೇಕು. ರಾಜ್ಯ ಸರ್ಕಾರದ ಆದಾಯ ಸಂಗ್ರಹಣೆಯನ್ನು ಹೆಚ್ಚಿಸುವ ಉದ್ದೇಶದಿಂದ ಈ ದರ ಪರಿಷ್ಕರಣೆ ಮಾಡಲಾಗಿದೆ ಎಂದು ಹೇಳಲಾಗುತ್ತಿದ್ದು, ಸಾರ್ವಜನಿಕ ಸ್ಥಳಗಳಲ್ಲಿ ನಡೆಯುವ ವಾಣಿಜ್ಯೇತರ ಕಾರ್ಯಕ್ರಮಗಳಿಗೂ ಇನ್ಮುಂದೆ ಕಡ್ಡಾಯವಾಗಿ ಅಐ–5 ಲೈಸೆನ್ಸ್ ಪಡೆಯಬೇಕಾಗುತ್ತದೆ ಎಂದು ಅಬಕಾರಿ ಆಯುಕ್ತ ವೆಂಕಟೇಶ್ ಕುಮಾರ್ ತಿಳಿಸಿದ್ದಾರೆ. ಒಟ್ಟಿನಲ್ಲಿ ವೀಕೆಂಡ್ ಪಾರ್ಟಿ ಮೂಡ್‌ನಲ್ಲಿದ್ದ ಸಿಲಿಕಾನ್ ಸಿಟಿ ಮಂದಿಗೆ ಸರ್ಕಾರದ ಈ ಹೊಸ ಆದೇಶ ಭಾರಿ ಶಾಕ್ ನೀಡಿದೆ.

# ಬೌರಿಂಗ್ ಆಸ್ಪತ್ರೆ ಕಾಂಪೌಂಡ್ ಕುಸಿತ ಪ್ರಕರಣ ಇಂಜಿನಿಯರ್ ಅಮಾನತು ಆದೇಶ ರದ್ದು

**ಬೆಂಗಳೂರು, ಮೇ 28:** ಏಳು ಜನರ ಸಾವಿಗೆ ಕಾರಣವಾಗಿದ್ದ ಬೌರಿಂಗ್ ಆಸ್ಪತ್ರೆ ಕಾಂಪೌಂಡ್ ಗೋಡೆ ಕುಸಿತ ಪ್ರಕರಣದಲ್ಲಿ ಅಮಾನತುಗೊಂಡಿದ್ದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಾರ್ಯನಿರ್ವಾಹಕ ಎಂಜಿನಿಯರ್ ಎಂಬಿ.ನಾಗರಾಜ್ ಅವರ ಅಮಾನತು ಆದೇಶವನ್ನು ಹೈಕೋರ್ಟ್ ರದ್ದುಗೊಳಿಸಿದೆ. ಈ ಸಂಬಂಧ ಸಲ್ಲಿಕೆಯಾಗಿದ್ದ ಅರ್ಜಿಯನ್ನು ವಿಚಾರಣೆ ನಡೆಸಿದ ಕರ್ನಾಟಕ ಹೈಕೋರ್ಟ್‌ನ ರಜೆ ಪೀಠದ ನ್ಯಾಯಮೂರ್ತಿಗಳಾದ ಸೂರಜ್ ಗೋವಿಂದರಾಜ್ ಮತ್ತು ನ್ಯಾ.ಕೆ. ಮನ್ಮಥರಾವ್ ಅವರು, ತನಿಖಾ ಸಮಿತಿಗಳ ವರದಿ ಬರುವ ಮುನ್ನವೇ ಅಧಿಕಾರಿಯನ್ನು ಅಮಾನತುಗೊಳಿಸಿರುವುದು ಸಮಂಜಸವಲ್ಲ ಎಂದು ಅಭಿಪ್ರಾಯ ಪಟ್ಟರು.



ಈ ಪ್ರಕರಣದ ಕುರಿತು ಈಗಾಗಲೇ ಎರಡು ಸಮಿತಿಗಳನ್ನು ರಚಿಸಲಾಗಿದೆ. ಆ ಸಮಿತಿಗಳು ತಮ್ಮ ವರದಿಯಲ್ಲಿ ಅರ್ಜಿದಾರರ ಕರ್ತವ್ಯಲೋಪವಿದೆಯೇ ಎಂಬುದನ್ನು ಸ್ಪಷ್ಟಪಡಿಸಬೇಕು. ವರದಿಯಲ್ಲಿ ತಪ್ಪು ಸಾಬೀತಾದರೆ ಸರ್ಕಾರಕ್ಕೆ ಸಿಸಿಎ ನಿಯಮಗಳ ಅಡಿಯಲ್ಲಿ ಕ್ರಮ ಕೈಗೊಳ್ಳುವ ಅಧಿಕಾರ ಇದೆ ಎಂದು ತಿಳಿಸಿದೆ.

ಅರ್ಜಿದಾರರ ಪರ ವಕೀಲರು, ಬೌರಿಂಗ್ ಆಸ್ಪತ್ರೆ ಗೋಡೆ ಕುಸಿತ ಪ್ರಕರಣದ ತನಿಖೆಗೆ ಬೆಂಗಳೂರು ನಗರ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಪಿಡಬ್ಲ್ಯುಡಿ ಈಗಾಗಲೇ ತನಿಖಾ ತಂಡ ರಚಿಸಿದೆ ಎಂದು ನ್ಯಾಯಾಲಯಕ್ಕೆ ಮಾಹಿತಿ ನೀಡಿದರು. ಅಲ್ಲದೆ, ಪರಿಶೀಲನೆಗಾಗಿ ಪಿಡಬ್ಲ್ಯುಡಿ ಅಧಿಕಾರಿಗಳ ಮತ್ತೊಂದು ಸಮಿತಿ ಯನ್ನೂ ರಚಿಸಲಾಗಿದ್ದು, ಅದು ವಾರದಲ್ಲಿ ವರದಿ ಸಲ್ಲಿಸಬೇಕಿದೆ ಎಂದರು. ಸಮಿತಿಗಳಿಂದ ಯಾವುದೇ ಶಿಫಾರಸು ಬರುವ ಮುನ್ನವೇ ಅಮಾನತು ಆದೇಶ ಹೊರಡಿಸಲಾಗಿದ್ದು, ಅಮಾನತಿಗೆ ಅಗತ್ಯವಾದ ಪ್ರಾಥಮಿಕ ಸಾಕ್ಷ್ಯಾಧಾರಗಳೂ ಇಲ್ಲ ಎಂದು ವಾದಿಸಿದರು.ಇದಕ್ಕೆ ಪ್ರತಿಯಾಗಿ ಸರ್ಕಾರದ ಪರ ವಕೀಲರು, ಘಟನಾ ಸ್ಥಳದ ಹೊಣೆಗಾರ ಅಧಿಕಾರಿಯಾಗಿದ್ದ ಕಾರಣ ಕಾರ್ಯನಿರ್ವಾಹಕ ಎಂಜಿನಿಯರ್ ವಿರುದ್ಧ ಪ್ರಾಥಮಿಕ ಹೊಣೆಗಾರಿಕೆ ಕಂಡುಬರುತ್ತದೆ. ಸಿಸಿಎ ನಿಯಮಗಳಡಿ ಅಮಾನತು ಕ್ರಮಕ್ಕೈಗೊಳ್ಳಲಾಗಿದೆ ನ್ಯಾಯಾಲಯಕ್ಕೆ ನ್ಯಾಯಾಲಯವು ತನಿಖಾ ವರದಿ ಬರುವವರೆಗೆ ಅಮಾನತು ಆದೇಶ ಮುಂದುವರಿಸುವ ಅಗತ್ಯವಿಲ್ಲ ಎಂದು ಹೇಳಿ, ಮೇ.1ರಂದು ಹೊರಡಿಸಲಾಗಿದ್ದ ಅಮಾನತು ಆದೇಶವನ್ನು ರದ್ದುಪಡಿಸಿದೆ.

# ಮೇ 31ರವರೆಗೆ ಗುಡುಗು, ಸಿಡಿಲು ಸಹಿತ ಭಾರಿ ಮಳೆ ಮುನ್ನೆಚ್ಚರಿಕೆ

**ಬೆಂಗಳೂರು, ಮೇ 28:** ರಾಜ್ಯದಲ್ಲಿ ದಿನದ ಅವಧಿಯಲ್ಲಿ ಬಿಸಿಲಿನ ಬೇಗೆ ಮುಂದುವರಿದಿದ್ದರೂ, ಮಧ್ಯಾಹ್ನದ ನಂತರ ವಾತಾವರಣದಲ್ಲಿ ದಿಢೀರ್ ಬದಲಾವಣೆಯಾಗುತ್ತಿದೆ. ಭಾರತೀಯ ಹವಾಮಾನ ಇಲಾಖೆ ಇಂದು ನೀಡಿರುವ ವರದಿಗಳ ಪ್ರಕಾರ, ಮುಂದಿನ 7 ದಿನಗಳ ಅಧಿಕೃತ ಮುನ್ಸೂಚನೆಯ ಪ್ರಕಾರ, ರಾಜ್ಯದಾದ್ಯಂತ ಮೇ 31 ರವರೆಗೆ ಭಾರಿ ಗುಡುಗು, ಸಿಡಿಲು ಹಾಗೂ ಬಿರುಗಾಳಿ ಸಹಿತ ಮಳೆಯಾಗುವ ಮುನ್ನೆಚ್ಚರಿಕೆ ನೀಡಲಾಗಿದೆ.



ಮೇ 28 : ಅತ್ಯಂತ ಅಪಾಯಕಾರಿ ಹವಾಮಾನ ಇರಲಿದ್ದು, ಇಲಾಖೆಯು ಆರೆಂಜ್ ಅಲರ್ಟ್ ಘೋಷಿಸಿದೆ. ಭಾರಿ ಗುಡುಗು, ಮಿಂಚು ಹಾಗೂ ಚಂಡಮಾರುತದ ಮಾದರಿ ತೀವ್ರ ಗಾಳಿ ಬೀಸಲಿದೆ. ಮೇ 29 ರಿಂದ ಮೇ 31: ಮುಂದಿನ ಮೂರು ದಿನಗಳ ಕಾಲ ಈ ವಲಯಕ್ಕೆ ಯೆಲ್ಲೋ ಅಲರ್ಟ್ ನೀಡಲಾಗಿದ್ದು, ಅಲ್ಲಲ್ಲಿ ಸಾಧಾರಣದಿಂದ ಭಾರಿ ಮಳೆಯಾಗುವ ಸಾಧ್ಯತೆಯಿದೆ.

ಜೂನ್ 1 ರಿಂದ ಜೂನ್ 3: ಯಾವುದೇ ಹವಾಮಾನ ಎಚ್ಚರಿಕೆಗಳು ಇರುವುದಿಲ್ಲ. ಮೇ 28 ಮತ್ತು ಮೇ 29 (ಇಂದು ಮತ್ತು ನಾಳೆ): ಉತ್ತರ ಕರ್ನಾಟಕದ ಜಿಲ್ಲೆಗಳಲ್ಲಿ ಹವಾಮಾನ ತೀವ್ರಗೊಳ್ಳಲಿದ್ದು, ಆರಂಭದ ಎರಡು ದಿನಗಳ ಕಾಲ ಆರೆಂಜ್ ಅಲರ್ಟ್ ಜಾರಿಯಲ್ಲಿರಲಿದೆ. ತೀವ್ರ ಸಿಡಿಲು ಮತ್ತು ಬಿರುಗಾಳಿ ಅಪ್ಪಳಿಸುವ ಸಾಧ್ಯತೆಯಿದೆ.

ಮೇ 30 ಮತ್ತು ಮೇ 31: ವಾತಾವರಣದ ತೀವ್ರತೆ ಕೊಂಚ ತಗ್ಗಲಿದ್ದು, ಯೆಲ್ಲೋ ಅಲರ್ಟ್ ಇರಲಿದೆ. ಜೂನ್ 1 ರಿಂದ ಜೂನ್ 3: ಮಳೆಯ ಅಬ್ಬರ ಸಂಪೂರ್ಣ ಶಾಂತವಾಗಲಿದೆ. ಮೇ 28 ರಿಂದ ಮೇ 31: ಕರಾವಳಿಯ ಜಿಲ್ಲೆಗಳಲ್ಲಿ ಮುಂದಿನ ನಾಲ್ಕು ದಿನಗಳ ಕಾಲ ನಿರಂತರವಾಗಿ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

ಜೂ.1 ರಿಂದ ಜೂ3: ಹವಾಮಾನ ಸಾಮಾನ್ಯ ಸ್ಥಿತಿಗೆ ಮರಳಲಿದ್ದು, ಯಾವುದೇ ಮುನ್ನೆಚ್ಚರಿಕೆ ಇರುವುದಿಲ್ಲ. ಮಧ್ಯಾಹ್ನದ ನಂತರ ಮೋಡ ಕವಿದ ವಾತಾವರಣ ಉಂಟಾಗಿ ಕ್ಷಣಾರ್ಧದಲ್ಲಿ ಭಾರಿ ಗಾಳಿ ಮಳೆ ಬರುವ ಸಾಧ್ಯತೆ ಇರು ವುದರಿಂದ, ಸಾರ್ವಜನಿಕರು ಸಿಡಿಲಿನ ಸಮಯದಲ್ಲಿ ಸುರಕ್ಷಿತ ಕಟ್ಟಡಗಳಲ್ಲಿ ಆಶ್ರಯ ಪಡೆಯಬೇಕು. ರೈತರು ಕಟಾವು ಮಾಡಿದ ಬೆಳೆಗಳನ್ನು ಸುರಕ್ಷಿತವಾಗಿ ಮುಚ್ಚಿಡಲು ಸೂಚಿಸಲಾಗಿದೆ.



ಬೆಂಗಳೂರಿನ ಮೈಸೂರು ರಸ್ತೆಯ ಈದ್ಗಾ ಮೈದಾನದಲ್ಲಿ ಗುರುವಾರ ಬಕ್ರೀದ್ ಪ್ರಯುಕ್ತ ಮುಸ್ಲಿಮರು ಪ್ರಾರ್ಥನೆ ಸಲ್ಲಿಸಿದರು.

# ವಿಶ್ವೇಶ್ವರಯ ಮ್ಯೂಸಿಯಂ ಆವರಣದಲ್ಲಿ ಹೈಕೋರ್ಟ್ ಆದೇಶ ಉಲ್ಲಂಘಿಸಿ ಕಟ್ಟಡ ನಿರ್ಮಾಣ: ಕಬ್ಬನ್‌ಪಾರ್ಕ್ ವಾಕರ್ಸ್ ಅಸೋಸಿಯೇಷನ್ ಖಂಡನೆ

**ಬೆಂಗಳೂರು, ಮೇ 28:** ಕಬ್ಬನ್ ಪಾರ್ಕ್‌ನ ವಲಯದಲ್ಲಿ ರಾಜ್ಯ ಸರ್ಕಾರದ ಉದ್ಯಾನಗಳ (ಸಂರಕ್ಷಣೆ) ಕಾಯ್ದೆಯನ್ನು ನಿರಂತರವಾಗಿ ಮತ್ತು ಬಹಿರಂಗವಾಗಿ ಉಲ್ಲಂಘಿಸುತ್ತಿದ್ದು, ಹೈಕೋರ್ಟ್ ಆದೇಶಕ್ಕೆ ವಿರುದ್ಧವಾಗಿ ವಿಶ್ವೇಶ್ವರಯ ಮ್ಯೂಸಿಯಂ ಆವರಣದಲ್ಲಿ ಕಟ್ಟಡ ನಿರ್ಮಾಣ ಕಾರ್ಯ ನಡೆಯುತ್ತಿದೆ. ಕೂಡಲೇ ಇದನ್ನು ಸ್ಥಗಿತಗೊಳಿಸಬೇಕು ಎಂದು ಕಬ್ಬನ್ ಪಾರ್ಕ್ ವಾಕರ್ಸ್ ಅಸೋಸಿಯೇಷನ್ ಅಧ್ಯಕ್ಷ ಎಸ್. ಉಮೇಶ್ ಒತ್ತಾಯಿಸಿದ್ದಾರೆ.




ಅಕ್ರಮ ನಿರ್ಮಾಣ ಮತ್ತು ನಿಯಂತ್ರಣರಹಿತ ವಾಣಿಜ್ಯೀಕರಣ ದಿಂದ ಕಬ್ಬನ್ ಪಾರ್ಕ್‌ನ ಪರಿಸರಕ್ಕೆ ಭಾರಿ ಅಪಾಯ ಎದುರಾಗಿದೆ. ಕಾನೂನು ಮತ್ತು ಪರಿಸರ ಸಂರಕ್ಷಣೆಯನ್ನು ಪರಿಗಣಿಸದೇ ನಿರ್ಮಾಣ ಕಾರ್ಯ ಕೈಗೆತ್ತಿಕೊಳ್ಳಲಾಗಿದೆ. ಕಾನೂನು ಪರಿಪಾಲನೆ ಮಾಡಬೇಕಾದ ರಾಜ್ಯ ಪುರಾತತ್ವ ಇಲಾಖೆ ಪಾರ್ಕ್ ನ ತನ್ನ ಆವರಣದ ವ್ಯಾಪ್ತಿಯೊಳಗೆ ಶಾಶ್ವತ ಕಟ್ಟಡ ನಿರ್ಮಿಸುತ್ತಿದ್ದು, ಇದು ಉದ್ಯಾನ ಕಾಯ್ದೆಯ ನೇರ ಉಲ್ಲಂಘನೆಯಾಗಿದೆ. ಈ ಪ್ರಮುಖ ಹಸಿರು ಪ್ರದೇಶದಲ್ಲಿ ಹೊಸ ಕಾಂಕ್ರಿಟ್ ನಿರ್ಮಾಣವನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ ಎಂದು ಹೇಳಿದ್ದಾರೆ.

ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಎಸ್. ಉಮೇಶ್ ಅವರು, ತೋಟಗಾರಿಕೆ ಇಲಾಖೆ ಇಂತಹ ಅಕ್ರಮ ನಿರ್ಮಾಣಕ್ಕೆ ಸಹಕಾರ ನೀಡುತ್ತಿದೆ. ಕಬ್ಬನ್ ಪಾರ್ಕ್ನ ಸಂರಕ್ಷಣೆ ಮತ್ತು ರಕ್ಷಣೆಯ ಹೊಣೆ ಹೊತ್ತಿರುವ ತೋಟಗಾರಿಕೆ ಇಲಾಖೆ ಈ ಅಕ್ರಮ ನಿರ್ಮಾಣದ ಬಗ್ಗೆ ಕಣ್ಣುಮುಚ್ಚಿ ಕುಳಿತಿದೆ. ನಿಯಂತ್ರಣ ಕ್ರಮ ಕೈಗೊಳ್ಳದೇ ಸಂಪೂರ್ಣವಾಗಿ ನಿರ್ಲಕ್ಷ್ಯವಹಿಸಿದೆ ಎಂದು ಹೇಳಿದ್ದಾರೆ.

ತೋಟಗಾರಿಕೆ ಇಲಾಖೆಯ ಕೆಲವು ಭ್ರಷ್ಟ ಅಧಿಕಾರಿಗಳು ಪಾರ್ಕ್‌ನ ಹಿತಾಸಕ್ತಿಗೆ ವಿರುದ್ಧವಾಗಿ ಕಾರ್ಯನಿರ್ವಹಿಸುತ್ತಿದ್ದು, ಪರಿಸರ ಸಂರಕ್ಷಣೆಗೆ ಬದಲಾಗಿ ಸ್ವಾರ್ಥಪರ ಹಿತಾಸಕ್ತಿಗಳಿಗೆ ಆದ್ಯತೆ ನೀಡುತ್ತಿದ್ದಾರೆ. ಪರಿಸರ ಹಾಟ್‌ಸ್ಪಾಟ್ ಅನ್ನು ವಾಣಿಜ್ಯ ಕೇಂದ್ರವನ್ನಾಗಿ ಪರಿವರ್ತನೆ ಮಾಡಲಾಗಿದೆ. ಕಬ್ಬನ್ ಪಾರ್ಕ್ ಅನ್ನು ಕ್ರಮಬದ್ಧವಾಗಿ ಒಂದು ಸ್ವಚ್ಛ ಪರಿಸರ ವಲಯದಿಂದ ಅಸ್ತವ್ಯಸ್ತ ವಾಣಿಜ್ಯ ಕೇಂದ್ರವನ್ನಾಗಿ ಪರಿವರ್ತಿಸಲಾಗುತ್ತಿದೆ. ಕಾಂಕ್ರೀಟ್ ಮತ್ತು ವಾಣಿಜ್ಯ ಚಟುವಟಿಕೆಗಳಿಂದ ಪಾರ್ಕ್‌ನಲ್ಲಿ ಉಸಿರು ಕಟ್ಟುವ ವಾತಾವರಣ ನಿರ್ಮಾಣವಾಗಿದೆ.

ಪಾರ್ಕ್ ಆವರಣದಲ್ಲಿ ಅನಧಿಕೃತ ಅಂಗಡಿಗಳು ಹೆಚ್ಚಾಗುತ್ತಿವೆ. ಇತ್ತೀಚೆಗೆ ಆಯೋಜಿಸಲಾದ ಭಾರೀ ಮಾವಿನ ಮೇಳದಿಂದ ಅಪಾರ ಪ್ರಮಾಣದ ಕಸ, ಶಬ್ದ ಹಾಗೂ ಜನಸಂದಣಿ ಉಂಟಾಗಿ ಸ್ಥಳೀಯ ಸೂಕ್ಷ್ಮ ಪರಿಸರ ವ್ಯವಸ್ಥೆಗೆ ತೀವ್ರ ಹಾನಿಯಾಗಿದೆ. ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಕಬ್ಬನ್ ಪಾರ್ಕ್ ಅನ್ನು ಯಾವುದೇ ವಾಣಿಜ್ಯ ಉದ್ದೇಶಕ್ಕೆ ಬಳಸುವುದಿಲ್ಲ ಎಂದು ಭರವಸೆ ನೀಡಿದ್ದರು. ಆದರೆ ಅವರ ಕಣ್ಣಳತೆಯ ದೂರದಲ್ಲಿ ಇಂತಹ ಲೋಪಗಳು ಜರುಗುತ್ತಿವೆ ಎಂದು ಎಸ್. ಉಮೇಶ್ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಪ್ರಮುಖ ಶ್ವಾಸಕೋಶವಾಗಿರುವ ಕಬ್ಬನ್ ಪಾರ್ಕ್ ನಾಶವಾಗಲು ಬಿಡುವುದಿಲ್ಲ. ಪುರಾತತ್ವ ಇಲಾಖೆ ತಕ್ಷಣವೇ ನಿರ್ಮಾಣ ಕಾರ್ಯವನ್ನು ನಿಲ್ಲಿಸಿ, ಈಗಾಗಲೇ ನಿರ್ಮಿಸಿರುವ ಭಾಗವನ್ನು ತೆರವುಗೊಳಿಸಬೇಕು. ಈ ಉಲ್ಲಂಘನೆಗಳಿಗೆ ಸಹಕಾರ ನೀಡಿರುವ ತೋಟಗಾರಿಕೆ ಇಲಾಖೆಯ ಭ್ರಷ್ಟ ಅಧಿಕಾರಿಗಳ ವಿರುದ್ಧ ಲೋಕಾಯುಕ್ತರು ಕಟ್ಟುನಿಟ್ಟಿನ ತನಿಖೆ ಆರಂಭಿಸಬೇಕು. ಕರ್ತವ್ಯ ಉಲ್ಲಂಘನೆ ಮತ್ತು ನಂಬಿಕೆ ದ್ರೋಹ ಎಸಗಿರುವ ಸಂಬಂಧಿತ ಅಧಿಕಾರಿಗಳ ವಿರುದ್ಧ ವೈಯಕ್ತಿಕವಾಗಿ ಕ್ರಿಮಿನಲ್ ಪ್ರಕರಣ ದಾಖಲಿಸಲು ಅಸೋಸಿಯೇಷನ್ ಸಿದ್ಧತೆ ನಡೆಸುತ್ತಿದೆ. ಕಬ್ಬನ್ ಪಾರ್ಕ್ ಅನ್ನು ಭವಿಷ್ಯದ ಪೀಳಿಗೆಗಳಿಗಾಗಿ ಉಳಿಸಲು ಈ ವಾಣಿಜ್ಯ ದಾಳಿಯ ವಿರುದ್ಧ ಹೋರಾಟದಲ್ಲಿ ಬೆಂಗಳೂರು ನಾಗರಿಕರು ಮತ್ತು ಪರಿಸರ ಹೋರಾಟಗಾರರು ಕೈಜೋಡಿಸಬೇಕು ಎಂದು ಎಸ್. ಉಮೇಶ್ ಮನವಿ ಮಾಡಿದ್ದಾರೆ.

# ರಾಜ್ಯಾದ್ಯಂತ ತ್ಯಾಗ ಬಲಿದಾನದ ಸಂಕೇತವಾದ ಬಕ್ರೀದ್ ಆಚರಣೆ

**ಬೆಂಗಳೂರು, ಮೇ. 28:** ರಾಜ್ಯಾದ್ಯಂತ ಇಂದು ತ್ಯಾಗ ಬಲಿದಾನಗಳ ಸಂಕೇತವಾದ ಬಕ್ರೀದ್ ಹಬ್ಬವನ್ನು ಬಹಳ ಸಂಭ್ರಮ ಹಾಗೂ ಸಡಗರದಿಂದ ಆಚರಿಸಲಾಗುತ್ತಿದೆ. ಉಡುಪಿ, ಬಳ್ಳಾರಿ ಸೇರಿದಂತೆ ವಿವಿಧ ನಗರದಲ್ಲಿ ಮುಸ್ಲಿಂ ಬಾಂಧವರು ಶ್ರದ್ಧೆ ಭಕ್ತಿಯಿಂದ ಭಾಗಿಯಾಗಿದ್ದರು.

ಹೊಸ ಬಟ್ಟೆ ಧರಿಸಿ ಮುಂಜಾನೆಯೇ ಉಡುಪಿ ನಗರ, ಕಾಪು, ಬ್ರಹ್ಮಾವರ ಕುಂದಾಪುರ, ಬೈಂದೂರು ಹೆಬ್ರಿ, ಕಾರ್ಕಳ ತಾಲೂಕುಗಳ ಎಲ್ಲ ಮಸೀದಿ ಹಾಗೂ ಈದ್ಗಾ ಮೈದಾನದಲ್ಲಿ ಅಪಾರ ಸಂಖ್ಯೆಯಲ್ಲಿ ನೆರೆದಿದ್ದ ಮುಸ್ಲಿಂ ಬಾಂಧವರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು.ಕೆಲವು ಮಸೀದಿಗಳಲ್ಲಿ ಮಹಿಳೆಯರಿಗೂ ಈದ್ ನಮಾಝ್ ಮಾಡಲು ಪ್ರತ್ಯೇಕ ವ್ಯವಸ್ಥೆ ಕಲ್ಪಿಸಲಾಗಿತ್ತು. ಉಡುಪಿ ಜಾಮೀಯಾ ಮಸೀದಿಯಲ್ಲಿ ಮೌಲಾನಾ ಅಬ್ದುರ್ರಶೀದ್ ನದ್ವಿ ನೇತೃತ್ವದಲ್ಲಿ ಮತ್ತು ಉಡುಪಿಯ ಅಂಜುಮಾನ್ ಮಸೀದಿಯಲ್ಲಿ ಮೌಲಾನ ಇನಾಯುತುಲ್ಲಾ ರಝ್ವಿ ನೇತೃತ್ವದಲ್ಲಿ ಈದ್ ನಮಾಝ್ನ್ನು ವ್ಹಹಿಸಲಾಯಿತು. ದೊಡ್ಡಣಗುಡ್ಡೆ ಮಸೀದಿಯ ಖತೀಬರಾದ ಖಾಸಿಂ ಸಅದಿ ಈದ್ ಸಂದೇಶ ನೀಡಿದರು.

ನಮಾಝ್ ಬಳಿಕ ಪರಸ್ಪರ ಹಬ್ಬದ ಶುಭಾಶಯ ವಿನಿಮಯ ಮಾಡಿಕೊಂಡರು. ಧರ್ಮ ಗುರುಗಳು ಹಬ್ಬದ ಸಂದೇಶ ಸಾರಿ, ಬಕ್ರೀದ್ ಹಬ್ಬದ ಆಚರಣೆ ಹಾಗೂ ದಾನ–ಧರ್ಮದ ಮಹತ್ವ ಕುರಿತು ಬೋಧನೆ ಮಾಡಿದರು.ಸರ್ವ ಧರ್ಮೀಯರಿಗೂ ಈದ್ ಶುಭಾಶಯಗಳು. ಮಕ್ಕಾದಲ್ಲಿ ಪವಿತ್ರ ಹಜ್ ಯಾತ್ರೆ ನಡೆಯುವ ವೇಳೆ ಈ ಹಬ್ಬವನ್ನು ಆಚರಿಸಲಾಗುತ್ತದೆ. ಜೀವನದಲ್ಲಿ ಒಂದು ಬಾರಿಯಾದರೂ ಹಜ್ ಯಾತ್ರೆ ಕೈಗೊಳ್ಳಬೇಕೆಂದು ಇಸ್ಲಾಂ ಹೇಳುತ್ತದೆ. ಹಜ್‌ನ ಧಾರ್ಮಿಕ ವಿಧಿ–ವಿಧಾನಗಳು ಈ ಹಬ್ಬದೊಂದಿಗೆ ಮುಕ್ತಾಯ ಗೊಳ್ಳುತ್ತದೆ.

ನಮ್ಮೆಲ್ಲರಿಗೂ ಈ ತ್ಯಾಗ ಬಲಿದಾನದ ಹಬ್ಬವು ಆರೋಗ್ಯ, ಐಶ್ವರ್ಯ ಕರುಣಿಸಲಿ ಎಂದು ಅಲ್ಲಾಹುವಿನಲ್ಲಿ ಪ್ರಾರ್ಥಿಸೋಣ. ಈ ಹಬ್ಬದಿಂದ ದೇಶದ ಎಲ್ಲ ಜನರಿಗೂ ಒಳಿತಾಗಲಿ, ನಾಡಿಗೆ ಸುಭಿಕ್ಷೆ ದೊರಕಲಿ ಎಂದು ಶುಭ ಹಾರೈಸಿದರು.

**10 ಐಎಫ್‌ಎಸ್ ಸಾಧಕರಿಗೆ ಅರಣ್ಯ ಭವನದಲ್ಲಿ ಗೌರವ**

# ಅರಣ್ಯಭೂಮಿ ಉಳಿಸಿದ ಶ್ರೇಯಸ್ಸು ಅಧಿಕಾರಿಗಳಿಗೆ ಸಲ್ಲುತ್ತದೆ: ಡಾ. ಮೀನಾಕ್ಷಿ ನೇಗಿ




**ಬೆಂಗಳೂರು, ಮೇ 28:** ಬೇರೆ ಬೇರೆ ಇಲಾಖೆಗಳ ಭೂಮಿ ನಶಿಸುತ್ತಿದ್ದು, ಅರಣ್ಯ ಇಲಾಖೆಯ ಭೂಮಿ ಈಗಲೂ ಉಳಿದಿದೆ. ಅರಣ್ಯ ಸಂಪತ್ತು ಉಳಿಸಿದ ಶ್ರೇಯಸ್ಸು ಹಿಂದಿನ ಅಧಿಕಾರಿಗಳಿಗೆ ಸಲ್ಲುತ್ತದೆ ಎಂದು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಅರಣ್ಯಪಡೆಯ ಮುಖ್ಯಸ್ಥೆ ಡಾ. ಮೀನಾಕ್ಷಿ ನೇಗಿ ಹೇಳಿದ್ದಾರೆ.

ಭಾರತೀಯ ಅರಣ್ಯ ಸೇವೆ (ಐಎಫ್ ಎಸ್) ಪರೀಕ್ಷೆ 2025–26ರಲ್ಲಿ ಯಶಸ್ಸು ಸಾಧಿಸಿದ ಅಭ್ಯರ್ಥಿಗಳಿಗೆ ಇಂಡಿಯಾ ಫಾರ್ ಐಎಎಸ್ ಅಕಾಡೆಮಿಯಿಂದ ಅರಣ್ಯ ಭವನದಲ್ಲಿ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಭಾರತೀಯ ಅರಣ್ಯ ಸೇವೆಗೆ ಸೇರ್ಪಡೆಯಾದ ಹತ್ತು ಮಂದಿ ಸಾಧಕರನ್ನು ಅಭಿನಂದಿಸಿ, ಇಂತಹ ಭವ್ಯವಾದ ನೈಸರ್ಗಿಕ ಅರಣ್ಯ ಸಂಪನ್ಮೂಲ ಉಳಿಸಲು ಅವಿರತವಾಗಿ ಹಿಂದಿನವರು ಶ್ರಮಿಸಿದ್ದಾರೆ. ಪರಿಶ್ರಮ, ಶಿಸ್ತು ಹಾಗೂ ದೃಢ ಸಂಕಲ್ಪದಿಂದ ನಾಗರಿಕ ಸೇವೆಗಳಲ್ಲಿ ಯಶಸ್ಸು ಸಾಧಿಸಬಹುದು ಕಿವಿ ಮಾತು ಹೇಳಿದರು.

ಸರ್ಕಾರಿ ಹುದ್ದೆ ಎಂದರೆ ಉತ್ತಮ ವೇತನ, ಭತ್ಯೆ ದೊರೆಯುವ ಜೊತೆಗೆ ಆರಾಮವಾಗಿರಬಹುದು ಎನ್ನುವ ಧೋರಣೆ ಹೆಚ್ಚಾಗಿದೆ. ಆದರೆ ಸರ್ಕಾರಿ ಹುದ್ದೆಯಲ್ಲಿ ಕಠಿಣ ಪರಿಶ್ರಮ ಹೊಂದಿರಬೇಕು. ಕರ್ನಾಟಕಕ್ಕೆ ಮೊದಲ ಅರಣ್ಯ ಅಧಿಕಾರಿಯಾಗಿ ನಿಯೋಜನೆಗೊಂಡು ತಾವು ಸವಾಲಿನಿಂದ ಕೆಲಸ ಮಾಡಿರುವುದು ಸಮಾಧಾನ ತಂದಿದೆ. ಜನರ ನಿರೀಕ್ಷೆಗಳು, ಬೇಡಿಕೆಗಳಿಗೆ ಅನುಗುಣವಾಗಿ ಕೆಲಸ ಮಾಡಬೇಕು. ಅರಣ್ಯ ಪುರಾತನವಾದದ್ದು.

ಉಪನಿಷತ್ತಿನಲ್ಲಿ ಅತಿ ಹೆಚ್ಚು ಜ್ಞಾನವಿದ್ದು, ಉಪನಿಷತ್ತಿಗೆ ಮತ್ತೊಂದು ಹೆಸರು ಅರಣ್ಯಕ. ಅರಣ್ಯ ಸಕಲ ಜೀವ ರಾಶಿಗಳಷ್ಟೇ ಅಲ್ಲ ಜ್ಞಾನದ ಬಂಢಾರವಾಗಿದೆ. ಅರಣ್ಯ ಸಂರಕ್ಷಣೆಗೆ ಸಂಪ್ರದಾಯಿಕ ಪದ್ಧತಿ ಮತ್ತು ಅತ್ಯಾಧುನಿಕ ತಂತ್ರಜ್ಞಾನ ಎರಡನ್ನೂ ಬಳಸಬೇಕು ಎಂದು ಕಿವಿ ಮಾತು ಹೇಳಿದರು.

ಇಂಡಿಯಾಫಾರ್ ಐಎಎಸ್ ಅಕಾಡೆಮಯ ಸಂಸ್ಥೆಯ ಅಧ್ಯಕ್ಷರು ಹಾಗೂ ಮಾರ್ಗದರ್ಶಕರಾದ ಡಾ. ಸಿ.ಎನ್. ಖೇದಾರ್ ಮಾತನಾಡಿ, ಈ ಬಾರಿ ದಾಖಲೆ ಪ್ರಮಾಣದಲ್ಲಿ ಕರ್ನಾಟಕದಿಂದ ಅರಣ್ಯ ಸೇವೆಗೆ ಸೇರ್ಪಡೆಯಾಗಿದ್ದು, ಇದು ಅತ್ಯುತ್ತಮ ಬೆಳವಣಿಗೆಯಾಗಿದೆ. ಅರಣ್ಯ ಸೇವೆ ಮಾಡಿದರೆ ಮಾನವೀಯ ಸೇವೆ ಮಾಡಿದಂತೆ. ಈ ಉದ್ದೇಶದಿಂದ ನಮ್ಮ ಅಕಾಡೆಮಿಯಲ್ಲಿ ವಿದ್ಯಾರ್ಥಿ ವೇತನ ನೀಡಿ ಪ್ರೋತ್ಸಾಹ ನೀಡುತ್ತಿದ್ದೇವೆ. ಲೋಕಸೇವಾ ಆಯೋಗದಿಂದ ಪ್ರತಿ ವರ್ಷ ರಾಜ್ಯದ ನೂರು ಮಂದಿ ಆಯ್ಕೆಯಾಗಬೇಕು ಎಂಬುದು ನಮ್ಮ ಮಹತ್ವಾಕಾಂಕ್ಷೆ ಗುರಿಯಾಗಿದೆ ಎಂದರು.

ಭಾರತೀಯ ಅರಣ್ಯ ಸೇವೆಯಲ್ಲಿ ಮೊದಲ ಶ್ರೇಯಾಂಕದಲ್ಲಿ ಉತ್ತೀರ್ಣರಾದ ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನ ಸವದಿ ಗ್ರಾಮದ ಬಸವರಾಜ್ ಕೆಂಪವಾಡ್ ಮಾತನಾಡಿ, ಎರಡನೇ ಪ್ರಯತ್ನದಲ್ಲಿ ತಮಗೆ ಉನ್ನತ ಸಾಧನೆ ಮಾಡಲು ತಮಗೆ ಸಾಧ್ಯವಾಯಿತು. ಮೊದಲ ಪ್ರಯತ್ನದಲ್ಲಿ ಆದ ತಪ್ಪುಗಳನ್ನು ತಿದ್ದಿಕೊಂಡು ಯಶಸ್ಸು ಸಾಧಿಸಿದ್ದೇನೆ. ಗ್ರಂಥಾಲಯ ತಮಗೆ ಜ್ಞಾನಬಂಢಾರವಾಗಿತ್ತು. ಇಂಡಿಯಾಫಾರ್ ಐಎಎಸ್ ಅಕಾಡೆಮೆ ತಮಗೆ ವಿದ್ಯಾರ್ಥಿ ವೇತನದ ಜೊತೆಗೆ ಸೂಕ್ತ ಮಾರ್ಗದರ್ಶನ ನೀಡಿದೆ. ನಾಗರಿಕ ಸೇವೆಗೆ ಸೇರ್ಪಡೆಯಾಗಲು ತಾಳ್ಮೆ, ಪರಿಶ್ರಮದ ಜೊತೆಗೆ ತಪಸ್ಸಿನಂತೆ ಕಾರ್ಯನಿರ್ವಹಿಸಬೇಕು ಎಂದರು.



ಬೆಳಗಾವಿಯಲ್ಲಿ ಗುರುವಾರ ಈದ್ ಅಲ್ ಅಧಾ ಸಂದರ್ಭದಲ್ಲಿ ಮುಸ್ಲಿಮರು ಪ್ರಾರ್ಥನೆ ಸಲ್ಲಿಸಿದರು.


# ಅಮನ ಜೆ ಕುಮಾರ್ ಅವರ 5ನೇ ಕೃತಿ 'ದಿ ಮಿಸ್ಟಿಕಲ್ ವೇವ್ಸ್' ಬಿಡುಗಡೆ

ದೇಶದ ಅತ್ಯುನ್ನತ ನಾಗರೀಕ ಪ್ರಶಸ್ತಿಯಾದ ಭಾರತ ರತ್ನ ಪುರಸ್ಕೃತ, ಪ್ರೊಫೆಸರ್ ಸಿ.ಎನ್.ಆರ್. ರಾವ್ ಅವರು ಅಮನ ಜೆ ಕುಮಾರ್ ಅವರ 5ನೇ ಪುಸ್ತಕ ದಿ ಮಿಸ್ಟಿಕಲ್ ವೇವ್ಸ್ ಅನ್ನು ಬಿಡುಗಡೆ ಮಾಡಿದರು ಶ್ರೀಯುತರು ಜವಾಹರಲಾಲ್ ನೆಹರು ಸೆಂಟರ್ ಫಾರ್ ಅಡ್ವಾನ್ಸ್ಡ ಸೈಂಟಿಫಿಕ್ ರಿಸರ್ಚ್ ನ ಗೌರವಾಧ್ಯಕ್ಷರು ಹಾಗೂ ಲೈನಸ್ ಪಾಲಿಂಗ್ ಸಂಶೋಧನಾ ಕೇಂದ್ರದ ಪ್ರಾಧ್ಯಾಪಕರಾಗಿದ್ದಾರೆ. ಅಲ್ಲದೆ, ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಸೈನ್ಸ್‌ನಲ್ಲಿ ಗೌರವ ಪ್ರಾಧ್ಯಾಪಕರಾಗಿಯೂ ಕಾರ್ಯ ನಿರ್ವಹಿಸುತ್ತಿದ್ದಾರೆ. ಈ ಪುಸ್ತಕದ ಮುನ್ನುಡಿಯನ್ನು ಅಂತರ ರಾಷ್ಟ್ರೀಯ ಬುಕ್ಕರ್ ಪ್ರಶಸ್ತಿ ವಿಜೇತರಾದ ಬಾನು ಮುಷ್ತಾಕ್ ಅವರು ಬರೆದಿದ್ದಾರೆ.

ಪುಸ್ತಕದ ಬಗ್ಗೆ ದಿ ಮಿಸ್ಟಿಕಲ್ ವೇವ್ಸ್ (ಕವನ ಸಂಕಲನ) ದಿ ಮಿಸ್ಟಿಕಲ್ ವೇವ್ಸ್ ಒಬ್ಬ ವ್ಯಕ್ತಿಯ ಜೀವನ ಪಯಣದ ಪ್ರತಿಬಿಂಬದಂತಿದೆ. ಅನುಭವಗಳು, ನಿರೀಕ್ಷೆಗಳು ಮತ್ತು ಅಪಾರ ಆನಂದದ ಸಂಯೋಜನೆಯಾಗಿರುವ ಈ ಕೃತಿ ಬ್ಲ್ಯಾಕ್‌ಔಟ್ ಕವನಗಳು ಮತ್ತು ಸೊನೆಟ್‌ಗಳ ಸಮನ್ವಯವಾಗಿದೆ. ಕಾವ್ಯದ ಎರಡು ವಿಭಿನ್ನ ಶೈಲಿಗಳ ಅದ್ಭುತ ಸಂಯೋಜನೆಯಾದ ಈ ಕೃತಿ ಓದುಗರನ್ನು ಮಂತ್ರಮುಗ್ಧರನ್ನಾಗಿಸುತ್ತದೆ. ಪ್ರತಿಯೊಂದು ಪದವೂ ತನ್ನೊಳಗೆ ಆಳವಾದ ಅರ್ಥ ಮತ್ತು ಚಿಂತನೆಯ ಸಾಗರವನ್ನು ಹೊಂದಿದ್ದು, ಓದುಗರ ಕಲ್ಪನೆ ಹಾಗೂ ಬುದ್ಧಿವಂತಿಕೆಯಿಂದ ಅನಾವರಗೊಳ್ಳುವಂತಹ ವಿಶಿಷ್ಟತೆಯನ್ನು ಹೊಂದಿದೆ. ಕಡಿಮೆ ಪದಗಳಲ್ಲಿ ಹೆಚ್ಚು ಅರ್ಥವನ್ನು ವ್ಯಕ್ತಪಡಿಸುವ ಈ ಕೃತಿ ಅನೇಕ ಕಥೆಗಳ ನೇಯ್ಗೆಯಂತಿದೆ.

ಅಮನ ಜೆ ಕುಮಾರ್ ಅವರು ಇತ್ತೀಚೆಗೆ ಆರ್.ವಿ. ಪಿಯು ಕಾಲೇಜು, ಜಯನಗರದಲ್ಲಿ 12ನೇ ತರಗತಿಯನ್ನು ಪೂರ್ಣಗೊಳಿಸಿದ್ದಾರೆ. ಬೆಂಗಳೂರಿನ ಬಿಷಪ್ ಕಾಟನ್ ಗರ್ಲ್ಸ್ ಸ್ಕೂಲ್ನಲ್ಲಿ 6ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದಾಗ, 11ನೇ ವಯಸ್ಸಿನಲ್ಲಿಯೇ ಅವರು ಕವನಗಳು ಹಾಗೂ ಪುಸ್ತಕಗಳನ್ನು ಬರೆಯಲು ಪ್ರಾರಂಭಿಸಿದರು.

ಇದುವರೆಗೆ ಅವರ ನಾಲ್ಕು ಪುಸ್ತಕಗಳು ಪ್ರಕಟವಾಗಿದ್ದು, ಮೂರು ಇಂಗ್ಲಿಷ್ ಮತ್ತು ಒಂದು ಹಿಂದಿ



ಭಾಷೆಯಲ್ಲಿ ಪ್ರಕಟಗೊಂಡಿವೆ. ಅವರ ಮೊದಲ ಪುಸ್ತಕ Echoes of Soulful Poem ಎರಡನೇ ಪುಸ್ತಕ World Amidst the Words ಮೂರನೇ ಹಿಂದಿ ಸಾಹಿತ್ಯ ಕೃತಿ Lafzon Ki Mehphil ನಾಲ್ಕನೇ ಪುಸ್ತಕ 'Galore of Mysteries'. ಅವರ ಅನೇಕ ಲೇಖನಗಳು ಮತ್ತು ಕಥೆಗಳು ಮುದ್ರಣ ಮಾಧ್ಯಮ, ವಿದ್ಯುನ್ಮಾನ ಮಾಧ್ಯಮ ಹಾಗೂ ಆನ್ಲೈನ್ ಪೋರ್ಟಲ್‌ಗಳಲ್ಲಿ ಪ್ರಕಟವಾಗಿವೆ.

ಸಾಹಿತ್ಯದ ಜೊತೆಗೆ ಅವರು ವಿದ್ಯಾಭ್ಯಾಸದಲ್ಲಿಯೂ ಉತ್ತಮ ಸಾಧನೆ ತೋರಿದ್ದಾರೆ.

ಅಮನ ಅವರ ಸಾಧನೆಗಳು:

* India Book of Records ನಿಂದ ಭಾರತದ ಅತಿ ಕಿರಿಯ ಕವಯಿತ್ರಿ ಎಂಬ ಗೌರವ.
* Asia Book of Records ನಿಂದ ಗ್ರ್ಯಾಂಡ್ ಮಾಸ್ಟರ್ ಪ್ರಶಸ್ತಿ.
* Kautilya Youngest Poetess of the Year Award ಗೋವಾ ರಾಜ್ಯಪಾಲರಿಂದ ಪ್ರದಾನ.
* Noble Book of World Record ನಿಂದ ಅತ್ಯಂತ ಹೆಚ್ಚು ಕವನಗಳನ್ನು ರಚಿಸಿದ ಕವಯಿತ್ರಿ ಎಂಬ ಗೌರವ (ಏಪ್ರಿಲ್ 2020ರಿಂದ ನವೆಂಬರ್ 2021ರವರೆಗೆ 337 ಕವನಗಳು).
* World Record University ನಿಂದ ಅತಿ ಕಿರಿಯ ಕವಯಿತ್ರಿ ಪ್ರಶಸ್ತಿ.
* International Book of World Record ನಿಂದ ಅತಿ ಕಿರಿಯ ಕವಯಿತ್ರಿ ಎಂಬ ಮಾನ್ಯತೆ.
* Wonder Book of World Record ನಿಂದ ಅತಿ ಕಿರಿಯ ಲೇಖಕಿ ಗೌರವ.
* Golden Book of World Record ನಿಂದ ಸತತ ವರ್ಷಗಳಲ್ಲಿ ಕವನ ಸಂಕಲನಗಳನ್ನು ಪ್ರಕಟಿಸಿದ ಅತಿ ಕಿರಿಯ ಕವಯಿತ್ರಿ ಎಂಬ ಗೌರವ ಪಡೆದಿರುತ್ತಾರೆ.

# ಎಮ್ಮೆ, ಕರುಗಳ ರಕ್ಷಣೆ, ಪಿಕಪ್ ವಾಹನದಲ್ಲಿ ಅಕ್ರಮ ಸಾಗಣೆ





**ಕಲಬುರಗಿ, ಮೇ. 28:** ನಗರದ ಅಫಜಲಪುರ ರಸ್ತೆಯ ಚೆಕ್ ಪೋಸ್ಟ್ ಬಳಿ ಪಿಕಪ್ ವಾಹನದಲ್ಲಿ ಸಾಗಿಸುತ್ತಿದ್ದ ಎಮ್ಮೆಗಳು ಮತ್ತು ಎಮ್ಮೆ ಕರುಗಳನ್ನು ಅಕ್ರಮವಗಿ ಸಾಗಣೆ ಮಾಡುತ್ತಿರುವುದನ್ನು ಅಶೋಕ್ ನಗರ ಠಾಣೆಯ ಎಎಸ್ಐ ಶಿವಶರಣಪ್ಪ ಪಾಣೆಗಾಂವ್ ಮತ್ತು ಸಿಬ್ಬಂದಿಗಳಾದ ವೈಜನಾಥ ಮತ್ತು ಚಂದ್ರಶೇಖರ್ ಅವರು ರಕ್ಷಿಸಿದ್ದಾರೆ.

ಚೆಕ್ ಪೋಸ್ಟ್ ಬಳಿ ಒಂದು ಮಹೀಂದ್ರಾ ಬೊಲೆರೋ ಪಿಕ್ ಅಪ್ ವಾಹನ ಬಂದಿದ್ದು ಅದಕ್ಕೆ ನಂಬರ್ ಪ್ಲೇಟ್ ಇಲ್ಲದೇ ತಾಡಪತ್ರಿ ಮುಚ್ಚಿಕೊಂಡು ಬರುತ್ತಿರುವುದನ್ನು ನೋಡಿ ಚೆಕ್ ಮಾಡುವ ಉದ್ದೇಶದಿಂದ ನಿಲ್ಲಿಸಲು ಹೇಳಿದ್ದರಿಂದ ಸದರಿ ವಾಹನವನ್ನು ವಾಹನ ಚಾಲಕನು ನಿಲ್ಲಿಸಲಾಯಿತು.

ನಂತರ ಸದರಿ ವಾಹನವನ್ನು ಸಿಬ್ಬಂದಿ ಜನರ ಸಹಾಯದಿಂದ ವಾಹನದ ಮೇಲೆ ಮುಚ್ಚಿರುವ ತಾಡಪತ್ರಿಯನ್ನು ಪೋಲಿಸರುಯ ತೆಗೆದು ಪರಿಶೀಲನೆ ಮಾಡಿ ನೋಡಲಾಗಿ ಒಳಗಡೆ ಎಮ್ಮೆಗಳು ಮತ್ತು ಎಮ್ಮೆ ಕರಗಳಗಳ ಅತೀ ಕ್ರೂರ ವಾಗಿ ತುಂಬಿಕೊಂಡು ಹೋಗುತ್ತಿದ್ದು ಪತ್ತೆಯಾಯಿತು.

ನಂತರ ವಾಹನ ಚಾಲಕನಿಗೆ ಜಾನುವಾರುಗಳನ್ನು ಸಾಗಾಣಿಕೆ ಮಾಡಲು ಇರುವ ದಾಖಲಾತಿಗಳನ್ನು ಪೋಲಿಸರು ಕೇಳಿದಾಗ ಸದರಿಯವರು ನನ್ನ ಹತ್ತಿರ ಯಾವುದೇ ರೀತಿಯ ದಾಖಲಾತಿಗಳು ಇರುವುದಿಲ್ಲ ಅಂತ ಹೇಳಿ. ಸದರಿಯವನ ಹೆಸರು ಮತ್ತು ವಿಳಾಸ ಕೇಳಲು ತನ್ನ ಹೆಸರು ವಿಜಯಪುರ ಜಿಲ್ಲೆಯ ದೇವರ ಹಿಪ್ಪರಗಿ ತಾಲ್ಲೂಕಿನ ಕರೆಟಗಿ ಗ್ರಾಮದ ನಿವಾಸಿ ಹಾಗೂ ಚಾಲಕ ಸಲೀಮ್ ತಂದೆ ಹುಸೇನ್ ಸಾಬ ಮರತೂರ್ ಎಂದು ಹೇಳಿದ. ನಂತರ ಸದರಿಯವನಿಗೆ ವಾಹನದಲ್ಲಿ ಇರುವ ಜಾನುವಾರುಗಳನ್ನು ಯಾರು ಖರೀದಿ ಮಾಡಿಕೊಂಡು ಎಲ್ಲಿಗೆ ತೆಗೆದುಕೊಂಡು ಹೋಗುತ್ತಿರುವೆ ಎಂದು ಪೋಲಿಸರು ಕೇಳಿದಾಗ ನಮ್ಮ ಮಾಲಕ ದೇವರಹಿಪ್ಪರಗಿಯ ಸದ್ದಾಂ ಅಲಿಯಾಸ್ ಸರತಾಜಿ ಭಾಗವಾನ್ ಅವರು ಖರೀದಿ ಮಾಡಿಕೊಂಡು ಸಾಕುವ ಸಲುವಾಗಿ ಬೀದ ರನ ಮೈಲಾರ್ ಸಂತೆಯಲ್ಲಿ ಮಾರಾಟ ಮಾಡಲು ತೆಗೆದುಕೊಂಡು ಹೋಗುತ್ತಿರುವುದಾಗಿ ಹೇಳಿದರು.

ನಂತರ ಪೋಲಿಸರು ಶಿಕ್ಷಕ ರಮೇಶ್ ತಂದೆ ದೇವಿಂದ್ರ ಅವಟೆ, ಅಶೋಕ್ ತಂದೆ ಯಶವಂತ್ ಗುತ್ತೇದಾರ್ ಪಂಚರನ್ನು ಕರೆಸಿ ಪಂಚನಾಮೆ ಮಾಡಿ ಎಮ್ಮೆ ಮತ್ತು ಎಮ್ಮೆ ಕರುಗಳನ್ನು ಮಿಣಜಗಿ ಗ್ರಾಮದ ಸರ್ಕಾರಿ ಗೋಶಾಲೆಗೆ ಒಯ್ದು ರಕ್ಷಿಸಲಾಯಿತು. ಈ ಕುರಿತು ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರೆದಿದೆ.

## ಸೇಡಂ ಪುರಸಭೆ ನಗರಸಭೆಯಾಗಿ ಮೇಲ್ದರ್ಜೆಗೆ

# ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಸಚಿವ ಡಾ.ಶರಣಪ್ರಕಾಶ ಚಾಲನೆ



**ಕಲಬುರಗಿ, ಮೇ. 28:** ಸಿಮೆಂಟ್ ಸಿಟಿ ಎಂದೇ ಖ್ಯಾತಿಪಡೆದಿರುವ ಸೇಡಂ ಪುರಸಭೆ ಯಿಂದ ನಗರಸಭೆಗೆ ಮೇಲ್ದರ್ಜೆಗೇರಿಸಿ ನಗರದಲ್ಲಿ ವಿವಿಧ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗಿದೆ ಎಂದು ರಾಜ್ಯದ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಅವರು ಹೇಳಿದರು.

2024–25ನೇ ಸಾಲಿನ ನಗರೋತ್ಥಾನ ಹಂತ–4 ಪ್ರೋತ್ಸಾಹಧನ ಯೋಜನೆಯಡಿ ವಿವಿಧ ವಾರ್ಡ್‌ಗಳಲ್ಲಿ ರಸ್ತೆ, ಚರಂಡಿ ಹಾಗೂ ನೀರು ಶುದ್ಧಿಕರಣ ಘಟಕಗಳ ನಿರ್ಮಾಣಕ್ಕೆ ಅಂದಾಜು ಮೊತ್ತ 2 ಕೋಟಿ ರೂಗಳ ಕಾಮಗಾರಿಗೆ ಅಡಿಗಲ್ಲು ನೆರವೇರಿಸಿ ಮಾತನಾಡಿದ ಅವರು, ಅತಿ ವೇಗವಾಗಿ ಬೆಳೆಯುತ್ತಿರುವ ಪಟ್ಟಣವಾಗಿದೆ. ಸೇಡಂ ಹಿತದೃಷ್ಟಿಯಿಂದ ಪುರಸಭೆಯಿಂದ ನಗರಸಭೆಯನ್ನಾಗಿ ಮಾಡಲಾಗಿದೆ. ಸೇಡಂ ಪಟ್ಟಣದ ಅಭಿವೃದ್ಧಿ ಹತ್ತು ಹಲವು ಯೋಜನೆಗಳನ್ನು ಕೈ ಗೊಂಡಿದ್ದು ಮುಖ್ಯವಾಗಿ ರಸ್ತೆ ಹಾಗೂ ವಿದ್ಯುತ್ ಸಮರ್ಪಕ ಸರಬರಾಜು ನೀಡಲಾಗುತ್ತಿದೆ. ನನ್ನ ಅವಧಿಯಲ್ಲಿ ಪಟ್ಟಣದ ಚಿತ್ರಣವನ್ನು ಬದಲಾಯಿಸಲಾಗುತ್ತಿದೆ. ನಗರದ ಕೋಡ್ಲಾ ಕ್ರಾಸ್‌ನಿಂದ ಬಸವೇಶ್ವರ ವೃತ್ತದವರೆಗೆ 'ಚತುಸ್ಪಥ' ರಸ್ತೆ ಸೇರಿದಂತೆ ಬಸ್ ನಿಲ್ದಾಣ, ಪೊಲೀಸ್ ಠಾಣೆವರೆಗೂ ರಸ್ತೆ ಸುಧಾರಣೆ ಮಾಡಲಾಗಿದೆ. ಬರುವ ಎರಡು ವರ್ಷಗಳಲ್ಲಿ ಪಟ್ಟಣವನ್ನು ಸುಸಜ್ಜಿತ ನಗರವನ್ನಾಗಿ ರೂಪಿಸುವಲ್ಲಿ ಅನೇಕ ಯೋಜನೆ ಗಳನ್ನು ಕೈಗೊಳ್ಳಲಾಗುವುದು ಎಂದರು.

ಈ ವೇಳೆ ನಗರಸಭೆ ಪೌರಾಯುಕ್ತರು ಸೇರಿದಂತೆ ತಾಲ್ಲೂಕಾಡಳಿತ ಅಧಿಕಾರಿಗಳು, ವಿವಿಧ ಆಯ್ಕೆ ಸಮಿತಿಯ ಸದಸ್ಯರು, ಗಣ್ಯರು ಉಪಸ್ಥಿತರಿದ್ದರು. ಕಾಚೂರಿನಲ್ಲಿ ವಿದ್ಯುತ್ ಉಪ ಕೇಂದ್ರ: ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಅವರು ತಾಲ್ಲೂಕಿನ ಕಾಚೂರು ಗ್ರಾಮದಲ್ಲಿ 27 ಕೋಟಿ ರೂ. ಗಳ ವೆಚ್ಚದಲ್ಲಿ 110/33/11 ಕೆ.ವಿ ವಿದ್ಯುತ್ ಉಪಕೇಂದ್ರ ನಿರ್ಮಾಣ ಶಂಕುಸ್ಥಾಪನೆ ಭೂಮಿಪೂಜೆ ಹಾಗೂ ಅಡಿಗಲ್ಲು ನೆರವೇರಿಸಿದರು.ಗ್ರಾಮೀಣ ಭಾಗದಲ್ಲಿ ಸಮರ್ಪಕವಾದ ವಿದ್ಯುತ್ ಸರಬರಾಜು ಹಾಗೂ ರೈತಾಪಿ ವರ್ಗಕ್ಕೆ ಅನುಕೂಲ ಕರವಾಗಲಿದ್ದು, ಪ್ರತ್ಯೇಕ ಉಪ ಕೇಂದ್ರ ನಿರ್ಮಾಣದಿಂದ ಕಾಚೂರು ಭಾಗದ ಮುಗ ನೂರ, ಸೋಮಪಲ್ಲಿ, ಕುಕ್ಕುಂದಾ ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳಿಗೆ 110/33/11 ಕೆ.ವಿ ವಿದ್ಯುತ್ ಸರಬರಾಜು ಆಗಲಿದೆ. ಸ್ಥಳೀಯ ವಿದ್ಯುತ್ ಪ್ರಸರಣದಿಂದ 24/7 ವಿದ್ಯುತ್ ಸರಬರಾಜು ಹಾಗೂ ರೈತರಿಗೆ ನೀರಾವರಿಗೆ ಹೆಚ್ಚು ಸಹಾಯವಾಗಲಿದೆ ಎಂದರು.

## ಮೈಸೂರಿನಲ್ಲಿ ಡಿಕೆಶಿ ಪರ ವಿಶೇಷ ಪೂಜೆ

# ಶಿವಮೊಗ್ಗದಲ್ಲಿ ಸಿದ್ದರಾಮಯ್ಯ ಪರ ಅಹಿಂದ ಪ್ರತಿಭಟನೆ



**ಮೈಸೂರು/ಶಿವಮೊಗ್ಗ, ಮೇ 28:** ಡಿ.ಕೆ.ಶಿವಕುಮಾರ್ ಅವರು ಶುಕ್ರವಾರವೇ ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಲಿ ಎಂದು ಅಖಿಲ ಕರ್ನಾಟಕ ಒಕ್ಕಲಿಗರ ಸಂಘ ಹಾಗೂ ಇತರ ಒಕ್ಕಲಿಗ ಸಂಘದ ಮುಖಂಡರು ಮೈಸೂರಿನ 101 ಗಣಪತಿ ದೇವಾಲಯದಲ್ಲಿ ಗುರುವಾರ ವಿಶೇಷ ಪೂಜೆ ಸಲ್ಲಿಸಿದರು. ಬಳಿಕ 101 ತೆಂಗಿನಕಾಯಿಗಳನ್ನು ಒಡೆದು ಡಿಕೆಶಿ ಅವರ ಫೋಟೋ ಹಿಡಿದು ಘೋಷಣೆ ಕೂಗಿದರು.

ಡಿ.ಕೆ.ಶಿವಕುಮಾರ್ ಕಳೆದ 40 ವರ್ಷಗಳಿಂದ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತನಾಗಿ, ಆಪತ್ಬಾಂಧವನಾಗಿ ಕೆಲಸ ಮಾಡಿಕೊಂಡು ಬರುತ್ತಿದ್ದಾರೆ. ಪಕ್ಷದ ರಾಜ್ಯಾಧ್ಯಕ್ಷರಾಗಿ ಕಾಂಗ್ರೆಸ್ ಪಕ್ಷಕ್ಕೆ ಈ ಬಾರಿ 135ಕ್ಕಿಂತ ಹೆಚ್ಚು ಸೀಟುಗಳು ಬರುವಂತೆ ಕಾರ್ಯ ನಿರ್ವಹಿಸಿರುವ ಮೂಲ ಕಾಂಗ್ರೆಸ್ಸಿಗರಾದ ಅವರು ಯಾವುದೇ ವಿಘ್ನಗಳಿಲ್ಲದೇ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಲಿ ಎಂದು ಅವರು ಪೂಜೆ ಸಲ್ಲಿಸಿ ಪ್ರಾರ್ಥಿಸಿದರು. ಅಖಿಲ ಕರ್ನಾಟಕ ಒಕ್ಕಲಿಗರ ಸಂಘದ ಜಿಲ್ಲಾಧ್ಯಕ್ಷ ತೇಜೇಶ್ ಲೋಕೇಶ್ ಗೌಡ ನೇತೃತ್ವದಲ್ಲಿ ಅಭಿಮಾನಿಗಳು ಪೂಜೆ ಸಲ್ಲಿಸಿದ್ದಾರೆ.

ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ನೀಡಬಾರದು ಎಂದು ಶಿವಮೊಗ್ಗ ಜಿಲ್ಲಾ ಅಹಿಂದ ಮುಖಂಡರು ಟೈರ್‌ಗಳಿಗೆ ಬೆಂಕಿ ಹಚ್ಚಿ ಪ್ರತಿಭಟನೆ ನಡೆಸಿದರು. ಶಿವಪ್ಪ ನಾಯಕ ವೃತ್ತದಲ್ಲಿ ಸೇರಿದ ಅವರು ಕಾಂಗ್ರೆಸ್ ಹೈಕಮಾಂಡ್ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರಲು ಸಿದ್ದರಾಮಯ್ಯನವರು ಪ್ರಮುಖ ಕಾರಣ. ಅವರು ಐದು ಗ್ಯಾರಂಟಿಗಳ ಮೂಲಕ ಜನತೆಗೆ ಬಹಳ ಅನುಕೂಲ ಮಾಡಿಕೊಟ್ಟಿದ್ದಾರೆ. ರಾಜ್ಯದ ಜನ ಹೊಟ್ಟೆ ತುಂಬಾ ಊಟ ಮಾಡಲು ಅವಕಾಶ ನೀಡಿದ ಅನ್ನರಾಮಯ್ಯ ಅವರು. ಆದರೆ, ಕಾಂಗ್ರೆಸ್ ಹೈಕಮಾಂಡ್ ಈಗ ಅವರ ರಾಜೀನಾಮೆ ಪಡೆಯಲು ಮುಂದಾಗಿರುವುದು ಖಂಡನೀಯ. ಜನಪರ ಕೆಲಸ ಮಾಡಿದ ಸಿದ್ದರಾಮಯ್ಯರನ್ನೇ ಮುಂದುವರೆಸಬೇಕೆಂದು ಆಗ್ರಹಿಸಿದರು.


ಪ್ರತಿಭಟನೆಯ ವೇಳೆ ಎರಡು ಟಗರುಗಳನ್ನು ತಂದಿದ್ದು ವಿಶೇಷವಾಗಿತ್ತು. ಪ್ರತಿಭಟನೆಯ ವೇಳೆ ಟೈರ್ ಸುಡದಂತೆ ಪೊಲೀಸರು ಎಚ್ಚರಿಕೆ ನೀಡಿದರೂ ಪ್ರತಿಭಟನಾಕಾರರು ಟೈರ್ಗೆ ಬೆಂಕಿ ಹಚ್ಚಿ ಆಕ್ರೋಶ ಹೊರಹಾಕಿದರು. "ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರಲು ಕಾರಣಕರ್ತರಾಗಿದ್ದವರು ಸಿದ್ದರಾಮಯ್ಯನವರು.

ಐದು ಗ್ಯಾರಂಟಿಗಳ ಮೂಲಕ ರಾಜ್ಯದ ಮನಗೆದ್ದಿದ್ದ ಅವರು ರಾಜ್ಯದಲ್ಲಿ ದಕ್ಷ ಆಡಳಿತ ನಡೆಸುತ್ತಿದ್ದರು. ಆದರೆ, ಕಾಂಗ್ರೆಸ್ ಹೈಕಮಾಂಡ್ ಈಗ ಸಿಎಂ ಸ್ಥಾನಕ್ಕೆ ರಾಜೀನಾಮೆ ಕೇಳುತ್ತಿದೆ. ಸಿದ್ದರಾಮಯ್ಯನವರು ರಾಜೀನಾಮೆ ನೀಡಬಾರದೆಂಬುದು ನಮ್ಮ ಒತ್ತಾಯ. ಈಗ ಸಿದ್ದರಾಮಯ್ಯನವರ ರಾಜೀನಾಮೆ ಪಡೆಯುತ್ತಿರುವ ಕಾಂಗ್ರೆಸ್ ಮುಂದೆ ಅಧಿಕಾರಕ್ಕೆ ಬರಲ್ಲ" ಎಂದು ಪ್ರತಿಭಟನಾಕಾರ ವಾಟಾಳ್ ಮಂಜುನಾಥ್ ಆಕ್ರೋಶ ವ್ಯಕ್ತಪಡಿಸಿದರು.

ಸಿದ್ದರಾಮಯ್ಯ ರಾಜೀನಾಮೆ ನೀಡುತ್ತಿರುವ ವಿಚಾರಕ್ಕೆ ಕುರುಬ ಸಂಘ ತೀವ್ರ ಅಸಮಾಧಾನ ವ್ಯಕ್ತಪಡಿಸಿದೆ. ಬಳ್ಳಾರಿಯ ಕುರುಬ ಸಂಘದ ಜಿಲ್ಲಾಧ್ಯಕ್ಷ ಗಾದಿಲಿಂಗನ ಗೌಡ ಅವರು ಕಾಂಗ್ರೆಸ್ ಹೈಕಮಾಂಡ್ ನಡೆ ಸರಿಯಲ್ಲ. ಸಿದ್ದರಾಮಯ್ಯ ಅವರಿಗೆ ಅನ್ಯಾಯ ಮಾಡಲಾಗುತ್ತಿದೆ ಎಂದು ಆರೋಪಿಸಿದರು.

ಇನ್ನು ಹೊಸಪೇಟೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಕಾಂಗ್ರೆಸ್ನ ಆಂತರಿಕ ಕಚ್ಚಾಟದಿಂದ ರಾಜ್ಯದ ಆಡಳಿತ ಸಂಪೂರ್ಣ ಕುಸಿದಿದೆ. ಮುಖ್ಯಮಂತ್ರಿಗಳು ರಾಜ್ಯಪಾಲರ ಭೇಟಿಗೆ ಅನುಮತಿ ಕೇಳಿದರೆ ಅದು ಮುಖ್ಯಮಂತ್ರಿಗಳ ಟಿಪಿಯಲ್ಲಿ ಇರುತ್ತದೆ. ಟಿಪಿಯಲ್ಲಿ ಇಲ್ಲದಿರುವುದರಿಂದ ಅವರು ಸಮಯ ಕೇಳಿದ್ದಾರೋ ಇಲ್ಲವೋ ಗೊತ್ತಿಲ್ಲ ಎಂದರು. ಮುಖ್ಯಮಂತ್ರಿ ಬದಲಾವಣೆ ವಿಚಾರವನ್ನು ಬಿಜೆಪಿ ಬಳಸಿಕೊಳ್ಳಲು ಯತ್ನಿಸುತ್ತಿದೆ ಎಂಬ ಆರೋಪವನ್ನು ತಳ್ಳಿ ಹಾಕಿದ ಅವರು, ರಾಜ್ಯದ ಜನರು ಕಾಂಗ್ರೆಸ್ಗೆ 136 ಸ್ಥಾನ ನೀಡಿ ಸ್ಥಿರ ಸರ್ಕಾರಕ್ಕೆ ಅವಕಾಶ ಕೊಟ್ಟಿದ್ದಾರೆ. ಆ ಪಕ್ಷದ ಆಂತರಿಕ ವಿಚಾರದಲ್ಲಿ ನಾವು ಕೈಹಾಕುವುದಿಲ್ಲ ಎಂದು ಸ್ಪಷ್ಟಪಡಿಸಿದರು.

# ಸಿದ್ದರಾಮಯ್ಯ ರಾಜೀನಾಮೆಗೆ ಬಿ.ಸಿ. ಪಾಟೀಲ್ ಭಾವುಕ



**ಹಾವೇರಿ, ಮೇ 28:** ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ರಾಜಿನಾಮೆ ನೀಡುತ್ತಲೇ ಮಾಜಿ ಸಚಿವ ಬಿ.ಸಿ. ಪಾಟೀಲ್ ಭಾವುಕರಾಗಿದ್ದು, ಸಿದ್ದು ಜೊತೆಗಿನ ಒಡನಾಟದ ಕುರಿತು ಭಾವುಕ ಪೋಸ್ಟ್ ಹಂಚಿಕೊಂಡಿದ್ದಾರೆ.

ನಾನು ಆ ಪಕ್ಷದಲ್ಲಿ ಇಲ್ಲದೆ ಇರಬಹುದು, ಆದರೆ ಅವರೊಂದಿಗಿನ ಒಡನಾಟ ಮರೆಯುವಂತದ್ದಲ್ಲ ಎಂದು ಹೇಳಿದ್ದಾರೆ. ಸಿಎಂ ಸಿದ್ದರಾಮಯ್ಯ ನವರ ಮುಖ್ಯಮಂತ್ರಿ ಪಟ್ಟಕ್ಕೆ ರಾಜೀನಾಮೆ ಮತ್ತು ವಿದಾಯ ಎಲ್ಲೋ ಒಂದು ಕಡೆ ನನಗೆ ಗೊತ್ತಿಲ್ಲದೆ ನೋವನ್ನ ಕೊಡ್ತಾ ಇದೆ. ನಾನು ಆ ಪಕ್ಷದಲ್ಲಿ ಇಲ್ಲದೆ ಇರಬಹುದು.

ಆದರೆ ಅವರೊಂದಿಗೆ ಒಡನಾಟ ಮರೆಯುವಂತದ್ದಲ್ಲ ನಾನು ಅವರನ್ನು ಪೊಲೀಸ್ ಅಧಿಕಾರಿಯಾಗಿ ನೋಡಿದ್ದೇನೆ. 2004ರಿಂದ ಶಾಸಕನಾಗಿ ಕೂಡ ಅವರೊಂದಿಗಿದ್ದೆ' ಎಂದಿದ್ದಾರೆ.

ಅಂತೆಯೇ 'ನನಗೆ ನೋವುಂಟಾಗಿದೆ. ನನಗೆ ಅವರ ಬಗ್ಗೆ ಇದ್ದಂತಹ ಗೌರವ ಮತ್ತು ಪ್ರೀತಿ. ನನ್ನ ಮನೆಗೆ ಎಷ್ಟು ಬಾರಿ ಬಂದಿದ್ದಾರೋ ಗೊತ್ತಿಲ್ಲ. ಕರೆದಾಗಲೆಲ್ಲ ಬರ್ತಾ ಇದ್ರು ಪ್ರೀತಿ ಹಂಚಿಕೊಳ್ತಾ ಇದ್ರು ಎಂದಿದ್ದಾರೆ. ಅವರು ಮುಖ್ಯಮಂತ್ರಿಯಾದ ಮೇಲೆ 2023ರ ನಂತರ ಹೋಗಿ ಭೇಟಿಯಾಗಲಿಲ್ಲ. ಒಂದು ಬಾರಿ ದೆಹಲಿಯಲ್ಲಿ ಭೇಟಿಯಾದಾಗ ಪ್ರೀತಿ ವಿಶ್ವಾಸದಿಂದ ಮಾತನಾಡಿ ಬೆನ್ನು ತಟ್ಟಿದರು.

ಸಿದ್ದರಾಮಯ್ಯ ಒಬ್ಬ ಇತಿಹಾಸಕಾರ ಅರ್ಥಶಾಸ್ತ್ರಜ್ಞ ಚಾಣಾಕ್ಷ ಹೃದಯವಂತ ನೇರ ನಿಷ್ಠುರನುಡಿಗೆ ಹೆಸರಾದವರು ಇಂದು ಅವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ.

ಮುಂದಿನ ದಿನಗಳಲ್ಲಿ ಭಗವಂತ ಅವರಿಗೆ ಆಯುರಾರೋಗ್ಯ ಭಾಗ್ಯವನ್ನು ಕೊಡಲಿ ಅವರು ಆರೋಗ್ಯದ ಬಗ್ಗೆ ಹೆಚ್ಚುಗಮನವನ್ನು ನೀಡಿಯುವಕರಿಗೆ ಮಾರ್ಗದರ್ಶನ ನೀಡಲಿ ಎಂದು ಬಿ.ಸಿ ಪಾಟೀಲ್ ಟ್ವೀಟ್ ಮಾಡಿದ್ದಾರೆ.

# ತೋಟಗಾರಿಕೆ ಇಲಾಖೆ ಜಾಗ ಹೂವಿನ ಮಾರುಕಟ್ಟೆ ನಿರ್ಮಾಣಕ್ಕೆ ಮಂಜೂರು ಮಾಡಲು ಆಕ್ಷೇಪ

**ಸರ್ಕಾರ, ಚಿಕ್ಕಬಳ್ಳಾಪುರ ಡಿಸಿ, ತೋಟಗಾರಿಕೆ ಇಲಾಖೆ ಪ್ರಧಾನ ಕಾರ್ಯದರ್ಶಿಗೆ ನೋಟಿಸ್ ಜಾರಿಗೆ ಹೈಕೋರ್ಟ್ ಆದೇಶ**





**ಚಿಕ್ಕಬಳ್ಳಾಪುರ, ಮೇ. 28:** ನಗರಕ್ಕೆ ಹೊಂದಿಕೊಂಡಿರುವ ನಂದಿ ಕ್ರಾಸ್ ಬಳಿಯ ತೋಟಗಾರಿಕೆ ಇಲಾಖೆಗೆ ಸೇರಿದ 20 ಎಕರೆಗೂ ಹೆಚ್ಚಿನ ಜಮೀನನ್ನು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಎಪಿಎಂಸಿ)ಯಿಂದ ಹೂವಿನ ಮಾರುಕಟ್ಟೆ ನಿರ್ಮಾಣಕ್ಕೆ ಮಂಜೂರು ಮಾಡುವ ಪ್ರಕ್ರಿಯೆ ಪ್ರಶ್ನಿಸಿ, ಹೈಕೋರ್ಟ್‌ಗೆ ಅರ್ಜಿ ಸಲ್ಲಿಕೆಯಾಗಿದೆ.

ಚಿಕ್ಕಬಳ್ಳಾಪುರ ತಾಲೂಕಿನ ತಿಪ್ಪೇನಹಳ್ಳಿಯ ಕೃಷಿಕ ಬಿ. ತಿಪ್ಪಾರೆಡ್ಡಿ ಸೇರಿದಂತೆ ಒಟ್ಟು ಆರು ಮಂದಿ ಸ್ಥಳೀಯ ರೈತರು ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಸ್. ಸುನಿಲ್‌ದತ್ ಯಾದವ್ ಮತ್ತು ನ್ಯಾಯಮೂರ್ತಿ ಎಸ್. ರಾಚಯ್ಯ ಅವರಿದ್ದ ನ್ಯಾಯಪೀಠ, ಸರ್ಕಾರಕ್ಕೆ ನೋಟಿಸ್ ಜಾರಿಗೊಳಿಸಿ ಆಕ್ಷೇಪಣೆ ಸಲ್ಲಿಸಲು ಸೂಚನೆ ನೀಡಿದೆ.ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ನಂದಿ ಹೋಬಳಿ, ಯಲುವನಹಳ್ಳಿಯ ವಿವಿಧ ಸರ್ವೇ ನಂಬರ್‌ಗಳಲ್ಲಿರುವ 20 ಎಕರೆಗೂ ಹೆಚ್ಚಿನ ಜಮೀನನ್ನು ಎಪಿಎಂಸಿಗೆ ಹಸ್ತಾಂತರಿಸುವ ಭರದ ಚಟುವಟಿಕೆಗಳು ನಡೆದಿವೆ. ಸದ್ಯ ತೋಟಗಾರಿಕೆ ಇಲಾಖೆ ವಶದಲ್ಲಿರುವ ಈ ಭೂಮಿ ಜಮೀನಿನಲ್ಲಿ 49 ವರ್ಷಕ್ಕೂ ಹೆಚ್ಚಿನ 791 ಜಾತಿಯ ಬೃಹತ್ ವಿವಿಧ ಮರಗಳಿವೆ. ಈ ಅಮೂಲ್ಯ ಮರಗಳನ್ನು ಕತ್ತರಿಸಲು ಎಪಿಎಂಸಿ ಅಧಿಕಾರಿಗಳು ಅರಣ್ಯ ಇಲಾಖೆಯ ಅನುಮತಿ ಕೋರಿದ್ದಾರೆ. ಆದ್ದರಿಂದ, ಈ ಜಮೀನು ತೋಟಗಾರಿಕೆ ಇಲಾಖೆಯಲ್ಲೇ ಉಳಿಯುವಂತೆ ನಿರ್ದೇಶಿಸಬೇಕು ಎಂದು ಕೋರಿದರು.

ಈ ಅಂಶವನ್ನು ಪರಿಗಣಿಸಿದ ಪೀಠ, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ, ತೋಟಗಾರಿಕೆ ಇಲಾಖೆ ಪ್ರಧಾನ ಕಾರ್ಯದರ್ಶಿ ಮತ್ತು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿಗೆ ನೋಟಿಸ್ ಜಾರಿಗೊಳಿಸಲು ಆದೇಶಿಸಿ ವಿಚಾರಣೆಯನ್ನು ಜೂ.1ಕ್ಕೆ ಮುಂದೂಡಿತು. ಹೂವಿನ ಮಾರುಕಟ್ಟೆಗೆ ನಿಗದಿಪಡಿಸಿರುವ ತೋಟಗಾರಿಕೆ ಇಲಾಖೆಯ ಜಮೀನಿನಲ್ಲಿ 40 ರಿಂದ 45 ವರ್ಷಕ್ಕೂ ಹೆಚ್ಚಿನ ಹಳೆಯ ಮರ–ಗಿಡಗಳಿವೆ. ಇವುಗಳಲ್ಲಿ ಅತ್ಯುತ್ತಮ ತಳಿಯ ಸಪೋಟಾ, ಮಾವು, ಹಲಸು, ನೇರಳೆ ಮರಗಳಿವೆ. ಮಣ್ಣು ಪರೀಕ್ಷಾ ಕೇಂದ್ರ, ರೈತರಿಗೆ ತರಬೇತಿ ನೀಡುವ ಕೇಂದ್ರ ಮತ್ತು ಪಾಲಿ ಹೌಸ್‌ಗಳೂ ಕಾರ್ಯ ನಿರ್ವಹಿಸುತ್ತಿವೆ.ಈ ಅಮೂಲ್ಯ ಜಮೀನನ್ನು ಹಸ್ತಾಂತರ ಮಾಡುವ ಹಿಂದೆ ಸ್ಥಳೀಯ ರಾಜಕಾರಣಿಗಳು ಮತ್ತು ಅವರ ಹಿಂಬಾಲಕರು, ವಿಶೇಷವಾಗಿ ವರ್ತಕರ ಸ್ವ ಹಿತಾಸಕ್ತಿ ಅಡಗಿದೆ.

ಸ್ಥಳೀಯ ರೈತರು ವಿರೋಧ ಮಾಡಿದ್ದಾಗಿಯೂ ಇಲ್ಲಿ ಎಪಿಎಂಸಿ ಹೂ ಮಾರುಕಟ್ಟೆ ಸ್ಥಾಪಿಸುವ ವಾಣಿಜ್ಯೋದ್ಯಮ ಪ್ರಯತ್ನಗಳು ಭರದಿಂದ ಸಾಗಿವೆ. ಉದ್ದೇಶಿತ ಮಾರುಕಟ್ಟೆ ಸ್ಥಾಪನೆಗೆ ತಾಲೂಕಿನ ವಿವಿಧೆಡೆ ಸಾಕಷ್ಟು ಬಂಜರು ಭೂಮಿ ಇದೆ. ಹೀಗಿರುವಾಗ ತೋಟಗಾರಿಕೆ ಇಲಾಖೆಯ ಅಭಿವೃದ್ಧಿ ಹೊಂದಿದ ಜಮೀನನ್ನು ಹೊರತು ಪಡಿಸಿ ಬೇರೆ ಯಾವುದಾದರೂ ಜಮೀನು ಪರಿಗಣಿಸುವಂತೆ ಸರ್ಕಾರಕ್ಕೆ ನಿರ್ದೇಶಿಸಬೇಕು ಎಂದು ಅರ್ಜಿದಾರರು ಕೋರಿದ್ದಾರೆ.

# ಕೆ.ಎಚ್.ಮುನಿಯಪ್ಪನವರಿಗೆ ಡಿಸಿಎಂ ಪಟ್ಟ ನೀಡಲು ವೆಂಕಟೇಶ್ ಹೆಗಡೆ ಒತ್ತಾಯ



**ಬಳ್ಳಾರಿ ಮೇ 28.** ಮೂರು ವರ್ಷಗಳ ಅತ್ಯಂತ ಸುಸ್ಥಿರ ಆಡಳಿತ ನೀಡಿ, ರಾಜ್ಯದ ಅಭಿವೃದ್ಧಿಗೆ ಅಭೂತಪೂರ್ವ ಕೊಡುಗೆ ನೀಡಿದ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ರಾಜಿನಾಮೆ ನೀಡಿ ತೆರವಾಗಿರುವ ಸ್ಥಾನಕ್ಕೆ ರಾಷ್ಟ್ರೀಯ ಕಾಂಗ್ರೆಸ್ ಯಾರನ್ನೇ ಆಯ್ಕೆ ಮಾಡಿದರೂ ಉಪ ಮುಖ್ಯಮಂತ್ರಿ ಸ್ಥಾನಕ್ಕೆ ದಲಿತ ಸಮಾಜದ ನಾಯಕ, ಮೂರು ಬಾರಿ ಕೇಂದ್ರ ಸಚಿವರಾಗಿರುವ ಹಾಲಿ ಆಹಾರ ಇಲಾಖೆ ಸಚಿವ ಕೆ.ಎಚ್. ಮುನಿಯಪ್ಪ ಅವರನ್ನು ನೇಮಿಸಲು ಕಾಂಗ್ರೆಸ್ ಹೈಕಮಾಂಡ್ ಮುಂದಾಗಬೇಕು ಎಂದು ವೆಂಕಟೇಶ್ ಹೆಗಡೆ,ವಕೀಲರು ಕೆಪಿಸಿಸಿ ರಾಜ್ಯ ಮಾಧ್ಯಮ ವಕ್ತಾರರು ಹಾಗೂ ಕೆಪಿಸಿಸಿ ರಾಜ್ಯ ಸಂಯೋಜಕರು ಪ್ರಚಾರ ಸಮಿತಿ. ಮಾದರ ಮಹಾ ಸಭಾದ ರಾಜ್ಯ ಮುಖಂಡರು, ಬಳ್ಳಾರಿ ಇವರು ಒತ್ತಾಯಿಸಿದ್ದಾರೆ. ಮುನಿಯಪ್ಪ ರವರು ಸಮಾಜದ ಸಂಘಟನೆಯಲ್ಲಿ ಅತ್ಯಂತ ಪ್ರಮುಖ ಪಾತ್ರ ವಹಿಸಿದ್ದಾರೆ.ರಾಜ್ಯದಲ್ಲಿ ಕಾಂಗ್ರೆಸ್‌ಗೆ ಅತಿ ದೊಡ್ಡ ಕೊಡುಗೆ ಕೊಟ್ಟಿದ್ದಾರೆ.ವಿಪಕ್ಷಗಳು ಏನೇ ಪ್ರಯತ್ನ ಮಾಡಿದರೂ ದಲಿತ ಸಮಾಜ ಕಾಂಗ್ರೆಸ್‌ನಿಂದ ವಿಮುಖ ಆಗದಂತೆ ನೋಡಿಕೊಳ್ಳುವಲ್ಲಿ ಅವರ ಕೊಡುಗೆ ಕೂಡ ಪ್ರಮುಖ ಎಂಬುದನ್ನು ಪಕ್ಷ ಮರೆಯಬಾರದು. ಮುಂದೇ ಯಾರೇ ಮುಖ್ಯಮಂತ್ರಿ ಆದರೂ ಅಹಿಂದ ನಾಯಕ ಮುನಿಯಪ್ಪ ರವರನ್ನು ಉಪ ಮುಖ್ಯಮಂತ್ರಿ ಮಾಡಬೇಕು ಎಂಬುದು ಕಾಂಗ್ರೆಸ್‌ನ ನಿಷ್ಠಾವಂತ ಕಾರ್ಯಕರ್ತರು ಆಗ್ರಹವಾಗಿದೆ ಎಂದು ತಿಳಿಸಿದ್ದಾರೆ.

# ಬೆಣಕಲ್ಲು ಗ್ರಾಮದಲ್ಲಿ ಜೂನ್ 4, 5ರಂದು ನಡೆಯಬೇಕಿದ್ದ ಜಾತ್ರೆ, ಕುಂಭೋತ್ಸವ ನಿಷೇಧ: ಬಳ್ಳಾರಿ ಜಿಲ್ಲಾಧಿಕಾರಿ ಆದೇಶ



**ಬಳ್ಳಾರಿ, ಮೇ 28.** ಬಳ್ಳಾರಿ ತಾಲ್ಲೂಕಿನ ಯರಗುಡಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಬೆಣಕಲ್ಲು ಗ್ರಾಮದಲ್ಲಿ ಜೂನ್ 4 ಮತ್ತು 5 ರಂದು ಆಯೋಜಿಸಲಾಗಿದ್ದ ದುರುಗಮ್ಮ ಮತ್ತು ಮರಿಗಮ್ಮ ದೇವಿಯ ದೇವರ ಜಾತ್ರೆ ಹಾಗೂ ಕುಂಭೋತ್ಸವ ಕಾರ್ಯಕ್ರಮಗಳನ್ನು ನಿಷೇಧಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ನಾಗೇಂದ್ರ ಪ್ರಸಾದ್ ಕೆ. ಅವರು ಆದೇಶ ಹೊರಡಿಸಿದ್ದಾರೆ.

ಬೆಣಕಲ್ಲು ಗ್ರಾಮದಲ್ಲಿ ಸುಮಾರು 18 ವರ್ಷಗಳ ಹಿಂದೆ (2009ರಲ್ಲಿ) ಸಾಂಪ್ರದಾಯಿಕ ಕುಂಭೋತ್ಸವ ನಡೆದಿತ್ತು. ಆ ಬಳಿಕ ವಿವಿಧ ಕಾರಣಗಳಿಂದಾಗಿ ಕಳೆದ 18 ವರ್ಷಗಳಿಂದ ಈ ಕಾರ್ಯಕ್ರಮ ನಡೆದಿರಲಿಲ್ಲ. ಪ್ರಸಕ್ತ ಸಾಲಿನಲ್ಲಿ ಶ್ರೀ ದುರುಗಮ್ಮ ಮತ್ತು ಮರಿಗಮ್ಮ ದೇವಿಯ ಟ್ರಸ್ಟ್ ಸಮಿತಿಯವರು ಜಾತ್ರೆ ಮತ್ತು ಕುಂಭೋತ್ಸವವನ್ನು ಆಯೋಜಿಸಿದ್ದರು.

ಈ ಕಾರ್ಯಕ್ರಮದ ಕುರಿತು ಗ್ರಾಮದ ಎರಡು ಗುಂಪುಗಳ ನಡುವೆ ತೀವ್ರ ಭಿನ್ನಾಭಿಪ್ರಾಯಗಳು ಮೂಡಿದ್ದವು. ಫೆಬ್ರವರಿ 24ರಂದು ಸಿರುಗುಪ್ಪ ಉಪ ವಿಭಾಗದ ಪೊಲೀಸ್ ಉಪ ಅಧೀಕ್ಷಕರ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಹಾಗೂ ಮೇ 19ರಂದು ಸಹಾಯಕ ಆಯುಕ್ತರ ನೇತೃತ್ವದಲ್ಲಿ ನಡೆದ ಶಾಂತಿ ಸಭೆಯಲ್ಲೂ ಗ್ರಾಮಸ್ಥರ ನಡುವೆ ದಿನಾಂಕ ಹಾಗೂ ಇತರ ವಿಷಯಗಳಿಗೆ ಸಂಬಂಧಿಸಿದಂತೆ ಒಮ್ಮತ ಮೂಡಿರಲಿಲ್ಲ.

ಪೊಲೀಸ್ ಮತ್ತು ಕಂದಾಯ ಇಲಾಖೆಯ ಅಧಿಕಾರಿಗಳ ವರದಿಗಳನ್ನು ಪರಿಗಣಿಸಿ, ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಕೆ. ಅವರು, ಗ್ರಾಮದಲ್ಲಿ ಶಾಂತಿ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ 2023 ರ ಕಲಂ 163 ಹಾಗೂ ಕರ್ನಾಟಕ ಪೊಲೀಸ್ ಕಾಯ್ದೆ 1963 ರ ಕಲಂ 35 ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಜೂನ್ 04 ಮತ್ತು 05 ರಂದು ನಡೆಯಬೇಕಿದ್ದ ಎಲ್ಲಾ ಜಾತ್ರಾ ಮಹೋತ್ಸವದ ಕಾರ್ಯಕ್ರಮಗಳನ್ನು ನಿಷೇಧಿಸಿ ಆದೇಶ ಹೊರಡಿಸಿದ್ದಾರೆ.

# ರಾಷ್ಟ್ರ ನಿರ್ಮಾಣದಲ್ಲಿ ಕಾನೂನು ಪಾತ್ರ ಮಹತ್ವದ್ದು: ಪ್ರೊ.ಬಿ.ಸತ್ಯನಾರಾಯಣ

**ಕಲಬುರಗಿ, ಮೇ. 28:** ರಾಷ್ಟ್ರ ನಿರ್ಮಾಣದಲ್ಲಿ ಕಾನೂನಿನ ಪಾತ್ರ ಅತ್ಯಂತ ಮಹತ್ವದ್ದು ಹಾಗೂ 2047ರ ವಿಕಸಿತ ಭಾರತದತ್ತ ಭಾರತದ ಪಯಣವು ಬಲಿಷ್ಠವಾಗಲು ದೇಶದ ಸಂವಿಧಾನ, ಕಾನೂನು ಮತ್ತಷ್ಟು ಆಧಾರವಾಗಲಿದೆ ಎಂದು ಕರ್ನಾಟಕ ಕೇಂದ್ರೀಯ ವಿಶ್ವ ವಿದ್ಯಾಲಯದ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಅವರು ಹೇಳಿದರು.



ಕರ್ನಾಟಕ ಕೇಂದ್ರೀಯ ವಿಶ್ವ ವಿದ್ಯಾಲಯದ ಕಾನೂನು ವಿಭಾಗದ ಮುಖ್ಯಸ್ಥರು ಹಾಗೂ ಸಹ ಪ್ರಾಧ್ಯಾಪಕ ಡಾ. ಅನಂತ ಡಿ. ಚಿಂಚೂರೆ ಮತ್ತು ಕಾನೂನು ವಿಭಾಗದ ಸಂಶೋಧನಾ ವಿದ್ಯಾರ್ಥಿ ವನ ರಾಮಮೂರ್ತಿ ಅವರು ರಚಿಸಿರುವ 'ದಿ ಪವರ್ ಆಫ್ ಲಾ: 75 ಆಕ್ಟ್ಸ್ ದಟ್ ಟ್ರಾನ್ಸ್ಫಾರ್ಮ್ಡ್ ಇಂಡಿಯಾ' ಎಂಬ ಪುಸ್ತಕವನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದ ಅ ವರು, ಈ ಪುಸ್ತಕವು ಆದಯಿನಿಕ ಭಾರತವನ್ನು ರೂಪುಗೊಳಿಸುವಿಕೆಯಲ್ಲಿ ಮಹತ್ವದ ಪಾತ್ರವಹಿಸಿದ 75 ಐತಿಹಾಸಿಕ ಕಾನೂನುಗಳ ಸಮಗ್ರ ವಿಶ್ಲೇಷಣೆಯನ್ನು ಒಳಗೊಂಡಿದೆ. ದೇಶದ ಆಡಳಿತ, ಸಾಮಾಜಿಯಿಕ ನ್ಯಾಯ, ಆರ್ಥಿಕ ಅಭಿವೃದ್ಧಿ ಮತ್ತು ಪ್ರಜಾಸತ್ತಾತ್ಮಕ ಮೌಲ್ಯಗ ಳನ್ನು ಅಳವಡಿಸುವಲ್ಲಿ ಕಾನೂ ನುಗಳ ಪಾತ್ರವನ್ನು ಈ ಕೃತಿ ಆಳವಾಗಿ ಪ್ರತಿಬಿಂಬಿಸುತ್ತದೆ ಎಂದರು.

ಪುಸ್ತಕ ಲೇಖಕರಾದ ಡಾ. ಅನಂತ ಡಿ. ಚಿಂಚೂರೆ ಅವರು ಪುಸ್ತಕದ ಕುರಿತು ಸಮಗ್ರ ಪರಿಚಯ ವನ್ನು ಮಾಡಿ, ಕಾನೂನು ಎಂಬುದು ಕೇವಲ ನಿಯಂತ್ರಣ ವ್ಯವಸ್ಥೆಯಲ್ಲ, ಇಡೀ ದೇಶದ, ಸಮಾಜದ ಪರಿವರ್ತನೆಯ ಚೇತನಶೀಲ ಸಾಧನವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು. ಈ ಸಂದ ರ್ಭದಲ್ಲಿ ಕುಲಪತಿಗಳಾದ ಪ್ರೊ ಬಟ್ಟು ಸತ್ಯನಾರಾಯಣ ಅವರು ಪುಸ್ತಕ ಲೇಖಕರನ್ನು ಹಾಗೂ ಸಂಶೋಧನಾ ವಿದ್ಯಾರ್ಥಿಯನ್ನು ಅಭಿನಂದಿಸಿದರು.

## ಮೇಕೆದಾಟು ಯೋಜನೆ: ಪ್ರಧಾನಿ ಮಧ್ಯಪ್ರವೇಶಕ್ಕೆ ಆಗ್ರಹ

# ಕರ್ನಾಟಕಕ್ಕೆ ನ್ಯಾಯ ಒದಗಿಸುವಂತೆ ಎಂಎಲ್‌ಸಿ ಮಂಜೇಗೌಡ ಮನವಿ

**ಮೈಸೂರು, ಮೇ 28:** ಮೇಕೆದಾಟು ಯೋಜನೆಯ ವಿಚಾರವಾಗಿ ಪ್ರಧಾನಿ ಮೋದಿ ಅವರು ಮಧ್ಯಪ್ರವೇಶ ಮಾಡಿ, ರಾಜ್ಯಕ್ಕೆ ನ್ಯಾಯ ಒದಗಿಸಬೇಕು ಎಂದು ಕಾವೇರಿ ಕ್ರಿಯಾ ಸಮಿತಿ ಗೌರವಾಧ್ಯಕ್ಷ, ವಿಧಾನ ಪರಿಷತ್ ಸದಸ್ಯರೂ ಆದ ಸಿ.ಎನ್. ಮಂಜೇಗೌಡ ಅವರು ಆಗ್ರಹಿಸಿದರು.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಇಂದು ಮಾಧ್ಯಮಗೋಷ್ಠಿಯನ್ನುದ್ದೇಶಿ ಮಾತನಾಡಿದ ಅವರು, ತಮಿಳುನಾಡು ಮುಖ್ಯಮಂತ್ರಿ ಜೋಸೆಫ್ ವಿಜಯ್ ಅವರು, ಪ್ರಧಾನಿ ಮೋದಿ ಅವರನ್ನು ಭೇಟಿಯಾಗಿ, ಮೇಕೆದಾಟು ಯೋಜನೆಗೆ ಅನುಮತಿ ನೀಡಬಾರದು ಎಂದು ಮನವಿ ಮಾಡಿದ್ದಾರೆ. ಆದರೆ, ಮೇಕೆದಾಟು ಯೋಜನೆಯಿಂದ ಎರಡು ರಾಜ್ಯಗಳಿಗೆ ಅನುಕೂಲವಾಗಲಿದೆ. ಈ ಕುರಿತು ರಾಷ್ಟ್ರಪತಿ, ಪ್ರಧಾನಿ, ಕೇಂದ್ರ ನೀರಾವರಿ ಮಂತ್ರಿಗಳನ್ನು ಕಾವೇರಿ ಕ್ರಿಯಾ ಸಮಿತಿ ನಿಯೋಗದಿಂದ ಭೇಟಿ ಮಾಡಿ, ಮೇಕೆದಾಟು ಯೋಜನೆಯ ನಿರ್ಮಾಣಕ್ಕೆ ಅನುಮತಿ ಕೊಡಿಸುವಂತೆ ಮನವಿ ಮಾಡಲಾಗುವುದು ಎಂದರು.

ಪ್ರಧಾನ ಮಂತ್ರಿಗಳು ಮೇಕೆದಾಟು ವಿಚಾರವಾಗಿ ಮಧ್ಯಸ್ಥಿಕೆ ವಹಿಸಿ, ಮೇಕೆದಾಟುವಿನಲ್ಲಿ ಅಣೆಕಟ್ಟೆ ಕಟ್ಟಲು ಅವಕಾಶ ಕೊಡಿಸಬೇಕು. ಕಾವೇರಿ



ಹುಟ್ಟುವುದು ರಾಜ್ಯದ ಕೊಡಗಿನಲ್ಲಿ, ಇಲ್ಲಿ ಹುಟ್ಟುವ ನೀರು ಕರ್ನಾಟಕಕ್ಕೆ ಸಲ್ಲಬೇಕು. ನೀರು ವ್ಯರ್ಥವಾಗಬಾರದು ಎಂಬ ಉದ್ದೇಶದಿಂದ ಅಣೆಕಟ್ಟು ಕಟ್ಟುವ ಉದ್ದೇಶ ಇದೆ. ಇದರಿಂದ ತಮಿಳುನಾಡಿಗೆ ನೀರಿನ ಸಮಸ್ಯೆ ಎದುರಾಗುವುದಿಲ್ಲ ಎಂದು ಹೇಳಿದರು.

# ರೈತಸಂತೆಯಲ್ಲಿ ಮಾವು, ನೇರಳೆ ಖರೀದಿ ಭರಾಟೆ: ರೈತರಿಂದ ನೇರ ಖರೀದಿ

**ರಾಯಚೂರು, ಮೇ. 28:** ಕೃಷಿಕರು ಬೆಳೆದ ತರಕಾರಿ, ಹಣ್ಣು ಹಾಗೂ ಧಾನ್ಯವನ್ನು ಸುಲಭವಾಗಿ ಗ್ರಾಹಕರಿಗೆ ಮಾರಾಟ ಮಾಡಲು ಅನುಕೂಲವಾಗುವಂತೆ ಇಲ್ಲಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯವು ಕಲ್ಯಾಣ ಕರ್ನಾಟಕದಲ್ಲೇ ಮೊದಲ ಬಾರಿಗೆ ಪ್ರತಿ ತಿಂಗಳು ಎರಡನೇ ಹಾಗೂ ನಾಲ್ಕನೇ ಶನಿವಾರ 'ರೈತ ಸಂತೆ' ಆಯೋಜಿಸಲು ನಿರ್ಧರಿಸಿದ್ದು, ಶನಿವಾರ ಆರಂಭವಾದ ರೈತ ಸಂತೆಗೆ ಮೊದಲ ದಿನವೇ ಗ್ರಾಹಕರಿಂದ ಉತ್ತಮ ಸ್ಪಂದನೆ ದೊರೆಯಿತು.



ಜಿಲ್ಲೆಯ ವಿವಿಧೆಡೆಯಿಂದ ಆಗಮಿಸಿದ್ದ 40ಕ್ಕೂ ಹೆಚ್ಚು ರೈತರು ವಿವಿಧ ತಳಿಯ ಮಾವು, ಮಹಾರಾಷ್ಟ್ರದ ದಾಪೋಲಿ ತಳಿಯ ನೇರಳೆ ಹಣ್ಣು, ಬದನೆಕಾಯಿ, ಬೆಂಡೆಕಾಯಿ, ಸೌತೆಕಾಯಿ, ನುಗ್ಗೆಕಾಯಿ, ಅವರೆಕಾಳು, ಕರಬೇವು ಸೊಪ್ಪು ಮಾರಾಟ ಮಾಡಿದರು. ವಿಶ್ವವಿದ್ಯಾಲಯದ ಸಿಬ್ಬಂದಿ, ಸರ್ಕಾರಿ ನೌಕರರು, ವೈದ್ಯರು ಬೆಳ್ಳಂಬೆಳಿಗ್ಗೆ ರೈತ ಸಂತೆಗೆ ಬಂದು ರುಚಿಯಾದ ಹಣ್ಣುಗಳನ್ನು ಖರೀದಿಸಿ ಮನೆಯತ್ತ ಹೆಜ್ಜೆ ಹಾಕಿದರು.

ವಿಶ್ವವಿದ್ಯಾಲಯದ ಆವರಣದಲ್ಲಿ ವಾಯುವಿಹಾರಕ್ಕೆ ಬಂದಿದ್ದ ಅನೇಕರು ತಾಜಾ ಮಾವಿನ ಹಣ್ಣುಗಳನ್ನು ಖರೀದಿಸಿ ಸಂಭ್ರಮಿಸಿದರು. ಕೆಲವರು ಅಲ್ಲಿಯೇ ಮಾವಿನ ಹಣ್ಣುಗಳನ್ನು ಕೊಯ್ದು ಗೆಳೆಯರಿಗೂ ಕೊಟ್ಟು ಖುಷಿ ಹಂಚಿಕೊಂಡರು.

ದೇವದುರ್ಗ ತಾಲ್ಲೂಕಿನ ಮಕ್ಕನಹಾಳದ ಸಿದ್ದಪ್ಪ ತಂದಿದ್ದ ಜವಾರಿ ಕೋಳಿಗಳ 400 ಮೊಟ್ಟೆಗಳು ಒಂದು ಗಂಟೆಯಲೇ ತಲಾ ?15ರಂತೆ ಮಾರಾಟವಾದರೆ, ರಾಯಚೂರು ತಾಲ್ಲೂಕಿನ ಕಸಬಿಯ ಯಶವಂತ ಅವರ ನಾಟಿಕೋಳಿಗಳ ಮೊಟ್ಟೆಗಳು ತಲಾ ?20ಗೆ ಒಂದೇ ಗಂಟೆಯಲ್ಲಿ ಮಾರಾಟ ಆದವು.

ರೈತರು ತಮ್ಮ ಹೊಲಗಳಲ್ಲಿ ಬೆಳೆದ ತರಕಾರಿ, ಹಣ್ಣು ಹಾಗೂ ಧಾನ್ಯವನ್ನು ನೇರವಾಗಿ ಗ್ರಾಹಕರಿಗೆ ಮಾರಾಟ ಮಾಡಲು ವೇದಿಕೆ ಕಲ್ಪಿಸಲಾಗಿದೆ. ಗ್ರಾಹಕರಿಗೂ ತಾಜಾ, ಗುಣಮಟ್ಟದ ಹಣ್ಣು ಹಾಗೂ ತರಕಾರಿ ಸಿಗುವಂತೆ ಮಾಡಲಾಗಿದೆ ಎಂದು ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶಕ ಎ. ಆರ್. ಕುರುಬರ ಹೇಳಿದರು.

ಮಧ್ಯವರ್ತಿಗಳಿಂದಾಗಿ ರೈತರ ಉತ್ಪನ್ನಗಳಿಗೆ ಉತ್ತಮ ಬೆಲೆ ಸಿಗುತ್ತಿಲ್ಲ. ಗ್ರಾಹಕರು ರೈತ ಸಂತೆಯಲ್ಲಿ ದೊರೆಯುವ ಗುಣಮಟ್ಟದ ಹಣ್ಣು ತರಕಾರಿ ಕೊಂಡುಕೊಳ್ಳಲು ಬರುವುದ ರಿಂದ ರೈತರಿಗೂ ಉತ್ತಮ ಆದಾಯ ಲಭಿಸಿದೆ ಎಂದು ತಿಳಿಸಿದರು

ರೈತ ಸಂತೆಗೆ ಜಿಲ್ಲೆಯ ಪ್ರಗತಿಪರ ರೈತರನ್ನೇ ಆಹ್ವಾನಿಸುತ್ತಿರುವ ಕಾರಣ ಗ್ರಾಹಕರಿಗೂ ಗುಣಮಟ್ಟದ ಹಣ್ಣು ತರಕಾರಿ ಲಭಿಸುತ್ತಿದೆ. ಏಳು ಬಗೆಯ ಮಾವು ರೈತ ಸಂತೆಗೆ ಬಂದಿದ್ದವು. ರೈತರ ವ್ಯಾಪಾರವೂ ಚೆನ್ನಾಗಿ ಆಗಿದೆ. ಗ್ರಾಹಕರೂ ಖುಷಿಯಿಂದ ಹಣ್ಣು ಖರೀದಿಸಿದ್ದಾರೆ ಎಂದು ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ತಿಮ್ಮಣ್ಣ ನಾಯಕ ಸಂತಸ ಹಂಚಿಕೊಂಡರು.

ರಾಯಚೂರು ತ ಕಡಗಂಜದೊಡ್ಡಿ ರೈತಎರಡೂವರೆ ಎಕರೆಯಲ್ಲಿ ಮಾವಿನ ತೋಟ ಮಾಡಿದ್ದೇವೆ. 3 ತಾಸಿನಲ್ಲಿ 6 ಟ್ರೇ ಮಾರಾಟವಾಗಿದ್ದು, ?5 ಸಾವಿರ ಆದಾಯ ಬಂದಿತು ಎಂದು ಸ್ಥಳಿಯರಾದ ರಘವೇಂದ್ರ ತಿಳಿಸಿದರು.

# ಇಂಜಿನಿಯರಿಂಗ್ ಕಾಲೇಜು ಸೀಟು ಹಂಚಿಕೆ

**ಬೀದರ್, ಮೇ. 28:** ಇಲ್ಲಿನ ಸರ್ಕಾರಿ ಎಂಜಿನಿಯರಿಂಗ್ ಕಾಲೇಜಿನಲ್ಲಿ ಐದು ದಿನಗಳ 2026ನೇ ಸಾಲಿನ ಯುಜಿ ಸಿಇಟಿ ಸೀಟು ಹಂಚಿಕೆ ಮಂಥನ ಆರಂಭಗೊಂಡಿದ್ದು, ವಿದ್ಯಾರ್ಥಿಗಳಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ. ಮೊದಲ ಹಾಗೂ ಎರಡನೇ ದಿನ ಜಿಲ್ಲೆಯ ಅನೇಕ ವಿದ್ಯಾರ್ಥಿಗಳು ಕಾಲೇಜಿಗೆ ಭೇಟಿ ಕೊಟ್ಟು ಆನ್‌ಲೈನ್ ಸೀಟು ಹಂಚಿಕೆ ವಿಧಾನ ಅರಿತುಕೊಂಡರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಕೋರ್ಸ್‌ಗಳ ಆನ್‌ಲೈನ್ ಸೀಟು ಹಂಚಿಕೆ ಹಂತಗಳು, ಆಯ್ಕೆ ವಿಧಾನಗಳ ಕುರಿತು ಉಚಿತ ಮಾಹಿತಿ ಒದಗಿಸಲಾಗುತ್ತಿದೆ. ಮೇ30ರ ವರೆಗೆ ಕಾರ್ಯಕ್ರಮ ನಡೆಯಲಿದ್ದು, ವಿದ್ಯಾರ್ಥಿಗಳು ಇದರ ಲಾಭ ಪಡೆಯಬೇಕು ಎಂದು ಮನವಿ ಮಾಡಿದರು.

ಬೀದರ್‌ನ ಸರ್ಕಾರಿ ಎಂಜಿನಿಯರಿಂಗ್ ಕಾಲೇಜಿನಲ್ಲಿ ಬಿ.ಇ ಇನ್ ಕಂಪ್ಯೂಟರ್ ಸೈನ್ಸ್ ಆಯಂಡ್



ಎಂಜಿನಿಯರಿಂಗ್, ಬಿ.ಇ ಇನ್ ಆರ್ಟಿಫಿಷಲ್ ಇಂಟೆಲಿಜೆನ್ಸ್ ಆಯಂಡ್ ಡಾಟಾ ಸೈನ್ಸ್, ಬಿ.ಇಇನ್ ಸಿವಿಲ್ ಎಂಜಿನಿಯರಿಂಗ್ ಹಾಗೂ ಬಿ.ಇ. ಇನ್ ಎಲೆಕ್ಟ್ರಾನಿಕ್ಸ್ ಆಯಂಡ್ ಕಮ್ಯುನಿಕೇಷನ್ ಸೇರಿ ನಾಲ್ಕು ಕೋರ್ಸ್‌ಗಳ ಅಧ್ಯಯನಕ್ಕೆ ಅವಕಾಶ ಇದೆ. ಸಿಇಟಿ ಕೋಡ್ ಇ292 ಬಳಸಿ ವಿದ್ಯಾರ್ಥಿಗಳು ಕಾಲೇಜನ್ನು ಆಯ್ಕೆ ಮಾಡಿಕೊಳ್ಳಬಹುದು ಎಂದು ತಿಳಿಸಿದರು.

ಪ್ರಾಚಾರ್ಯ ದೇವೇಂದ್ರ ಹಂಚೆ ಮಾತನಾಡಿ, ಯುಜಿ ಸಿಇಟಿ ಸೀಟ್ ಆಯ್ಕೆ ಕುರಿತು ಬಹಳಷ್ಟು ವಿದ್ಯಾರ್ಥಿಗಳಲ್ಲಿ ಗೊಂದಲ ಇದೆ. ಅದನ್ನು ನಿವಾರಿಸಿ, ಸೀಟ್ ಹಂಚಿಕೆಯ ಸಮಗ್ರ ಮಾಹಿತಿ ನೀಡಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಸಹಯೋಗ 'ದಲ್ಲಿ ಸೀಟ್ ಹಂಚಿಕೆ ಮಂಥನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

# ಕನ್ನಡ ಸಾಮ್ರಾಜ್ಯೋತ್ಸವ ಮನೆಮನೆಯ ಉತ್ಸವವಾಗಲಿ: ಚಿತ್ರ ಸಾಹಿತಿ ನಾಗೇಂದ್ರ ಪ್ರಸಾದ್ ಕರೆ

**ಬೆಂಗಳೂರು, ಮೇ 28:** ಕರ್ನಾಟಕದ ಇತಿಹಾಸ ವಿಶ್ವದ ಮಾನ್ಯತೆ ಪಡೆದು ಕನ್ನಡ ಭಾಷೆಗೆ ಶ್ರೀಮಂತಿಕೆಯನ್ನು ತಂದಿದೆ ಕನ್ನಡ ಸಾಮ್ರಾಜ್ಯದ ಉದಯಕ್ಕೆ ಮೂಲ ಕಾರಣವಾದ ಮಯೂರನ ಆಡಳಿತ ಕನ್ನಡಿಗರ ಮನದಲ್ಲಿ ಶಾಶ್ವತವಾಗಿ ಆಚರಣೆಯಾಗಬೇಕು ಮಯೂರ ವರ್ಮನ ನಾಡಪ್ರೇಮ ಅಮರವಾಗಬೇಕು ವಿಶ್ವ ಮಟ್ಟದಲ್ಲಿ ಕನ್ನಡ ಸಾಮ್ರಾಜ್ಯೋತ್ಸವ ನಡೆಯುತ್ತಿರುವ ಈ ವೇಳೆ ಅತ್ಯಂತ ಮಹತ್ವದ ಸಂಗತಿ ಆಗಿದೆ ಎಂದು ಚಿತ್ರ ಸಾಹಿತಿ ವಿ ನಾಗೇಂದ್ರ ಪ್ರಸಾದ್ ಅಭಿಪ್ರಾಯ ಪಟ್ಟರು.



ಕನ್ನಡ ಮೊದಲು ಬಳಗದ ವತಿಯಿಂದ ನಡೆದ ಮಯೂರ ವರ್ಮನ ನೆನಪಿನ ಕನ್ನಡ ಸಾಮ್ರಾಜ್ಯೋತ್ಸವ ಕಾರ್ಯಕ್ರಮವನ್ನು ಕುರುಬರ ಹಳ್ಳಿಯ ಚಾಲುಕ್ಯ ಡಾ ರಾಜಕುಮಾರ್ ಟ್ರಸ್ಟ್ ಸ್ಥಳದಲ್ಲಿನ ಮಯೂರವರ್ಮನ ಪ್ರತಿಮೆಗೆ ಕಿರೀಟಧಾರಣೆ ಮಾಡುವುದರ ಮೂಲಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು ಕನ್ನಡ ಮೊದಲು ಬಳಗದ ಅಧ್ಯಕ್ಷ ಜ್ಞಾನೇಶ್ವರ ಮಧು ಅವರು ಮಾತನಾಡುತ್ತಾ ಕನ್ನಡ ಸಾಮ್ರಾಜ್ಯ ಉದಯವಾಗಿ 1681 ವರ್ಷಗಳ ಇತಿಹಾಸ ನಮ್ಮಲ್ಲಿ ಕಂಡು ಬಂದಿದೆ, ವಿಶ್ವದ ಅನೇಕ ರಾಷ್ಟ್ರಗಳಲ್ಲಿ ಸ್ಪೇನ್, ಇಟಲಿ ದುಬೈ ಸೇರಿದಂತೆ ಇಂದು ರಾಜ್ಯದ ಅನೇಕ ಕನ್ನಡಪರ ಮನಸ್ಸುಗಳು ಕನ್ನಡ ಸಾಮ್ರಾಜ್ಯೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಂಡು ಕನ್ನಡ ಭಾಷೆಯ ಬೆಳವಣಿಗೆಯ ಜೊತೆ ಜೊತೆಗೆ ಮಯೂರವರ್ಮನ ನೆನಪು ಉಳಿಯುವಂತಾಗಬೇಕು ಎಂದು ಕರೆ ನೀಡಿದರು

ಕನ್ನಡ ಸಾಹಿತ್ಯ ಪರಿಷತ್ತಿನ ನಿಕಟಪೂರ್ವ ಗೌರವ ಕಾರ್ಯದರ್ಶಿ ನೇ.ಭ.ರಾಮಲಿಂಗಶೆಟ್ಟಿ ಶೆಟ್ಟಿ ಮಾತನಾಡುತ್ತಾ ಸಾವಿರಾರು ವರ್ಷಗಳ ಇತಿಹಾಸ ಇರುವ ಕನ್ನಡದ ಭಾಷೆ ಸದಾ ಕಾಲ ಜೀವಂತವಾಗಿರುತ್ತದೆ ಕನ್ನಡ ಚಳುವಳಿಗೆ ನಾಡಿನ ಚಳುವಳಿಗಾರರು ಸಾಹಿತಿಗಳು ಸದಾ ಕಾಲ ಜಾಗೃತರಾಗಿ ಕನ್ನಡ ಭಾಷೆಯನ್ನು ಉಳಿಸುತ್ತಿದ್ದಾರೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

# ಲಿಂಗಸುಗೂರು ಪಟ್ಟಣದ ಸೌಂದರ್ಯೀಕರಣಕ್ಕೆ ಯೋಜನೆ ಬಿರುಸುಗೊಂಡ ಅಕ್ರಮ ಕಟ್ಟಡಗಳ ತೆರವು ಕಾರ್ಯಾಚರಣೆ

**ರಾಯಚೂರು, ಮೇ. 28:** ರಾಷ್ಟ್ರೀಯ ಹೆದ್ದಾರಿಯಲ್ಲಿರುವ ಜಿಲ್ಲೆಯ ಲಿಂಗಸುಗೂರು ಪಟ್ಟಣ ವೇಗವಾಗಿ ಅಭಿವೃದ್ಧಿ ಹೊಂದುತ್ತಿದ್ದು, ಅದಕ್ಕೆ ಅನುಗುಣವಾಗಿ ನಗರದ ಸೌಂದರ್ಯೀಕರಣಕ್ಕೆ ಪುರಸಭೆ ಆಡಳಿತ ವಿವಿಧ ಯೋಜನೆ ಜಾರಿಗೆ ತರಲು ಸಜ್ಜಾಗಿದೆ.

ವಾಹನಗಳ ಹಾಗೂ ಪಾದಚಾರಿಗಳ ಸುಗಮ ಸಂಚಾರಕ್ಕೆ ತೊಂದರೆಯಾಗುತ್ತಿದ್ದ ಪಟ್ಟಣದ ಬಸ್ ನಿಲ್ದಾಣ ಸುತ್ತಮುತ್ತ, ರಾಯಚೂರು ರಸ್ತೆ, ಬಸ್ ನಿಲ್ದಾಣ ವೃತ್ತದಿಂದ ಎಪಿಎಂಸಿವರಗೆ, ಪ್ರವಾಸಿಮಂದಿರ, ಸಹಾಯಕ ಆಯುಕ್ತರ ಕಚೇರಿ ಸುತ್ತಮುತ್ತದಲ್ಲಿರುವ ಡಬ್ಬಾ ಅಂಗಡಿಗಳನ್ನು ಈಗಾಗಲೇ ತೆರವುಗೊಳಿಸಲಾಗಿದೆ.



ಅಂದ ಹೆಚ್ಚಿಸಲಿರುವ ಕಾಂಪೌಂಡ್ ಗೋಡೆಗಳು: ಪಟ್ಟಣಕ್ಕೆ ವ್ಯಾಪಾರ, ವಾಣಿಜ್ಯ ಸೇರಿದಂತೆ ಇತರ ಕೆಲಸ ಕಾರ್ಯಗಳಿಗೆ ಆಗಮಿಸುವ ಜನರ ಸಂಖ್ಯೆಯಲ್ಲಿ ಏರಿಕೆ ಕಾಣುತ್ತಿದೆ. ಇದರ ಜತೆ ಕೊಳಚೆ, ಅಶುಚಿತ್ವ, ಮಾಸಿದ ಗೋಡೆಗಳು ಪಟ್ಟಣದ ಸೌಂದರ್ಯ ಕಳೆಗುಂದುವಂತೆ ಮಾಡಿವೆ. ಹೀಗಾಗಿ ಪಟ್ಟಣದ ಸರ್ಕಾರಿ ಪಿಯು ಕಾಲೇಜು ಕಾಂಪೌಂಡ್ ಹಾಗೂ ಪ್ರವಾಸಿಮಂದಿರ ಕಾಂಪೌಂಡ್ ಗೋಡೆಗಳಲ್ಲಿ ಹಟ್ಟಿ ಚಿನ್ನದ ಗಣಿ, ಮುದಗಲ್ ಹಾಗೂ ಜಲದುರ್ಗ ಕೋಟೆ, ಬಸವಸಾಗರ ಜಲಾಶಯ, ಕರಡಕಲ್ ಕೆರೆ, ನವಲಿ ಜಡೆಸೋಮೇಶ್ವರ, ಕುಣಿಸೋಮೇಶ್ವರ ದೇವಸ್ಥಾನ ಸೇರಿದಂತೆ ತಾಲ್ಲೂಕು ಹಾಗೂ ಜಿಲ್ಲೆಯ ಪ್ರಮುಖ ಐತಿಹಾಸಿಕ ಸ್ಥಳಗಳ ವರ್ಣರಂಜಿತ ಚಿತ್ರಗಳನ್ನು ಬಿಡಿಸಿ ಪಟ್ಟಣದ ಸೌಂದರ್ಯಕ್ಕೆ ಮರುಹುಟ್ಟು ನೀಡಲು ಯೋಜನೆ ರೂಪಿಸಲಾಗಿದೆ.

ಹಸಿರೀಕರಣಕ್ಕೆ ದಿಟ್ಟ ಹೆಜ್ಜೆ: ಪಟ್ಟಣದ ಹಸಿರೀಕರಣಕ್ಕಾಗಿ ಪುರಸಭೆ ಆಡಳಿತ ಮಹತ್ವದ ಹೆಜ್ಜೆ ಇಟ್ಟಿದೆ. ಸರ್ಕಾರಿ ಪಿಯು ಕಾಲೇಜು, ಪ್ರವಾಸಿಮಂದಿರ, ಗ್ರಂಥಾಲಯ, ಎಪಿಎಂಸಿ ಹತ್ತಿರದಲ್ಲಿ ಗಿಡ ಹಚ್ಚುಲು ಗುಡಿಗಳನ್ನು ತೋಡಲಾಗಿದೆ. ಸರ್ಕಾರಿ ಪಿಯು ಕಾಲೇಜು ಮುಂಭಾಗದಲ್ಲಿ ನಾಲ್ಕು ಫೀಟ್‌ಗೆ ಒಂದು ಗಿಡ ನಡೆಸಿ ಅದರ ಮಧ್ಯೆ ಫೆವರ್ ಟೈಲ್ಸ್ ಹಾಕಿಸಿ ಪಾದಚಾರಿ ಮಾರ್ಗ ನಿರ್ಮಾಣ ಮಾಡುವುದಕ್ಕೆ ಪುರಸಭೆ ಮುಂದಾಗಿರುವುದು ಸಾರ್ವಜನಿಕರ ಮೆಚ್ಚುಗೆ ಕಾರಣವಾಗಿದೆ.

ಖಾಸಗಿ ಬಸ್‌ಗಳಿಗೆ ತಂಗುದಾಣ: ಪಟ್ಟಣದ ಮಾರ್ಗವಾಗಿ ಬೆಂಗಳೂರಿಗೆ ತೆರಳುವ ಖಾಸಗಿ ಬಸ್‌ಗಳು ಪ್ರತಿದಿನ ಬೆಳಿಗ್ಗೆ ಹಾಗೂ ರಾತ್ರಿ ಪಟ್ಟಣದ ಬಸ್ ನಿಲ್ದಾಣ ವೃತ್ತದಲ್ಲಿ ಅಡ್ಡಾದಿಡ್ಡಿಯಾಗಿ ನಿಲುಗಡೆ ಮಾಡುತ್ತಿದ್ದರಿಂದ ವಾಹನ ದಟ್ಟಣೆ ಹೆಚ್ಚಾಗಿ ಸಾರ್ವಜನಿಕರು ತೊಂದರೆ ಪಡುವಂತಾಗುತ್ತಿದೆ. ಇದಕ್ಕೆ ಕಡಿವಾಣ ಹಾಕುವ ಉದ್ದೇಶದಿಂದ ಸಂಗೀತಾ ಬಾರ್ ಎದುರು, ಬಸ್ ನಿಲ್ದಾಣದ ವಾಣಿಜ್ಯ ಮಳಿಗೆ ಮುಂದೆ ಬಸ್ ತಂಗುದಾಣ ನಿರ್ಮಾಣ ಮಾಡಲು ಯೋಜನೆ ರೂಪಿಸಲಾಗಿದೆ.

ಆಟೋಗಳಿಗೆ ಸ್ಟ್ಯಾಂಡ್: ಪಟ್ಟಣದ ಬಸ್ ನಿಲ್ದಾಣದೊಳಗೆ ಆಟೋಗಳ ನಿಲುಗಡೆಗೆ ತಡೆ ಬಿಳಲಿದೆ. ಬಸ್ ನಿಲ್ದಾಣದ ಎಡಭಾಗದ ಮುಂದೆ ಸುಮಾರು 200 ಮೀಟರ ಬ್ಯಾರಿಕೇಡ್ ನಿರ್ಮಾಣ ಮಾಡಿ ಆಟೊ ಸ್ಟ್ಯಾಂಡ್ ಮಾಡಲಾಗುತ್ತಿದೆ, ಆಟೋಗಳು ಸರದಿಯಲ್ಲಿ ನಿಂತು ಸಾರ್ವಜನಿಕರಿಗೆ ಸೇವೆ ನೀಡುವ ಉದ್ದೇಶದಿಂದ ಈ ನಿರ್ಧಾರಕ್ಕೆ ಪುರಸಭೆ ಮುಂದಾಗಿದೆ. ಕಳೆದ ಎರಡ್ಮೂರು ತಿಂಗಳ ಹಿಂದೆಯೇ ಉಪವಿಭಾಗಾಧಿಕಾರಿ ಬಸವಣಪ್ಪ ಕಲಶೆಟ್ಟಿ ಆಸಕ್ತಿ ವಹಿಸಿ ಈ ಯೋಜನೆಗಳಿಗೆ ಜಾರಿಗೊಳಿಸುವ ಬಗ್ಗೆ ವಿವಿಧ ನಗರಗಳಲ್ಲಿ ಜಾರಿಗೆ ತಂದಿರುವ ಯೋಜನೆಗಳ ಮಾದರಿಯಲ್ಲಿ ಹಾಗೂ ಪರಿಣಿತ ಇಂಜಿನಿಯರಗಳಿಂದ ನೀಲನಕ್ಷೆ ಸಿದ್ಧಪಡಿಸಿದ್ದರಿಂದ ಈಗ ಪಟ್ಟಣದ ಸೌಂದರ್ಯೀಕರಣದ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ, ಇನ್ನೂ ಎರಡು ತಿಂಗಳಲ್ಲಿ ಪಟ್ಟಣದ ಚಿತ್ರಣವೇ ಬದಲಾಗಿದೆ.

**ಲಿಂಗಸುಗೂರು ಪಟ್ಟಣದ ಸೌಂದರ್ಯೀಕರಣಕ್ಕೆ ಪುರಸಭೆ ಆಡಳಿತಾಧಿಕಾರಿಗಳ ದಿಟ್ಟ ಕ್ರಮ ಸ್ವಾಗತಾರ್ಹ. ಇದಕ್ಕೆ ಸಾರ್ವಜನಿಕರು ಸಹಕಾರ ನೀಡಬೇಕು. ಬಸ್ ನಿಲ್ದಾಣ ವೃತ್ತ, ಬಸವಸಾಗರ ಗಡಿಯಾರ ವೃತ್ತಗಳಲ್ಲಿ ವಾಹನಗಳು ಬೇಕಾ ಬಿಟ್ಟಿಯಾಗಿ ಸಂಚಾರ ಮಾಡುತ್ತಿವೆ, ಇದಕ್ಕೆ ಕಡಿವಾಣ ಹಾಕಲು ಟ್ರಾಫಿಕ್ ಸಿಗ್ನಲ್ ಹಾಗೂ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸ ಮುಂದಾಗ ಬೇಕಾಗಿದೆ ನಟರಾಜ. ಎಚ್.ಎನ್, ಮುಖ್ಯಾಧಿಕಾರಿ ಪುರಸಭೆ, ಲಿಂಗಸುಗೂರು ಪಟ್ಟಣದ ವಿವಿಧೆಡೆಯಲ್ಲಿ ಹಸಿರೀಕರಣ, ಸ್ವಚ್ಛತೆ, ಪಾದಚಾರಿಗಳ ಹಾಗೂ ವಾಹನ ಸವಾರರ ಸುಗಮ ಸಂಚಾರಕ್ಕೆ ಹಲವಾರು ಕ್ರಮಗಳನ್ನು ಜಾರಿಗೆ ತರುವ ಮೂಲಕ ಸೌಂದರ್ಯೀಕರಣಕ್ಕೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ.**

**–ಶರಣಪ್ಪ ಮೇಟಿ, ಅಧ್ಯಕ್ಷ, ವೀರಶೈವ ಲಿಂಗಾಯತ ಮಹಾಸಭಾ.**

# ಮೊಬೈಲ್ ಯುಗದಲ್ಲಿ ಜನಪದ ಕಲೆ, ಸಂಸ್ಕೃತಿ ಮಸುಕಾಗುತ್ತಿದೆ: ಚೆನ್ನಶೆಟ್ಟಿ



**ಬೀದರ್, ಮೇ. 28:** ನಾವೆಲ್ಲರೂ ರಾಜ್ಯ, ಭಾಷೆ, ಪ್ರಾಂತ್ಯ, ನಾಡು ನುಡಿ ಬಗ್ಗೆ ಹೇಗೆ ಹೆಮ್ಮೆ ಪಡುತ್ತೇವೆ. ಅದೇ ರೀತಿಯಲ್ಲಿ ನಮ್ಮ ಗಡಿ ಭಾಗದ ಬಗ್ಗೆ ಸಹ ಹೆಮ್ಮೆಪಡುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಸುರೇಶ ಚೆನ್ನಶೆಟ್ಟಿ ಅವರು ಹೇಳಿದರು.

ನಗರದ ಮೈಲೂರ ಕ್ರಾಸ್ ಬಳಿಯ ಕೃಷ್ಣ ಉಡುಪಿ ಹೋಟೇಲ್ ನಲ್ಲಿರುವ ಮಹಾ ಲಕ್ಷ್ಮೀ ಸಾಂಸ್ಕೃತಿಕ ಭವನದಲ್ಲಿ ಸಾಹಿತ್ಯ ರತ್ನ ಅಣ್ಣಾಭಾವು ಸಾಠೆ ಸಾಂಸ್ಕೃತಿಕ ಮತ್ತು ಸಾಹಿತಿಕ ಲೋಕ ಮಂಚ್ ಟ್ರಸ್ಟ್, ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರದಲ್ಲಿ 2025–26ನೇ ಸಾಲಿನ ಸಾಮಾನ್ಯ ಸಂಘ ಸಂಸ್ಥೆಗಳ ಸಾಂಸ್ಕೃತಿ ಚಟುವಟಿಕೆಗೆ ಧನ ಸಹಾಯ ಯೋಜನೆಯಡಿಯಲ್ಲಿ ಹಮ್ಮಿಕೊಂಡಿದ್ದ ಜಾನಪದ ಸಂಭ್ರಮ ಕವಿ ಗೋಷ್ಠಿ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ನಮ್ಮ ನಾಡಿನ ಕಲೆ, ಸಾಹಿತ್ಯ, ಸಂಸ್ಕೃತಿ ಹಾಗೂ ಭಾಷೆಯನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ. ವಿಶೇಷವಾಗಿ ಯುವ ಪೀಳಿಗೆಗೆ ಜನಪದ ಕಲೆ, ಸಾಹಿತ್ಯ ಹಾಗೂ ಸಾಂಸ್ಕೃತಿಕ ಮೌಲ್ಯಗಳ ಪರಿಚಯ ಮಾಡಿಕೊಡುವ ಕಾರ್ಯಗಳು ನಿರಂತರವಾಗಿ ನಡೆಯಬೇಕು ಎಂದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ ಸಿಂಧೆ ಅವರು ಮಾತನಾಡಿ, ಜನಪದ ಕಲೆ, ಸಾಹಿತ್ಯ, ಸಂಗೀತ ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಎಲ್ಲರ ಮೇಲಿದೆ. ಕಲಾವಿದರಿಗೆ ಸರ್ಕಾರದಿಂದ ದೊರೆ ಯುವ ಸೌಲಭ್ಯಗಳು ಹಾಗೂ ಯೋಜನೆಗಳನ್ನು ತಲುಪಿಸಲು ಇಲಾಖೆ ಸದಾ ಬದ್ಧವಾಗಿದೆ ಎಂದು ಹೇಳಿದರು.

ಅಣ್ಣಾಭಾವು ಸಾರೆ ಸಾಂಸ್ಕೃತಿಕ ಮತ್ತು ಸಾಹಿತಿಕ ಲೋಕಮಂಚ್ ಟ್ರಸ್ಟ್ ಅಧ್ಯಕ್ಷ ಎಂ.ಎಸ್, ಮನೋಹರ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಸಾಹಿತ್ಯ ಮತ್ತು ಸಂಸ್ಕೃತಿ ಸಮಾಜದ ಅಸ್ತಿತ್ವವನ್ನು ಉಳಿಸುವ ಶಕ್ತಿಯಾಗಿದ್ದು, ಇಂತಹ ಸಾಂಸ್ಕೃತಿಕ ಕಾರ್ಯ ಕ್ರಮಗಳು ಕನ್ನಡ ನಾಡಿನ ಪರಂಪರೆ ಹಾಗೂ ಜನಪದ ಕಲೆಯನ್ನು ಜೀವಂತ ವಾಗಿಡುವಲ್ಲಿ ಮಹತ್ವದ ಪಾತ್ರ ವಹಿಸು ತ್ತವೆ. ಯಾರಾದರು ದಾನಿಗಳು ಸಹಾಯ ಸಹಕಾರ ಮಾಡಿದರೆ ನಮ್ಮ ಸಂಘ ಇರುವರೆಗೂ ಪ್ರಶಸ್ತಿ ಹಾಗೂ ಪ್ರತಿಭಾ ಪುರಸ್ಕಾರ ನೀಡಲಾಗುವುದು. ಪ್ರತಿವರ್ಷ ಒಂದು ಪುಸ್ತಕ ಪ್ರಕಟಿಸುವಂತೆ ಕೆಲಸ ಮಾಡಲಾಗುವುದು ಎಂದರು.

# ಸ್ಕ್ಯಾನಿಂಗ್ ವರದಿ ಕಂಡು ರೋಗಿಗೆ ಶಾಕ್! ಆಪರೇಷನ್ ಮಾಡದೇ ರೋಗಿಯಿಂದ ಹಣ ಕಿತ್ತ ವೈದ್ಯ

**ಬೀದರ್, ಮೇ. 28:** ಜಿಲ್ಲೆಯ ಮನ್ನಾಎಖ್ಖೆಳ್ಳಿ ಆಸ್ಪತ್ರೆ ವೈದ್ಯರೊಬ್ಬರು ಅಪಘಾತಕ್ಕೀಡಾಗಿದ್ದ ರೋಗಿಗೆ ಆಪರೇಷನ್ ಮಾಡದೆಯೇ ರಾಡ್ ಹಾಕಲಾಗಿದೆ ಎಂದು ಸುಳ್ಳು ಹೇಳಿ, 37 ಸಾವಿರ ರೂಪಾಯಿ ಪಡೆದು ವಂಚಿಸಿರುವ ಗಂಭೀರ ಆರೋಪ ಕೇಳಿಬಂದಿದೆ.

ಆಪರೇಷನ್ ಆದಮೇಲೂ ಭುಜ ನೋವಾಗುತ್ತಿದ್ದ ಹಿನ್ನೆಲೆ ಸ್ಕ್ಯಾನಿಂಗ್ ಮಾಡಿಸಿದಾಗ, ಆಪರೇಷನ್ ಮಾಡಿ ರಾಡ್ ಹಾಕದೇ ವೈದ್ಯರು ಸುಳ್ಳು ಹೇಳಿರುವುದು ಗೊತ್ತಾಗಿದೆ ಎನ್ನಲಾಗಿದೆ. ಮನ್ನಾಖೇಳಿ ಗ್ರಾಮದಲ್ಲಿರುವ ಸೇಡಂಕರ್ ಆಸ್ಪತ್ರೆ ವೈದ್ಯರ ವಿರುದ್ಧ ಗಂಭೀರ ಆರೋಪ ಕೇಳಿಬಂದಿದ್ದು, ಆಪರೇಷನ್ ಮಾಡದೆ ಮಾಡಿದ್ದೇವೆಂದು ದುಡ್ಡು ಪಡೆದಿದ್ದಾರೆ ಎಂದು ದೂರಲಾಗಿದೆ. ರೋಗಿಗೆ ಕೇವಲ ಬ್ಯಾಂಡೇಜ್ ಸುತ್ತಿ 37 ಸಾವಿರ ರೂ. ವಸೂಲಿ ಮಾಡಿದ್ದಾರೆ ಎಂದು ಆರೋಪಿಸಲಾಗಿದ್ದು, ಭುಜ ನೋವಾಗುತ್ತಿದೆ ಎಂದು ಸ್ಕ್ಯಾನ್ ಮಾಡಿಸಿದಾಗ ಆಪರೇಷನ್ ಮಾಡಿ ರಾಡ್ ಹಾಕದಿರುವ ವಿಷಯ ಬಹಿರಂಗವಾಗಿದೆ ಎನ್ನಲಾಗಿದೆ.

ತಾಲ್ಲೂಕಿನ ಬಸಲಾಪುರ ಗ್ರಾಮದ ಪ್ರಜ್ವಲ್ ಎಂಬವರ ಬುಜದ ಎಲಬು ರಸ್ತೆ ಅಪಘಾತದಲ್ಲಿ ಮುರಿದಿತ್ತು. ಹೀಗಾಗಿ ಚಿಕಿತ್ಸೆಗೆಂದು ತೆರಳಿದ್ದಾಗ ಆಪರೇಷನ್ ಮಾಡಿ ಮುರಿದಿದ್ದ ಎಲುಬಿಗೆ ರಾಡ್ ಹಾಕಬೇಕು ಎಂದು ವೈದ್ಯರು ತಿಳಿಸಿದ್ದರು. ಅದರಂತೆ 37 ಸಾವಿರ ರೂಪಾಯಿಯನ್ನು ಕಟ್ಟಿಸಿಕೊಂಡಿದ್ದರು. ಆದರೆ ಆಪರೇಷನ್ ಮಾಡದೆ ಪ್ರಜ್ವಲ್ ಕೈಗೆ ಹಾಗೇ ಬ್ಯಾಂಡೇಜ್ ಸುತ್ತಲಾಗಿದೆ.

ಆಪರೇಷನ್ ಆದಮೇಲೂ ಬುಜ ನೋವಾಗುತ್ತಿದ್ದ ಹಿನ್ನೆಲೆ ಸ್ಕ್ಯಾನಿಂಗ್ ಮಾಡಿಸಿದಾಗ ಆಪರೇಷನ್ ಮಾಡದೆ ವೈದ್ಯರು ಸುಳ್ಳು ಹೇಳಿರುವುದು ಗೊತ್ತಾಗಿದೆ. ಮುರಿದಿದ್ದ ಬುಜದ ಎಲುಬು ಹಾಗೇ ಇದೆ ಎನ್ನಲಾಗಿದ್ದು, ವೈದ್ಯರ ವಿರುದ್ಧ ತೀವ್ರ ಆಕ್ರೋಶ ವ್ಯಕ್ತವಾಗಿದೆ.

# 5 ವರ್ಷದ ಎಲ್ಲ ಮಕ್ಕಳು ತಪ್ಪದೇ, ಪಲ್ಸ್ ಪೋಲಿಯೋ ಲಸಿಕೆ ಹಾಕಿಕೊಳ್ಳಬೇಕು : ಡಿ.ಸಿ ಮಹ್ಮದ್ ಇಕ್ರಮುಲ್ಲಾ ಶರೀಫ

**ಕಲಬುರಗಿ, ಮೇ. 28:** ಜಿಲ್ಲೆಯಾದ್ಯಂತ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ ಜೂ.28ರಂದು ನಡೆಯಲಿದೆ. ಈ ಹಿನ್ನೆಲೆಯಲ್ಲಿ 0 ರಿಂದ 5 ವರ್ಷದೊಳಗಿನ ಎಲ್ಲ ಮಕ್ಕಳು ತಪ್ಪದೇ ಲಸಿಕೆ ಹಾಕಿಕೊಳ್ಳಬೇಕು. 'ಹೈ ರಿಸ್ಕ್' ಪ್ರದೇಶಗಳಾದ ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ ಹಾಗೂ ಹೆದ್ದಾರಿಗಳ ಚೆಕ್‌ಪೋಸ್ಟ್‌ಗಳ ಮೇಲೆ ತೀವ್ರ ನಿಗಾವಹಿಸಿ ಎಂದು ಜಿಲ್ಲಾಧಿಕಾರಿ ಮಹ್ಮದ್ ಇಕ್ರಮುಲ್ಲಾ ಶರೀಫ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಆಯೋಜಿಸಿದ್ದ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳಿಂದ ಜಾಥಾ ಕಾರ್ಯಕ್ರಮ ಆಯೋಜಿಸಬೇಕು. ಎಂದು ಹೇಳಿದರು.




ಜೂ.28 ರಂದು ಜಿಲ್ಲಾದ್ಯಂತ ಬೂತ್‌ಗಳಲ್ಲಿ ಲಸಿಕೆ ಹಾಕಲಾಗುವುದು. ಜೂ 29,30, ಜುಲೈ 1 ರವರೆಗೆ ಮೂರು ದಿನಗಳ ಕಾಲ 1,475 ತಂಡಗಳು ಲಸಿಕೆ ಹಾಕದ ಮಕ್ಕಳನ್ನು ಪತ್ತೆ ಮಾಡಲು ಮನೆ ಮನೆಗೆ ಭೇಟಿ ನೀಡಿ 5 ವರ್ಷದೊಳಗಿನ ಎಲ್ಲ ಮಕ್ಕಳಿಗೂ ಲಸಿಕೆ ನೀಡಬೇಕು. ಯಾವುದೇ ಕಾರಣಕ್ಕೂ ಮಗುವೂ ಲಸಿಕೆಯಿಂದ ವಂಚಿತವಾಗಬಾರದು ಎಂದರು.

ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮಕ್ಕೆ ಜಿಲ್ಲೆಯಲ್ಲಿ 5 ವರ್ಷದೊಳಗಿನ ಒಟ್ಟು ಅಂದಾಜು 3,51,716 ಮಕ್ಕಳಿಗೆ ಲಸಿಕೆ ಹಾಕಲು ಗುರಿ ನೀಡಲಾಗಿದೆ.

ಮಕ್ಕಳಿಗೆ ಲಸಿಕೆಗಳನ್ನು ನೀಡಲು ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ 1,519 ಲಸಿಕಾ ಕೇಂದ್ರಗಳಿಂದ (ಬೂತ್‌ಗಳು) ಮಕ್ಕಳಿಗೆ ಲಸಿಕೆ ಹಾಕಲಾಗುವುದು. ಇದಕ್ಕಾಗಿ 3,364 ಲಸಿಕೆ ಹಾಕುವ ಸಿಬ್ಬಂದಿ ಹಾಗೂ 334 ಮೇಲ್ವಿಚಾರಕರನ್ನು ನಿಯೋಜಿಸಲಾಗಿದೆ.

132 ಟ್ರಾನ್ಸಿಟ್ ತಂಡಗಳು ಹಾಗೂ ದೂರದ ಪ್ರದೇಶಗಳಿಗಾಗಿ 31 ಸಂಚಾರಿ ತಂಡಗಳು ಕಾರ್ಯಾಚರಣೆ ನಡೆಸಲಿವೆ. ಅಂಗನವಾಡಿ ಹಾಗೂ ಶಾಲೆಗಳಲ್ಲಿ ಕೇಂದ್ರಗಳನ್ನು ತೆರೆಯಲು ಸಿದ್ಧತೆಮಾಡಿಕೊಳ್ಳಿ ಎಂದು ಸೂಚನೆ ನೀಡಿದರು.

# ಇರಾನಿನ ನೆಲೆಗಳ ಮೇಲೆ ದಾಳಿ: ಅಮೆರಿಕದ ವಾಯುನೆಲೆಯ ಮೇಲೆ ಪ್ರತಿದಾಳಿ

**ಟೆಹ್ರಾನ್/ವಾಷಿಂಗ್ಟನ್, ಮೇ 28:** ಹಾರ್ಮುಜ್ ಜಲಸಂಧಿಯ ಬಳಿಯ ಇರಾನಿನ ಗುರಿಗಳ ಮೇಲೆ ಅಮೆರಿಕ ಸೇನೆ ಗುರುವಾರ ಮುಂಜಾನೆ ಹೊಸ ದಾಳಿಗಳನ್ನು ನಡೆಸಿತು, ಡ್ರೋನ್ ಉಡಾವಣಾ ತಾಣವನ್ನು ನಾಶಪಡಿಸಿತು ಮತ್ತು ನಾಲ್ಕು ಇರಾನಿನ ದಾಳಿ ಡ್ರೋನ್‌ಗಳನ್ನು ಹೊಡೆದುರುಳಿಸಿತು, ದಾಳಿಯನ್ನು ಪ್ರಾರಂಭಿಸಿದ ಅಮೇರಿಕನ್ ವಾಯುನೆಲೆ ಎಂದು ವಿವರಿಸಿದ ಮೇಲೆ ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ಪ್ರತೀಕಾರದ ದಾಳಿಯನ್ನು ಪ್ರಾರಂಭಿಸಿತು. ಐದನೇ ಡ್ರೋನ್ ಅನ್ನು ಉಡಾಯಿಸಲು ತಯಾರಿ ನಡೆಸುತ್ತಿದ್ದ ಬಂದರ್ ಅಬ್ಬಾಸ್ ವಿಮಾನ ನಿಲ್ದಾಣದ ಹೊರವಲಯದಲ್ಲಿರುವ ಇರಾನಿನ ನೆಲದ ನಿಯಂತ್ರಣ ಕೇಂದ್ರದ ಮೇಲೆ ತನ್ನ ಪಡೆಗಳು ದಾಳಿ ಮಾಡಿವೆ ಎಂದು ಅಮೆರಿಕ ಸೆಂಟ್ರಲ್ ಕಮಾಂಡ್ ಹೇಳಿದೆ. ಈ ದಾಳಿಯು ಹಾರ್ಮುಜ್ ಜಲಸಂಧಿಯ ಸುತ್ತಲಿನ ಸ್ಥಳವನ್ನು ಗುರಿಯಾಗಿಸಿಕೊಂಡಿದ್ದು, ಇದು ಯುಎಸ್ ಪಡೆಗಳು ಮತ್ತು ವಾಣಿಜ್ಯ ಸಂಚಾರಕ್ಕೆ ಬೆದರಿಕೆಯನ್ನುಂಟುಮಾಡಿದೆ ಎಂದು ಯುಎಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಯುಎಸ್ ನೌಕಾಪಡೆಯ ಹಡಗು ಮತ್ತು ವಾಣಿಜ್ಯ ಹಡಗನ್ನು ಗುರಿಯಾಗಿಸಿಕೊಂಡಿದ್ದ ನಾಲ್ಕು ಕಾಮಿಕೇಜ್ ಡ್ರೋನ್‌ಗಳನ್ನು ಅಮೆರಿಕ ಹೊಡೆದುರುಳಿಸಿತು. ಈ ಕ್ರಮಗಳು "ಅಳತೆ, ಸಂಪೂರ್ಣವಾಗಿ ರಕ್ಷಣಾತ್ಮಕ ಮತ್ತು ಕದನ ವಿರಾಮವನ್ನು ಕಾಯ್ದುಕೊಳ್ಳುವ ಉದ್ದೇಶವನ್ನು ಹೊಂದಿವೆ" ಎಂದು ಅಮೇರಿಕನ್ ಅಧಿಕಾರಿಗಳು ತಿಳಿಸಿದ್ದಾರೆ. ಆದಾಗ್ಯೂ, ಇರಾನ್ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ಅಮೆರಿಕದ ಮಿಲಿಟರಿ ನೆಲೆಯ ಮೇಲೆ ದಾಳಿ ನಡೆಸಿದಾಗ ಅದು ತ್ವರಿತವಾಗಿ ಪ್ರತಿಕ್ರಿಯಿಸಿತು, ಅಲ್ಲಿಂದ ಇರಾನ್ ನಗರದ ಬಂದರ್ ಅಬ್ಬಾಸ್ ಬಳಿಯ ಸೌಲಭ್ಯದ ಮೇಲೆ ದಾಳಿ ನಡೆಸಲಾಯಿತು.

ರಾಜ್ಯ ಮಾಧ್ಯಮವು ಯಾವ ನೆಲೆ ಅಥವಾ ಅದರ ಸ್ಥಳವನ್ನು ನಿರ್ದಿಷ್ಟಪಡಿಸಿಲ್ಲವಾದರೂ. ಯಾವುದೇ ಹೆಚ್ಚಿನ ಆಕ್ರಮಣವು "ಹೆಚ್ಚು ನಿರ್ಣಾಯಕ" ಪ್ರತಿಕ್ರಿಯೆಯನ್ನು ಎದುರಿಸಬೇಕಾಗುತ್ತದೆ ಎಂದು ಐಆರ್‌ಜಿಸಿ ಎಚ್ಚರಿಕೆ ನೀಡಿದೆ. ಬಂದರ್ ಅಬ್ಬಾಸ್ನ ಪೂರ್ವಕ್ಕೆ ಮೂರು ಸ್ಫೋಟಗಳು ವರದಿಯಾಗಿವೆ, ಇದು ನಗರದ ವಾಯು ರಕ್ಷಣಾ ವ್ಯವಸ್ಥೆಗಳನ್ನು ಸಂಕ್ಷಿಪ್ತವಾಗಿ



ಸಕ್ರಿಯಗೊಳಿಸಿತು ಎಂದು ಐಆರ್‌ಜಿಸಿ ಯೊಂದಿಗೆ ನಿಕಟ ಸಂಬಂಧ ಹೊಂದಿರುವ ಮಾಧ್ಯಮ ಸಂಸ್ಥೆ ಫಾರ್ಸ್ ನ್ಯೂಸ್ ಏಜೆನ್ಸಿ ತಿಳಿಸಿದೆ. ಐಆರ್‌ಜಿಸಿ–ಸಂಬಂಧಿತ ತಸ್ನಿಮ್ ಏಜೆನ್ಸಿಯು ತನ್ನ ನೌಕಾ ಪಡೆಗಳು ಹಾರ್ಮುಜ್ ಜಲಸಂಧಿಯನ್ನು ಅದರ ರಾಡಾರ್ ಸ್ವಿಚ್ ಆಫ್ ಮಾಡಿ ಸಾಗಿಸಲು ಪ್ರಯತ್ನಿಸುತ್ತಿರುವ ಯುಎಸ್ ತೈಲ ಟ್ಯಾಂಕರ್ ಅನ್ನು ಎದುರಿಸಿತು, ಎಚ್ಚರಿಕೆ ಗುಂಡುಗಳನ್ನು ಹಾರಿಸಿತು ಮತ್ತು ಅದನ್ನು ಹಿಂದಕ್ಕೆ ತಿರುಗಿಸುವಂತೆ ಒತ್ತಾಯಿಸಿತು ಎಂದು ವರದಿ ಮಾಡಿದೆ.

ಇರಾನಿನ ಅಧಿಕಾರಿಗಳು ಯುಎಸ್ ದಾಳಿಗಳನ್ನು ಪ್ರಸ್ತುತ ಕದನ ವಿರಾಮ ಒಪ್ಪಂದದ ನೇರ ಉಲ್ಲಂಘನೆ ಎಂದು ಖಂಡಿಸಿದರು.

## ಅಮೆರಿಕದ ದಾಳಿ ಖಾಲಿ ಪ್ರದೇಶವನ್ನು ಹೊಡೆದಿವೆ: ಇರಾನ್ ಸೇನೆ ಲೇವಡಿ

ಇರಾನಿನ ಡ್ರೋನ್‌ಗಳ ವಿರುದ್ಧ "ಸಂಪೂರ್ಣವಾಗಿ ರಕ್ಷಣಾತ್ಮಕ" ಕಾರ್ಯಾಚರಣೆಗಳನ್ನು ನಡೆಸಿರುವುದಾಗಿ ಸೆಂಟ್‌ಕಾಂ ಹೇಳಿದ ನಂತರ, ಹಾರ್ಮುಜ್ ಜಲಸಂಧಿಯ ಬಳಿ ಅಮೆರಿಕದ ರಾತ್ರಿಯ ದಾಳಿಗಳು ಯಾವುದೇ ಹಾನಿಯನ್ನುಂಟುಮಾಡಿಲ್ಲ ಎಂದು ಇರಾನ್ ರಾಜ್ಯ ಮಾಧ್ಯಮ ಗುರುವಾರ ಹೇಳಿಕೊಂಡಿದೆ. ಸೆಂಟ್‌ಕಾಂ ಪ್ರಕಾರ, ಇರಾನಿನ ಪಡೆಗಳು ಐದು ಏಕಮುಖ ದಾಳಿ ಡ್ರೋನ್‌ಗಳನ್ನು ಉಡಾಯಿಸಿದ್ದವು, ಅದು "ಹಾರ್ಮುಜ್ ಜಲಸಂಧಿಯಲ್ಲಿ ಮತ್ತು ಬಳಿ ಸ್ಪಷ್ಟ ಬೆದರಿಕೆಯನ್ನುಂಟುಮಾಡಿತು". ಎಲ್ಲಾ ಐದು ಡ್ರೋನ್‌ಗಳನ್ನು ತಡೆಹಿಡಿದಿರುವುದಾಗಿ ಅಮೆರಿಕ ಮಿಲಿಟರಿ ಹೇಳಿಕೊಂಡಿದೆ ಮತ್ತು ಬಂದರ್ ಅಬ್ಬಾಸ್‌ನಲ್ಲಿರುವ ಇರಾನಿನ ನೆಲದ ನಿಯಂತ್ರಣ ತಾಣದಿಂದ ಆರನೇ ಉಡಾವಣೆಯನ್ನು ಅಮೆರಿಕನ್ ಪಡೆಗಳು ಸಹ ತಡೆಯಿತು.

ಒಂದು ವಾರದೊಳಗೆ ಅಮೆರಿಕ ಮಿಲಿಟರಿ ಇರಾನಿನ ಗುರಿಗಳ ವಿರುದ್ಧ ಕ್ರಮ ಕೈಗೊಂಡಿರುವುದು ಇದು ಎರಡನೇ ಬಾರಿಯಾಗಿದ್ದು, ಜಾಗತಿಕ ತೈಲ ವ್ಯಾಪಾರದ ಗಮನಾರ್ಹ ಪಾಲು ಹಾದುಹೋಗುವ ಕಾರ್ಯತಂತ್ರದ ಪ್ರಮುಖ ಜಲಮಾರ್ಗದ ಸುತ್ತ ಉದ್ವಿಗ್ನತೆಯನ್ನು ಹೆಚ್ಚಿಸಿದೆ. ಏತನ್ಮಧ್ಯೆ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಟೆಹ್ರಾನ್ ಜೊತೆ ಒಪ್ಪಂದ ಮಾಡಿಕೊಳ್ಳಲು ಆತುರಪಡುವುದಿಲ್ಲ ಎಂದು ಹೇಳಿದರು, ಅವರನ್ನು ಮೀರಿಸುವುದಕ್ಕಾಗಿ ಇರಾನ್ ಮಾಡುತ್ತಿರುವ ಪ್ರಯತ್ನಗಳು ಫಲ ನೀಡುವುದಿಲ್ಲ ಎಂದು ಎಚ್ಚರಿಸಿದರು. ಮಾತುಕತೆಯ ಅಡಿಯಲ್ಲಿರುವ ತಿಳುವಳಿಕೆ ಒಪ್ಪಂದವು ಜಲಸಂಧಿಯನ್ನು ಮತ್ತೆ ತೆರೆಯುವ ಬದಲು ಇರಾನ್ ಬಂದರುಗಳ ಮೇಲಿನ ಅಮೆರಿಕದ ದಿಗ್ಬಂಧನವನ್ನು ತೆಗೆದುಹಾಕುತ್ತದೆ ಎಂಬ ಇರಾನ್ ರಾಜ್ಯ ಮಾಧ್ಯಮ ವರದಿಗಳನ್ನು ಶ್ವೇತಭವನವು ತಳ್ಳಿಹಾಕಿತು.

# ಇರಾನ್ ಉದ್ವಿಗ್ನತೆಯ ನಡುವೆ ಹಾರ್ಮುಜ್ ಜಲಸಂಧಿ ಅಪಾಯಕಾರಿ ವಲಯದಲ್ಲಿ: ಕಾಜಾ ಕಲ್ಲಾಸ್

**ಬ್ರುಸೆಲ್ಸ್, ಮೇ 28:** ಇರಾನ್ ಒಳಗೊಂಡ ಉದ್ವಿಗ್ನತೆಗಳು ಜಾಗತಿಕ ಕಡಲ ಭದ್ರತೆಗೆ ಬೆದರಿಕೆಯನ್ನುಂಟುಮಾಡುತ್ತಿರುವುದರಿಂದ ಹಾರ್ಮುಜ್ ಜಲಸಂಧಿಯು "ಯುದ್ಧ ಮತ್ತು ಶಾಂತಿಯ ನಡುವಿನ ಅಪಾಯಕಾರಿ ಬೂದು ವಲಯ"ದಲ್ಲಿ ಸಿಲುಕಿಕೊಂಡಿದೆ ಎಂದು ಐರೋಪ್ಯ ಒಕ್ಕೂಟದ ವಿದೇಶಾಂಗ ನೀತಿ ಮುಖ್ಯಸ್ಥೆ ಮತ್ತು ಯುರೋಪಿಯನ್ ಆಯೋಗದ ಉಪಾಧ್ಯಕ್ಷೆ ಕಾಜಾ ಕಲ್ಲಾಸ್ ಗುರುವಾರ ಎಚ್ಚರಿಸಿದ್ದಾರೆ. ಇಗ ವಿದೇಶಾಂಗ ಮಂತ್ರಿಗಳೊಂದಿಗಿನ ಸಭೆಗಳ ನಂತರ ಮಾತನಾಡಿದ ಕಲ್ಲಾಸ್, ಕದನ ವಿರಾಮವನ್ನು ವಿಸ್ತರಿಸಲು ಮತ್ತು ಕಾರ್ಯತಂತ್ರದ ಜಲಮಾರ್ಗವನ್ನು ಮತ್ತೆ ತೆರೆಯಲು ದುರ್ಬಲವಾದ ರಾಜತಾಂತ್ರಿಕ ಪ್ರಯತ್ನ ನಡೆಯುತ್ತಿದೆ ಎಂದು ಹೇಳಿದರು. "ಕದನ ವಿರಾಮವನ್ನು ವಿಸ್ತರಿಸಲು ಮತ್ತು ಜಲಸಂಧಿಯನ್ನು ಮತ್ತೆ ತೆರೆಯಲು ಈಗ ರಾಜತಾಂತ್ರಿಕ ಒತ್ತಡವಿದೆ" ಎಂದು ಅವರು ಹೇಳಿದರು. ಯಾವುದೇ ಆರಂಭಿಕ ಇಯು–ಇರಾನ್ ತಿಳುವಳಿಕೆಯನ್ನು ಅನುಸರಿಸುವ ಅಗತ್ಯವಿದೆ ಎಂದು ಅವರು ಹೇಳಿದರು, ಅದರ ದಾಸ್ತಾನು ಮತ್ತು ಇತರ ಪ್ರಾದೇಶಿಕ ಭದ್ರತಾ ಕಾಳಜಿಗಳನ್ನು ಒಳಗೊಂಡಂತೆ ಇರಾನ್ನ ಪರಮಾಣು



ಕಾರ್ಯಕ್ರಮವನ್ನು ಪರಿಹರಿಸುವ ಆಳವಾದ ಮಾತುಕತೆಗಳು ಬೇಕಾಗುತ್ತವೆ. ಈ ಮಾತುಕತೆಗಳನ್ನು ಬೆಂಬಲಿಸಲು ತಾಂತ್ರಿಕ ಪರಿಣತಿಯನ್ನು ನೀಡಲು ಇಯು ಸಿದ್ಧವಾಗಿದೆ ಎಂದು ಅವರು ತಿಳಿಸಿದರು. ಕಲ್ಲಾಸ್ ಅವರು, ತನ್ನ ಕಡಲ ಕಾರ್ಯಾಚರಣೆ ಆಪರೇಷನ್ ಆಸ್ಪೈಡ್ಸ್ (ಯುರೋಪಿಯನ್ ಯೂನಿಯನ್ ನೇವಲ್ ಫೋರ್ಸ್ ಮೂಲಕವೂ ಸೇರಿದಂತೆ, ಈ ಪ್ರದೇಶದಲ್ಲಿ ಸಂಚರಣ ಸ್ವಾತಂತ್ರ್ಯವನ್ನು ರಕ್ಷಿಸುವಲ್ಲಿ ಇಯು ನ ನಿರಂತರ ಪಾತ್ರವನ್ನು ಎತ್ತಿತೋರಿಸಿದರು.

ಇದನ್ನು ಈಗಾಗಲೇ ಹೆಚ್ಚುವರಿ ನೌಕಾ ಸ್ವತ್ತುಗಳೊಂದಿಗೆ ಬಲಪಡಿಸಲಾಗಿದೆ. ಮತ್ತಷ್ಟು ಬಲಪಡಿಸುವ ಅಗತ್ಯವಿರಬಹುದು ಎಂದು ಅವರು ಸೂಚಿಸಿದರು. ಕೊಲ್ಲಿಯ ಆಚೆಗೆ, ಲೆಬನಾನ್, ಗಾಜಾ ಮತ್ತು ಪಶ್ಚಿಮ ದಂಡೆಯಲ್ಲಿನ ಬೆಳವಣಿಗೆಗಳು ಸೇರಿದಂತೆ ಮಧ್ಯಪ್ರಾಚ್ಯದಲ್ಲಿ ವ್ಯಾಪಕವಾದ ಅಸ್ಥಿರತೆಯನ್ನು ಅವರು ಸೂಚಿಸಿದರು ಮತ್ತು ಉಲ್ಬಣಗೊಳ್ಳುವುದನ್ನು ತಡೆಯಲು ನಿರಂತರ ರಾಜತಾಂತ್ರಿಕ ಮಾತುಕತೆ ಅಗತ್ಯವನ್ನು ಒತ್ತಿ ಹೇಳಿದರು. ಉಕ್ರೇನ್‌ನಲ್ಲಿನ ಯುದ್ಧದ ಬಗ್ಗೆ ಮಾತನಾಡಿದ ಕಲ್ಲಾಸ್, ರಷ್ಯಾ "ಮಿಲಿಟರಿ, ಆರ್ಥಿಕವಾಗಿ ಮತ್ತು ರಾಜತಾಂತ್ರಿಕವಾಗಿ ಹಿಂದೆ ಸರಿದಿದೆ" ಎಂದು ಹೇಳಿದರು, ಆದರೆ ನಡೆಯುತ್ತಿರುವ ಮುಷ್ಕರಗಳು ಮಾಸ್ಕೋ ಇನ್ನೂ ಶಾಂತಿಗೆ ಸಿದ್ಧವಾಗಿಲ್ಲ ಎಂದು ತೋರಿಸುತ್ತವೆ ಎಂದು ಎಚ್ಚರಿಸಿದರು. ಇಗ ತಟಸ್ಥ ಮಧ್ಯವರ್ತಿಯಾಗಿ ಕಾರ್ಯನಿರ್ವಹಿಸುವುದಿಲ್ಲ ಎಂದು ಅವರು ಪುನರುಚ್ಚರಿಸಿದರು ಮತ್ತು ಉಕ್ರೇನ್‌ನ ಸಾರ್ವಭೌಮತ್ವ ಮತ್ತು ಪ್ರಾದೇಶಿಕ ಸಮಗ್ರತೆಗೆ ಬೆಂಬಲವನ್ನು ಪುನರುಚ್ಚರಿಸಿದರು. ಇಗ ಮಂತ್ರಿಗಳು ರಷ್ಯಾದ ವಿರುದ್ಧ ಹೊಸ ನಿರ್ಬಂಧಗಳನ್ನು ಸಿದ್ಧಪಡಿಸುತ್ತಿದ್ದಾರೆ ಮತ್ತು ವ್ಯಾಪಾರ ಮತ್ತು ಹೂಡಿಕೆ ಕ್ರಮಗಳ ಮೂಲಕ ಜಾಗತಿಕ ಒತ್ತಡವನ್ನು ಹೆಚ್ಚಿಸಲು ಹೆಚ್ಚುವರಿ ಮಾರ್ಗಗಳನ್ನು ಅನ್ವೇಷಿಸುತ್ತಿದ್ದಾರೆ ಎಂದು ಅವರು ಹೇಳಿದರು.

# 60 ದಿನಗಳ ಕದನ ವಿರಾಮ ವಿಸ್ತರಣೆಗೆ ಅಮೆರಿಕ, ಇರಾನ್ ಸಂಧಾನಕಾರರ ಒಪ್ಪಿಗೆ: ಟ್ರಂಪ್ ಅನುಮೋದನೆ ಬಾಕಿ

**ವಾಷಿಂಗ್ಟನ್, ಮೇ 28:** ಕದನ ವಿರಾಮವನ್ನು 60 ದಿನಗಳವರೆಗೆ ವಿಸ್ತರಿಸಲು ಮತ್ತು ಇರಾನ್‌ನ ಪರಮಾಣು ಕಾರ್ಯಕ್ರಮದ ಕುರಿತು ಮಾತುಕತೆಗಳನ್ನು ಪ್ರಾರಂಭಿಸಲು ಅಮೆರಿಕ ಮತ್ತು ಇರಾನಿನ ಸಮಾಲೋಚಕರು ತಾತ್ಕಾಲಿಕ ಒಪ್ಪಂದಕ್ಕೆ ಬಂದಿದ್ದಾರೆ ಎಂದು ಈ ವಿಷಯದ ಬಗ್ಗೆ ಪರಿಚಿತವಾಗಿರುವ ಅಮೆರಿಕದ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಸಾರ್ವಜನಿಕವಾಗಿ ಪ್ರತಿಕ್ರಿಯಿಸಲು ಅಧಿಕಾರವಿಲ್ಲದ ಮತ್ತು ಹೆಸರು ಬಹಿರಂಗಪಡಿಸದ ಷರತ್ತು ವಿಧಿಸಿ ಮಾತನಾಡಿದ ಅಧಿಕಾರಿ, ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇನ್ನಷ್ಟೇ ಬರಬೇಕಿರುವ ತಿಳುವಳಿಕೆ ಒಪ್ಪಂದಕ್ಕೆ ಸಹಿ ಹಾಕಬೇಕಾಗಿದೆ ಎಂದು ಹೇಳಿದರು. ಅಮೆರಿಕ ಮತ್ತು ಇರಾನ್



ನಡುವಿನ ದುರ್ಬಲವಾದ ಕದನ ವಿರಾಮ ಅಲುಗಾಡುತ್ತಿರುವಂತೆ ಕಂಡುಬರುವ ಕ್ಷಣದಲ್ಲಿ ಎರಡೂ ಕಡೆಯವರು ರೂಪಿಸಿದ ತಾತ್ಕಾಲಿಕ ಒಪ್ಪಂದವು ಬಂದಿದೆ. ಆದಾಗ್ಯೂ, ಟ್ರಂಪ್ ಅವರಿಂದ ಅಥವಾ ಇರಾನ್‌ನಿಂದ ಯಾವುದೇ ತಕ್ಷಣದ ದೃಢೀಕರಣ ಬಂದಿಲ್ಲ. 60 ದಿನಗಳ ಒಪ್ಪಂದವು ಹಾರ್ಮುಜ್ ಜಲಸಂಧಿಯ ಮೂಲಕ ಸಾಗಣೆಯು ಅನಿಯಂತ್ರಿತವಾಗಿರುತ್ತದೆ, ಯಾವುದೇ ಸುಂಕ ಅಥವಾ ಕಿರುಕುಳವಿಲ್ಲ ಮತ್ತು ಇರಾನ್ 30 ದಿನಗಳಲ್ಲಿ ಎಲ್ಲಾ ಗಣಿಗಳನ್ನು ತೆಗೆದುಹಾಕಬೇಕಾಗುತ್ತದೆ ಎಂದು ಹೇಳುತ್ತದೆ ಎಂದು ಆಕ್ಸಿಯೋಸ್ ವರದಿ ಮಾಡಿದೆ.

ಇದಕ್ಕೆ ಪ್ರತಿಯಾಗಿ, ಅಮೆರಿಕ ಇರಾನ್‌ನ ಬಂದರುಗಳ ಮೇಲಿನ ತನ್ನ ನೌಕಾ ದಿಗ್ಬಂಧನವನ್ನು ತೆಗೆದುಹಾಕುತ್ತದೆ, ಆದರೆ ಎಷ್ಟು ವಾಣಿಜ್ಯ ಸಾಗಣೆಯನ್ನು ಪುನಃಸ್ಥಾಪಿಸಲಾಗುತ್ತದೆ.

ಈ ಜ್ಞಾಪಕ ಪತ್ರವು ಪರಮಾಣು ಶಸ್ತ್ರಾಸ್ತ್ರಕ್ಕೆ ಸಂಬಂಧಿಸಿದಂತೆ ಯಾವುದೇ ಯೋಜನೆಯನ್ನು ಮುಂದುವರೆಸುವುದಿಲ್ಲ ಎಂಬ ಇರಾನಿನ ಬದ್ಧತೆಯನ್ನು ಸಹ ಒಳಗೊಂಡಿರುತ್ತದೆ ಎಂದು ಆಕ್ಸಿಯಾಸ್ ಹೇಳಿದೆ.

# ಭಾರತೀಯ ದಂಪತಿಗೆ ಅಮೆರಿಕಾದಲ್ಲಿ ಜನಾಂಗೀಯ ನಿಂದನೆ

**ವಾಷಿಂಗ್‌ಟನ್, ಮೇ 28:** ಅಮೆರಿಕಾದಲ್ಲಿ ಭಾರತೀಯ ದಂಪತಿ ಜನಾಂಗೀಯ ನಿಂದನೆಗೆ ಗುರಿಯಾಗಿದ್ದಾರೆ. ಜನಾಂಗೀಯ ನಿಂದನೆಯ ಕ್ಲಿಪ್ ಆನ್‌ಲೈನ್‌ನಲ್ಲಿ ವೈರಲ್ ಆಗತೊಡಗಿದೆ. ಅನೇಕರು ಪರಿಸ್ಥಿತಿಯನ್ನು ಶಾಂತವಾಗಿ ನಿಭಾಯಿಸಿದ್ದಕ್ಕಾಗಿ ದಂಪತಿಗಳನ್ನು ಶ್ಲಾಘಿಸಿದರು. ಸಾಮಾಜಿಕ ಮಾಧ್ಯಮ ಬಳಕೆದಾರರು ದಂಪತಿ ಘನತೆಯನ್ನು ಮೆಚ್ಚಿದ್ದಾರೆ.

ಆದಾಗ್ಯೂ, ಇತರರು, ಅಂತಹ ಘಟನೆಗಳ ಸಮಯದಲ್ಲಿ ಮೌನವಾಗಿರುವುದು ಜನಾಂಗೀಯ ನಡವಳಿಕೆಯನ್ನು ಉತ್ತೇಜಿಸಬಹುದು ಎಂದು ವಾದಿಸಿದ್ದಾರೆ.ಹಲವಾರು ಸಾಮಾಜಿಕ ಮಾಧ್ಯಮ ಬಳಕೆದಾರರು ವಲಸಿಗರು ಮತ್ತು ಸಂದರ್ಶಕರು ಸರ್ಕಾರ ನೀಡುವ ವೀಸಾಗಳ ಮೂಲಕ ಕಾನೂನುಬದ್ಧವಾಗಿ ದೇಶವನ್ನು ಪ್ರವೇಶಿಸುತ್ತಾರೆ ಎಂದು ಗಮನಸೆಳೆದರು, ಕೆಲವು ವ್ಯಕ್ತಿಗಳನ್ನು ನಿಂದನೆಯೊಂದಿಗೆ ಗುರಿಯಾಗಿಸಿಕೊಳ್ಳುವುದರ ಹಿಂದಿನ ತರ್ಕವನ್ನು ಪ್ರಶ್ನಿಸಿದರು.

ವೀಡಿಯೊವನ್ನು ಆನ್‌ಲೈನ್‌ನಲ್ಲಿ ಹಂಚಿಕೊಳ್ಳುವಾಗ ಅನೇಕ ಬಳಕೆದಾರರು ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಅವರನ್ನು ಟ್ಯಾಗ್ ಮಾಡಿದ್ದಾರೆ. ಭಾರತಕ್ಕೆ ಈ ಹಿಂದೆ ಭೇಟಿ ನೀಡಿದ ಸಂದರ್ಭದಲ್ಲಿ, ರುಬಿಯೊ ಪ್ರತಿ ದೇಶವೂ ಜನಾಂಗೀಯ ಹೇಳಿಕೆಗಳನ್ನು ನೀಡುವ ಜನರನ್ನು ಹೊಂದಿದೆ ಎಂದು ಹೇಳಿದ್ದರು.

ಇಲ್ಲಿಂದ ತೊಲಗಿ: ಭಾರತೀಯ ದಂಪತಿಗೆ ಅಮೆರಿಕಾದಲ್ಲಿ ಜನಾಂಗೀಯ ನಿಂದನೆ

ಅಮೆರಿಕ ಜೊತೆಗೆ ಹಲವು ವಿಷಯಗಳಲ್ಲಿ ಶಾಂತಿ ಮಾತುಕತೆ; ಆದರೆ...: ಇರಾನ್ ಹೇಳಿದ್ದೇನು?

ಈ ಘಟನೆ ಸಾಮಾಜಿಕ ಮಾಧ್ಯಮದಲ್ಲಿ ಭಾರತೀಯ ವಿರೋಧಿ ವಿಷಯದ ಹೆಚ್ಚುತ್ತಿರುವ ಪ್ರವೃತ್ತಿಯತ್ತ ಗಮನ ಸೆಳೆದಿದೆ. ಅಲ್ಲಿ ಕೆಲವು ಪ್ರಭಾವಿಗಳು ಆನ್‌ಲೈನ್‌ನಲ್ಲಿ ಹೆಚ್ಚಿನ ಗಮನ ಸೆಳೆಯಲು ಸಾರ್ವಜನಿಕ ಸ್ಥಳಗಳಲ್ಲಿ ಭಾರತೀಯರನ್ನು ಗುರಿಯಾಗಿಸಿಕೊಂಡಿದ್ದಾರೆ ಎಂದು ಹೇಳಲಾಗಿದೆ. ಈ ವೈರಲ್ ಕ್ಲಿಪ್ ಅನ್ನು ಸ್ವಯಂ–ವಿವರಿಸಿದ ಸಂಗೀತ ನಿರ್ಮಾಪಕರಿಗೆ ಸೇರಿದ ಪರಿಶೀಲಿಸಿದ ಖಾತೆಯಿಂದ ಪೋಸ್ಟ್ ಮಾಡಲಾಗಿದೆ ಎಂದು ವರದಿಯಾಗಿದೆ, ಅವರು ಈ ಹಿಂದೆ ಭಾರತೀಯ ರೆಸ್ಟೋರೆಂಟ್‌ನಲ್ಲಿ ಚಿತ್ರೀಕರಿಸಿದ ವೀಡಿಯೊಗಳನ್ನು ಒಳಗೊಂಡಂತೆ ಭಾರತೀಯರನ್ನು ಅಪಹಾಸ್ಯ ಮಾಡುವ ವೀಡಿಯೊಗಳನ್ನು ಹಂಚಿಕೊಂಡಿದ್ದಾರೆ.

# ವಿನೇಶ್ ವಿರುದ್ಧ ಸುಪ್ರೀಂ ಮೆಟ್ಟಿಲೇರಿದ ಕುಸ್ತಿ ಒಕ್ಕೂಟ

**ನವದೆಹಲಿ, ಮೇ 28:** 2026ರ ಏಷ್ಯನ್ ಗೇಮ್ಸ್‌ನ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸಲು ಕುಸ್ತಿಪಟು ವಿನೇಶ್ ಫೋಗಟ್ ಅವರಿಗೆ ಅನುಮತಿ ನೀಡಿದ ದೆಹಲಿ ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ಭಾರತೀಯ ಕುಸ್ತಿ ಫೆಡರೇಶನ್ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿದೆ.

ನ್ಯಾಯಮೂರ್ತಿಗಳು ಪಿಎಸ್ ನರಸಿಂಹ ಮತ್ತು ನ್ಯಾಯಮೂರ್ತಿ ಅಲೋಕ್ ಆರಾಧೆ ಅವರನ್ನೊಳಗೊಂಡ ಪೀಠವು ನಾಳೆ ಈ ಅರ್ಜಿ ವಿಚಾರಣೆ ನಡೆಸಲಿದೆ. ಮೇ 22ರಂದು ದೆಹಲಿ ಹೈಕೋರ್ಟ್ ಫೋಗಟ್‌ಗೆ ಮೇ 30 ಮತ್ತು 31ರಂದು ನಿಗದಿಯಾಗಿರುವ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸಲು ಅವಕಾಶ ನೀಡಬೇಕೆಂದು ಆದೇಶಿಸಿತ್ತು. ಭಾರತೀಯ ಕುಸ್ತಿ ಒಕ್ಕೂಟ ವಿನೇಶ್ ಅವರನ್ನು ಅನರ್ಹ ಎಂದು ಘೋಷಿಸಿದ್ದ



ನಿರ್ಧಾರವನ್ನು ಪ್ರಶ್ನಿಸಿ ಸಲ್ಲಿಸಲಾಗಿದ್ದ ಅರ್ಜಿಯ ವಿಚಾರಣೆ ನಡೆಸಿ ಈ ಆದೇಶವನ್ನು ನೀಡಿತ್ತು.

ವಿಚಾರಣೆ ವೇಳೆ ಭಾರತೀಯ ಕುಸ್ತಿ ಫೆಡರೇಶನ್ ನಿರ್ಧಾರವನ್ನು ದೆಹಲಿ ಹೈಕೋರ್ಟ್ ಪ್ರಶ್ನಿಸಿತ್ತು. ಹಳೆಯ ಆಯ್ಕೆ ಮಾನದಂಡಗಳನ್ನು ದಿಢೀರ್ ಬದಲಾಯಿಸಿರುವುದರ ಹಿಂದೆ ದ್ವೇಷದ ರಾಜಕಾರಣ ಇರುವಂತೆ ಕಾಣುತ್ತಿದೆ ಎಂದು ಹೇಳಿತ್ತು. ಕಳೆದ ವರ್ಷ ಮಗುವಿಗೆ ಜನ್ಮ ನೀಡಿದ್ದ ವಿನೇಶ್ 2025ರ ಡಿಸೆಂಬರ್‌ನಲ್ಲಿ ತಮ್ಮ ನಿವೃತ್ತಿ ನಿರ್ಧಾರವನ್ನು ಹಿಂಪಡೆದಿದ್ದರು. ಈ ಬೆನ್ನಲ್ಲೆ ಕುಸ್ತಿ ಫೆಡರೇಶನ್ ನಿಯಮಗಳನ್ನು ಬದಲಾಯಿಸಿ ವಿನೇಶ್ ಅವರನ್ನು ಹೊರಗಿಟ್ಟಿತ್ತು. ಶಿಸ್ತು ಉಲ್ಲಂಘನೆ ಮತ್ತು ನಿವೃತ್ತಿ ಬಳಿಕ ಮತ್ತೆ ಸ್ಪರ್ಧೆಗೆ ಬರುವ ಪ್ರಕ್ರಿಯೆಗಳನ್ನು ಸರಿಯಾಗಿ ಪಾಲಿಸಿಲ್ಲ ಎಂಬ ಆರೋಪದಲ್ಲಿ ಡಬ್ಲ್ಯೂಎಫ್‌ಐ ವಿನೇಶ್ ಅವರಿಗೆ ಶೋಕಾಸ್ ನೋಟಿಸ್ ನೀಡಿತ್ತು. 2026ರ ಜೂನ್‌ವರೆಗೆ ಸ್ಪರ್ಧಿಸದಂತೆ ತಡೆ ಹೇರಿತ್ತು.

ಈ ವಿಚಾರದಲ್ಲಿ ಹೈಕೋರ್ಟ್ ದೇಶದಲ್ಲಿ ತಾಯ್ತನವನ್ನು ಸಂಭ್ರಮಿಸಲಾಗುತ್ತದೆ, ಗೌರವಿಸಲಾಗುತ್ತದೆ. ಅದೇ ಒಬ್ಬ ಕ್ರೀಡಾಪಟುವಿನ ವೃತ್ತಿಜೀವನಕ್ಕೆ ಮಾರಕವಾಗುವಂತೆ ಬಳಸಿಕೊಳ್ಳಬಾರದು ಎಂದು ಹೇಳಿತ್ತು.

# ಭಯೋತ್ಪಾದನೆಯ ಮೇಲೆ ಶೂನ್ಯಸಹಿಷ್ಣುತೆಗೆ ದೋವಲ್ ಕರೆ

**ಮಾಸ್ಕೋ, ಮೇ 28:** ಭಯೋತ್ಪಾದನೆಯ ವಿರುದ್ಧದ ಜಾಗತಿಕ ಹೋರಾಟವು "ಡಬಲ್ ಸ್ಟ್ಯಾಂಡರ್ಡ್"ಗಳನ್ನು ಸಹಿಸಲು ಸಾಧ್ಯವಿಲ್ಲ ಎಂದು ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಗುರುವಾರ ಘೋಷಿಸಿದ್ದಾರೆ, ಭಯೋತ್ಪಾದಕ ಗುಂಪುಗಳು ಮತ್ತು ಅವುಗಳನ್ನು ಪ್ರಾಯೋಜಿಸುವ ಅಥವಾ ಹಣಕಾಸು ಒದಗಿಸುವ ರಾಜ್ಯಗಳ ವಿರುದ್ಧ ನಿರ್ಣಾಯಕ ಕ್ರಮ ಕೈಗೊಳ್ಳುವಂತೆ ರಾಷ್ಟ್ರಗಳನ್ನು ಒತ್ತಾಯಿಸಿದ್ದಾರೆ.

"ರಷ್ಯಾದಂತೆಯೇ, ನಮ್ಮ ಎಲ್ಲಾ ಶಕ್ತಿಯಿಂದ ಭಯೋತ್ಪಾದನೆಯನ್ನು ಹತ್ತಿಕ್ಕಲು ನಾವು ಸಂಪೂರ್ಣವಾಗಿ ಬದ್ಧರಾಗಿದ್ದೇವೆ, ಭಾರತ ಮತ್ತು ರಷ್ಯಾ ತಮ್ಮ ಎಲ್ಲಾ ಶಕ್ತಿಯಿಂದ ಭಯೋತ್ಪಾದನೆಯ ವಿರುದ್ಧ ಹೋರಾಡುತ್ತವೆ" ಎಂದು ದೋವಲ್ ರಷ್ಯಾದ ಭದ್ರತಾ ಮಂಡಳಿಯ ಕಾರ್ಯದರ್ಶಿ ಸೆರ್ಗೆಯ್ ಶೋಯಿಗು ಅವರಿಗೆ ಹೇಳಿದರು.

ಮಾಸ್ಕೋದಲ್ಲಿ ನಡೆದ 1 ನೇ ಅಂತರರಾಷ್ಟ್ರೀಯ ಭದ್ರತಾ ವೇದಿಕೆ ಮತ್ತು ಭದ್ರತಾ ವಿಷಯಗಳಿಗೆ ಜವಾಬ್ದಾರರಾಗಿರುವ ಉನ್ನತ ಶ್ರೇಣಿಯ ಅಧಿಕಾರಿಗಳ ಘಿಖಗಿ ಅಂತರರಾಷ್ಟ್ರೀಯ ಸಭೆಯನ್ನು ಉದ್ದೇಶಿಸಿ ಮಾತನಾಡಿದ ದೋವಲ್, ಭಯೋತ್ಪಾದನೆಯು "ಅಂತರರಾಷ್ಟ್ರೀಯ ಭದ್ರತೆಗೆ ಅತ್ಯಂತ ಗಂಭೀರ ಬೆದರಿಕೆಗಳಲ್ಲಿ ಒಂದಾಗಿದೆ" ಎಂದು ಹೇಳಿದರು ಮತ್ತು ಹೆಚ್ಚಿನ ಜಾಗತಿಕ ಹೊಣೆಗಾರಿಕೆಯನ್ನು ಒತ್ತಾಯಿಸಿದರು. "ಪ್ರತಿಯೊಂದು ದೇಶಕ್ಕೂ ಭಯೋತ್ಪಾದನೆಯ ವಿರುದ್ಧ ಹೋರಾಡುವ ಜವಾಬ್ದಾರಿ ಇದೆ. ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ಎರಡು ಸ್ಟ್ಯಾಂಡರ್ಡ್ ಇರಲು ಸಾಧ್ಯವಿಲ್ಲ" ಎಂದು ಅವರು ಹೇಳಿದರು, ಜವಾಬ್ದಾರಿಯುತ ರಾಷ್ಟ್ರಗಳು ಭಯೋತ್ಪಾದನೆಯನ್ನು ಬೆಂಬಲಿಸುತ್ತವೆಯೇ ಅಥವಾ ವಿರೋಧಿಸುತ್ತವೆಯೇ ಎಂಬುದನ್ನು ಸ್ಪಷ್ಟವಾಗಿ ನಿರ್ಧರಿಸಬೇಕು –



ಮತ್ತು ಅದಕ್ಕೆ ಅನುಗುಣವಾಗಿ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು. ಏಪ್ರಿಲ್ 22, 2025 ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ 26 ನಾಗರಿಕರು ಸಾವನ್ನಪ್ಪಿದ ಭಯೋತ್ಪಾದಕ ದಾಳಿಯನ್ನು ಉಲ್ಲೇಖಿಸಿದ ದೋವಲ್, ಭಾರತವು "ರಾಜ್ಯ ಪ್ರಾಯೋಜಿತ ಭಯೋತ್ಪಾದನೆ"ಗೆ ಪದೇ ಪದೇ ಬಲಿಯಾಗಿದೆ ಎಂದು ಹೇಳಿದರು. ಬಲಿಪಶುಗಳನ್ನು "ಅವರ ಧರ್ಮದ ಆಧಾರದ ಮೇಲೆ ಪ್ರತ್ಯೇಕಿಸಿ ಕೊಲ್ಲಲಾಯಿತು" ಮತ್ತು ಪಾಕಿಸ್ತಾನ ಮೂಲದ ಲಷ್ಕರ್–ಎ–ತೊಯ್ಬಾ ಪ್ರಾಕ್ಸಿ ದಿ ರೆಸಿಸ್ಟೆನ್ಸ್ ಫ್ರಂಟ್ (ಟಿಆರ್‌ಎಫ್) ಹೊಣೆಯನ್ನು ಹೊತ್ತುಕೊಂಡಿದೆ ಎಂದು ಅವರು ಗಮನಿಸಿದರು. ದಾಳಿಯ ನಂತರ, ಭಾರತವು ಮೇ 7, 2025 ರಂದು ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಜಮ್ಮು ಮತ್ತು ಕಾಶ್ಮೀರದಾದ್ಯಂತ ಭಯೋತ್ಪಾದಕ ಮೂಲಸೌಕರ್ಯಗಳನ್ನು ಗುರಿಯಾಗಿಸಿಕೊಂಡು ಆಪರೇಷನ್ ಸಿಂಧೂರ್ ಅನ್ನು ಪ್ರಾರಂಭಿಸಿತು. ಲಷ್ಕರ್–ಎ–ತೊಯ್ಬಾ, ಜೈಶ್–ಎ–ಮೊಹಮ್ಮದ್ ಮತ್ತು ಹಿಜ್ಬುಲ್ ಮುಜಾಹಿದ್ದೀನ್ಗೆ ಸಂಬಂಧಿಸಿದ ಒಂಬತ್ತು ಪ್ರಮುಖ ಭಯೋತ್ಪಾದಕ ಸೌಲಭ್ಯಗಳನ್ನು ನಾಶಪಡಿಸಲಾಯಿತು, 100 ಕ್ಕೂ ಹೆಚ್ಚು ಉಗ್ರರನ್ನು ನಿರ್ಮೂಲನೆ ಮಾಡಲಾಯಿತು. ವಿಶಾಲ ಅಂತರರಾಷ್ಟ್ರೀಯ ಕ್ರಮದಲ್ಲಿ, ನಡೆಯುತ್ತಿರುವ ಸಂಘರ್ಷಗಳು, ಅನಿಶ್ಚಿತತೆ ಮತ್ತು ವ್ಯಾಪಾರ ಮತ್ತು ತಂತ್ರಜ್ಞಾನದಲ್ಲಿನ ಅಡಚಣೆಗಳಿಂದ ಜಗತ್ತು "ರಚನಾತ್ಮಕ ಭೌಗೋಳಿಕ ರಾಜಕೀಯ ಮತ್ತು ಆರ್ಥಿಕ ಅಸ್ಥಿರತೆಯನ್ನು" ಎದುರಿಸುತ್ತಿದೆ ಎಂದು ದೋವಲ್ ಹೇಳಿದರು. "ಜಗತ್ತು ಅನಿಶ್ಚಿತತೆ ಮತ್ತು ಅನಿರೀಕ್ಷಿತತೆಯಿಂದ ಗುರುತಿಸಲ್ಪಟ್ಟ ಅತ್ಯಂತ ಸವಾಲಿನ ಅವಧಿಯ ಮೂಲಕ ಸಾಗುತ್ತಿದೆ. ಅಂತಹ ವಾತಾವರಣದಲ್ಲಿ, ನಮ್ಮ ದೀರ್ಘಕಾಲದ ಕಾರ್ಯತಂತ್ರದ ಮತ್ತು ಸವಲತ್ತು ಪಡೆದ ಪಾಲುದಾರಿಕೆಯು ವಿಶೇಷವಾಗಿ ಪ್ರಮುಖ ಪಾತ್ರವನ್ನು ವಹಿಸುತ್ತದೆ" ಎಂದು ಅವರು ಹೇಳಿದರು. ಏರುತ್ತಿರುವ ಆರ್ಥಿಕತೆಗಳು ತಮ್ಮ ಮಿಲಿಟರಿ, ಆರ್ಥಿಕ ಮತ್ತು ಜನಸಂಖ್ಯಾ ಸಾಮರ್ಥ್ಯಗಳನ್ನು ಬಲಪಡಿಸುತ್ತಿರುವ ಬಹುಧ್ರುವೀಯ ಪ್ರಪಂಚದ ಹೊರಹೊಮ್ಮುವಿಕೆಯನ್ನು ಅವರು ವಿವರಿಸಿದರು.

"ಅಧಿಕಾರವು ಇನ್ನು ಮುಂದೆ ಕೆಲವು ಕೈಗಳಲ್ಲಿ ಕೇಂದ್ರೀಕೃತವಾಗಿಲ್ಲ... ಉದಯೋನ್ಮುಖ ದೇಶಗಳು ದೃಢನಿಶ್ಚಯದಿಂದ ಏರುತ್ತಿವೆ" ಎಂದು ಅವರು ಹೇಳಿದರು, ಸ್ಥಿರವಾದ ಅಂತರರಾಷ್ಟ್ರೀಯ ವ್ಯವಸ್ಥೆಗೆ ಜಾಗತಿಕ ದಕ್ಷಿಣದ ಸಮಾನ ಭಾಗವಹಿಸುವಿಕೆ ಅತ್ಯಗತ್ಯ ಎಂದು ಒತ್ತಿ ಹೇಳಿದರು. ಸರ್ಕಾರಗಳು ಮತ್ತು ಅಂತರರಾಷ್ಟ್ರೀಯ ಸಂಸ್ಥೆಗಳ 140 ಕ್ಕೂ ಹೆಚ್ಚು ನಿಯೋಗಗಳು ಭಾಗವಹಿಸಿದ್ದ ಮಾಸ್ಕೋ ವೇದಿಕೆಯು ವಿಕಸನಗೊಳ್ಳುತ್ತಿರುವ ಭದ್ರತಾ ಸವಾಲುಗಳ ಕುರಿತು ಸಂವಾದಕ್ಕೆ ಪ್ರಮುಖ ವೇದಿಕೆಯನ್ನು ನೀಡಿತು ಎಂದು ದೋವಲ್ ಹೇಳಿದರು. ಚರ್ಚೆಗಳು ಪರಸ್ಪರ ತಿಳುವಳಿಕೆಯನ್ನು ಗಾಢವಾಗಿಸುತ್ತದೆ ಮತ್ತು ಜಾಗತಿಕ ಭದ್ರತಾ ಬೆದರಿಕೆಗಳನ್ನು ಎದುರಿಸುವಲ್ಲಿ ಸಹಕಾರವನ್ನು ಬಲಪಡಿಸುತ್ತದೆ ಎಂದು ಅವರು ಆಶಿಸಿದರು.

# ಹಾರ್ಮುಜ್ ಜಲಸಂಧಿಯಲ್ಲಿ ಶುಲ್ಕ ಸಂಗ್ರಹಿಸಲು ನೆರವು

**ವಾಷಿಂಗ್ಟನ್, ಮೇ 28:** ಹಾರ್ಮುಜ್ ಜಲಸಂಧಿಯಲ್ಲಿ ಶುಲ್ಕ ಸಂಗ್ರಹಿಸಲು ನೆರವು ನೀಡಿದ್ರೆ, ಅದರ ಮಿತ್ರರಾಷ್ಟ್ರವಾದ ಓಮನ್‌ನ್ನು ಟಾರ್ಗೆಟ್ ಮಾಡಲಾಗುವುದು ಎಂದು ಅಮೆರಿಕದ ಖಜಾನೆ ಕಾರ್ಯದರ್ಶಿ ಸ್ಕಾಟ್ ಬೆಸೆಂಟ್ ಗುರುವಾರ ಬೆದರಿಕೆ ಹಾಕಿದ್ದಾರೆ. ಅಂತಹ ಕ್ರಮಗಳಲ್ಲಿ ಭಾಗಿಯಾಗುವ ಎಲ್ಲಾ ರಾಷ್ಟ್ರಗಳ ವಿರುದ್ಧ ನಿರ್ಬಂಧ ವಿಧಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಅವರು ಪೋಸ್ಟ್ ಮಾಡಿದ್ದು, ಜಲಸಂಧಿಯಲ್ಲಿ ಟೋಲ್ ಸಂಗ್ರಹಿಸಲು ನೇರವಾಗಿ ಅಥವಾ ಪರೋಕ್ಷವಾಗಿ ಭಾಗಿಯಾಗಿರುವ ಯಾವುದೇ



ರಾಷ್ಟ್ರವನ್ನು ಗುರಿಯಾಗಿಸಲಾಗುವುದು. ಅಲ್ಲದೇ, ಮಿತ್ರರಾಷ್ಟ್ರವಾದರೂ ದಂಡ ವಿಧಿಸಲಾಗುತ್ತದೆ ಎಂಬುದನ್ನು ನಿರ್ದಿಷ್ಟವಾಗಿ ಓಮಾನ್ ತಿಳಿಯಬೇಕು ಎಂದು ಬರೆದುಕೊಂಡಿದ್ದಾರೆ.

ಅಮೆರಿಕ ಜೊತೆಗಿನ ಸಂಭಾವ್ಯ ಒಪ್ಪಂದದ ಭಾಗವಾಗಿ ಹಾಗೆ ಮಾಡಲು ಇರಾನಿನ ಪ್ರಸ್ತಾಪಗಳನ್ನು ಉಲ್ಲೇಖಿಸಿದ್ದು, "ಹಾರ್ಮುಜ್ ಜಲಸಂಧಿಯಲ್ಲಿ ಟೋಲ್ ವ್ಯವಸ್ಥೆಯನ್ನು ವಿಧಿಸುವ ಯಾವುದೇ ಪ್ರಯತ್ನವನ್ನು ಸಹಿಸುವುದಿಲ್ಲ ಎಂದು ಅವರು ಹೇಳಿದ್ದಾರೆ. ಜಾಗತಿಕ ಇಂಧನ ಪೂರೈಕೆಗಳಲ್ಲಿ ಐದನೇ ಒಂದು ಭಾಗವು ಸಾಮಾನ್ಯವಾಗಿ ಹಾದುಹೋಗುವ ಪ್ರಮುಖ ಜಲಮಾರ್ಗವು ಫೆಬ್ರವರಿ ಅಂತ್ಯದಲ್ಲಿ ಅಮೆರಿಕ ಮತ್ತು ಇಸ್ರೇಲ್ ಇರಾನ್ ವಿರುದ್ಧ ಯುದ್ಧವನ್ನು ಪ್ರಾರಂಭಿಸಿದಾಗಿನಿಂದ ಒಂದು ಸಂಘರ್ಷದ ಕೇಂದ್ರವಾಗಿದೆ.

ಟೆಹ್ರಾನ್‌ನ ಪ್ರತೀಕಾರದ ಕ್ರಮಗಳು ಈ ಪ್ರದೇಶವನ್ನು ಹಿಂಸಾಚಾರದಲ್ಲಿ ಮುಳುಗಿಸಿವೆ. ಇರಾನ್ ವಾಸ್ತವಿಕವಾಗಿ ಜಲಸಂಧಿಯನ್ನು ನಿರ್ಬಂಧಿಸಿದೆ. ಇದರಿಂದಾಗಿ ಜಾಗತಿಕ ಇಂಧನ ಮತ್ತು ರಸಗೊಬ್ಬರ ಬೆಲೆಗಳು ಗಗನಕ್ಕೇರಿವೆ. ಓಮಾನ್ ಯುದ್ಧದಲ್ಲಿ ಮಧ್ಯಸ್ಥಿಕೆಯ ಪಾತ್ರವನ್ನು ವಹಿಸಿದೆ.

ಅಮೆರಿಕದ ಖಜಾನೆ ಕಾರ್ಯದರ್ಶಿ ಸ್ಕಾಟ್ ಬೆಸೆಂಟ್

**ಇರಾನ್ ಮಂಡಿಯೂರುವಂತೆ ಮಾಡಲು ಅಮೆರಿಕ, ಇಸ್ರೇಲ್ ಪ್ರಯತ್ನ:** ಅಯತೊಲ್ಲಾ ಮೊಜ್ತಬಾ ಖಮೇನಿ ಓಮನ್ ಮಧ್ಯಪ್ರಾಚ್ಯದಲ್ಲಿ ಅಮೆರಿಕದ ಮಿತ್ರರಾಷ್ಟ್ರವಾಗಿದ್ದು, ಇರಾನ್ ನಡುವಿನ ಸಂಘರ್ಷದಲ್ಲಿ ಮಿಸೈಲ್ ದಾಳಿಗೂ ಒಳಗಾಗಿದೆ. ಆದರೆ, ಇತ್ತೀಚಿಗೆ ಇರಾನ್ ಕಡೆ ವಾಲುತ್ತಿದೆ ಎಂಬ ಮಾತುಗಳು ಕೇಳಿಬರುತ್ತಿದೆ. ಈ ವಿಚಾರದಲ್ಲಿ ಇರಾನ್‌ಗೆ ಬೆಂಬಲ ಸೂಚಿಸಲು ಬಂದ ದೇಶಕ್ಕೆ ತಕ್ಕ ಪಾಠ ಕಲಿಸಬೇಕಾಗುತ್ತದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಬುಧವಾರ ಓಮನ್ ಗೆ ಎಚ್ಚರಿಕೆ ನೀಡಿದ್ದರು.

# ಎವರೆಸ್ಟ್ ಏರಿದ ಮೂವರು ಭಾರತೀಯರು ಸೇರಿದಂತೆ 274 ಮಂದಿ: ವಿಶ್ವದಾಖಲೆ

**ಕಠ್ಮಂಡು, ಮೇ 28:** ಮೂವರು ಭಾರತೀಯರು ಸೇರಿದಂತೆ 274 ಮಂದಿ ಪರ್ವತಾರೋಹಿಗಳು ನೇಪಾಳದ ಕಡೆಯಿಂದ ಮೌಂಟ್ ಎವರೆಸ್ಟ್ ಶಿಖರವನ್ನು ಬುಧವಾರ ಏರುವ ಮೂಲಕ ಹೊಸ ದಾಖಲೆ ಬರೆದಿದ್ದಾರೆ.

ಇದೇ ಮೊದಲ ಬಾರಿಗೆ ಏಕಕಾಲಕ್ಕೆ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಪರ್ವತಾರೋಹಿಗಳು ಮೌಂಟ್‌ಎವರೆಸ್ಟ್ ಏರಿದ್ದಾರೆ. ಈ ಮೊದಲು 2019ರಲ್ಲಿ 223 ಪರ್ವತಾರೋಹಿಗಳು ನೇಪಾಳ ಕಡೆಯಿಂದ ಮೌಂಟ್ ಎವರೆಸ್ಟ್ ಏರಿದ್ದರು.

ನೇಪಾಳದ 150 ಶೆರ್ಪಾಗಳು ಸೇರಿದಂತೆ 274 ಮಂದಿಯೂ 8,848.86 ಅಡಿ ಎತ್ತರದ ಶಿಖರವನ್ನು ತಲುಪಿದ್ದಾರೆ ಎಂದು ನೇಪಾಳದ ಶಿಖರ ಯಾತ್ರೆ ನಿರ್ವಾಹಕರ ಅಸೋಸಿಯೇಷನ್ ಪ್ರಧಾನ ಕಾರ್ಯದರ್ಶಿ ರಿಶಿ ರಾಮ್ ಭಂಡಾರಿ ಅವರು ತಿಳಿಸಿದ್ದಾರೆ.

ಭಾರತದ ತುಳಸಿರೆಡ್ಡಿ ಪಲ್ಲೂನೂರಿ, ಸಂದೀಪ್ ಅರೆ ಮತ್ತು ಅಜಯ್ ಪಾಲ್ ಸಿಂಗ್ ಧಲಿವಾಲ್ ಅವರು ವಿಶ್ವದಾಖಲೆ ಮಾಡಿದ ಈ ತಂಡದ ಭಾಗವಾಗಿದ್ದರು.

ಭಾರತದ ಲಕ್ಷ್ಮೀಕಾಂತ ಮಂಡಲ್ ಅವರು




ಕೂಡಾ ವಿಶ್ವ ಅತೀ ಎತ್ತರದ ಶಿಖರವನ್ನು ಗುರುವಾರ ಏರಿದ್ದಾರೆ.

ಇದೇ ಅವಧಿಯಲ್ಲಿ ನೇಪಾಳದ ಕಾಮಿ ರೀಟಾ ಶೆರ್ಪಾ ಅವರು 32ನೇ ಬಾರಿಗೆ ಮೌಂಟ್ ಎವರೆಸ್ಟ್ ಏರುವ ಮೂಲಕ ತಮ್ಮದೇ ದಾಖಲೆಯನ್ನು ಮುರಿದಿದ್ದಾರೆ.